ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 24 ಮಂಗಳವಾರ 2026

ಸಂಪುಟ: 46 | ಸಂಚಿಕೆ: 332 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ವಾತ್ಸಲ್ಯದಲ್ಲಿ ಕ್ಯಾನ್ಸರ್ ಬಗ್ಗೆ ಜಾಗೃತಿ ಅಭಿಯಾನ



ವಾತ್ಸಲ್ಯ ಸೇವಾ ಆಶ್ರಮ ಹಿರಿಯ ಜೀವಿಗಳ ಆಶ್ರಯತಾಣದಲ್ಲಿ ಮಹಿಳೆಯರಿಗಾಗಿ ಕ್ಯಾನ್ಸರ್ ಬಗ್ಗೆ ವಿಶೇಷ ಉಪನ್ಯಾಸ, ಜಾಗೃತಿ ಕಾರ್ಯಕ್ರಮ ನಡೆಯಿತು.

ಮೈಸೂರು, ಮಾ. 23–ಮೈಸೂರಿನ ಹಿನಕಲ್‌ನಲ್ಲಿರುವ ವಾತ್ಸಲ್ಯ ಸೇವಾ ಆಶ್ರಮ ಹಿರಿಯ ಜೀವಿಗಳ ಆಶ್ರಯ ತಾಣದಲ್ಲಿ ಮಹಿಳೆಯರಿಗಾಗಿ ಕ್ಯಾನ್ಸರ್ ಬಗ್ಗೆ ವಿಶೇಷ ಉಪನ್ಯಾಸ ಮತ್ತು ಜಾಗೃತಿ ಕಾರ್ಯಕ್ರಮ ನಡೆಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೃಂದಾವನ ಆಸ್ಪತ್ರೆಯ ಹಿರಿಯ ವೈದ್ಯರಾದ ಡಾ||ತಾರಿಣಿ ಶಶಾಂಕ್ ಮಾತನಾಡಿ, ಮಹಿಳೆಯರು ಆರೋಗ್ಯದ ಬಗ್ಗೆ ಜಾಗೃತಿ ವಹಿಸಬೇಕು. ಮನೆಯ ಎಲ್ಲಾ ಜವಾಬ್ದಾರಿಯನ್ನು ನಿಭಾಯಿಸುವವಳು ಮಹಿಳೆ, ಮನೆಯ ಬೆಳಕೇ ಹೆಣ್ಣು. ಆದ್ದರಿಂದ ಆರೋಗ್ಯವನ್ನು ಕಾಪಾಡಿಕೊಂಡರೇ ಎಲ್ಲಾ ರಂಗದಲ್ಲಿಯೂ ಮುಂದೆ ಬರಬಹುದು ಎಂದು ಹೇಳಿದರು.

ಇಂದು ಕ್ಯಾನ್ಸರ್ ರೋಗ ಎಲ್ಲಾ ಕಡೆ ಸಾಮಾನ್ಯವಾಗಿ ಕಾಣಿಸಿಕೊಳ್ಳುತ್ತಿದೆ. ಬಹಳ ಮುಖ್ಯವಾಗಿ ಕ್ಯಾನ್ಸರ್‌ರನ್ನು ಪತ್ತೆ ಹಚ್ಚಿದರೆ ನಂತರ ಬೇಗ ಸಕಾಲದಲ್ಲಿ ಔಷಧಿಯನ್ನು ಕೊಟ್ಟು ಕಾಪಾಡಿ, ರೋಗವನ್ನು ಗುಣಪಡಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಸೇವಾಶ್ರಮದ ಕಾರ್ಯದರ್ಶಿ ಶ್ರೀಮತಿ ನಾಗರತ್ನ ಅವರು ಸಾಧನೆಯನ್ನು ಪ್ರಸ್ತುತ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಭಾಗವಹಿಸುತ್ತಿದ್ದಾರೆ. ಇದು ಸಂತಸದ ಪ್ರಶಂಸನೀಯ. ಮುಂದಿನ ದಿನಗಳಲ್ಲಿ ಹೆಣ್ಣು ಮಕ್ಕಳು ಒಗ್ಗಟ್ಟಾಗಿ ದುಡಿದರೆ ಇನ್ನು ಹೆಚ್ಚು ಸಾಧನೆ ಮಾಡಬಹುದು ಎಂದರು. ಕಾರ್ಯಕ್ರಮದಲ್ಲಿ ಕನಕ ಶಕ್ತಿ ಮಹಿಳಾ ಸಂಘದ ಅಧ್ಯಕ್ಷೆ ನೇತ್ರ, ವಾತ್ಸಲ್ಯ ಸೇವಾಶ್ರಮದ ಅಧ್ಯಕ್ಷ ಎ.ಸಿ.ರವಿಕುಮಾರ್ ಮತ್ತು ಹಿರಿಯ ಜೀವಿಗಳು ಉಪಸ್ಥಿತರಿದ್ದರು.

ವಾರ್ಷಿಕೋತ್ಸವ...



ಅಖಿಲ ಭಾರತೀಯ ಸಾಹಿತ್ಯ ಪರಿಷದ್, ಮೈಸೂರು ಜಿಲ್ಲಾ ಸಮಿತಿಯ ಸರಸ್ವತಿ ಸಾಹಿತ್ಯ ಕೂಟ ತನ್ನ ಮೊದಲ ವರುಷದ ವಾರ್ಷಿಕೋತ್ಸವವನ್ನು ಸರಸ್ವತಿಪುರಂನ ಖಾಸಗಿ ಹೋಟೆಲ್‌ನಲ್ಲಿ ಆಚರಿಸಿಕೊಂಡಿತು. ಜಿಲ್ಲಾ ಸಮಿತಿಯ ಅಧ್ಯಕ್ಷ ಎಸ್.ಸುಬ್ರಹ್ಮಣ್ಯ, ವಲಯ ಪ್ರಮುಖ್ ಡಾ.ವಿ.ರಂಗನಾಥ್, ಕೂಟದ ಸಂಚಾಲಕಿ ವೀಣಾ ಶ್ರೀಕಾಂತ್ ಈ ವೇಳೆ ಉಪಸ್ಥಿತರಿದ್ದರು.


ಸುತ್ತೂರು ಶ್ರೀ ಕ್ಷೇತ್ರದಲ್ಲಿ ಆಯುರ್ವೇದ, ವಾಕ್–ಶ್ರವಣ ನರ್ಸಿಂಗ್ ವಿದ್ಯಾರ್ಥಿಗಳ ಶಿಬಿರ

ಮೈಸೂರು,ಮಾ.23–ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾ ಪೀಠ, ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಏ.8ರಿಂದ 10ರವರೆಗೆ ಸುತ್ತೂರು ಶ್ರೀಕ್ಷೇತ್ರದಲ್ಲಿ ಆಯುರ್ವೇದ, ವಾಕ್–ಶ್ರವಣ, ನರ್ಸಿಂಗ್ ವಿದ್ಯಾರ್ಥಿಗಳ ಶಿಬಿರವನ್ನು ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಸಾಮೂಹಿಕ ಪ್ರಾರ್ಥನೆ, ಯೋಗ, ವಿಶೇಷ ಉಪನ್ಯಾಸ, ಚಿಂತನ–ಮಂಥನ, ದೇಸಿ ಆಟಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿರುತ್ತವೆ.

ಶಿಬಿರದಲ್ಲಿ ಭಾಗವಹಿಸಲಿಚ್ಛಿಸುವವರು ಶಿಬಿರದ ಸಂಚಾಲಕರಾದ ಡಾ.ರಾಜೇಂದ್ರ ಪ್ರಸಾದ್ (9845 817721), ಸುನಿಲ್ ಕುಮಾರ್ (9632321210), ಡಾ.ಎಸ್. ಅನುಷ (9480231321), ಗುರು ಮಲ್ಲೇಶ್ (8197883149), ರಶ್ಮಿ (9448 130580) ಅವರನ್ನು ದೂರವಾಣಿಗಳಲ್ಲಿ ಸಂಪರ್ಕಿಸಿ ನೋಂದಾಯಿಸಿಕೊಳ್ಳಬಹುದು. www. jssonline.org ಯಿಂದ ವಿವರ ಪಡೆಯಬಹುದು. ಇ–ಮೇಲ್ (jsspublications@ gmail.com) ಮೂಲಕವೂ ನೋಂದಾಯಿಸಿಕೊಳ್ಳಬಹುದಾಗಿದೆ.

ಸಂಸದ ಯದುವೀರ್ ಒಡೆಯರ್ ಜನ್ಮದಿನ...



ಮೈಸೂರಿನ ಸಾನಿಧ್ಯ ವೃದ್ಧಾಶ್ರಮದ ಹಿರಿಯ ನಾಗರಿಕ ಬಂಧುಗಳಿಗೆ ಪ್ರಕಾಶ್ ಪ್ರಿಯದರ್ಶನ ಸ್ನೇಹ ಬಳಗದಿಂದ ಹೋಳಿಗೆ, ಡ್ರೈ ಫ್ರೂಟ್ಸ್, ಹಣ್ಣು ಹಂಪಲು ವಿತರಿಸುವ ಮೂಲಕ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಯೋಗ ಸಾಧಕರ ಕುರಿತು ಲೇಖನಗಳಿಗೆ ಆಹ್ವಾನ

ಮೈಸೂರು,ಮಾ.23–ಸುವರ್ಣ ಬೆಳಕು ಫೌಂಡೇಷನ್ ವತಿಯಿಂದ ಮೇ 10ರಂದು ಮೈಸೂರಿನಲ್ಲಿ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಂಗವಾಗಿ ಯೋಗ ಸಾಧಕರ ಕುರಿತು ವಿಶೇಷ ಸ್ಮರಣ ಸಂಚಿಕೆಯನ್ನು ಹೊರತರಲು ನಿರ್ಧರಿಸಲಾಗಿದೆ. ಈ ಸಂಚಿಕೆಗೆ ಯೋಗಾಸನದಲ್ಲಿ ಸಾಧನೆ ಮಾಡಿದ ವ್ಯಕ್ತಿಗಳ ಕುರಿತು ಲೇಖನಗಳನ್ನು ಆಹ್ವಾನಿಸಲಾಗಿದೆ. ಯೋಗ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರ ಬಗ್ಗೆ ತಿಳಿದಿರುವವರು ಅವರ ಸಾಧನೆ, ಜೀವನ ಪಥ ಹಾಗೂ ವಿಶೇಷತೆಗಳನ್ನು ಒಳಗೊಂಡ ಲೇಖನಗಳನ್ನು ಅವರ ಫೋಟೋಗಳೊಂದಿಗೆ ಇ–ಮೇಲ್ maheshyoga 10gmail.com ಮೂಲಕ ಕಳುಹಿಸಬಹುದು. ಲೇಖನಗಳನ್ನು ಏ.20ರೊಳಗೆ ಕಳುಹಿಸಬೇಕೆಂದು ಫೌಂಡೇಷನ್‌ನ ಗೌರವ ಅಧ್ಯಕ್ಷ ಮಹೇಶ್ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಫೌಂಡೇಷನ್ ಅಧ್ಯಕ್ಷ ಎಸ್.ಮಹೇಶ್ ಅವರ ಮೊಬೈಲ್ ಸಂಖ್ಯೆ 8197959495, 9448980010 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಧನ

ರಾಮಕೃಷ್ಣ ಬರಳು



ಮೈಸೂರು: ನಿವೃತ್ತ ಕೆಎಎಸ್ ಅಧಿಕಾರಿ ರಾಮಕೃಷ್ಣ ಬರಳು (75) ಅವರು ಇಂದು ಬೆಂಗಳೂರು ಸಾಗರ ಅಪೋಲೋದಲ್ಲಿ ನಿಧನರಾದರು. ಇವರು ಪತ್ನಿ ಪ್ರಮೀಳಾ, ಪುತ್ರಿಯರಾದ ಪವಿತ್ರ, ಪ್ರತೀಕ್ಷಾ, ಅಳಿಯಂದಿರಾದ ಕಿಮ್ಸ್ ಪ್ರಾಧ್ಯಾಪಕ ಡಾ.ಸೋಮಶೇಖರ್, ಬೆಂಗಳೂರು ವಿಶೇಷ ಜಿಲ್ಲಾಧಿಕಾರಿ ಬಾಲಚಂದರ್, ಮೊಮ್ಮಕ್ಕಳು, ಅಪಾರ ಬಂಧು ವರ್ಗ, ಮಿತ್ರರನ್ನು ಅಗಲಿದ್ದಾರೆ.

ಇಂದು ಮೈಸೂರಿಗೆ ಪಾರ್ಥಿವ ಶರೀರವನ್ನು ತಂದು ಅವರ ನಂಜುಮಳಿಗೆಯ (ಗೋಪಾಲ ಶಿಶು ವಿಹಾರ ಬಳಿ) ನಿವಾಸದಲ್ಲಿರಿಸಲಾಗಿದ್ದು, ನಾಳೆ (ಮಂಗಳವಾರ) ಬೆಳಿಗ್ಗೆ 8 ಗಂಟೆಗೆ ಅವರ ಸ್ವಗ್ರಾಮ ಶ್ರವಣ ಬೆಳಗೊಳ ಬಳಿಯ ಬರಳು ಗ್ರಾಮಕ್ಕೆ ಕೊಂಡೊಯ್ದು ಮಧ್ಯಾಹ್ನ 1 ಗಂಟೆ ವೇಳೆಗೆ ಅಂತ್ಯಕ್ರಿಯೆ ನೆರವೇರಲಿದೆ.

ಮೈಸೂರಿನಲ್ಲಿ ದೇವರ ದಾಸಿಮಯ್ಯ ಅರ್ಥಪೂರ್ಣ ಜಯಂತಿ

ದೇಶದ ಹಿತದ ಪ್ರಶ್ನೆ ಬಂದಾಗ ಭಾರತೀಯರ ಸಂಘಟನಾ ಶಕ್ತಿ ಇಮ್ಮಡಿ





ಮೈಸೂರಿನ ಕಲಾಮಂದಿರದಲ್ಲಿ ಸೋಮವಾರ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅವರು ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದರು (ಎಡಚಿತ್ರ). ಕಾರ್ಯಕ್ರಮಕ್ಕೂ ಮುನ್ನ ದೇವರ ದಾಸಿಮಯ್ಯ ಅವರ ಫೋಟೋದೊಂದಿಗೆ ವರ್ಣರಂಜಿತ ಮೆರವಣಿಗೆಯು ಮೈಸೂರಿನ ಪ್ರಮುಖ ರಸ್ತೆಗಳಲ್ಲಿ ಸಾಗಿತು.

ಮೈಸೂರು,ಮಾ.23(ಬಿಎಲ್‌ಯು)–ಭಾಷೆ ಅಥವಾ ಜನಾಂಗದ ಆಧಾರದ ಮೇಲೆ ವಿಭಜಿತವಾದಂತೆ ಕಂಡರೂ ದೇಶದ ಹಿತದೃಷ್ಟಿಯಿಂದ ಭಾರತೀಯರಾದ ನಾವೆಲ್ಲಾ ಸಂಘಟಿತರಾಗಿದ್ದೇವೆ ಎಂದು ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಇಂದು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ದೇವರ ದಾಸಿಮಯ್ಯ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಧಾರ್ಮಿಕ ಹಿನ್ನೆಲೆ, ವೈವಿಧ್ಯಮಯ ಸಂಸ್ಕೃತಿಯಿಂದ ಭಾರತ ವಿಶ್ವದಲ್ಲೆ ವಿಶಿಷ್ಟ ದೇಶವಾಗಿದೆ ಎಂದರು.

ಭಾರತದಲ್ಲಿ ಸಾವಿರಾರು ಜಾತಿ, ಧರ್ಮಗಳಿದ್ದರೂ ವಿವಿಧತೆಯಲ್ಲಿ ಏಕತೆಯನ್ನು ಕಾಣುತ್ತೇವೆ. ಇಂತಹ ವೈಶಿಷ್ಟತೆ ವಿಶ್ವದ ಯಾವುದೇ ದೇಶದಲ್ಲೂ ಕಾಣಲು ಸಾಧ್ಯವಿಲ್ಲ ಎಂದು ಡಾ.ತಿಮ್ಮಯ್ಯ ಹೇಳಿದರು.

ದೇವರ ದಾಸಿಮಯ್ಯ ಅವರು ಕಾಯಕ ನಿಷ್ಠೆ ಹಾಗೂ ಸಮಾನತೆಯ ಸಾರಿದ ಮಹಾನ್ ಶರಣರಾಗಿದ್ದಾರೆ. ಬಸವಣ್ಣನವರಿಗಿಂತ ಮೊದಲೇ ಅಂದರೆ 10ನೇ ಶತಮಾನದಲ್ಲಿ ಶಿವಪುರ ಗ್ರಾಮದಲ್ಲಿ ಜನಿಸಿದ ದೇವರ ದಾಸಿಮಯ್ಯ ಅವರು, ಕರ್ನಾಟಕದ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ಸ್ಮರಣೀಯ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ದೇವ ಭಕ್ತಿಯ ಜೊತೆಗೆ ಕಾಯಕ (ನೇಯ್ಗೆ)ದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಹಲವು ಸಂದೇಶ ಸಾರಿದರು. ಸಮಾಜ ನಿರ್ಮಾಣದಲ್ಲಿ ನೇಕಾರ, ಕುಂಬಾರ ಹಾಗೂ ಚಮ್ಮಾರರಂತಹ ಕಾಯಕ ವರ್ಗಗಳ ಪಾತ್ರ ಬಹಳ ಮುಖ್ಯವಾಗಿದೆ ಎಂದರು.

ಕಾಯಕ ಶರಣರು ಸ್ವಾರ್ಥಕ್ಕಾಗಿ ಬದುಕದೆ ಸಮಾಜದ ಏಕತೆ ಹಾಗೂ ಸಮಗ್ರತೆಗಾಗಿ ಶ್ರಮಿಸಿದ್ದಾರೆ. ಭಾರತ ಅಭಿವೃದ್ಧಿಯತ್ತ ಸಾಗಲು ಇವರೆಲ್ಲರ ಕೊಡುಗೆ ಬಹಳ ಮುಖ್ಯವಾಗಿದೆ ಎಂದರು.

ಜೆಎಸ್‌ಎಸ್ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಮಾತನಾಡಿ, ಪ್ರತಿಯೊಬ್ಬ ವಚನಕಾರ ಹಾಗೂ ಶರಣರು ನಿರ್ದಿಷ್ಟ ಕಾಯಕ ಕ್ಷೇತ್ರಕ್ಕೆ ಸೇರಿದವರು. ಕಾಯಕದ ಮೂಲಕ ಬದುಕು ಕಟ್ಟಿಕೊಳ್ಳುತ್ತಾ ಭಕ್ತಿ ಭಾವದಿಂದ ವಚನಗಳನ್ನು ಹೇಳಿದರು ಎಂದರು. ನಮ್ಮ ಮುಂದಿನ ಬದುಕು ಹೇಗಿರಬೇಕು ಎಂದು ಪರಾಮರ್ಶೆ ಮಾಡುವ ಮುನ್ನ ನಮ್ಮ ಹಿರಿಯರ ಬದುಕಿನ ಹಾದಿಯನ್ನು ನೆನಪಿಸಿಕೊಳ್ಳಬೇಕು. ಇದರಿಂದ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದು ಎಂದು ಸಲಹೆ ನೀಡಿದರು.

ನಂತರ ಮಾತನಾಡಿದ ರಾಮಕೃಷ್ಣ ನೈತಿಕ ಮತ್ತು ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆಯ ಶ್ರೀ ಸ್ವಾಮಿ ಮಹಾಮೇದಾನಂದರು, ಸುಂದರ ಬಟ್ಟೆ ಧರಿಸುವುದರಿಂದ ಮಾನ ಉಳಿಯುವುದಿಲ್ಲ. ನಮ್ಮ ಚಾರಿತ್ರ್ಯದಿಂದ ಮಾತ್ರ ಇದು ಸಾಧ್ಯವಾಗುತ್ತದೆ. ಅಂತರ್ಯದ ಶುದ್ಧಿ ಇಲ್ಲದೆ ಬಾಹ್ಯ ಅಲಂಕಾರ ವ್ಯರ್ಥ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಕಾರ್ಯಕ್ರಮಕ್ಕೂ ಮೊದಲು ದೇವರ ದಾಸಿಮಯ್ಯ ಅವರ ಭಾವಚಿತ್ರವಿರುವ ಸಾರೋಟಿನ ವರ್ಣರಂಜಿತ ಮೆರವಣಿಗೆ ಮೈಸೂರು ಅರಮನೆಯ ಆಂಜನೇಯಸ್ವಾಮಿ ದೇವಸ್ಥಾನದಿಂದ ಹೊರಟು ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿ ಕಲಾಮಂದಿರ ತಲುಪಿತು. ಕನ್ನಡ–ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಬಿ.ಎಸ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ವಿವಿಧ ಸಂಘ ಸಂಸ್ಥೆ ಮುಖ್ಯಸ್ಥರಾದ ಬಿ.ಎಸ್.ಸೋಮಶೇಖರ್, ಲಕ್ಷ್ಮಿನಾರಾಯಣ, ಮಂಜುಳಾ, ದಿನೇಶ್, ಸುಬ್ರಹ್ಮಣ್ಯ ಇನ್ನಿತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಇಂದು ಶ್ರೀ ಶ್ರೀ ಭಾರತಿ ತೀರ್ಥ ಮಹಾ ಸ್ವಾಮಿಗಳ 76ನೇ ವರ್ಧಂತಿ ಮಹೋತ್ಸವ

ಮೈಸೂರು,ಮಾ.23–ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ವತಿಯಿಂದ ಶ್ರೀ ಶೃಂಗೇರಿ ಶಾರದಾ ಪೀಠದ 36ನೇ ಜಗದ್ಗುರು ಶ್ರೀ ಶ್ರೀ ಭಾರತಿ ತೀರ್ಥ ಮಹಾಸ್ವಾಮಿಗಳವರ 76ನೇ ವರ್ಧಂತಿ ಮಹೋತ್ಸವವನ್ನು ಚಾಮುಂಡಿಪುರ ವೃತ್ತದಲ್ಲಿ ಮಾ.24ರಂದು ಮಧ್ಯಾಹ್ನ 12 ಗಂಟೆಗೆ ಆಚರಿಸಲಾಗುವುದು ಎಂದು ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್ ತಿಳಿಸಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕ ಟಿ.ಎಸ್.ಶ್ರೀವತ್ಸ, ಹಿರಿಯ ಸಮಾಜ ಸೇವಕರಾದ ರಘುರಾಂ ವಾಜಪೇಯಿ, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಸತ್ಯನಾರಾಯಣ್, ಕಾಂಗ್ರೆಸ್ ಮುಖಂಡ ನವೀನ್‌ಕುಮಾರ್ ಇನ್ನಿತರರು ಭಾಗವಹಿಸಲಿದ್ದಾರೆ.

ಇಂದು ವಿಶ್ವ ಕ್ಷಯರೋಗ ದಿನಾಚರಣೆ; ಜಾಥಾ

ಮೈಸೂರು,ಮಾ.23–ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ 2026ರ ವಿಶ್ವ ಕ್ಷಯರೋಗ ದಿನಾಚರಣೆಯನ್ನು ಮಾ.24ರಂದು ಬೆಳಿಗ್ಗೆ 10 ಗಂಟೆಗೆ ನಜರ್‌ಬಾದ್‌ನಲ್ಲಿರುವ ವೈದ್ಯರ ಭವನ ಎನ್.ಪಿ.ಸಿ. ಆಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದೆ. ಬೆಳಿಗ್ಗೆ 8 ಗಂಟೆಗೆ ಜಾಥಾ ಪ್ರಾರಂಭವಾಗಿ ಎಸ್.ಪಿ. ಕಚೇರಿ ಸರ್ಕಲ್‌ನಿಂದ ಹೊರಟು ಸಬರ್ಬನ್ ಬಸ್ ನಿಲ್ದಾಣದ ರಸ್ತೆ ಮೂಲಕ ವೈದ್ಯರ ಭವನ, ಎನ್.ಪಿ.ಸಿ. ಆಸ್ಪತ್ರೆ ಆವರಣ, ನಜರ್‌ಬಾದ್‌ನಲ್ಲಿ ಕೊನೆಗೊಳ್ಳುವುದು. 'ಹೌದು, ಭಾರತದ ನೇತೃತ್ವದಲ್ಲಿ, ಜನರ ಶಕ್ತಿಯೊಂದಿಗೆ ನಾವು ಕ್ಷಯರೋಗವನ್ನು ನಿರ್ಮೂಲನೆ ಮಾಡಬಹುದು' ಎಂಬ ಘೋಷವಾಕ್ಯದೊಂದಿಗೆ 2026ರ ವಿಶ್ವ ಕ್ಷಯರೋಗ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ತಿಳಿಸಿದ್ದಾರೆ.

ಮಹಿಳೆ ನಾಪತ್ತೆ



ಮೈಸೂರು: ರತ್ನಮ್ಮ (55 ವರ್ಷ) ಮಹಿಳೆ ಫೆ.16ರಂದು ಕಾಣೆಯಾಗಿರುವುದಾಗಿ ಅವರ ಮಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಚಹರೆ: 4.8 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಎಡಗೈಯಲ್ಲಿ ಹೂವಿನ ಚಿತ್ರವಿರುವ ಟ್ಯಾಟೋ ಗುರುತಿದೆ. ಕನ್ನಡ ಮಾತನಾಡುತ್ತಾರೆ. ನೇರಳೆ ಬಣ್ಣದ ಸೀರೆ, ಕ್ರೀಂ ಕಲರ್ ಸ್ವೆಟರ್ ಧರಿಸಿರುತ್ತಾರೆ. ಇವರು ಪತ್ತೆಯಾದಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಗೆ (ದೂ. 0821–2516579, 9480802122) ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.3.2026 ಮಂಗಳವಾರ, ಮಳೆ ನಕ್ಷತ್ರ: ಉತ್ತರಭಾದ್ರ 18.03.2026 ರಿಂದ 30.03.2026 ಪರಾಭವ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ, ತಿಥಿ: ಷಷ್ಠಿ, ನಕ್ಷತ್ರ: ರೋಹಿಣಿ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9ರಿಂದ ಪಿಸಿಓಡಿ ತೊಂದರೆಗೆ ಚಿಕಿತ್ಸಾ ಶಿಬಿರ, ಬೊಜ್ಜು ನಿವಾರಣೆ, ಪಾರ್ಕಿನ್‌ಸನ್ಸ್ ಕಾಯಿಲೆ, ವಸಂತ ವಮನ ದೇಹಶುದ್ಧಿ, ಕಿಡ್ನಿ ತಪಾಸಣೆ ಶಿಬಿರ, ಬೆಳಗ್ಗೆ 9.30ರಿಂದ ಮೈಗ್ರೇನ್ ಮತ್ತು ಯಾವುದೇ ತರಹದ ತಲೆನೋವು ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಆಲನಹಳ್ಳಿ.

■ **ನಾಲ್ವಡಿ ಸೋಷಿಯಲ್, ಕಲ್ಚರಲ್ ಅಂಡ್ ಎಜುಕೇಷನಲ್ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಅನಿಕೇತನ, ಉಚಿತ ಜನಪದ ಮತ್ತು ರಂಗ ತರಬೇತಿ ಶಿಬಿರದ ಸಮಾರೋಪ ಸಮಾರಂಭ, ಉದ್ಘಾಟನೆ: ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಅಧ್ಯಕ್ಷತೆ: ಕನ್ನಡ–ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು: ಕನ್ನಡ–ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸುದರ್ಶನ್, ಸಮಾಜ ಸೇವಕ ಅಹಿಂದ ಜವರಪ್ಪ, ದೇವರತ್ನ ಫೌಂಡೇಷನ್ ಅಧ್ಯಕ್ಷ ಶಿವಪ್ರಸಾದ್, ಗಾಯಕ ಡಾ.ಮೈಸೂರು ಗುರುರಾಜ್, ಟ್ರಸ್ಟ್ ಸಂಸ್ಥಾಪಕ ದಿನೇಶ್ ಚಮ್ಮಾಳಿಗೆ, ಮಹಾಶರಣ ಮಾದಪ್ಪ ನಾಟಕ ಪ್ರದರ್ಶನ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6.30ಕ್ಕೆ.

■ **ಮೈಸೂರು ವಿವಿ ತತ್ವಶಾಸ್ತ್ರ ಅಧ್ಯಯನ ವಿಭಾಗ, ಸ್ವಾಮಿ ವಿವೇಕಾನಂದ ಪೀಠ, ಮಾನಸ ಗಂಗೋತ್ರಿ:** 'ಸ್ವಾಮಿ ವಿವೇಕಾನಂದರ ಪತ್ರಗಳಲ್ಲಿ ಧರ್ಮ ದರ್ಶನ, ಯುವ ಜನತೆ ಮತ್ತು ರಾಷ್ಟ್ರೀಯ ಏಕತೆ' ಕುರಿತು ರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭ, ಸಮಾರೋಪ ಭಾಷಣ: ಸ್ವಾಮಿ ವಿವೇಕಾನಂದ ಪೀಠ ನಿರ್ದೇಶಕಿ ಪ್ರೊ. ಶ್ರೀಮತಿ ಜ್ಯೋತಿಶಂಕರ್, ಅಧ್ಯಕ್ಷತೆ: ಅಖಿಲ ಭಾರತ ವಾಕ್ ಶ್ರವಣ ಸಂಸ್ಥೆ ನಿರ್ದೇಶಕಿ ಪ್ರೊ.ಪುಷ್ಪಾವತಿ, ಉಪಸ್ಥಿತರು: ಸಂದರ್ಶಕ ಪ್ರಾಧ್ಯಾಪಕ ಡಾ.ವೆಂಕಟೇಶ್, ಪ್ರಾಧ್ಯಾಪಕ ಡಾ.ಡ್ಯಾನಿಯಲ್, ಸ್ಥಳ: ಶೈಕ್ಷಣಿಕ ಬಹುಮಾಧ್ಯಮ ಸಂಶೋಧನಾ ಕೇಂದ್ರ ಸಭಾಂಗಣ, ಸಂಜೆ 4ಕ್ಕೆ.

■ **ಅನ್ನಪೂರ್ಣ ಐ ಹಾಸ್ಪಿಟಲ್ :** ಯುಗಾದಿ ಮತ್ತು ಅಂತರ ರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಉಚಿತ ಕಣ್ಣಿನ ತಪಾಸಣಾ ಶಿಬಿರ, ಸ್ಥಳ: ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ನ್ಯೂ ಕಾಂತರಾಜ್ ಅರಸ್ ರಸ್ತೆ, ಶಾರದಾದೇವಿನಗರ, ಬೆಳಗ್ಗೆ 10 ರಿಂದ.

■ **ಯದುವೀರ್ ಬ್ರಿಗೇಡ್, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ :** ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಒಡೆಯರ್ ಹುಟ್ಟುಹಬ್ಬದ ಪ್ರಯುಕ್ತ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ, ಸ್ಥಳ: ಕಾಡಾ ಕಚೇರಿ, ಬೆಳಗ್ಗೆ 10ಕ್ಕೆ.

■ **ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ, ಕಾರ್ಯಾಚರಣೆ ಸಮಿತಿ, ಇಂಡಿಯಾ :** ಭ್ರಷ್ಟಾಚಾರ ನಿರ್ಮೂಲನೆ ಸವಾಲುಗಳು, ಸಂಕಲ್ಪ ಕಾರ್ಯಾಗಾರ, ಉದ್ಘಾಟನೆ: ಕುದೇರು ಮಠದ ಪೀಠಾಧ್ಯಕ್ಷ ಶ್ರೀ ಗುರುಶಾಂತ ಸ್ವಾಮೀಜಿ, ಉಪಸ್ಥಿತರು: ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮಿತಿ ರಾಷ್ಟ್ರೀಯ ಅಧ್ಯಕ್ಷ ಡಾ.ರಾಜೇಶ್ ಶುಕ್ಲಾ, ಅಧ್ಯಕ್ಷತೆ: ಸಮಿತಿ ರಾಜ್ಯಾಧ್ಯಕ್ಷ ಕೆ.ಪ್ರಭಾಕರ್, ಮುಖ್ಯ ಅತಿಥಿಗಳು: ಸುವರ್ಣ ನ್ಯೂಸ್ ಸುದ್ದಿ ಸಂಪಾದಕ ಅಜಿತ್ ಹನುಮಕ್ಕನವರ್, ನಿವೃತ್ತ ನ್ಯಾಯಾಧೀಶ ಎಸ್.ನಾಗೇಶ್, ಲೋಕಾಯುಕ್ತ ಟಿ.ಜೆ.ಉದೇಶ್, ನಿವೃತ್ತ ಪೊಲೀಸ್ ಅಧೀಕ್ಷಕ ಸಿ.ಎನ್. ಅಪ್ಪಯ್ಯ, ಬಿ.ಸಾಬಾರೆಡ್ಡಿ, ದಯಾನಂದ, ಸ್ಥಳ: ಶಿವಕುಮಾರಸ್ವಾಮಿ ಫಂಕ್ಷನ್ ಹಾಲ್, ಸರ್ದಾರ್‌ವಲ್ಲಭಬಾಯಿ ಪಟೇಲ್ ನಗರ, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಮಹಿಳಾ ಕಾಲೇಜು:** ಬೆಳಗ್ಗೆ 10.30ಕ್ಕೆ ಕಲಾ ಸಂಭ್ರಮ ವರ್ಧಿನಿ, ರಾಜ್ಯ ಮಟ್ಟದ ಅಂತರ ಕಾಲೇಜು ಸ್ಪರ್ಧೆಗಳು, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಜಿಪಂ ಸಿಇಓ ಎಸ್.ಯುಕೇಶ್‌ಕುಮಾರ್, ಅಧ್ಯಕ್ಷತೆ : ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಮುಖ್ಯ ಅತಿಥಿಗಳು : ನಟಿ ಅಕ್ಷತಾ ಪಾಂಡವಪುರ, ಮಧ್ಯಾಹ್ನ 3.30ಕ್ಕೆ ಸಮಾರೋಪ ಸಮಾರಂಭ, ಸಮಾರೋಪ ಭಾಷಣ: ಜಾನಪದ ವಿದ್ವಾಂಸ ಡಾ.ಪಿ.ಕೆ. ರಾಜಶೇಖರ, ಸ್ಥಳ: ನವಜ್ಯೋತಿ ಸಭಾಂಗಣ.

■ **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಗಮ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಸ್ಥಳ: ಹೋಟೆಲ್ ಶ್ರೀ ಗುರು ರೆಸಿಡೆನ್ಸಿ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಶ್ರೀ ಮಹಾಲಕ್ಷ್ಮಿ ಮಹಿಳಾ ಮಂಡಳಿ :** ಮಹಿಳಾ ದಿನಾಚರಣೆ, ಮುಖ್ಯ ಅತಿಥಿಗಳು : ಸುಗಮ ಸಂಗೀತ ಅಕಾಡೆಮಿ ಸಂಸ್ಥಾಪಕರಾದ ಶ್ರೀಮತಿ ಎಚ್.ಆರ್. ಲೀಲಾವತಿ, ಅಧ್ಯಕ್ಷತೆ : ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಚಂದ್ರಶೇಖರ್, ಉಪಸ್ಥಿತರು : ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶೋಭಾರಾಣಿ, ಮಹಾಲಕ್ಷ್ಮೀ ಮಹಿಳಾ ಮಂಡಳಿ ಅಧ್ಯಕ್ಷೆ ಶ್ರೀಮತಿ ಎಂ.ಎನ್. ದಿವ್ಯಚೇತನ್, ಶ್ರೀಮತಿ ರೇಣುಕಾರಾಜ್, ಶ್ರೀಮತಿ ಸುಜಾತ ಕಾಶಿ, ಸ್ಥಳ: ಶ್ರೀ ರೇಣುಕಾಚಾರ್ಯ ದೇವಸ್ಥಾನ, ಅಗ್ರಹಾರ, ಬೆಳಗ್ಗೆ 11ಕ್ಕೆ.

■ **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು:** ವಿಶ್ವ ಮಹಿಳಾ ದಿನಾಚರಣೆ, ಸಾನ್ನಿಧ್ಯ : ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಆರ್.ವಿಜಯಲಕ್ಷ್ಮಿ ಇನಾಂದಾರ್, ಸನ್ಮಾನ: ಡಾ. ಪುಷ್ಪ ಅಯ್ಯಂಗಾರ್, ವೈದೇಹಿ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು: ಕಾಲೇಜು ಪ್ರಿನ್ಸಿಪಾಲ್ ಡಾ.ಎಂ.ಶಾರದಾ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ

■ **ಜೀವಧಾರ ರಕ್ತನಿಧಿ ಕೇಂದ್ರ :** ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹುಟ್ಟುಹಬ್ಬದ ಅಂಗವಾಗಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ಘಟಕದ ಅಧ್ಯಕ್ಷ ಎಲ್. ನಾಗೇಂದ್ರ, ಸ್ಥಳ: ಜೀವಧಾರ ರಕ್ತನಿಧಿ ಕೇಂದ್ರ, ಬೆಳಗ್ಗೆ 11ಕ್ಕೆ.

■ **ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಉದ್ಘಾಟನೆ: ಪುಷ್ಪ ಅಮರನಾಥ್, ಅಧ್ಯಕ್ಷತೆ : ಪಿಡಿಓ ಕುಮಾರ್ ಆರಾಧ್ಯ, ಮುಖ್ಯ ಅತಿಥಿಗಳು : ಎಸ್. ಯುಕೇಶ್ ಕುಮಾರ್, ಶ್ರೀಮತಿ ಪುಷ್ಪವಲ್ಲಿ, ಕೆ.ಬಿ. ಪ್ರಭುಸ್ವಾಮಿ, ಸಿ. ಕೃಷ್ಣ, ತಿಬ್ಬಯ್ಯ, ವರ್ಶಿದ್ ಪಾಷಾ, ಡಾ. ಪ್ರಸಾದ್, ಸ್ಥಳ: ಅಂಬೇಡ್ಕರ್ ಸಮುದಾಯ ಭವನ, ವರುಣಾ ಗ್ರಾಮ, ಬೆಳಗ್ಗೆ 11ಕ್ಕೆ.

■ **ಮೈಸೂರು ಕನ್ನಡ ವೇದಿಕೆ:** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಸಾಧಕ ಮಹಿಳೆಯರಿಗೆ ಮಹಿಳಾರತ್ನ ರಬಾಬಾಯಿ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ: ಕೆ. ಪುಷ್ಪವಲ್ಲಿ, ಪ್ರಧಾನ ಭಾಷಣ: ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಉಪಸ್ಥಿತರು: ಡಿಸಿಪಿ ಕೆ.ಎಸ್.ಸುಂದರರಾಜ್, ಬಿ.ಎನ್.ವೀಣಾ, ಸ್ಥಳ: ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ :** ಶ್ರೀ ಶೃಂಗೇರಿ ಶಾರದಾ ಪೀಠದ 36ನೇ ಜಗದ್ಗುರು ಶ್ರೀ ಶ್ರೀ ಭಾರತಿತೀರ್ಥ ಮಹಾಸ್ವಾಮಿಗಳವರ 76ನೇ ವರ್ಧಂತಿ ಮಹೋತ್ಸವ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ರಘುರಾಂ ವಾಜಪೇಯಿ, ಸ್ಥಳ: ಚಾಮುಂಡಿಪುರಂ ವೃತ್ತ, ಮಧ್ಯಾಹ್ನ 12ಕ್ಕೆ

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್:** ಮುತ್ತುಸ್ವಾಮಿ ದೀಕ್ಷಿತರ 250ನೇ ಜನ್ಮ ವರ್ಧಂತಿ ಆಚರಣೆ ಪ್ರಯುಕ್ತ ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿ, ವಿದ್ವಾನ್ ಪೃಥ್ವಿ ಭಾಸ್ಕರ್ ಅವರಿಂದ ಗಾಯನ, ವಿದ್ವಾನ್ ತನ್ಮಯೀ ಉಪ್ಪಂಗಳ–ಪಿಟೀಲು, ವಿದ್ವಾನ್ ವಿನೋದ್ ಶ್ಯಾಮ್ ಆನೂರ್–ಮೃದಂಗ, ವಿದ್ವಾನ್ ಸುನಾದ್ ಆನೂರ್–ಖಂಜಿರ, ಸ್ಥಳ: ವೀಣೆ ಶೇಷಣ್ಣ ಭವನ, ಗಾನಭಾರತೀ, ಸಂಜೆ 6 ರಿಂದ.

■ **ಶ್ರೀ ಗಣಪತಿ ಸೇವಾ ಮಂಡಳಿ ಟ್ರಸ್ಟ್ :** ಏಳನೇ ರಾಮೋತ್ಸವ, ಸಂಜೆ 6.30 ರಿಂದ ರಂಜಿನಿ ಗಾನ ಕಲಾ ಕೇಂದ್ರದವರಿಂದ ದೇವರ ನಾಮಗಳು, ಸಂಜೆ 7 ರಿಂದ ವಿದ್ವಾನ್ ಡಾ. ತಾಂಡವಮೂರ್ತಿ ಮತ್ತು ತಂಡದವರಿಂದ ಪಂಚ ಪಿಟೀಲು ವಾದನ, ವಿದ್ವಾನ್ ಕುಮಾರಸ್ವಾಮಿ–ಮೃದಂಗ, ಸ್ಥಳ: ರಜತ್ ಸಭಾ ಮಂಟಪ, ಗಣಪತಿ ದೇವಸ್ಥಾನ, ಐ ಬ್ಲಾಕ್ ರಾಮಕೃಷ್ಣನಗರ.

■ **ಶ್ರೀ ರಾಮಸೇವಾ ಮಂಡಲಿ ಚಾರಿಟಬಲ್ ಟ್ರಸ್ಟ್, ಮೈಸೂರು ಉತ್ತರ :** ಶ್ರೀ ರಾಮನವಮಿ ಸಂಗೀತ ಸಂಭ್ರಮ, ಸಂಜೆ 5.15 ರಿಂದ ವಿದ್ವಾನ್ ಶ್ರೀಹರ್ಷ ಅವರಿಂದ ಹಾಡುಗಾರಿಕೆ, 32ನೇ ಶ್ರೀ ರಾಮನವಮಿ ಸಂಗೀತೋತ್ಸವ–2026, ಸಂಜೆ 6.15ಕ್ಕೆ ವಿದುಷಿ ಐಶ್ವರ್ಯ ವಿದ್ಯಾ ರಘುನಾಥ್ ಅವರ ಗಾಯನ ಕಾರ್ಯಕ್ರಮ, ಜ್ಯೋತ್ಸ್ನ ಶ್ರೀಕಾಂತ್–ಪಿಟೀಲು, ಸಿ.ಚೆಲುವರಾಜು–ಮೃದಂಗ, ಎನ್.ಗುರುಮೂರ್ತಿ–ಘಟಂ, ಸ್ಥಳ: ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿವಿ ಮೊಹಲ್ಲಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಸಾಧಕರ ಸೋಪಾನ –ಲೇಖನ ಮತ್ತು ಪ್ರಸ್ತುತಿ: ಟಿ. ಎಸ್.ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಎ.ಎಸ್, ಶೀಲಾ, ವ್ಯಾಖ್ಯಾನ–ಡಾ. ಮ.ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40 – ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು ಮುಕ್ತವಾಣಿ, ಪ್ರಾಯೋಜಕರು : ಪ್ರಸಾರಾಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗದಲ್ಲಿರುವ ಅಧ್ಯಯನ ಅವಕಾಶಗಳನ್ನು ಕುರಿತು ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ದಿಲೀಪ್ .ಎಸ್ ಅವರೊಂದಿಗೆ ಸಂದರ್ಶನದ ಸಂದರ್ಶಕರು–ಲಕ್ಷ್ಮೀನಾರಾಯಣ .ಎಸ್., ನಿರ್ಮಾಣ : ಎನ್.ಕೇಶವಮೂರ್ತಿ, 8.30 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಪಾಲ್ಘಾಟ್ ಕೆ.ವಿ. ನಾರಾಯಣಸ್ವಾಮಿ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ: ಆರ್.ಲೋಕೇಶ್ವರಿ . ಬಿ.ಜಿ. ಕವಿತಾ ಹಾಗೂ ಲಕ್ಷ್ಮೀನಾರಾಯಣ

ಮಧ್ಯಾಹ್ನ: 12.05 ವನಿತಾ ವಿಹಾರ – ನಾಟಕ ಬ್ರೇಕ್ ಅಪ್ ರಚನೆ–ಉಷಾ ನರಸಿಂಹನ್, ನಿರ್ದೇಶನ ಹಾಗೂ ನಿರ್ಮಾಣ – ದಿಗ್ವಿಜಯ್, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು– ಜಿ. ಪುಷ್ಪಲತಾ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಪಿ. ಗುರುಪ್ರಸಾದ್– ಸ್ಯಾಕ್ಸೊಫೋನ್ ವಾದನ, 3.30 ರಾಷ್ಟ್ರೀಯ ಶೈಕ್ಷಣಿಕ ಕಾರ್ಯಕ್ರಮ–ಉಮಂಗ್, 4.00 ಕಥಾಕಾಲಕ್ಷೇಪ–ವಾಲಿ ಮೋಕ್ಷ, ಪ್ರಸ್ತುತಿ–ಸಂತ ಕೇಶವ ದಾಸರು, 5.00 ಪ್ರಾಯೋಜಿತ ಕಾರ್ಯಕ್ರಮ : ನಿರಾಮಯ ನಿಮ್ಮ ಆರೋಗ್ಯ ನಮ್ಮ ಮಾತು, ಪ್ರಾಯೋಜಕರು : ನಿರಾಮಯ ಹೆಲ್ತ್ ಕೇರ್, ಸರಸ್ವತಿಪುರಂ, ಮೈಸೂರು, ಭಾಗವಹಿಸುತ್ತಾರೆ–ಡಾ. ಹಿಮಮಣಿ .ಎಸ್, ವಿಷಯ–ಮೂತ್ರಪಿಂಡಗಳ ಸಮಸ್ಯೆ, ಆರೈಕೆ ಹಾಗೂ ತಡೆಗಟ್ಟುವಿಕೆ, ಪ್ರಸ್ತುತಿ– ಡಾ.ಕುಲದೀಪ್.ಎನ್ ಹಾಗೂ ತೇಜಸ್ವಿನಿ ಗಿರೀಶ್, 5.35 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ– ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ.ಮೆಣಸಿನ ಕಾಯಿ ಬೇಸಾಯ ಮತ್ತು ತಳಿ ಅಭಿವೃದ್ಧಿಯಲ್ಲಿ ಕೃಷಿ ನವೋದ್ಯಮಗಳ ಪಾತ್ರ ಈ ಕುರಿತು ಮಾತನಾಡುತ್ತಾರೆ ಹಾವೇರಿ ಜಿಲ್ಲೆ, ರಾಣಿಬೆನ್ನೂರಿನ ಸೈವಿ ಸೀಡ್ಸ್ ಸಂಸ್ಥೆಯ ನಿರ್ದೇಶಕರಾದ ಎಂ. ಉದಯ್ ಕುಮಾರ್, ಪ್ರಸ್ತುತಿ : ಎನ್.ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಸಂಸತ್ ಸಮೀಕ್ಷಾ, 8.15 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಪಂಡಿತ್ ವಿಶ್ವಮೋಹನ್ ಭಟ್ – ಗೀಟಾರ್ ವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ ನಿಲಯದ ಕಲಾವಿದರಿಂದ ವಾದ್ಯವೃಂದ, 10.00 ಸಂಸತ್ತಿನ ಪ್ರಶ್ನೋತ್ತರ ಅವಧಿಯ ಕಲಾಪಗಳ ಧ್ವನಿಮುದ್ರಣದ ಪ್ರಸಾರ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಮಾರ್ಚ್ 24 ಮಂಗಳವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 332 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಪಶ್ಚಿಮ ಏಷ್ಯಾ ಸಂಘರ್ಷ ಭಾರತಕ್ಕೆ ಅತ್ಯಂತ ಕಠಿಣ ಸವಾಲುಗಳ ಸೃಷ್ಟಿಸಿದೆ

ನವದೆಹಲಿ: ಇರಾನ್–ಅಮೆರಿಕ ಮತ್ತು ಇಸ್ರೇಲ್ ನಡುವಿನ ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಭಾರತಕ್ಕೆ ಅತ್ಯಂತ ಕಠಿಣ ಸವಾಲುಗಳು ಎದುರಾಗಿದ್ದು, ಅವುಗಳೆಲ್ಲವನ್ನೂ ಎದುರಿಸಲು ಭಾರತ ಸಿದ್ಧವಿದೆ ಎಂದು ಪ್ರಧಾನಿ ಮೋದಿ ಘೋಷಣೆ ಮಾಡಿದ್ದಾರೆ.

ಇರಾನ್ ಯುದ್ಧದ ಕುರಿತು ಇದೇ ಮೊದಲ ಬಾರಿಗೆ ಲೋಕಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷವನ್ನು ಆತಂಕಕಾರಿ ಎಂದು ಕರೆದರು. ಅಂತೆಯೇ ಇದು ಭಾರತಕ್ಕೆ ಕಠಿಣ ಸವಾಲುಗಳನ್ನು ಸೃಷ್ಟಿಸಿದೆ ಮತ್ತು ಎಲ್ಲಾ ಕಡೆಯವರು ಶಾಂತಿಯನ್ನು ಪುನಃಸ್ಥಾಪಿಸಬೇಕು ಎಂದು ಮೋದಿ ಒತ್ತಾಯಿಸಿದರು.

ಈ ಬಿಕ್ಕಟ್ಟು ಆರ್ಥಿಕ, ರಾಷ್ಟ್ರೀಯ ಭದ್ರತೆ ಮತ್ತು ಮಾನವೀಯ ಸವಾಲುಗಳನ್ನು ಒಡ್ಡಿದೆ ಎಂದರು. ಇಂಧನ ಬಿಕ್ಕಟ್ಟಿನ ಕುರಿತು ಮಾತನಾಡಿದ ಅವರು, ಭಾರತವು ತನ್ನ ಎಲ್‌ಪಿಜಿಯ 60% ಅನ್ನು ಆಮದು ಮಾಡಿಕೊಳ್ಳುತ್ತದೆ ಮತ್ತು ದೇಶೀಯ ಪೂರೈಕೆಗೆ ಆದ್ಯತೆ ನೀಡಲು ಮತ್ತು ದೇಶಾದ್ಯಂತ ಸುಗಮ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಸಾರ್ವಜನಿಕರಿಗೆ ತೊಂದರೆಗಳನ್ನು ಕಡಿಮೆ ಮಾಡಲು ಪ್ರಯತ್ನಗಳು ನಡೆಯುತ್ತಿವೆ ಎಂದು ಹೇಳಿದರು.

ಪಶ್ಚಿಮ ಏಷ್ಯಾದ ಪರಿಸ್ಥಿತಿ ಚಿಂತಾಜನಕವಾಗಿದೆ. ಈ ಸಂಘರ್ಷವು ಮೂರು ವಾರಗಳಿಗೂ ಹೆಚ್ಚು ಕಾಲ ನಡೆಯುತ್ತಿದೆ. ಇದು ಜಾಗತಿಕ ಆರ್ಥಿಕತೆ ಮತ್ತು ಜನರ ಜೀವನದ ಮೇಲೆ ತೀವ್ರ ಪರಿಣಾಮ ಬೀರುತ್ತದೆ ಮತ್ತು ಅದಕ್ಕಾಗಿಯೇ ಈ ಸಂಘರ್ಷಕ್ಕೆ ಆರಂಭಿಕ ಪರಿಹಾರಕ್ಕಾಗಿ ಜಗತ್ತು ಎಲ್ಲಾ ಕಡೆಯವರನ್ನು ಒತ್ತಾಯಿಸು ತ್ತಿದೆ ಎಂದು



ಮೋದಿ ಸಂಸತ್ತಿನಲ್ಲಿ ಹೇಳಿದರು.

ಸರ್ಕಾರವು ಶಾಂತಿಗಾಗಿ ಎಲ್ಲಾ ಕಡೆಯವರಿಗೆ ಮನವಿ ಮಾಡುತ್ತಿದೆ. ಈ ಯುದ್ಧವು ಭಾರತಕ್ಕೆ ಅನಿರೀಕ್ಷಿತ ಸವಾಲುಗಳನ್ನು ಸೃಷ್ಟಿಸಿದೆ – ಆರ್ಥಿಕ, ರಾಷ್ಟ್ರೀಯ ಭದ್ರತೆ ಮತ್ತು ಮಾನವೀಯ ಎಂದು ಅವರು ಹೇಳಿದರು. ಯುದ್ಧದ ಆರಂಭದಿಂದಲೂ ಹಾರ್ಮುಜ್ ಜಲಸಂಧಿಯ ಮೂಲಕ ಸರಕು ಸಾಗಣೆ ಒಂದು ಸವಾಲಾಗಿದೆ ಎಂದು ಹೇಳಿದ ಮೋದಿ, ಆದರೆ ಸರ್ಕಾರವು ಅನಿಲ ಮತ್ತು ಇಂಧನ ಪೂರೈಕೆಗಳು ಕನಿಷ್ಠ ಪರಿಣಾಮ ಬೀರುವಂತೆ ನೋಡಿಕೊಳ್ಳುತ್ತಿದೆ ಎಂದರು.

ದೇಶೀಯ ಎಲ್‌ಪಿಜಿ ಉತ್ಪಾದನೆಗೆ ಒತ್ತು: ಯುದ್ಧ ಪ್ರಾರಂಭವಾದಾಗಿನಿಂದ, ಹಾರ್ಮುಜ್ ಜಲಸಂಧಿಯ ಮೂಲಕ ಹಡಗುಗಳ ಚಲನೆ ತುಂಬಾ ಸವಾಲಿನದ್ದಾಗಿದೆ. ಇದರ ಹೊರತಾಗಿಯೂ, ಪೆಟ್ರೋಲ್, ಡೀಸೆಲ್ ಮತ್ತು ಅನಿಲ ಪೂರೈಕೆಯ ಮೇಲೆ ತೀವ್ರ ಪರಿಣಾಮ ಬೀರದಂತೆ ನಮ್ಮ ಸರ್ಕಾರ ಪ್ರಯತ್ನಗಳನ್ನು ಮಾಡಿದೆ. ನಮಗೆಲ್ಲರಿಗೂ ತಿಳಿದಿರುವಂತೆ, ದೇಶವು ತನ್ನ ಎಲ್‌ಪಿಜಿ ಅಗತ್ಯದ 60% ಅನ್ನು ಆಮದು ಮಾಡಿಕೊಳ್ಳುತ್ತದೆ. ಪೂರೈಕೆಯಲ್ಲಿನ ಅನಿಶ್ಚಿತತೆಯಿಂದಾಗಿ, ಸರ್ಕಾರವು ದೇಶೀಯ ಎಲ್‌ಪಿಜಿ ಗ್ರಾಹಕರಿಗೆ ಆದ್ಯತೆ ನೀಡಿದೆ. ಅದೇ ಸಮಯದಲ್ಲಿ, ಎಲ್‌ಪಿಜಿಯ ದೇಶೀಯ ಉತ್ಪಾದನೆಯನ್ನು ಸಹ ಹೆಚ್ಚಿಸಲಾಗುತ್ತಿದೆ. ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ಸುಗಮವಾಗಿರುವುದನ್ನು ಖಚಿತ ಪಡಿಸಿಕೊಳ್ಳಲು ನಿರಂತರ ಪ್ರಯತ್ನಗಳನ್ನು ಮಾಡಲಾಗಿದೆ ಎಂದು ಅವರು ಹೇಳಿದರು. ಭಾರತವು ಈಗ 41 ದೇಶಗಳಿಂದ ಇಂಧನವನ್ನು ಆಮದು ಮಾಡಿಕೊಳ್ಳುತ್ತಿದೆ. ಇದು ಹಿಂದಿನ 27 ದೇಶಗಳಿಂದ ಹೆಚ್ಚಾಗಿದೆ ಮತ್ತು 5.3 ಮಿಲಿಯನ್ ಮೆಟ್ರಿಕ್ ಟನ್‌ಗಳಿಗಿಂತ ಹೆಚ್ಚಿನ ■ 6ನೇ ಪುಟಕ್ಕೆ

ಗ್ರಾಮ ಪಂಚಾಯತ್ ಚುನಾವಣೆಯ ಮೀಸಲಾತಿಗೆ ಸಮಯ ಕೋರಿದ ಸರ್ಕಾರ

ಬೆಂಗಳೂರು: ರಾಜ್ಯದಲ್ಲಿ 5,950 ಗ್ರಾಮ ಪಂಚಾಯಿತಿಗಳಿದ್ದು 96 ಸಾವಿರಕ್ಕೂ ಅಧಿಕ ಸದಸ್ಯರಿದ್ದಾರೆ. ಆದ್ದರಿಂದ, ಹೊಸದಾಗಿ ಜನಸಂಖ್ಯೆಗೆ ಅನುಗುಣವಾಗಿ ಒಟ್ಟು ಸದಸ್ಯರ ಸಂಖ್ಯೆ ಗುರುತಿಸಲು ನಾಲ್ಕು ವಾರ ಬೇಕು ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಲಿಖಿತ ಮನವಿ ಮಾಡಿದೆ.

ಅಂತೆಯೇ, ಮೀಸಲಾತಿ ಪ್ರಕ್ರಿಯೆ ಅಂತಿಮಗೊಳಿಸಿ, ಪಟ್ಟಿಯನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲು ಕನಿಷ್ಠ 3 ತಿಂಗಳು ಬೇಕು ಎಂದು ಮೌಖಿಕವಾಗಿ ತಿಳಿಸಿದೆ. ಈ ಸಂಬಂಧ ರಾಜ್ಯ ಚುನಾವಣಾ ಆಯೋಗ ಸೇರಿದಂತೆ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ರಾಜ್ಯ ಸರ್ಕಾರದ ಪರ ಹೆಚ್ಚುವರಿ ಅಡ್ವೊಕೇಟ್ ಜನರಲ್ ಪ್ರತಿಮಾ ಹೊನ್ನಾಪುರ, ಸದಸ್ಯರ ಸಂಖ್ಯೆ ಅಂತಿಮಗೊಂಡ ಬಳಿಕ ಮೀಸಲಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಕನಿಷ್ಠ 3 ತಿಂಗಳು ಬೇಕಾಗಬಹುದು ಎಂದರು. ಅಂತೆಯೇ, ಗ್ರಾಮ ಪಂಚಾಯತ್ ಚುನಾವಣೆಗೆ ಸಂಬಂಧಿಸಿದಂತೆ ವಸ್ತುಸ್ಥಿತಿ ವರದಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳ ಕುರಿತಾದ ಪ್ರಮಾಣ ಪತ್ರವನ್ನು ನ್ಯಾಯ ಪೀಠಕ್ಕೆ ಸಲ್ಲಿಸಿದರು.

ಸರ್ಕಾರದ ಹೇಳಿಕೆಯನ್ನು ದಾಖಲಿಸಿಕೊಂಡ ನ್ಯಾಯ ಪೀಠ ವಿಚಾರಣೆಯನ್ನು ಏಪ್ರಿಲ್ 29ಕ್ಕೆ ಮುಂದೂಡಿತು.

ರಾಜ್ಯ ಚುನಾವಣಾ ಆಯೋಗದ ಪರ ಪದಾಂಕಿತ ಹಿರಿಯ ವಕೀಲ ಕೆ.ಎನ್.ಫಣೀಂದ್ರ ವಾದ ಮಂಡಿಸಿದರು.

ಸರ್ಕಾರದ ವಾದ: ಅವಧಿ ಮುಗಿದ ಗ್ರಾಮ ಪಂಚಾಯಿತಿಗಳಿಗೆ ಚುನಾವಣೆ ನಡೆಸುವ ಸಂಬಂಧ ರಾಜ್ಯ ಚುನಾವಣಾ ಆಯೋಗದ ಪತ್ರವನ್ನು ಆಧರಿಸಿ ಎಲ್ಲಾ ಸಿದ್ಧತೆ ಮಾಡಿಕೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ 2026ರ ಜ.28ರಂದು ಪತ್ರ ಬರೆಯಲಾಗಿದೆ.

ಚಾಲ್ತಿಯಲ್ಲಿರುವ ಹಿಂದಿನ ಜನಗಣತಿ ಅಧರಿಸಿ ಪ್ರತಿ ಗ್ರಾಮ ಪಂಚಾಯತ್‌ಗೆ ಎಷ್ಟು ಸದಸ್ಯರು ಆಯ್ಕೆಯಾಗಬೇಕು ಎಂಬುದನ್ನು ಕರ್ನಾಟಕ ರಾಜ್ಯ ಕ್ಷೇತ್ರ ಮರುವಿಂಗಡಣಾ ಆಯೋಗ ನಿರ್ಧರಿಸಿ ಸರ್ಕಾರಕ್ಕೆ ಶಿಫಾರಸು ಮಾಡಬೇಕು. ಅದರಂತೆ, ಅಗತ್ಯ ಅಂಕಿ–ಸಂಖ್ಯೆಗಳ ಮಾಹಿತಿಯನ್ನು 15 ದಿನಗಳಲ್ಲಿ ಆಯೋಗಕ್ಕೆ ಒದಗಿಸುವಂತೆ ಮಾರ್ಚ್ 18ರಂದು ಕ್ಷೇತ್ರ ಮರುವಿಂಗಡಣಾ ಆಯೋಗ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದೆ.

ಜಿಲ್ಲಾಧಿಕಾರಿಗಳಿಂದ ಆಯೋಗಕ್ಕೆ ಮಾಹಿತಿ ಬರಲು 2 ವಾರ ಬೇಕು. ಆ ಮಾಹಿತಿಯನ್ನು ಪರಿಶೀಲಿಸಿ, ಸರ್ಕಾರಕ್ಕೆ ಶಿಫಾರಸು ಮಾಡಲು ಆಯೋಗಕ್ಕೆ 1 ವಾರ ಬೇಕು. ಆಯೋಗದ ಶಿಫಾರಸು ಪರಿಶೀಲಿಸಿ ಒಟ್ಟು ಸದಸ್ಯರ ಸಂಖ್ಯೆ ನಿಗದಿಪಡಿಸಲು ಸರ್ಕಾರಕ್ಕೆ 1 ವಾರ ಬೇಕು.

ಚುನಾಯಿತರಾಗಬೇಕಾದ ಒಟ್ಟು ಸದಸ್ಯರ ಅಂತಿಮ ಸಂಖ್ಯೆ ನಿಗದಿಯಾದ ಬಳಿಕ, ಎಸ್‌ಸಿ, ಎಸ್‌ಟಿ, ಹಿಂದುಳಿದ ವರ್ಗ ಮತ್ತು ಮಹಿಳೆಯರಿಗೆ ಮೀಸಲಾತಿ ನಿಗದಿಪಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸುತ್ತೋಲೆ ಹೊರಡಿಸಲಾಗುವುದು ಎಂದು ಸರ್ಕಾರದ ಲಿಖಿತ ಹೇಳಿಕೆಯಲ್ಲಿ ತಿಳಿಸಲಾಗಿದೆ.


ಅವಧಿ ಮುಗಿದ ರಾಜ್ಯದ 5,950 ಗ್ರಾಪಂಗಳಿಗೆ ಹಾಗೂ 187 ನಗರ ಸ್ಥಳೀಯ ಸಂಸ್ಥೆಗಳಿಗೆ ಸಕಾಲದಲ್ಲಿ ಸಾರ್ವತ್ರಿಕ ಚುನಾವಣೆ ನಡೆಸಲು ಆಯೋಗಕ್ಕೆ ಅನುಕೂಲವಾಗಲು ಅಂತಿಮ ಮೀಸಲಾತಿ ಅಧಿಸೂಚನೆ ಹೊರಡಿಸಿ ತಕ್ಷಣದ ಕ್ರಮಕ್ಕೆ ಮುಂದಾಗಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿ ಆಯೋಗ ಈ ಅರ್ಜಿ ಸಲ್ಲಿಸಿದೆ.

ರಾಜ್ಯದ 47 ನಗರಸಭೆ, 91 ಪುರಸಭೆ, 49 ಪಟ್ಟಣ ಪಂಚಾಯಿತಿಗಳು ಸೇರಿದಂತೆ ಅವಧಿ ಮುಗಿದು ಚುನಾವಣೆ ನಡೆಯಬೇಕಿರುವ ಒಟ್ಟು 187 ನಗರ ಸ್ಥಳೀಯ ಸಂಸ್ಥೆಗಳ ಪೈಕಿ 167 ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ಮರುವಿಂಗಡಣೆ ಕಾರ್ಯ ಮುಗಿದಿದ್ದು, 21 ಮಾತ್ರ ಬಾಕಿ ಇವೆ.

ಇರಾನ್ ಮೇಲಿನ ದಾಳಿ 5 ದಿನ ತಾತ್ಕಾಲಿಕ ಸ್ಥಗಿತ

ಶಾಂತಿ ಸ್ಥಾಪನೆಗಾಗಿ ಪಾಕಿಸ್ತಾನ, ಟರ್ಕಿ, ಈಜಿಪ್ಟ್ ಮಧ್ಯಸ್ಥಿಕೆ!

ವಾಷಿಂಗ್ಟನ್: ಐದು ದಿನಗಳ ಕಾಲ ಇರಾನ್ ಮೇಲಿನ ದಾಳಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿರುವುದರಿಂದ ಜಗತ್ತಿಗೆ ಶಾಂತಿಯ ಹೊಸ ಭರವಸೆ ಸಿಕ್ಕಿದೆ.



ಡೊನಾಲ್ಡ್ ಟ್ರಂಪ್

ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ನಾಲ್ಕನೇ ವಾರಕ್ಕೆ ಪ್ರವೇಶಿಸಿರುವಂತೆ ಪಾಕಿಸ್ತಾನ, ಈಜಿಪ್ಟ್ ಮತ್ತು ಟರ್ಕಿಯು ಶಾಂತಿಗಾಗಿ ಮಧ್ಯಸ್ಥಿಕೆ ಪ್ರಯತ್ನದ ವರದಿಗಳ ನಡುವೆ ಈ ಬೆಳವಣಿಗೆಯಾಗಿದೆ. ಮತ್ತೊಂದೆಡೆ ಯುದ್ಧ ಪ್ರಾರಂಭಿಸಿದ ಅಮೆರಿಕ ನೇರವಾಗಿ ಮಾತನಾಡಬೇಕು ಎಂದು ಇರಾನ್ ಪಟ್ಟು ಹಿಡಿದಿದೆ. ಟರ್ಕಿ, ಈಜಿಪ್ಟ್ ಮತ್ತು ಪಾಕಿಸ್ತಾನ ಕಳೆದ ಎರಡು ದಿನಗಳಿಂದ ಅಮೆರಿಕ ಮತ್ತು ಇರಾನ್ ನಡುವೆ ಸಂದೇಶಗಳನ್ನು ರವಾನಿಸುತ್ತಿವೆ ಎಂಬ ಮೂಲಗಳನ್ನು ಉಲ್ಲೇಖಿಸಿ ಅಮೆರಿಕ ಸುದ್ದಿವಾಹಿನಿ ವರದಿ ಮಾಡಿದೆ. ಮೂರೂ ದೇಶಗಳ ವಿದೇಶಾಂಗ ಸಚಿವರು ಶ್ವೇತಭವನದ ರಾಯಭಾರಿ ಸ್ಟೀವ್ ವಿಟ್‌ಕಾಫ್ ಮತ್ತು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಅವರೊಂದಿಗೆ ಪ್ರತ್ಯೇಕ ಮಾತುಕತೆ ನಡೆಸಿದ್ದಾರೆ ಎಂದು ಅದು ವರದಿ ಮಾಡಿದೆ. ■ 6ನೇ ಪುಟಕ್ಕೆ

ತೈಲ ಬೆಲೆಯಲ್ಲಿ ಇಳಿಕೆ

ನವದೆಹಲಿ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕದನ ವಿರಾಮ ಘೋಷಣೆ ಮಾಡಿದ ಬೆನ್ನಲ್ಲೇ ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆಯಲ್ಲಿ ಭಾರೀ ಪ್ರಮಾಣದ ಇಳಿಕೆ ಕಂಡುಬಂದಿದೆ. ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆಯಲ್ಲಿ ಸೋಮವಾರ ಬೆಳಗ್ಗೆ ಭಾರೀ ಏರಿಕೆಯಾಗಿತ್ತು. ಅಲ್ಲ ಕದನ ವಿರಾಮ ಘೋಷಣೆ ಬಳಿಕ ಬರೊಬ್ಬರಿ ಶೇ.11ರಷ್ಟು ದರ ಇಳಿಕೆ ಕಂಡುಬಂದಿದೆ. ಆದಾಗ್ಯೂ, ಸಂಜೆ ವೇಳೆಗೆ ಬ್ರೆಂಟ್ ಕಚ್ಚಾ ತೈಲದ ವ್ಯಾಪಾರವು ಶೇ.7.73 ರಷ್ಟು ಕಡಿಮೆಯಾಗಿದೆ ಎಂದು ತಿಳಿದು ಬಂದಿದೆ.

ಷೇರು ಮಾರುಕಟ್ಟೆ ಚೇತರಿಕೆ: ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಕುರಿತು ಅಮೆರಿಕ ಇರಾನ್‌ಗೆ ನೀಡಿದ್ದ ಅಂತಿಮ ಗಡುವಿನ ನಂತರ ಜಾಗತಿಕ ಷೇರು ಮಾರುಕಟ್ಟೆಗಳು ಕುಸಿದಿದ್ದವು. ಭಾರತೀಯ ಷೇರುಮಾರುಕಟ್ಟೆ ಹೂಡಿಕೆದಾರರಿಗೂ ಬರೊಬ್ಬರಿ 7 ಲಕ್ಷ ಕೋಟಿಗಿಂತಲೂ ಅಧಿಕ ಬಂಡವಾಳ ನಷ್ಟವಾಗಿತ್ತು. ಯುದ್ಧ ಹೀಗೆಯೇ ಮುಂದುವರೆದರೆ ಜಾಗತಿಕ ಆರ್ಥಿಕತೆಯೇ ತಲೆಕೆಳಗಾಗುವ ಭೀತಿ ಎದುರಾಗಿತ್ತು. ಇದರ ನಡುವೆಯೇ ತಾತ್ಕಾಲಿಕ ಕದನ ವಿರಾಮ ಹೂಡಿಕೆದಾರರಲ್ಲಿ ಕೊಂಚ ವಿಶ್ವಾಸ ಮೂಡಿಸಿದೆ.

ಏಪ್ರಿಲ್ 1ರಿಂದ ರಾಷ್ಟ್ರೀಯ ಹೆದ್ದಾರಿಗಳ ಟೋಲ್ ಶುಲ್ಕ ಹೆಚ್ಚಳ



ನವದೆಹಲಿ: ಏಪ್ರಿಲ್ 1ರಿಂದ ದೇಶಾದ್ಯಂತ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಶುಲ್ಕ ಹೆಚ್ಚಳ ಜಾರಿಗೆ ಬರಲಿದ್ದು, ವಾಹನ ಸವಾರರಿಗೆ ಮತ್ತೊಮ್ಮೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ.

ಪ್ರತಿ ವರ್ಷ ಏಪ್ರಿಲ್ ಮೊದಲ ದಿನದಿಂದಲೇ ಟೋಲ್ ದರಗಳನ್ನು ಪರಿಷ್ಕರಿಸುವ ಪದ್ಧತಿಯಂತೆ, ಈ ವರ್ಷವೂ ದರ ಏರಿಕೆ ಘೋಷಿಸಲಾಗಿದೆ. ಈ ದರಗಳು ಶೇಕಡಾ 4ರಿಂದ 5ರಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಈ ದರ ಏರಿಕೆ ಕಾರು, ಬಸ್, ಲಾರಿ ಸೇರಿದಂತೆ ಎಲ್ಲಾ ವಾಹನಗಳಿಗೆ ಅನ್ವಯವಾಗಲಿದೆ. ಹೆದ್ದಾರಿಗಳ ನಿರ್ವಹಣೆ, ದುರಸ್ತಿ ಮತ್ತು ಅಭಿವೃದ್ಧಿ ವೆಚ್ಚಗಳನ್ನು ಗಮನದಲ್ಲಿಟ್ಟುಕೊಂಡು ಈ ಪರಿಷ್ಕರಣೆ ಮಾಡಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಈ ಕ್ರಮದಿಂದ ದಿನನಿತ್ಯ ಹೆದ್ದಾರಿ ಬಳಸುವ ಪ್ರಯಾಣಿಕರು ಮತ್ತು ಸಾರಿಗೆ ವಲಯದವರಿಗೆ ಹೆಚ್ಚಿನ ಹೊರೆ ಬೀಳುವ ಸಾಧ್ಯತೆ ಇದೆ.

ಇದರ ಜೊತೆಗೆ ಫಾಸ್ಟ್‌ಟ್ಯಾಗ್ ಬಳಕೆದಾರರಿಗೂ ಕೆಲವು ಬದಲಾವಣೆಗಳು ಜಾರಿಗೆ ಬರುತ್ತಿವೆ. ಫಾಸ್ಟ್‌ಟ್ಯಾಗ್ ಖಾತೆಯಲ್ಲಿ ಹಣ ಕೊರತೆಯಿದ್ದರೆ ಅಥವಾ ತಾಂತ್ರಿಕ ಸಮಸ್ಯೆಯಿಂದ ಪಾವತಿ ವಿಫಲವಾದರೆ, ದ್ವಿಗುಣ ಟೋಲ್ ಶುಲ್ಕ ವಿಧಿಸುವ ನಿಯಮವನ್ನು ಕಟ್ಟುನಿಟ್ಟಾಗಿ ಅನುಸರಿಸಲು ನಿರ್ಧರಿಸಲಾಗಿದೆ. ಇದರಿಂದ ವಾಹನ ಸವಾರರು ತಮ್ಮ ಖಾತೆಯಲ್ಲಿ ■ 6ನೇ ಪುಟಕ್ಕೆ

ಕಾಂಗ್ರೆಸ್‌ನಿಂದ ಮಹಾ ದ್ರೋಹ ಆಗಿರುವುದು ನಮಗೆ

'ನಮ್ಮೊಂದಿಗೆ ಪ್ರೀತಿ, ಮೋದಿಯೊಂದಿಗೆ ಮದುವೆ' ಎಐಸಿಸಿ ಅಧ್ಯಕ್ಷ ಖರ್ಗೆಯವರ ಟೀಕೆಗೆ ಮಾಜಿ ಪ್ರಧಾನಿ ದೇವೇಗೌಡರು ತಿರುಗೇಟು

ನವದೆಹಲಿ, ಮಾ.23– 'ನಮ್ಮ ಜೊತೆ ಪ್ರೀತಿ ಹೊಂದಿದ್ದರು, ಆದರೆ ಮೋದಿ ಅವರೊಂದಿಗೆ ಮದುವೆಯಾದರು...!' ಎಂದು ತಮ್ಮನ್ನು ಟೀಕಿಸಿದ್ದ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ರಾಜ್ಯಸಭೆಯಲ್ಲೇ ಸೋಮವಾರ ತಿರುಗೇಟು ನೀಡಿದ್ದಾರೆ.



ಖರ್ಗೆ ಅವರ ಹೇಳಿಕೆಯನ್ನು ಪ್ರಸ್ತಾಪಿಸಿದ ದೇವೇಗೌಡರು, ನಾನು ಸದನದಲ್ಲಿ ಇಲ್ಲದಿದ್ದಾಗ ನಮ್ಮನ್ನು ಟೀಕಿಸಿದ್ದಾರೆ. ನಾನೇನೋ ಅವರಿಗೆ ಹಾಗೂ ಅವರ ಪಕ್ಷಕ್ಕೆ ದ್ರೋಹ ಬಗೆದಿದ್ದೇನೆ ಎಂಬರ್ಥದಲ್ಲಿ ಮಾತನಾಡಿದ್ದಾರೆ. ಆದರೆ, ■ 6ನೇ ಪುಟಕ್ಕೆ

2014ರಿಂದಲೇ ಮೋದಿ ಮೈತ್ರಿ ಶುರುವಾಗಿದ್ದು!

ನಿಜ ಹೇಳಬೇಕೆಂದರೆ, ನನ್ನ ಮತ್ತು ನರೇಂದ್ರ ಮೋದಿ ಅವರ ನಡುವಿನ ಮೈತ್ರಿ ಕಳೆದ ಲೋಕಸಭೆ ಚುನಾವಣೆಯಲ್ಲಿ ಶುರುವಾಗಿದ್ದಲ್ಲ, 2014ರಲ್ಲಿಯೇ ಆರಂಭವಾಯಿತು. ನಾನು ಅಂದಿನ ಲೋಕಸಭೆ ಚುನಾವಣೆಯಲ್ಲಿ ಮೋದಿ ಅವರ ವಿರುದ್ಧ ಪ್ರಚಾರ ನಡೆಸಿದ್ದೆ. ಅವರ ಬಗ್ಗೆ ಅತ್ಯಂತ ಕಟುವಾಗಿ ಮಾತನಾಡಿದ್ದೆ. ಅವರು ಅಧಿಕಾರಕ್ಕೆ ಬಂದರೆ ಲೋಕಸಭೆ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ಘೋಷಣೆ ಮಾಡಿದ್ದೆ. ಅವರು ಗೆದ್ದ ನಂತರ ನಾನು ನಿಜವಾಗಿಯೂ ಲೋಕ ಸಭೆ ಸ್ಥಾನಕ್ಕೆ ರಾಜೀನಾಮೆ ಕೊಡಲು ಮುಂದಾದೆ. ಆದರೆ, ಮೋದಿ ಅವರು ಹಾಗೆ ಮಾಡ ಬೇಡಿ ಎಂದು ತಡೆದರು. ನಾನು ಅವತ್ತಿನ ಅವರ ನಡಳಿವಳಿಕೆಯಿಂದ ಪ್ರಭಾವಿತನಾದೆ. ಆ ಘಟನೆ ನಂತರ ನಾನು ಅವರ ಮೈತ್ರಿಯಲ್ಲಿ ಇದ್ದೇನೆ. ರಾಷ್ಟ್ರಕ್ಕೆ ನರೇಂದ್ರ ಮೋದಿ ಅವರು ಸದೃಢ ನಾಯಕತ್ವ ನೀಡಿದ್ದಾರೆ. ಜನರು ಕೂಡ ಅವರ ಮೇಲೆ ಅಪರಿಮಿತ ವಿಶ್ವಾಸ ಇರಿಸಿ ಸತತವಾಗಿ ಆಯ್ಕೆ ಮಾಡುತ್ತಾ ಬರುತ್ತಿದ್ದಾರೆ. ಇದು ಅವರ ಜನಪ್ರಿಯತೆಗೆ ಸಾಕ್ಷಿಯಾಗಿದೆ.

-ದೇವೇಗೌಡರು, ಮಾಜಿ ಪ್ರಧಾನಿ

ಜೂನ್‌ನಿಂದ 10 ಸಾವಿರ ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭ

ಬೆಂಗಳೂರು : ಮುಂದಿನ ಜೂನ್‌ನಿಂದ 10 ಸಾವಿರ ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಆರಂಭಿಸಲಾಗುವುದು. ಹಂತ ಹಂತವಾಗಿ ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆಯಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.



ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ವತಿಯಿಂದ ಫ್ರೀಡಂ ಪಾರ್ಕ್‌ನಲ್ಲಿ ಅಂಗನವಾಡಿ ಕಾರ್ಯಕರ್ತರು ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಮನವಿ ಸ್ವೀಕರಿಸಿ ಮಾತನಾಡಿದ ಸಚಿವರು, ಈಗಾಗಲೇ ಐದು ಸಾವಿರ ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿ ■ 6ನೇ ಪುಟಕ್ಕೆ

ವಾಣಿಜ್ಯ ಸಿಲಿಂಡರ್ ಬಳಕೆದಾರರಿಗೆ ಗೇಲ್ ನೋಂದಣಿ ಕಡ್ಡಾಯ

• ಆಹಾರ ಮತ್ತು ನಾಗರಿಕ ಸರಬರಾಜು ಸಚಿವರ ಸೂಚನೆ • ವಾರಕ್ಕೆ ಒಂದೇ ಸಿಲಿಂಡರ್‌ನಲ್ಲಿ ಸದ್ಯ ನಿರ್ವಹಣೆ ಮಾಡಿ; ಹೋಟೆಲ್‌ನವರಿಗೆ ಕಿವಿಮಾತು

ಪರ್ಯಾಯ ಇಂಧನ ಮೂಲ ಕಂಡುಕೊಳ್ಳಿ





ಬೆಂಗಳೂರು: ರಾಜ್ಯದಲ್ಲಿ ಉಂಟಾಗಿರುವ ತೀವ್ರ ಎಲ್‌ಪಿಜಿ ಕೊರತೆ ಹಿನ್ನೆಲೆಯಲ್ಲಿ ವಾಣಿಜ್ಯ ಬಳಕೆದಾರರು ತಮ್ಮ ಸಾಮಾನ್ಯ ಬಳಕೆಯ ಕೇವಲ ಶೇ.20ರಷ್ಟು ಗ್ಯಾಸ್‌ನಲ್ಲೇ ಪರಿಸ್ಥಿತಿ ನಿಭಾಯಿಸಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ, ಸೋಮವಾರ ಸೂಚನೆ ನೀಡಿದ್ದಾರೆ.

ವಿಧಾನ ಪರಿಷತ್ತಿನಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ಈಗ ಪ್ರತಿದಿನ ಸುಮಾರು 16,000 ವಾಣಿಜ್ಯ ಸಿಲಿಂಡರ್‌ಗಳನ್ನು ಮಾತ್ರ ಸರಬರಾಜು ಮಾಡಲಾಗುತ್ತಿದೆ. ಹಿಂದೆ ದಿನಕ್ಕೆ ಸುಮಾರು 45,000 ಸಿಲಿಂಡರ್ ಬಳಕೆಯಾಗುತ್ತಿತ್ತು. ಆದ್ದರಿಂದ ಲಭ್ಯವಿರುವ ಸೀಮಿತ ಸಂಪನ್ಮೂಲಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುತ್ತಿದೆ ಎಂದು ಹೇಳಿದರು.

ಈ ಹೊಸ ವ್ಯವಸ್ಥೆಯಡಿಯಲ್ಲಿ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಕ್ಯಾಂಟೀನ್‌ಗಳು, ವಿಮಾನ ನಿಲ್ದಾಣಗಳು, ರೈಲು ನಿಲ್ದಾಣಗಳು ಹಾಗೂ ಬಸ್ ನಿಲ್ದಾಣಗಳಿಗೆ ಮೊದಲ ಆದ್ಯತೆ ನೀಡಲಾಗಿದೆ. ಶಿಕ್ಷಣ ಕ್ಷೇತ್ರಕ್ಕೆ 4,200 ಸಿಲಿಂಡರ್, ಸರ್ಕಾರಿ ವ್ಯವಸ್ಥೆಗೆ 1,200 ಸಿಲಿಂಡರ್ ನೀಡಲಾಗುತ್ತಿದೆ. ಹೋಟೆಲ್‌ಗಳಿಗೆ ಸುಮಾರು 10,000 ಸಿಲಿಂಡರ್ ಹಂಚಿಕೆ ಮಾಡಲಾಗುತ್ತಿದೆ. ಪ್ರತಿ ಹೋಟೆಲ್‌ಗೆ ಪೂರೈಕೆ ಮಾಡಲಾಗುತ್ತದೆ.

ಇದು ಅವರ ಸಾಮಾನ್ಯ ಬಳಕೆಯ ಕೇವಲ ಶೇ.20 ರಷ್ಟು ಮಾತ್ರವೇ ಆಗಿದೆ. ಹಿಂದೆ ವಾರಕ್ಕೆ ಐದು ಸಿಲಿಂಡರ್ ಬಳಸುತ್ತಿದ್ದ ಹೋಟೆಲ್‌ಗಳು ಈಗ ಒಂದು ಸಿಲಿಂಡರ್‌ನಲ್ಲೇ ಪರಿಸ್ಥಿತಿ ■ 6ನೇ ಪುಟಕ್ಕೆ

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಬಾರದು

■ ಮೈಸೂರು ತಾಲೂಕು ಗ್ರಾಪಂ ಅಧಿಕಾರಿಗಳಿಗೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ತಾಕೀತು ■ ಕನಿಷ್ಠ ವಾರಕ್ಕೊಮ್ಮೆ ಗ್ರಾಮಗಳಿಗೆ ಹೋಗಿ ಪರಿಸ್ಥಿತಿ ಅವಲೋಕಿಸಿ; ಶಾಲೆಗಳ ಆಸ್ತಿ ಉಳಿಸಿ

ಮೈಸೂರು, ಮಾ.23– ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು, ಸಾರ್ವಜನಿಕರಿಂದ ದೂರುಗಳು ಬರದಂತೆ ನಿಗಾ ವಹಿಸಬೇಕು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ನಗರದ ಜಿಲ್ಲಾ ಪಂಚಾಯ್ತಿ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಸೋಮವಾರ ಮೈಸೂರು ತಾಲೂಕು ವ್ಯಾಪ್ತಿಯ ಗ್ರಾಮ ಪಂಚಾಯ್ತಿಗಳ ಆಡಳಿತಾಧಿಕಾರಿಗಳು ಮತ್ತು ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ (ಪಿಡಿಓ)ಗಳ ಸಭೆ ನಡೆಸಿದ ಅವರು, ಗ್ರಾಪಂಗಳಲ್ಲಿ ಜನಪ್ರತಿನಿಧಿಗಳಿಲ್ಲದ ಕಾರಣ ಆಡಳಿತಾಧಿಕಾರಿಗಳು ಹಾಗೂ ಪಿಡಿಓಗಳು ಎಲ್ಲಾ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬೇಕು ಎಂದು ಸೂಚನೆ ನೀಡಿದರು.



ಮೈಸೂರಿನ ಜಿಪಂ ಸಭಾಂಗಣದಲ್ಲಿ ಸೋಮವಾರ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಅಧ್ಯಕ್ಷತೆಯಲ್ಲಿ ಗ್ರಾಪಂಗಳ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಯಿತು. ಜಿಪಂ ಸಿಇಓ ಎಸ್.ಯುಕೇಶ್‌ಕುಮಾರ್, ತಾಪಂ ಇಓ ಕೃಷ್ಣ ಮತ್ತಿತರರು ಹಾಜರಿದ್ದರು.

ವಾರಕ್ಕೊಮ್ಮೆ ಗ್ರಾಮಕ್ಕೆ ಹೋಗಿ: ಗ್ರಾಪಂಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿ ಒಂದು ತಿಂಗಳು ಕಳೆದಿದೆ. ಎಲ್ಲರೂ ತಮ್ಮ ಕಾರ್ಯವ್ಯಾಪ್ತಿಯಲ್ಲಿ ಯಾವ ಸಮಸ್ಯೆಯೂ ಬಾರದಂತೆ ನೋಡಿಕೊಳ್ಳಬೇಕು. ನಿತ್ಯ ಸಾಧ್ಯವಾಗದಿದ್ದರೂ ವಾರಕ್ಕೊಮ್ಮೆಯಾದರೂ ಪಂಚಾಯ್ತಿಗಳಿಗೆ ಭೇಟಿ ನೀಡಿ, ಪಿಡಿಓಗಳೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು. ಅದಕ್ಕಾಗಿ ಈಗಿನಿಂದಲೇ ಪರಿಹಾರೋಪಾಯಗಳ ಬಗ್ಗೆ ಯೋಜನೆ ಸಿದ್ಧಪಡಿಸಿಕೊಳ್ಳಬೇಕು. ಸಮಸ್ಯೆ ಆಗಬಹುದಾದ ಗ್ರಾಮಗಳನ್ನು ಗುರುತಿಸಿ ನೀರು ಪೂರೈಕೆಗೆ ಪರ್ಯಾಯ ವ್ಯವಸ್ಥೆ ಮಾಡಬೇಕು. ಪಂಚಾಯ್ತಿ ವ್ಯಾಪ್ತಿಯ ಶಾಲೆಗಳು, ಅಂಗನವಾಡಿ ಕೇಂದ್ರಗಳು, ಸ್ಮಶಾನಗಳನ್ನು ಪರಿಶೀಲಿಸಿ, ಸಮರ್ಪಕ ಮೂಲಸೌಕರ್ಯ ಕಲ್ಪಿಸಬೇಕು. ಕುಡಿಯುವ ನೀರು ಒದಗಿಸುವುದು ಆದ್ಯತೆಯಾಗಿರಬೇಕು. ನೀರು ಸರಬರಾಜು ಪೈಪ್‌ಲೈನ್ ಸಂಪರ್ಕ ವಿರದ ಬೀದಿಗಳಿಗೆ ಕೂಡಲೇ ಸಂಪರ್ಕ ಕಲ್ಪಿಸಿಕೊಡಬೇಕು ಎಂದು ತಿಳಿಸಿದರು.

> ಗ್ರಾಪಂಗಳಲ್ಲಿ ಆಡಳಿತ ಮಂಡಳಿ ಇಲ್ಲದಿರುವ ಕಾರಣ ಅಧಿಕಾರಿಗಳ ಮೇಲೆ ದೊಡ್ಡ ಜವಾಬ್ದಾರಿ ಇದೆ. ಕುಡಿಯುವ ನೀರಿನ ಸಮಸ್ಯೆ ನಿವಾರಣೆಯನ್ನು ಆದ್ಯತೆಯಾಗಿ ಪರಿಗಣಿಸಬೇಕು. ಕಳೆದ 15ನೇ ಹಣಕಾಸು ಆಯೋಗದ ಉಳಿಕೆ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಕ್ರಿಯಾ ಯೋಜನೆ ಸಿದ್ಧಪಡಿಸಿ, ಸಲ್ಲಿಸಬೇಕು.
> -ಜಿ.ಟಿ.ದೇವೇಗೌಡ, ಶಾಸಕರು.

ಕ್ರಿಯಾಯೋಜನೆ ಮಾರ್ಪಾಡು ಮಾಡಿ: ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ಜೊತೆಗೆ ಕುಡಿಯುವ ನೀರಿಗೆ ಆದ್ಯತೆ ನೀಡಬೇಕು. 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಉಳಿದಿರುವ ಹಣ, ಬಡ್ಡಿ ಹಾಗೂ ತೆರಿಗೆ ಸಂಗ್ರಹದ ಮೊತ್ತ ಸೇರಿಸಿ ಸಮರ್ಪಕ ಕ್ರಿಯಾ ಯೋಜನೆ ತಯಾರಿಸಬೇಕು. ಒಂದು ವೇಳೆ 2024–25ರ ಸಾಲಿನಲ್ಲಿ ರೂಪಿಸಿರುವ ಕ್ರಿಯಾಯೋಜನೆಯನ್ನು ಉಳಿಕೆ ಅನುದಾನಕ್ಕೆ ಅನುಸಾರವಾಗಿ ಮಾರ್ಪಾಡು ಮಾಡಿಕೊಳ್ಳಬೇಕು. ಅಂಗನವಾಡಿ, ಶಾಲೆ, ಸ್ಮಶಾನಗಳಲ್ಲಿನ ಸಮಸ್ಯೆ, ತರಗತಿ ಕೊಠಡಿಗಳ ದುರಸ್ತಿ ಕಾರ್ಯಗಳನ್ನೂ, ಸೇರ್ಪಡೆ ಮಾಡಿಕೊಳ್ಳಬೇಕು. ಅಗತ್ಯ ಸಣ್ಣಪುಟ್ಟ ಮಾರ್ಪಾಡಿನೊಂದಿಗೆ ಕ್ರಿಯಾಯೋಜನೆ ಸಲ್ಲಿಸಿದರೆ ಅನುಮೋದನೆ ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ಶಾಲೆಗಳಿಗೆ ಹದ್ದುಬಸ್ತು: ಸರ್ಕಾರಿ ಶಾಲೆಗಳ ಜಾಗವನ್ನು ಹದ್ದುಬಸ್ತಿನಲ್ಲಿಟ್ಟು ಸಂರಕ್ಷಣೆ ಮಾಡಲು ಆರ್‌ಟಿಸಿ ಮಾಡಿಸಿಕೊಳ್ಳಬೇಕು. ಗ್ರಾಮ ಠಾಣಾ ಜಾಗದಲ್ಲಿರುವ ಶಾಲೆಗಳನ್ನು ಹೊರತುಪಡಿಸಿ ಉಳಿದ ಶಾಲೆಗಳಿಗೆ ಸರ್ವೆ ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗುಂಡ : ಎಷ್ಟೋ ಜನ ಗ್ಯಾಸ್ ಇಲ್ಲ ಅಂತ ಅಡುಗೆ ಮಾಡೋಕೆ ಕಷ್ಟ ಪಡುತ್ತಿದ್ದಾರೆ.

ತಿಮ್ಮ : ಹೌದಾ... ನಿನಗೇನೂ ತೊಂದರೆ?

ಗುಂಡ : ನನಗೆ ಅಡುಗೆ ಮಾಡೋಳೆ ಸಿಗುತ್ತಿಲ್ಲ. ನಾನೆಷ್ಟು ಕಷ್ಟ ಪಡುತ್ತಿದ್ದೇನೆ. ಯಾರಿಗಾದರೂ ಗೊತ್ತ?

ಮೈಸೂರು ಮಿತ್ರ

ಮಂಗಳವಾರ, ಮಾರ್ಚ್ 24, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಕೋಪವೆಂಬುದು ಬೇರೆಯವರ ಮೇಲೆ ನಾವು ಎಸೆಯಲು ಹಿಡಿದ ಕೆಂಡದಂತೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಪ್ರಯತ್ನಕ್ಕೆ ಪರಮೇಶ್ವರನೂ ಸಹಾಯ ಮಾಡುವನು.

ನಿಮ್ಮ ಪತ್ರಗಳು

ಅಡುಗೆ ಅನಿಲದ ಸಮಸ್ಯೆ ಬಗೆಹರಿಸಲು ಹಳೇ ಪದ್ಧತಿಯನ್ನೇ ಮುಂದುವರೆಸಿ

ಮಾನ್ಯರೇ

ಇರಾನ್- ಇಸ್ರೇಲ್-ಅಮೆರಿಕ ಯುದ್ಧದ ಕಾರಣ ಭಾರತದಲ್ಲಿ ಅಡುಗೆ ಅನಿಲದ ಪೂರೈಕೆಯಲ್ಲಾದ ಕೊರತೆ ಎಲ್ಲರಿಗೂ ತೊಂದರೆಯುಂಟುಮಾಡಿದೆ.

ಕಾಳ ಸಂತೆಯಲ್ಲಿ ಅನಿಲದ ಮಾರಾಟ ತಡೆಯಲು ಪ್ರತಿ ಅನಿಲದ ಕಂಪನಿಗಳೂ ಹಿಂದಿನ ಫೋನ್ ನಂಬರನ್ನು ಬಿಟ್ಟು ಕೇಂದ್ರೀಕೃತ ಸಂಪರ್ಕದ ಮತ್ತೊಂದು ಫೋನ್ ನಂಬರನ್ನು ಕೊಟ್ಟಿದೆ. ಈಗ ಇರಾನ್ ತನ್ನ ಮಿತ್ರ ರಾಷ್ಟ್ರಗಳಿಗೆ ಹಾರ್ಮುಜ್ ಜಲಸಂಧಿಯ ಮೂಲಕ ಸಂಚರಿಸಲು ಅನುವು ಮಾಡಿಕೊಟ್ಟಿದೆ ಹಾಗೂ ತೈಲ ಅನಿಲಗಳನ್ನು ಹೊತ್ತ ಹಡಗುಗಳು ಭಾರತಕ್ಕೂ ಬರಲಾರಂಭಿಸಿರುವ ಹಿನ್ನೆಲೆಯಲ್ಲಿ ದೇಶದ ಅನಿಲ ಕಂಪನಿಗಳು ಅನಿಲಕ್ಕಾಗಿ ಕೋರಿಕೆಯನ್ನು ಸ್ವೀಕರಿಸುವ ಹಳೆಯ ವ್ಯವಸ್ಥೆಯನ್ನೇ ಜಾರಿಮಾಡಲಿ. ಇದರಿಂದ ಗ್ರಾಹಕರಿಗೆ ಅನುಕೂಲವಾಗುತ್ತದೆ.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಈ ಬಗ್ಗೆ ಪರಿಶೀಲಿಸಿ ಹಳೆಯ ಪದ್ಧತಿಯನ್ನೇ ಮುಂದುವರೆಸುವಂತೆ ತಾಕೀತು ಮಾಡಲಿ.

-ಕೊ.ಸು.ನರಸಿಂಹಮೂರ್ತಿ, ಹಿರಿಯ ನಾಗರಿಕ, ಚಾಮರಾಜಪುರಂ, ಮೈಸೂರು.

ಸೋನಿಯಾ ಗಾಂಧಿಗೆ ದೇವೇಗೌಡರ ಪತ್ರ: ಶ್ಲಾಘನೀಯ

ಮಾನ್ಯರೆ,

ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು ಇತ್ತೀಚೆಗೆ ಕಾಂಗ್ರೆಸ್ ಪಕ್ಷದ ಲೋಕಸಭಾ ಸದಸ್ಯರ ನಡವಳಿಕೆಯನ್ನು ಕುರಿತು ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರಿಗೆ ಪತ್ರವನ್ನು ಬರೆದಿರುವುದು ತುಂಬಾ ಶ್ಲಾಘನೀಯ. ವಿರೋಧ ಪಕ್ಷದ ನಾಯಕ ಹಾಗೂ ಸಂಸದರಾದ ರಾಹುಲ್ ಗಾಂಧಿ ಅವರು ತಮ್ಮ ಪಕ್ಷದ ಲೋಕಸಭಾ ಹಾಗೂ ರಾಜ್ಯಸಭಾ ಸಂಸದರ ಜೊತೆಗೂಡಿ ನೂತನ ಸಂಸತ್ ಭವನದ ಮೆಟ್ಟಿಲುಗಳ ಮೇಲೆ ಕುಳಿತು ಚಹಾ, ಕಾಫಿ, ಬಿಸ್ಕತ್ ಸವಿಯುತ್ತ ಸಂಸತ್ತಿನ ಒಳಗಡೆ ಹೋಗುವ ಬಿಜೆಪಿ ಸಂಸದರನ್ನು ಹಾಗೂ ಕೇಂದ್ರದ ಮಂತ್ರಿಗಳನ್ನು ಚುಡಾಯಿಸಿ, ಕೇಕೆ ಹಾಕುವುದು ಸಂಸದರ ನಡೆಗೆ ಕುಂದು ತರುವುದರ ಬಗ್ಗೆ ಪತ್ರದ ಮುಖೇನ ತಿಳಿಸಿರುವುದು ಸ್ವಾಗತಾರ್ಹ.

ಹಿರಿಯ ಸಂಸದರು ಹಾಗೂ ನಾಯಕರು (ಹಿರಿ ಅಕ್ಕನ ಚಾಲು ಮನೆಮಂದಿಗೆಲ್ಲ ಎಂಬ ಮಾತಿನಂತೆ) ತಪ್ಪು ಹಾದಿಯಲ್ಲಿ ನಡೆದರೆ ಯುವ ಸಂಸದರ ಪಾಡೇನು. ಸಂಸತ್ತಿನ ಘನತೆ ಹಾಗೂ ಗೌರವಕ್ಕೆ ಕುಂದು ಬರುವುದರಲ್ಲಿ ಅನುಮಾನವೇ ಇಲ್ಲ. ಇನ್ನು ಮುಂದಾದರೂ ವಿರೋಧ ಪಕ್ಷವು ಆಧಾರರಹಿತ ಆರೋಪ ಮಾಡದೆ ಜವಾಬ್ದಾರಿಯುತವಾಗಿ ವರ್ತಿಸಿ ಸಂಸತ್ತಿನ ಘನತೆಯನ್ನು ಹೆಚ್ಚಿಸುವಲ್ಲಿ ಕಾರ್ಯಮಗ್ನರಾಗುವುದು ಒಳಿತು.

-ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಬೇಸಿಗೆ ರಜೆ ಮಕ್ಕಳಿಗೆ ಆಗದಿರಲಿ ಸಜೆ

ಮಾನ್ಯರೆ,

ಬೇಸಿಗೆಯ ರಜೆ ಎಂದರೆ ಮಕ್ಕಳಿಗೆ ಬಹಳ ಸಂತೋಷದ ಕಾಲ. ಶಾಲೆಯ ಒತ್ತಡದಿಂದ ದೂರವಾಗಿ ಆಟ-ಪಾಠಗಳಲ್ಲಿ ತೊಡಗಿಸಿಕೊಳ್ಳುವ ಸಮಯ. ಆದರೆ ಇತ್ತೀಚಿನ ದಿನಗಳಲ್ಲಿ ಬೇಸಿಗೆಯ ರಜೆ ಮಕ್ಕಳಿಗೆ ಸಂಪೂರ್ಣ ಉಪಯುಕ್ತವಾಗುತ್ತಿದೆಯೇ ಎಂಬ ಪ್ರಶ್ನೆ ಉದ್ಭವಿಸುತ್ತದೆ. ಬೇಸಿಗೆಯ ರಜೆ ಮಕ್ಕಳಿಗೆ ಆಗದಿರಲಿ ಸಜೆ ಎಂಬ ಮಾತಿನ ಅರ್ಥ, ರಜೆ ಸಂಪೂರ್ಣ ವ್ಯರ್ಥವಾಗಬಾರದು ಎಂಬುದಾಗಿದೆ.

ಮೊದಲನೆಯದಾಗಿ, ದೀರ್ಘ ಕಾಲ ಶಾಲೆಯಿಂದ ದೂರವಿರುವುದರಿಂದ ಮಕ್ಕಳು ಓದಿನ ಮೇಲೆ ಆಸಕ್ತಿ ಕಳೆದುಕೊಳ್ಳುವ ಸಾಧ್ಯತೆ ಇದೆ. ಅವರು ಕಲಿತ ವಿಷಯಗಳನ್ನು ಮರೆತುಬಿಡುತ್ತಾರೆ. ಇದರಿಂದ ಶಾಲೆ ಮತ್ತೆ ಆರಂಭವಾದಾಗ ಅವರಿಗೆ ಪಾಠಗಳನ್ನು ಅರ್ಥಮಾಡಿಕೊಳ್ಳಲು ಕಷ್ಟವಾಗುತ್ತದೆ. ಆದ್ದರಿಂದ ರಜೆ ಸಮಯದಲ್ಲಿ ದಿನಕ್ಕೆ ಸ್ವಲ್ಪ ಸಮಯವಾದರೂ ಓದಿಗೆ ಮೀಸಲಿಡಬೇಕು.

ಇನ್ನೊಂದು ಪ್ರಮುಖ ವಿಷಯ ಎಂದರೆ, ಇಂದಿನ ಮಕ್ಕಳು ರಜೆಯ ಸಮಯವನ್ನು ಮೊಬೈಲ್ ಫೋನ್, ಟಿವಿ ಮತ್ತು ವೀಡಿಯೊ ಗೇಮ್‌ಗಳಲ್ಲಿ ಕಳೆಯುತ್ತಾರೆ. ಇದರಿಂದ ಅವರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಕಣ್ಣಿನ ಸಮಸ್ಯೆಗಳು, ದೇಹದ ದೌರ್ಬಲ್ಯ ಮತ್ತು ಮನಸ್ಸಿನ ಅಶಾಂತಿ ಉಂಟಾಗಬಹುದು. ಆದ್ದರಿಂದ ಪೋಷಕರು ಮಕ್ಕಳನ್ನು ಹೊರಗೆ ಆಟ ಆಡಲು, ಕ್ರೀಡೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸಬೇಕು. ಮೂರನೆಯದಾಗಿ, ಬೇಸಿಗೆಯ ರಜೆ ಮಕ್ಕಳಿಗೆ ಹೊಸ ವಿಷಯಗಳನ್ನು ಕಲಿಯಲು ಉತ್ತಮ ಅವಕಾಶವಾಗಿದೆ. ಚಿತ್ರಕಲೆ, ಸಂಗೀತ, ನೃತ್ಯ, ಯೋಗ, ತೋಟಗಾರಿಕೆ ಇತ್ಯಾದಿ ಕೌಶಲ್ಯಗಳನ್ನು ಈ ಸಮಯದಲ್ಲಿ ಬೆಳೆಸಬಹುದು. ಇದು ಅವರ ವ್ಯಕ್ತಿತ್ವ ವಿಕಾಸಕ್ಕೆ ಸಹಾಯ ಮಾಡುತ್ತದೆ.

ಕೊನೆಯಲ್ಲಿ, ಬೇಸಿಗೆಯ ರಜೆ ಸಂಪೂರ್ಣವಾಗಿ ವ್ಯರ್ಥವಾಗದಂತೆ ನೋಡಿಕೊಳ್ಳುವುದು ಪೋಷಕರ ಹಾಗೂ ಮಕ್ಕಳ ಜವಾಬ್ದಾರಿ. ರಜೆ ಸಮಯವನ್ನು ಸರಿಯಾಗಿ ಉಪಯೋಗಿಸಿಕೊಂಡರೆ ಅದು ಮಕ್ಕಳ ಭವಿಷ್ಯಕ್ಕೆ ಬಲವಾದ ಅಡಿಗಲ್ಲಾಗುತ್ತದೆ. ಆದ್ದರಿಂದ ರಜೆ ಅನರ್ಥವಾಗದಂತೆ, ಪ್ರಯೋಜನಕಾರಿಯಾಗಿ ಕಳೆಯಬೇಕು ಎಂಬುದನ್ನು ನಾವು ಮನಗಾಣಬೇಕು.

-ಎಂ.ಕಿರಣ್‌ಕುಮಾರ್, ಶಿಕ್ಷಕರು, ಸಂತ ಜೋಸೆಫರ ಪ್ರೌಢಶಾಲೆ, ಬನ್ನಿಮಂಟಪ.

ಕ್ರೀಡಾಂಗಣವೋ ಅಥವಾ ಸಾವಿನ ಕಣಿವೆಯೋ?

ಮಾನ್ಯರೆ,

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಭಿಮಾನಿಗಳ ನೂಕುನುಗ್ಗಲು ನಿಯಂತ್ರಿಸಲು ಕೆ.ಎಸ್.ಸಿ.ಎ.ಈಗ ಡಿಜಿಟಲ್ ಕ್ಯೂ ಮತ್ತು ಪ್ರವೇಶ ದ್ವಾರಗಳ ಹೆಚ್ಚಳದಂತಹ ತಾಂತ್ರಿಕ ನಾಟಕವಾಡುತ್ತಿದೆ. ಆದರೆ, ಶೇ. 40ರಷ್ಟು ಟಿಕೆಟ್‌ಗಳನ್ನು ಬ್ಲಾಕ್ ಮಾರ್ಕೆಟ್‌ಗೆ ಬಿಟ್ಟು ಉಳಿದ ಟಿಕೆಟ್‌ಗಳ ಬೆಲೆಯನ್ನು ಸಾಮಾನ್ಯ ಜನರ ಕೈಗೆಟುಕದಂತೆ ಮಾಡಿರುವುದು ಯಾವ ನ್ಯಾಯ? ಕಳೆದ ವರ್ಷದ ಅಂಕಿಅಂಶಗಳ ಪ್ರಕಾರ, ಭದ್ರತಾ ವೈಫಲ್ಯದಿಂದ ಗಾಯಗೊಂಡವರ ಸಂಖ್ಯೆ ಏರುತ್ತಿದ್ದರೂ ಆಡಳಿತ ಮಂಡಳಿ ಮಾತ್ರ ಲಾಭದ ಬೆನ್ನತ್ತಿದೆ. ಸರ್ಕಾರವು ಕೇವಲ ನೋಟಿಸ್ ನೀಡುವುದನ್ನು ಬಿಟ್ಟು, ಟಿಕೆಟ್ ದರಕ್ಕೆ ಕಟ್ಟುನಿಟ್ಟಿನ ಮಿತಿ ಹೇರಬೇಕು. ಜನದಟ್ಟಣೆ ನಿಯಂತ್ರಿಸಲು ವಿಫಲವಾದರೆ ಪಂದ್ಯವನ್ನೇ ರದ್ದುಗೊಳಿಸುವ ಧೈರ್ಯ ತೋರಬೇಕು. ಜನರ ಪ್ರಾಣಕ್ಕಿಂತ ಕ್ರಿಕೆಟ್ ಮಂಡಳಿಯ ಬೊಕ್ಕಸ ಮುಖ್ಯವಲ್ಲ. ವ್ಯವಸ್ಥೆಯ ಈ ಅಮಾನವೀಯ ಧೋರಣೆಯನ್ನು ತೀವ್ರವಾಗಿ ಖಂಡಿಸುತ್ತೇನೆ.

-ಡಾ.ಎಚ್.ಕೆ. ವಿಜಯಕುಮಾರ, ಮೈಸೂರು.



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಆಯ-ವ್ಯಯ ಹಿತ-ಮಿತವಾಗಿದ್ದರೆ ಚೆನ್ನ...!

ಮಾನವನ ಜೀವನದಲ್ಲಿ ಸುಖ-ಶಾಂತಿಯುತ ಬದುಕಿಗೆ ಆರ್ಥಿಕ ಶಿಸ್ತು ಬಹಳ ಮುಖ್ಯ. ಹಣವು ಜೀವನ ನಡೆಸಲು ಅಗತ್ಯವಾದ ಸಾಧನ. ಅದನ್ನು ಸರಿಯಾಗಿ ಬಳಸಿದರೆ ಜೀವನ ಸುಖಕರವಾಗುತ್ತದೆ; ತಪ್ಪಾಗಿ ಬಳಸಿದರೆ ಕಷ್ಟಗಳು ಎದುರಾಗುತ್ತವೆ. ಆದಾಯ ಕಡಿಮೆ ಇದ್ದರೂ ಮಿತವಾಗಿ ಖರ್ಚು ಮಾಡುವವನು ಸುಖವಾಗಿ ಬದುಕಬಹುದು. ಆದರೆ ಆದಾಯಕ್ಕಿಂತ ಹೆಚ್ಚು ಖರ್ಚು ಮಾಡುವವನಿಗೆ ಸದಾ ಆರ್ಥಿಕ ಸಮಸ್ಯೆಗಳು ಎದುರಾಗುತ್ತವೆ. ಹಳೆಯವರು ಕಾಸು ಕಾಸಾಗಿ ಜಮೆ ಮಾಡಿದರೆ ಕೊಟ್ಟಿಗೆಯೂ ತುಂಬುತ್ತದೆ ಎಂದು ಹೇಳಿದ್ದಾರೆ. ಅಂದರೆ ಸ್ವಲ್ಪ ಸ್ವಲ್ಪವಾಗಿ ಉಳಿಸಿದರೂ ಅದು ಮುಂದೆ ದೊಡ್ಡ ಸಹಾಯವಾಗುತ್ತದೆ. ಆದಾಯ ಮತ್ತು ಖರ್ಚಿನ ನಡುವೆ ಸಮತೋಲನ ಇರಬೇಕು. ಅನಾವಶ್ಯಕ ಆಸೆಗಳಿಗೆ ಹಣ ಖರ್ಚು ಮಾಡಿದರೆ ಸಾಲದ ಭಾರ ಮತ್ತು ಮನೆಯಲ್ಲಿ ಅಶಾಂತಿ ಉಂಟಾಗಬಹುದು.

ನಾವು ಆದಾಯಕ್ಕೆ ತಕ್ಕಂತೆ ಖರ್ಚು ಮಾಡುವುದು, ಮಿತ ವ್ಯಯ ಮತ್ತು ಉಳಿತಾಯ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಹೀಗೆ ಮಾಡಿದರೆ ಜೀವನ ಸುಖಕರ ಮತ್ತು ಶಾಂತಿಯುತವಾಗುತ್ತದೆ. ಜೀವನ ಕ್ಷಣಿಕವಾದುದು. ಹೇಗಾದರೂ ಸರಿ ಸಾಲವಾದರೂ ಪರವಾಗಿಲ್ಲ ಇಷ್ಟ ಬಂದಿದ್ದನ್ನು ಮಾಡಬೇಕು, ಸಂತೋಷವಾಗಿರಬೇಕು, ಎಷ್ಟು ದಿನ ಇರ್ತಿವೋ? ಯಾರಿಗೆ ಗೊತ್ತು! ಇರುವುದರೊಳಗೆ ಏನಾದರೂ ಸರಿ ಆರಾಮಾಗಿರಬೇಕೆಂಬ ಹದಿಹರೆಯದ ಯುವಕನ ಮಾತುಗಳನ್ನು ಕೇಳಿ ಚಕಿತನಾದರೂ ಪ್ರತಿಯೊಬ್ಬ ಮಧ್ಯಮವರ್ಗದ ವ್ಯಕ್ತಿಗಳಲ್ಲೂ ಈ ತರಹದ ಆಲೋಚನೆಗಳಿರುವುದು ಸಹಜವೆಂದು ಸುಮ್ಮನಾದೆ.

'ಸಾಲ ಮಾಡಿಯಾದರೂ ತುಪ್ಪ ತಿನ್ನು' ಎಂಬ ಗಾದೆ ಮಾತನ್ನು ಸರಿಯಾಗಿ ಅರ್ಥಮಾಡಿಕೊಳ್ಳದ (ಸಾಲ ಮಾಡಿಯಾದರೂ ತುಪ್ಪ ತಿನ್ನು ಎಂಬ ಗಾದೆ ಮಾತಿನ ಅರ್ಥ ತತ್ ಕ್ಷಣದ ಸಂತೋಷವನ್ನು ಪರಿಗಣಿಸಿ ಭವಿಷ್ಯದ ದಿನವನ್ನು ಕಡೆಗಣಿಸುವುದು. ಮುಂದಿನ ಬದುಕಿನ ಬಗ್ಗೆ ವಿವೇಕವಿಲ್ಲದೆ ಸಾಲ ಮಾಡಿ ಖರ್ಚು ಮಾಡುವವರ ಬಗ್ಗೆ ವ್ಯಂಗ್ಯವನ್ನು ಮಾಡುವಂತಹ ಗಾದೆ ಇದಾಗಿದ್ದು ಅತಿಯಾದ ಭೋಗದಾಹವು ಆರ್ಥಿಕ ಸಂಕಷ್ಟಕ್ಕೆ ದಾರಿ ಮಾಡಿಕೊಡುತ್ತದೆ ಎಂಬ ಎಚ್ಚರಿಕೆಯನ್ನು ಈ ಗಾದೆ ಒಳಗೊಂಡಿದೆ) ಜನತೆ ತಮ್ಮ ಆದಾಯಕ್ಕಿಂತ ಹೆಚ್ಚು ಖರ್ಚುಗಳನ್ನು ಮಾಡುತ್ತಾ ಮುಂದೆ ಇದಕ್ಕಾಗಿ ಪರಿತಪಿಸುವುದನ್ನು ನೋಡಿದರೆ ನಗುವುದೋ, ಅಳುವುದೋ ತಿಳಿಯದಾದೆ.

ಅಗತ್ಯ ಮತ್ತು ಅನಿವಾರ್ಯತೆಯ ಅರಿವಿರಲಿ

ಯಾವುದೇ ಖರ್ಚನ್ನು ಮಾಡುವ ಮೊದಲು ಅಗತ್ಯ ಮತ್ತು ಅನಿವಾರ್ಯತೆಯ ಸೂಕ್ಷ್ಮತೆ ನಮ್ಮಲ್ಲಿ ಇರಬೇಕು. ಅಗತ್ಯ ಎಂದರೆ ಬೇಕು ಅಥವಾ ಬೇಡ ಎಂಬ ಆಯ್ಕೆ ಇರುತ್ತದೆ. ಅನಿವಾರ್ಯತೆಯಲ್ಲಿ ಆಯ್ಕೆಗಳಿಲ್ಲ ಅದು ಬೇಕೇ ಬೇಕಾಗಿರುತ್ತದೆ.

ಪ್ರಸ್ತುತ ದಿನಗಳಲ್ಲಿ ಮೊಬೈಲ್ ಸಂವಹನದ ಹಾಗೂ ಇತರ ಕಾರಣಗಳಿಂದ ಅತಿ ಅಗತ್ಯವಾದ ವಸ್ತುವಾಗಿದೆ. ಆದರೆ ಮೊಬೈಲ್ ಅನ್ನು ಯಾವೆಲ್ಲ ಕಾರಣಕ್ಕಾಗಿ ಬಳಸುತ್ತೇವೆ ಎಂಬ ಅಂಶಗಳನ್ನು ಮನದಟ್ಟು ಮಾಡಿ ಖರೀದಿಸಬಹುದು. ಕನಿಷ್ಠ ಬೆಲೆ ಇಂದ ಗರಿಷ್ಟ ಬೆಲೆಯನ್ನು ಮೊಬೈಲ್ ಒಳಗೊಂಡಿರುತ್ತದೆ. ಇರುವ ಆದಾಯಕ್ಕಿಂತ ಹೆಚ್ಚು ಮೌಲ್ಯದ ಮೊಬೈಲ್ ಖರೀದಿಸುವುದು ಹಾಸ್ಯಾಸ್ಪದ. ಇದು ಮೊಬೈಲ್ ಮಾತ್ರವಲ್ಲ, ಎಲ್ಲ ವಸ್ತುಗಳಿಗೂ ಅನ್ವಯವಾಗುತ್ತದೆ.

ಮತ್ತೊಬ್ಬರನ್ನು ಮೆಚ್ಚಿಸಲೆಂದೋ ಅಥವಾ ತೋರ್ಪಡಿಕೆ ಮಾಡಲೆಂದೋ ಆದಾಯವನ್ನು ಮೀರಿ ಖರ್ಚು ಮಾಡಿದ್ದಲ್ಲಿ ಮುಂದೆ ಅದರಿಂದ ಪರಿತಪಿಸಬೇಕಾದವರು ನಾವೇ. ಬದಲಾಗುತ್ತಿರುವ ಸನ್ನಿವೇಶದಲ್ಲಿ ವಾಹನಗಳು ಬೇಕು, ನಿಜ. ಆದರೆ ಅದಕ್ಕೆಂದು ನಮ್ಮ ಆದಾಯವನ್ನು ಪರಿಗಣಿಸದೇ ಮತ್ಯಾರೋ ಕೋಟಿ ಬೆಲೆಯ ಕಾರು ಖರೀದಿಸದರೆಂದು, ಲಕ್ಷ ಬೆಲೆಯ ಕಾರು ತೆಗೆದುಕೊಂಡರೆಂದು ನಾವು ತೆಗೆದುಕೊಳ್ಳಲು ಹೊರಟರೆ ಕಷ್ಟವಾಗುತ್ತದೆ. ಖಂಡಿತವಾಗಿಯೂ ಇಂದು ಸರದಿಯಲ್ಲಿ ನಿಂತು ಸಾಲ ನೀಡುವವರು ಇದ್ದಾರೆ. ಆದರೆ ಸುಲಭವಾಗಿ ದೊರೆಯಿತೆಂದು ಯೋಚಿಸದೆ ಸಾಲ ಮಾಡಿದರೆ ಮುಂದೆ ಇದಕ್ಕಾಗಿ ಪರಿತಪಿಸಬೇಕಾದವರು ನಾವೇ ಆಗಿರುತ್ತೇವೆ. ನಮ್ಮ ಅಗತ್ಯಕ್ಕೆ ತಕ್ಕಂತೆ ಅನಿವಾರ್ಯತೆಯನ್ನು ಅರಿತು ಆದಾಯಕ್ಕೆ ತಕ್ಕ ವಸ್ತುಗಳನ್ನು ಖರೀದಿಸುವುದು ಬುದ್ಧಿವಂತಿಕೆಯ ಲಕ್ಷಣ.

ಉಳಿತಾಯ ಮಾಡುವುದನ್ನು ಕಲಿಯಬೇಕು



> “ಆದಾಯಕ್ಕೆ ತಕ್ಕಂತೆ ಖರ್ಚು ಮಾಡಿದರೆ ಕುಟುಂಬದಲ್ಲಿ ನೆಮ್ಮದಿ ಇರುತ್ತದೆ ಮತ್ತು ಸಾಲದ ಸಮಸ್ಯೆಗಳು ಕಡಿಮೆಯಾಗುತ್ತವೆ. ಅತಿಯಾದ ಖರ್ಚು ಮಾಡಿದರೆ ಜೀವನದಲ್ಲಿ ಕಷ್ಟಗಳು ಬರುತ್ತವೆ. ಆದರೆ ಮಿತವಾಗಿ ಖರ್ಚು ಮಾಡಿದರೆ ಜೀವನ ಸುಗಮವಾಗುತ್ತದೆ. ಆದ್ದರಿಂದ ಅಗತ್ಯ ಮತ್ತು ಅನಗತ್ಯ ಖರ್ಚಿನ ನಡುವಿನ ವ್ಯತ್ಯಾಸ ತಿಳಿದು ಹಣ ಬಳಸಬೇಕು. ಹೀಗಾಗಿ ಆದಾಯಕ್ಕಿಂತ ಖರ್ಚು ಹೆಚ್ಚಾಗದಿರಲಿ ಎಂಬ ತತ್ವವನ್ನು ಪಾಲಿಸಿದರೆ ಜೀವನದಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿ ಪಡೆಯಲು ಸಾಧ್ಯವಾಗುತ್ತದೆ. ಭವಿಷ್ಯದಲ್ಲಿ ಎದುರಾಗುವ ಪರಿಸ್ಥಿತಿಗಳಿಗೆ ಸಾಧ್ಯವಾದಷ್ಟು ಪೂರಕವಾದ ವಾತಾವರಣ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಬದುಕುವುದನ್ನು ಕಲಿತುಕೊಂಡರೆ ಒಳಿತು.

ಖರ್ಚು ಮಾಡುವಷ್ಟೇ ಸರಾಗವಾಗಿ ಉಳಿತಾಯ ಮಾಡುವುದನ್ನು ಕಲಿಯಬೇಕು. ಅನಗತ್ಯ ಖರ್ಚುಗಳನ್ನು ಮಾಡುವ ನಮಗೆ ಉಳಿತಾಯ ಮಾಡುವ ಗುಣವು ಕರಗತವಾಗಬೇಕು. ಯಾವುದಕ್ಕೆ ಎಷ್ಟು ಖರ್ಚು ಮಾಡಬೇಕೆಂಬ ತಿಳುವಳಿಕೆಯೊಂದಿಗೆ ಆದಾಯವನ್ನು ಅರಿತುಕೊಂಡು ಉಳಿತಾಯ ಮಾಡುವ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಆದಾಯಕ್ಕಿಂತ ಖರ್ಚು ಹೆಚ್ಚಾದರೆ ಸಾಲದ ಸುಳಿಗೆ ಸಿಲುಕಿಕೊಳ್ಳಬೇಕಾಗುತ್ತದೆ.

'ಹನಿ ಹನಿ ಗೂಡಿದರೆ ಹಳ್ಳ, ತೆನೆ ತೆನೆ ಗೂಡಿದರೆ ಬಳ್ಳ' ಎಂಬ ಗಾದೆ ಮಾತಿನಂತೆ ಇಂದು ಮಾಡುವ ಸಣ್ಣ ಉಳಿತಾಯವು ಮುಂದೆ ಕಷ್ಟ ಕಾಲ ಎದುರಾದಾಗ ಸಹಾಯವಾಗುತ್ತದೆ. ಉದಾಹರಣೆಗೆ ನಿಮ್ಮ ಆದಾಯದಲ್ಲಿ ಕನಿಷ್ಠ ತಿಂಗಳಿಗೆ ಸಾವಿರ ರೂಪಾಯಿಯನ್ನು ಪ್ರತಿ ತಿಂಗಳು ಉಳಿತಾಯ ಮಾಡುವೆನೆಂದು ನಿರ್ಧರಿಸಿ. ಕಷ್ಟವಾದರೂ ಸರಿ ಆ ಹಣವನ್ನು ಉಳಿತಾಯ ಮಾಡುತ್ತಾ ಬನ್ನಿ, ಹತ್ತು ವರ್ಷಗಳಲ್ಲಿ ಆ ಹಣದ ಮೊತ್ತ ದೊಡ್ಡಾಗಿರುತ್ತದೆ.

ಇದು ಆ ಕಾಲಕ್ಕೆ ಅತಿ ದೊಡ್ಡ ಮೊತ್ತ ಎಂದು ಅನಿಸದಿರಬಹುದು. ಆದರೆ ಏನು ಇಲ್ಲದಿರುವುದಕ್ಕಿಂತ ಸ್ವಲ್ಪ ಹಣವಾದರೂ ಉಳಿದಿರುತ್ತದೆಯಲ್ಲವೇ! ಖಾಲಿ ಕೈಗಿಂತ ಸ್ವಲ್ಪ ಹಣವುಳ್ಳ ಕೈ ಶ್ರೇಷ್ಠ ಅಲ್ಲವೇ? ಇದು ಹೇಳಿದಷ್ಟು ಸುಲಭವಲ್ಲ ಎಂಬ ಅರಿವು ನನಗಿದೆ. ಏಕೆಂದರೆ ಬಹುತೇಕ ಮಧ್ಯಮವರ್ಗದವರೆ ಹೆಚ್ಚಾಗಿರುವ ನಮ್ಮ ದೇಶದಲ್ಲಿ ದಿಢೀರನೆ ಹೆಚ್ಚಾಗುವ ವಸ್ತುವಿನ ಬೆಲೆಗಳು, ತಿಂಗಳ ಆದಾಯದಲ್ಲಿ ಒಂದು ರೂಪಾಯಿಯನ್ನು ಉಳಿಸಲು ಸಾಧ್ಯವಾಗದ ಪರಿಸ್ಥಿತಿ, ಎದುರಾಗುವ ಆರೋಗ್ಯದ ಸಮಸ್ಯೆಗಳು ಇವೆಲ್ಲವುಗಳ ನಡುವೆ ಉಳಿತಾಯ ಮಾಡುವುದೆಂದರೆ ಅದು ಸಾಹಸವೇ ಸರಿ. ಆದರೂ ನಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಉಳಿತಾಯ ಮಾಡುವ ಗುಣವನ್ನು ಬೆಳೆಸಿಕೊಳ್ಳಲೇಬೇಕು. ಇಲ್ಲದಿದ್ದರೆ ಮುಂದೆ ಆಕಸ್ಮಿಕವಾಗಿ ಬರುವ ಆದಾಯ ನಿಂತು ಹೋದರೆ ಮತ್ತೊಬ್ಬರ ಮುಂದೆ ಕೈ ಚಾಚಿ ನಿಲ್ಲಬೇಕಾದ ಪರಿಸ್ಥಿತಿ ಎದುರಾಗುತ್ತದೆ.

ಜೀವನದುದ್ದಕ್ಕೂ ಸಮಸ್ಯೆ ಇರುತ್ತದೆ, ಇರುವುದರೊಳಗೆ ಹೇಗಾದರೂ ಸರಿ ತಿಂದು ತೇಗಿ ಖರ್ಚು ಮಾಡಬೇಕೆಂಬ ಮನೋಭಾವ ಕ್ಷಣಿಕವಾಗಿ ತೃಪ್ತಿ ನೀಡಬಹುದು. ಆದರೆ ಮುಂದೆ ಅದರಿಂದ ನಾವೇ ದುಃಖಕ್ಕೆ ಒಳಗಾಗಬೇಕಾಗುತ್ತದೆ. ಈ ಪರಿಸ್ಥಿತಿ ಉಂಟಾಗಬಾರದೆಂದಾರೆ ಉಳಿತಾಯ ಮಾಡುವ ಗುಣವನ್ನು ಬೆಳೆಸಿಕೊಳ್ಳಲೇಬೇಕು. ಕೇವಲ ಆರಂಭಶೂರರಾಗಿರದೇ ಉಳಿತಾಯವನ್ನು ನಿರಂತರವಾಗಿ ಮಾಡುತ್ತಾ ಬಂದ್ದಲ್ಲಿ ಅದು ನಮಗೆ ಸಹಾಯವಾಗುತ್ತದೆ.

ಲೆಕ್ಕಾಚಾರ ಅತಿ ಅಗತ್ಯ

'ತಿಪ್ಪೆಗೆ ಎಸೆದರೂ ಲೆಕ್ಕವಿರಬೇಕೆಂಬ' ಹಿರಿಯರ ಮಾತು ಸತ್ಯವಾದುದು. ನಮ್ಮಲ್ಲಿ ಯಾವುದಕ್ಕೆ ಎಷ್ಟು ಖರ್ಚು ಮಾಡಬೇಕೆಂಬ ಲೆಕ್ಕಾಚಾರವೇ ಇರುವುದಿಲ್ಲ. ಬರುವ ಆದಾಯಕ್ಕಿಂತ ಮಾಡುವ ಖರ್ಚು ಹೆಚ್ಚಾಗಿದ್ದರೆ ಸಾಲದ ಹೊರೆಯನ್ನು ಹೊತ್ತು ಸಾಗಬೇಕಾದವರು ನಾವೇ ಆಗಿರುತ್ತೇವೆ ಹೊರತು ಮತ್ತೊಬ್ಬರಲ್ಲ.

ಬದುಕಿನಲ್ಲಿ ಲೆಕ್ಕಾಚಾರ ಅಗತ್ಯ. ಒಂದೊಂದು ರೂಪಾಯಿಗೂ ಇರುವ ಮೌಲ್ಯ ಅಮೂಲ್ಯ. ಲೆಕ್ಕಾಚಾರವನ್ನು ಮಾಡಿ ಬದುಕು ಸಾಗಿಸಬೇಕು. ಪಕ್ಕದ ಮನೆಯವರು ಅಂತಾರಾಷ್ಟ್ರೀಯ ಶಾಲೆಗೆ ತಮ್ಮ ಮಗುವನ್ನು ಸೇರಿಸಿದರೆಂದು ನಾನು ನನ್ನ ಮಗುವನ್ನು ಆ ಶಾಲೆಗೆ ಸೇರಿಸಲು ಹೊರಟರೆ ಅದು ದಡ್ಡತನವಾಗುತ್ತದೆ. ಪಕ್ಕದ ಮನೆಯವರ ಆದಾಯ, ವರಮಾನವೇನು? ನನ್ನ ಆದಾಯ, ವರಮಾನವೇನು? ಎಂಬ ಸೂಕ್ಷ್ಮತೆ ನನಗಿರಬೇಕಾಗುತ್ತದೆ. ಯಾರೋ ಲಕ್ಷ ಬೆಲೆಬಾಳುವ ದ್ವಿಚಕ್ರ ವಾಹನ ಖರೀದಿಸಿದರೆಂದು ನಾನು ಖರೀದಿಸಿದರೆ ಬಿಳಿಯಾನೆಯನ್ನು ಸಾಕಿದಂತಹ ಸ್ಥಿತಿ ನಿರ್ಮಾಣವಾಗುತ್ತದೆ. ಕಾಸಿಗೆ ತಕ್ಕಂತೆ ಕಜ್ಜಾಯ ಎಂಬ ಮಾತಿನಂತೆ ಆದಾಯಕ್ಕೆ ತಕ್ಕಂತೆ ಖರ್ಚನ್ನು ಮಾಡುವ ಲೆಕ್ಕಾಚಾರ ಬೆಳೆಸಿಕೊಳ್ಳುವುದು ಅಗತ್ಯ.

ಭವಿಷ್ಯದ ಬಗ್ಗೆ ಗಮನವಿರಲಿ

ಮತ್ತೊಬ್ಬರ ಮೇಲಿನ ಜಿದ್ದಿನಿಂದಾಗಲೀ, ಹೊಟ್ಟೆಕಿಚ್ಚಿನಿಂದಾಗಲೀ, ಪೈಪೋಟಿಯಿಂದಾಗಲೀ ಖರ್ಚನ್ನು ಮಾಡಹೊರಟರೆ ಎಡವಿ ಬೀಳಬೇಕಾಗುತ್ತದೆ. ವರ್ತಮಾನದ ಸಂತೋಷಗಳಿಗಾಗಿ ಭವಿಷ್ಯವನ್ನು ಕಡೆಗಣಿಸಿದರೆ ದುಃಖಿಸಬೇಕಾಗುತ್ತದೆ. ಭವಿಷ್ಯದ ಬಗ್ಗೆ ಕಾಳಜಿಯನ್ನಿಟ್ಟುಕೊಂಡು ನಮ್ಮ ಜೀವನ ಸಾಗಿಸಬೇಕು. ವರ್ತಮಾನದಿ ಇರುವ ಆರೋಗ್ಯ ಭವಿಷ್ಯತ್ತಿನಲ್ಲಿ ಇಲ್ಲದಿರಬಹುದು, ಅನಿವಾರ್ಯ ಖರ್ಚುಗಳು, ನಿರೀಕ್ಷೆ ಮಾಡಲಾಗದ ಪರಿಸ್ಥಿತಿಗಳು ಎದುರಾಗಬಹುದು. ಆದ್ದರಿಂದ ಕ್ಷಣಿಕ ಸುಖಗಳಿಗೆ ಮನಸೋತು ಭವಿಷ್ಯವನ್ನು ಕಡೆಗಣಿಸುವ ಮನೋಭಾವನೆ ನಮದಾಗಬಾರದು.

ಮಾನವನ ಜೀವನದಲ್ಲಿ ಸುಖ-ಶಾಂತಿ ಇರಬೇಕಾದರೆ ಆದಾಯಕ್ಕಿಂತ ಖರ್ಚು ಹೆಚ್ಚಾಗದಂತೆ ನೋಡಿಕೊಳ್ಳುವುದು ಬಹಳ ಮುಖ್ಯ. ಹಣವನ್ನು ಸಂಪಾದಿಸುವುದಷ್ಟೇ ಅಲ್ಲ. ಅದನ್ನು ಸರಿಯಾಗಿ ಬಳಸುವುದು ಅಗತ್ಯ. ಆದಾಯಕ್ಕೆ ತಕ್ಕಂತೆ ಖರ್ಚು ಮಾಡಿದರೆ ಕುಟುಂಬದಲ್ಲಿ ನೆಮ್ಮದಿ ಇರುತ್ತದೆ ಮತ್ತು ಸಾಲದ ಸಮಸ್ಯೆಗಳು ಕಡಿಮೆಯಾಗುತ್ತವೆ. ಅತಿಯಾದ ಖರ್ಚು ಮಾಡಿದರೆ ಜೀವನದಲ್ಲಿ ಕಷ್ಟಗಳು ಬರುತ್ತವೆ. ಆದರೆ ಮಿತವಾಗಿ ಖರ್ಚು ಮಾಡಿದರೆ ಜೀವನ ಸುಗಮವಾಗುತ್ತದೆ. ಆದ್ದರಿಂದ ಅಗತ್ಯ ಮತ್ತು ಅನಗತ್ಯ ಖರ್ಚಿನ ನಡುವಿನ ವ್ಯತ್ಯಾಸವನ್ನು ತಿಳಿದು ಹಣ ಬಳಸಬೇಕು.

ಹೀಗಾಗಿ ಆದಾಯಕ್ಕಿಂತ ಖರ್ಚು ಹೆಚ್ಚಾಗದಿರಲಿ ಎಂಬ ತತ್ವವನ್ನು ಪಾಲಿಸಿದರೆ ಜೀವನದಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಭವಿಷ್ಯದಲ್ಲಿ ಎದುರಾಗುವ ಪರಿಸ್ಥಿತಿಗಳಿಗೆ ಸಾಧ್ಯವಾದಷ್ಟು ಪೂರಕವಾದ ವಾತಾವರಣವನ್ನು ಕಲ್ಪಿಸಿಕೊಡುವ ನಿಟ್ಟಿನಲ್ಲಿ ಬದುಕುವುದನ್ನು ಕಲಿತುಕೊಂಡರೆ ಒಳಿತು. ನಮಗಾಗಿ ನಾವು ಬದುಕಲು ಬರುವ ಆದಾಯ ಸಾಕು. ಆದರೆ ಇನ್ನೊಬ್ಬರನ್ನು ನೋಡಿ ಬದುಕಲು ಎಷ್ಟು ಕೊಟ್ಟರೂ ಸಾಲದೆಂಬ ಮಾತಿನಂತೆ ನಮ್ಮ ಬದುಕನ್ನು ನಿರ್ಮಿಸಿಕೊಳ್ಳುವ ಶಿಲ್ಪಿಗಳು ನಾವೇ ಆಗಿರುವುದರಿಂದ ಆದಾಯ ಮತ್ತು ಖರ್ಚಿನ ಬಗ್ಗೆ ಗಮನಹರಿಸುವುದು ಒಳಿತು. ಇದನ್ನು ಹೇಳುವಾಗ ಸಿನಿಮಾ ನಟರು, ಪ್ರೇರಣಾದಾಯಕ ಮಾತುಗಳನ್ನಾಡುವ ರಮೇಶ್ ಅರವಿಂದ್ ಹೇಳಿದ ಮಾತೊಂದು ನೆನಪಿಗೆ ಬರುತ್ತದೆ. **"ಆದಾಯಕ್ಕಿಂತ ಕಡಿಮೆ ಖರ್ಚು ಮಾಡುವುದನ್ನು ಕಲಿಯಿರಿ ಅಥವಾ ಖರ್ಚು ಮಾಡುವುದಕ್ಕಿಂತ ಹೆಚ್ಚು ದುಡಿಯುವುದನ್ನು ಕಲಿಯಿರಿ" ಇಷ್ಟೆಲ್ಲಾ ಹೇಳಿದ ಮೇಲೆ ಆಯ್ಕೆ ನಿಮ್ಮ ಕೈಯಲ್ಲಿದೆ.**

ಮೈಸೂರಿನ ಹೈದರಾಲಿ ರಸ್ತೆ ಅಗಲೀಕರಣ ಕಾಮಗಾರಿ ಬಹುತೇಕ ಪೂರ್ಣ

ಶೀಘ್ರ ಜೋಡಿ ರಸ್ತೆ ವಾಹನ ಸಂಚಾರಕ್ಕೆ ಮುಕ್ತ... ಮುಕ್ತ...

- ಮಳೆ ನೀರು ಹರಿಯುವ ಬಾಕ್ಸ್ ಡ್ರೈನ್ ನಿರ್ಮಾಣ
- ಫುಟ್‌ಪಾತ್‌ನಲ್ಲಿ ಸಿಮೆಂಟ್ ಕಾಂಕ್ರಿಟ್ ಟೈಲ್ಸ್ ಜೋಡಣೆ
- ಡಿವೈಡರ್ ಮಧ್ಯೆ ಹೂವಿನ ಗಿಡ ನೆಡುವ ಯೋಜನೆ
- ಅಪಘಾತವಾಗದಂತೆ ಟ್ರಾಫಿಕ್ ಸಿಗ್ನಲ್ ಲೈಟ್ ಅಳವಡಿಕೆ

ಮೈಸೂರು, ಮಾ.23(ಬಿಎಲ್‌ಯು)- ಸಾಂಸ್ಕೃತಿಕ ನಗರಿ ಮೈಸೂರಿನ ಹೈದರಾಲಿ ರಸ್ತೆ ಅಗಲೀಕರಣ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಜೋಡಿ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ.

ಮೈಸೂರಿನ ಎಸ್‌ಪಿ ಕಚೇರಿ ವೃತ್ತದಿಂದ ಫೋರಂ ಮಾಲ್ ಬಳಿಯ ಕಾಳಿಕಾಂಬ ದೇವಸ್ಥಾನದವರೆಗಿನ ಹೈದರಾಲಿ ರಸ್ತೆಯನ್ನು ಅಗಲೀಕರಣ ಮಾಡಲಾಗಿದೆ. 100 ಅಡಿಯ ಡಾಂಬರೀಕರಣದ ಜೋಡಿ ರಸ್ತೆ ಈಗಾಗಲೇ ಸಾರ್ವಜನಿಕರ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ.

ಜೋಡಿ ರಸ್ತೆಯ ಮಧ್ಯೆ ಸುಮಾರು 5 ಅಡಿಯ ಡಿವೈಡರ್ ನಿರ್ಮಾಣ ಮಾಡಲಾಗಿದ್ದು, ಇಲ್ಲಿ ಹೂವಿನ ಗಿಡಗಳನ್ನು ನೆಡುವ ಉದ್ದೇಶವಿದೆ. ಎರಡು ರಸ್ತೆಯ ಪಕ್ಕದಲ್ಲಿ ಮಳೆ ನೀರು ಸಾಗಲು ಬಾಕ್ಸ್ ಡ್ರೈನ್ ನಿರ್ಮಿಸಲಾಗಿದ್ದು, ಮಳೆ ಬಿದ್ದಾಗ ನೀರು ರಸ್ತೆಯಲ್ಲಿ ನಿಲ್ಲದಂತೆ ವ್ಯವಸ್ಥೆ ಮಾಡಲಾಗಿದೆ.

ಅಲ್ಲದೆ ಜೋಡಿ ರಸ್ತೆಯ ಪಕ್ಕದಲ್ಲಿ ಫುಟ್‌ಪಾತ್ ನಿರ್ಮಾಣ ಮಾಡಲಾಗುತ್ತಿದ್ದು, ಅಲ್ಲಿ ಸಿಮೆಂಟ್ ಟೈಲ್ಸ್‌ಗಳನ್ನು ಅಳವಡಿಸಲಾಗುತ್ತಿದೆ. ತಿಂಗಳಾಂತ್ಯದಲ್ಲಿ ಕಾಮಗಾರಿಯೂ ಪೂರ್ಣಗೊಳ್ಳಲಿದೆ. ಹೈದರಾಲಿ ರಸ್ತೆ, ಎಸ್‌ಪಿ ಆಫೀಸ್ ರಸ್ತೆ ಹಾಗೂ ಕೆಪಿಎ ರಸ್ತೆ ಕೂಡುವ ವೃತ್ತ (ಜಂಕ್ಷನ್) ಎತ್ತರವಾಗಿತ್ತು. ಅಜೀಜ್ ಸೇಠ್ ರಸ್ತೆಯಿಂದ ಬರುವವರಿಗೆ ಎದುರು ಬರುವ ವಾಹನಗಳು ಕಾಣಿಸುತ್ತಿರಲಿಲ್ಲ. ಈ ಹಿನ್ನೆಲೆಯಲ್ಲಿ ಜಂಕ್ಷನ್ ಎತ್ತರವನ್ನು ಕಡಿಮೆ ಮಾಡಿ ವೈಜ್ಞಾನಿಕವಾಗಿ ಜಂಕ್ಷನ್ ನಿರ್ಮಾಣ ಮಾಡಲಾಗಿದೆ.

ಈ ಜಂಕ್ಷನ್‌ನಲ್ಲಿ ಮೂರು ದಿಕ್ಕಿನಿಂದ ವಾಹನಗಳು ಬರುವ ಕಾರಣ ಅಪಘಾತವಾಗುವ ಆತಂಕವಿತ್ತು. ಅಲ್ಲದೆ ಸರಾಗವಾಗಿ ವಾಹನಗಳು ಸಾಗಲು ಸಾಧ್ಯವಾಗದೆ ವಾಹನ ದಟ್ಟಣೆ ಆಗುವ ಸಾಧ್ಯತೆಯೂ ಇತ್ತು. ಇದನ್ನು ಗಂಭೀರವಾಗಿ ಪರಿಗಣಿಸಿರುವ ಸಂಚಾರಿ ಪೊಲೀಸರು ಜಂಕ್ಷನ್‌ನಲ್ಲಿ ಟ್ರಾಫಿಕ್ ಸಿಗ್ನಲ್ ಲೈಟ್ ಅಳವಡಿಸಿದ್ದಾರೆ.

ಫುಟ್‌ಪಾತ್‌ಗೆ ಸಿಮೆಂಟ್ ಟೈಲ್ಸ್ ಅಳವಡಿಸಿದ ನಂತರ ಬೀದಿ ದೀಪ ಅಳವಡಿಕೆ ಹಾಗೂ ಡಿವೈಡರ್‌ನಲ್ಲಿ ಗಿಡಗಳನ್ನು ನೆಡುವ ಕೆಲಸ ಮಾತ್ರ ಬಾಕಿ ಉಳಿಯಲಿದೆ. ಈ ಕೆಲಸ ಕೂಡ ಏಪ್ರಿಲ್ ಎರಡನೇ ವಾರದೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಈ ಮೂಲಕ ಏಪ್ರಿಲ್ ತಿಂಗಳಾಂತ್ಯಕ್ಕೆ ಈ ರಸ್ತೆಯ ಅಧಿಕೃತ ಲೋಕಾರ್ಪಣೆ ಸಮಾರಂಭ ನಡೆಯಲಿದೆ.



ಹೈದರಾಲಿ ರಸ್ತೆ ಅಗಲೀಕರಣ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಜೋಡಿ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ.

ಮರಗಳಿಲ್ಲದೆ ಬಟಾಬಯಲಾದಂತಿರುವ ಹೈದರಾಲಿ ರಸ್ತೆ

ಹೈದರಾಲಿ ರಸ್ತೆ ಅಗಲೀಕರಣ ಮಾಡಿ, ಅಂದ-ಚಂದದ ಜೋಡಿ ರಸ್ತೆಯನ್ನಾಗಿ ರೂಪಿಸಲಾಗಿದೆ. ಆದರೆ ಈ ರಸ್ತೆಯಲ್ಲಿದ್ದ 40ಕ್ಕೂ ಹೆಚ್ಚು ಮರಗಳ ಹನನದಿಂದ ಹಸಿರು ಮರೆಯಾಗಿ ಇಡೀ ರಸ್ತೆ ಬಟಾಬಯಲಾಗಿದೆ. ಈ ರಸ್ತೆ ಅಗಲೀಕರಣಕ್ಕಾಗಿ ಏಪ್ರಿಲ್ 17, 2025ರಂದು ರಾತ್ರೋರಾತ್ರಿ 40ಕ್ಕೂ ಹೆಚ್ಚು ಮರಗಳನ್ನು ಕಡಿಯಲಾಗಿತ್ತು. ಇದು ಪರಿಸರ ಪ್ರೇಮಿಗಳ ಆಕ್ರೋಶಕ್ಕೆ ಕಾರಣವಾಗಿ ಭಾರೀ ಪ್ರತಿಭಟನೆಗಳು ನಡೆದಿತ್ತು. ಈ ರಸ್ತೆಯಲ್ಲಿ 40 ಮರಗಳಿಗೆ ಬದಲಾಗಿ ಗಿಡಗಳನ್ನು ನೆಟ್ಟು ಅವುಗಳನ್ನು ಬೆಳೆಸಿ ಸಂರಕ್ಷಣೆ ಮಾಡಬೇಕೆಂದು ಹೋರಾಟಗಾರರು ಅಂದು ಆಗ್ರಹಿಸಿದ್ದರು.

ಜೋಡಿ ರಸ್ತೆಯಲ್ಲಿ ಗಿಡ ನೆಡುತ್ತೇವೆ. ಈಗಿನ ಗಿಡಗಳನ್ನು ನೆಟ್ಟರೆ ಕೇವಲ 5 ವರ್ಷದೊಳಗೆ 12 ಅಡಿ ಬೆಳೆಯುತ್ತವೆ ಎಂದು ನಗರ ಪಾಲಿಕೆ ಅಧಿಕಾರಿಗಳು ಭರವಸೆ ನೀಡಿದ್ದರು. ಆದರೆ, ಒಂದು ಗಿಡವನ್ನು ನೆಡುವ ಗೋಜಿಗೆ ಹೋಗಲಿಲ್ಲ. ತರುವಾಯ ರಘುಲಾಲ್ ಅಂಡ್ ಕಂಪನಿಯವರು ರಸ್ತೆಗಳ ಇಕ್ಕೆಲಗಳಲ್ಲಿ ಗಿಡಗಳನ್ನು ನೆಟ್ಟು ಅದರ ರಕ್ಷಣೆಗೆ ಟ್ರೀ ಗಾರ್ಡ್‌ಗಳನ್ನು ಅಳವಡಿಸಿದ್ದರು. ಅಲ್ಲದೆ ಒಂದೆರಡು ತಿಂಗಳು ನೀರು ಹಾಕಿ, ಪೋಷಿಸಿದ್ದರು.

ರಸ್ತೆ ಅಗಲೀಕರಣ ಮಾಡುವ ವೇಳೆ ಫುಟ್ ಪಾತ್ ನಿರ್ಮಾಣಕ್ಕಾಗಿ ರಘುಲಾಲ್ ಅಂಡ್ ಕಂಪನಿಯವರು ನೆಟ್ಟ ಗಿಡಗಳನ್ನೂ ಕಿತ್ತೆಸೆಯಲಾಗಿದೆ. ಪಾಲಿಕೆಯವರು ಗಿಡ ನೆಡಲಿಲ್ಲ, ಖಾಸಗಿಯವರು ನೆಟ್ಟ ಗಿಡಗಳನ್ನು ಉಳಿಗೊಡಲಿಲ್ಲ. ಈಗ ಹೈದರಾಲಿ ರಸ್ತೆ ಅಗಲೀಕರಣ ಮಾಡಿ ಜೋಡಿ ರಸ್ತೆ ನಿರ್ಮಿಸಲಾಗಿದೆ. ಆದರೆ, ಅಲ್ಲಿದ್ದ ಹಸಿರು ನಾಶವಾಗಿದೆ. ಇದರಿಂದ ಹೈದರಾಲಿ ರಸ್ತೆ ಬಟಾಬಯಲಂತೆ ಕಾಣುತ್ತಿದೆ. ಸದ್ಯ, ಕಾಳಿಕಾಂಬ ದೇವಸ್ಥಾನದಿಂದ ಎಸ್‌ಪಿ ಆಫೀಸ್‌ಗೆ ಹೋಗುವ ರಸ್ತೆಯಲ್ಲಿ ಕೆಲವು ಮರಗಳಿರುವ ಕಾರಣ ಸ್ವಲ್ಪವಾದರೂ ಸಮಾಧಾನ ತರುತ್ತಿದೆ. ರಸ್ತೆ ಹಾಗೂ ಅಭಿವೃದ್ಧಿ ಹೆಸರಿನಲ್ಲಿ ಈ ಮರಗಳಿಗೂ ಕೊಡಲಿ ಪೆಟ್ಟು ನೀಡದಿದ್ದರೆ ಅಷ್ಟೆ ಸಾಕು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಅಪಘಾತದಲ್ಲಿ ತಪ್ಪಿಲ್ಲದೆ ಸತ್ತರೆ ಪರಿಹಾರಕ್ಕೆ ಅರ್ಹ

ಬೆಂಗಳೂರು: ಯಾವುದೇ ತಪ್ಪು ಇಲ್ಲದೆ (ನೋ ಫಾಲ್ಟ್) ವಾಹನ ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಗೆ ಆದಾಯದ ಮಿತಿಯ ನಿರ್ಬಂಧವಿಲ್ಲದೆ 5 ಲಕ್ಷ ಮತ್ತು ಗಾಯಗೊಂಡ ವರಿಗೆ 2.5 ಲಕ್ಷ ಪರಿಹಾರ ಪಾವತಿಸುವುದು ಮೋಟಾರು ವಾಹನ ತಿದ್ದುಪಡಿ ಕಾಯ್ದೆಯಡಿ ಕಡ್ಡಾಯ ಎಂದು ಹೈಕೋರ್ಟ್ ಆದೇಶಿಸಿದೆ.

ರಸ್ತೆಗೆ ಅಡ್ಡಬಂದ ಎಮ್ಮೆಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ಬೈಕ್ ರಸ್ತೆ ಬದಿಯ ಕಲ್ಲಿಗೆ ಡಿಕ್ಕಿ ಹೊಡೆದು ಮೃತಪಟ್ಟ ಸವಾರ ವಾರ್ಷಿಕ 40 ಸಾವಿರಗೂ ಅಧಿಕ ಆದಾಯ ಹೊಂದಿದ್ದ ಎಂಬ ಕಾರಣಕ್ಕೆ ಪರಿಹಾರ ನಿಗದಿಗೆ ನಿರಾಕರಿಸಿದ್ದ ಮೋಟಾರು ವಾಹನ ಪರಿಹಾರ ಕ್ಲೇಮು ನ್ಯಾಯಾಧಿಕರಣದ ಆದೇಶ ರದ್ದುಪಡಿಸಿದ ನ್ಯಾಯಮೂರ್ತಿ ಕೆ.ಮನ್ಮಥ ರಾವ್ ಅವರ ಪೀಠ ಈ ಆದೇಶ ಮಾಡಿದೆ.

ಅಪಘಾತದಲ್ಲಿ ಮೃತ ವ್ಯಕ್ತಿಗೆ 5 ಲಕ್ಷ, ಗಾಯಗೊಂಡವರಿಗೆ 2.5 ಲಕ್ಷ ಪರಿಹಾರ: ಮೋಟಾರು ವಾಹನ ತಿದ್ದುಪಡಿ ಕಾಯ್ದೆ–2019ರ ಸೆಕ್ಷನ್ 164 ಅನ್ವಯ ಅಪಘಾತ ಸಂಭವಿಸಲು ತನ್ನ ತಪ್ಪಿಲ್ಲದ ಸಂದರ್ಭದಲ್ಲಿ ಅಪಘಾತದಲ್ಲಿ ಮೃತ ವ್ಯಕ್ತಿಗೆ 5 ಲಕ್ಷ, ಗಾಯ ಗೊಂಡವರಿಗೆ 2.5 ಲಕ್ಷ ಪರಿಹಾರ ನಿಗದಿಪಡಿಸ ಲಾಗಿದೆ. ಹಾಗಾಗಿ ಅಪಘಾತದಲ್ಲಿ ನಿರ್ಲಕ್ಷ್ಯ ಸಾಬೀತುಪಡಿಸುವ ಅಗತ್ಯವಿಲ್ಲದೆಯೇ ಸೆಕ್ಷನ್ 164 ಶಾಸನಬದ್ಧ ಪರಿಹಾರ ಒದಗಿಸುತ್ತದೆ. ಈ ನಿಬಂಧನೆ ಸಹಜವಾಗಿ ಪ್ರಯೋಜನಕಾರಿಯಾಗಿದೆ. ಇದರಿಂದ ಮೋಟಾರು ಅಪಘಾತಗಳ ಸಂತ್ರಸ್ತರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶವನ್ನು ಈ ನಿಯಮ ಹೊಂದಿದೆ. ಸುಪ್ರೀಂಕೋರ್ಟ್ ನಿರ್ದೇಶನದ ಅನುಸಾರ ಆದಾಯ ಮಿತಿಯಂಥ ತಾಂತ್ರಿಕ ಕಾರಣ ನೀಡಿ ಪರಿಹಾರ ಕ್ಲೇಮು ತಿರಸ್ಕರಿಸಿರುವುದು ಕಾನೂನಡಿ ಅನೂರ್ಜಿತವಾಗುತ್ತದೆ ಎಂದು ಪೀಠ ಹೇಳಿದೆ.

ಎಮ್ಮೆ ಅಡ್ಡ ಬಂದು ಅಪಘಾತ: 2014ರ ಆ.17ರಂದು ರಂಜಾನ್ ಹಸನ್ ಕಳ್ಳೊಳೆ ಮತ್ತು ರವಿ ಮಹದೇವ್ ಮಗದುಂ ಬೈಕಿನಲ್ಲಿ ಚಿಕ್ಕೋಡಿಯಿಂದ ಚಿಂಚಣಿಗೆ ತೆರಳುತ್ತಿದ್ದರು. ರವಿ ಬೈಕ್ ಚಾಲನೆ ಮಾಡುತ್ತಿದ್ದರು. ರಂಜಾನ್ ರವಿ ಹಿಂಬದಿ ಕೂತಿದ್ದರು. ರಸ್ತೆಗೆ ಅಡ್ಡಲಾಗಿ ಎಮ್ಮೆ ಅಡ್ಡಬಂದಿತ್ತು. ಆಗ ಎಮ್ಮೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಬೈಕ್ ಅನ್ನು ರಸ್ತೆಬದಿ ತಿರುಗಿಸಿದ್ದರು. ಆಗ ಬೈಕ್ ರಸ್ತೆ ಬದಿಯ ಕಲ್ಲಿಗೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಸವಾರರಿಬ್ಬರೂ ಅಸುನೀಗಿದ್ದರು. ಬೈಕ್ ರಾಜು ಎಂಬುವರಿಗೆ ಸೇರಿತ್ತು. ಘಟನೆ ನಡೆದಾಗ ಬೈಕ್‌ಗೆ ನ್ಯಾಷನಲ್ ವಿಮಾ ಕಂಪನಿಯ ವಿಮಾ ಪಾಲಿಸಿ ಜಾರಿಯಲ್ಲಿತ್ತು.

ಪ್ರಕರಣ ಸಂಬಂಧ ಪರಿಹಾರ ಕೋರಿ ಮೃತ ರಂಜಾನ್ ಪತ್ನಿ ಶಾಂಬೈ, ಇಬ್ಬರು ಪುತ್ರಿಯರು ಮತ್ತು ರವಿ ಮಗದುಂ ಅವರ ಪತ್ನಿ ಸಾರಿಕಾ ಹಾಗೂ ಅವರ ಕುಟುಂಬ ಅರ್ಜಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ್ದ ಅಥಣಿಯ ಮೋಟಾರು ವಾಹನ ಅಪಘಾತ ಪರಿಹಾರ ಕ್ಲೇಮು ನ್ಯಾಯಾಧಿಕರಣ (ಎಂಎಸಿಟಿ), ರಂಜಾನ್ ವಾರ್ಷಿಕ 40 ಸಾವಿರಕ್ಕೂ ಅಧಿಕ ಆದಾಯ ಹೊಂದಿದ್ದರು ಎಂಬ ಕಾರಣ ಆಧರಿಸಿ ರಂಜಾನ್ ಪತ್ನಿಯ ಅರ್ಜಿ ವಜಾ ಗೊಳಿಸಿತ್ತು. ಆದರೆ, ರವಿ ಪತ್ನಿ ಅವರಿಗೆ ವಾರ್ಷಿಕ ಶೇ.9ರಷ್ಟು ಬಡ್ಡಿದರದಲ್ಲಿ 5,05,000 ಪರಿಹಾರ ನಿಗದಿಪಡಿಸಿತು. ಆದರೆ, ಬೈಕ್ ಚಾಲನೆ ಮಾಡುವಾಗ ರವಿ ಚಾಲನಾ ಪರವಾನಗಿ ಹೊಂದಿರಲಿಲ್ಲ ಎಂಬ ಕಾರಣಕ್ಕೆ ಬೈಕ್ ಮಾಲಿಕ ರಾಜು, ಪರಿಹಾರ ಪಾವತಿಸಬೇಕು ಎಂದು 2015ರ ಡಿ.28ರಂದು ಆದೇಶಿಸಿತ್ತು.

ಬೈಕ್ ಮಾಲೀಕನ ಮೇಲೆ ಪರಿಹಾರ ಪಾವತಿ ಹೊಣೆ ಹೊರಿಸಿದ್ದನ್ನು ಆಕ್ಷೇಪಿಸಿ ಮತ್ತು ತಮಗೆ ಪರಿಹಾರ ನಿಗದಿಪಡಿಸದ ಎಂಎಸಿಟಿ ಕ್ರಮ ಪ್ರಶ್ನಿಸಿ ರಂಜಾನ್ ಮತ್ತು ರವಿ ಕುಟುಂಬದವರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಮೇಲ್ಮನವಿ ವಿಚಾರಣೆ ನಡೆಸಿದ ಹೈಕೋರ್ಟ್, ಮೋಟಾರು ವಾಹನ ತಿದ್ದುಪಡಿ ಕಾಯ್ದೆಯ ಸೆಕ್ಷನ್ 164 ಅಡಿ ರಂಜಾನ್ ಕುಟುಂಬದವರು 5 ಲಕ್ಷ ಪರಿಹಾರ ಪಡೆಯಲು ಅರ್ಹರಿದ್ದಾರೆ. ಇನ್ನೂ ರವಿ ಮಾನ್ಯತೆ ಹೊಂದಿರುವ ಚಾಲನಾ ಪರವಾನಗಿ ಹೊಂದಿರಲಿಲ್ಲ ಎಂಬುದನ್ನು ಸಾಬೀತುಪಡಿಸಲು ವಿಮಾ ಕಂಪನಿ ವಿಫಲವಾಗಿದೆ. ಇದರಿಂದ ವಿಮಾ ಕಂಪನಿಯೇ ರವಿ ಕುಟುಂಬದವರಿಗೆ ವಾರ್ಷಿಕ ಶೇ.9ರಷ್ಟು ಬಡ್ಡಿದರಲ್ಲಿ 5 ಲಕ್ಷ ಪರಿಹಾರ ಪಾವತಿಸಬೇಕು ಎಂದು ನಿರ್ದೇಶಿಸಿದೆ.

ತುಮಕೂರಲ್ಲಿ ಪಾದಯಾತ್ರೆ...



ಒಳಮೀಸಲಾತಿಯನ್ನು ಸಂಪೂರ್ಣವಾಗಿ ಜಾರಿಗೊಳಿಸುವಂತೆ ಒತ್ತಾಯಿಸಿ ನಡೆಸುತ್ತಿರುವ ಶ್ರೀ ಆದಿಜಾಂಬವ ಮಠದ ಶ್ರೀಷಡಕ್ಷರ ಮುನಿ ಸ್ವಾಮೀಜಿ ಅವರ ಪಾದಯಾತ್ರೆ ಸೋಮವಾರ ತುಮಕೂರಿನಲ್ಲಿ ಮುಂದುವರೆಯಿತು. ಹಿರಿಯ ವಕೀಲ ಎಸ್.ಅರುಣ್‌ಕುಮಾರ್ ನೇತೃತ್ವದಲ್ಲಿ ವಕೀಲರ ತಂಡವೂ ಈ ಹೋರಾಟದಲ್ಲಿ ಪಾಲ್ಗೊಂಡಿತ್ತು. ಮಾದಿಗ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರ ಬೆಳೆಗಳ ಖರೀದಿ

• ದಲ್ಲಾಳಿಗಳ ಹಾವಳಿ ತಡೆದು ರೈತರಿಗೆ ಉತ್ತಮ ದರ ನೀಡುವ ಸಲುವಾಗಿ ಕ್ರಮ • ಪಾಂಡವಪುರ ತಾಲೂಕಿನಲ್ಲಿ ಮೊದಲ ಪ್ರಯತ್ನ

ಪಾಂಡವಪುರ, ಮಾ.23– ರೈತರು ಬೆಳೆಯುವ ಬೆಳೆಗಳನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕವೇ ಖರೀದಿಸಿ, ರೈತರ ಬೆಳೆಗಳಿಗೆ ಉತ್ತಮ ದರ ನೀಡಿ ಅವರನ್ನು ಆರ್ಥಿಕವಾಗಿ ಸದೃಢ ಗೊಳಿಸುವ ಹೊಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೊಸೈಟಿಗಳು ಇಷ್ಟು ದಿನಗಳ ಕಾಲ ರೈತರಿಗೆ ಬೇಕಾದ ರಸಗೊಬ್ಬರ, ಬ್ಯಾಂಕ್ ಸಾಲ ಸೌಲಭ್ಯ ಹಾಗೂ ಪಡಿತರ ವಿತರಣೆ ಮಾತ್ರ ಮಾಡುತ್ತಿದ್ದವು. ಅದರ ಜತೆಗೆ ರೈತರು ಬೆಳೆಯುವ ಭತ್ತ, ರಾಗಿ, ಜೋಳ, ಕಾಳುಗಳನ್ನು ಸಹ ನೇರವಾಗಿ ರೈತರಿಂದ ಖರೀದಿಸಿ ರೈತರಿಗೆ ಅಧಿಕ ಲಾಭ ನೀಡುವುದು, ಜತೆಗೆ ಸೊಸೈಟಿಗಳ ಮೂಲಕವೇ ಸಿದ್ದಪಡಿಸಿದ ಬೆಳೆಗಳನ್ನು ಮಾರಾಟ ಮಾಡಲು ಕ್ರಮವಹಿಸಲಾಗಿದೆ. ಇದರಿಂದ ದಲ್ಲಾಳಿಗಳ ಹಾವಳಿಯನ್ನು ಸಹ ತಪ್ಪಿಸಿದಂತಾಗುತ್ತದೆ, ಜತೆಗೆ ರೈತರಿಗೂ ಅಧಿಕ ಲಾಭವಾಗಿ ಸೊಸೈಟಿಗಳು ಲಾಭದಾಯಕ ವಾಗಲಿವೆ, ಇದಕ್ಕಾಗಿ ನಬಾರ್ಡ್ ಅಥವಾ ಡಿಸಿಸಿ ಬ್ಯಾಂಕ್‌ಗಳಿಂದ ಸೊಸೈಟಿಗಳಿಗೆ ಆರ್ಥಿಕ ನೆರವು ನೀಡಲು ಕ್ರಮವಹಿಸಲಾಗುತ್ತಿದೆ ಎಂದರು.

ಈ ಸಂಬಂಧ ಈಗಾಗಲೆ ಸೊಸೈಟಿಗಳ ಸಿಇಓ, ಅಧಿಕಾರಿಗಳೊಂದಿಗೆ ಹಲವು ಬಾರಿ ಸಭೆ ನಡೆಸಿ ಚರ್ಚಿಸಲಾಗಿದೆ. ಜತೆಗೆ ಹೊಸ ಸಾಫ್ಟವೇರ್ ಅನ್ನು ಸಹ ಡೆವಲಪ್ ಮಾಡಲಾಗಿದೆ. ಮೊದಲ ಹಂತದಲ್ಲಿ ಭತ್ತ ರಾಗಿ, ಜೋಳ, ಕಾಳುಗಳು, ಮೆಣಸಿನ ಕಾಯಿ ಖರೀದಿಸಲಾಗುವುದು, ಬಳಿಕ ಕೋಲ್ಡ್ ಸ್ಟೋರೇಜ್‌ಗಳನ್ನು ನಿರ್ಮಿಸಿ ತರಕಾರಿಗಳನ್ನು ಖರೀದಿಸಲು ತೀರ್ಮಾನಿಸಲಾಗುತ್ತಿದೆ. ಈ ಕೆಲಸಕ್ಕೆ ಸಹಕಾರ ಸಂಘಗಳು ಸಹಕಾರ ನೀಡಬೇಕು, ಇಲ್ಲಿ ಯಾವುದೇ ರೀತಿಯ ರಾಜಕೀಯ ನಡೆಸುತ್ತಿಲ್ಲ, ಇದು ಕೇವಲ ರೈತರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸಲು ಮಾತ್ರ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದರು.



ಸುದ್ದಿಗೋಷ್ಠಿಯಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿದರು.

ಈಗಾಗಲೆ ತಾಲೂಕಿನ ಅರಳಕುಪ್ಪೆ, ಕ್ಯಾತನಹಳ್ಳಿ ಸೊಸೈಟಿಗಳಲ್ಲಿ ರೈತರಿಂದ ನೇರವಾಗಿ ಭತ್ತ ಖರೀದಿಸಿ ಮಾರಾಟ ಮಾಡಿ ಲಾಭಗಳಿಸುವ ಕೆಲಸ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಇಡೀ ಕ್ಷೇತ್ರಾದ್ಯಂತ ಮಾಡಲಾಗುತ್ತದೆ. ಈ ವಿಚಾರವಾಗಿ ಚರ್ಚಿಸಲು ಇದೇ ಏ.1ರಂದು ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ಎಲ್ಲಾ ಸಹಕಾರ ಸಂಘಗಳ ಆಡಳಿತ ಮಂಡಳಿಯ ನಿರ್ದೇಶಕ ಸಭೆಯನ್ನು ಸಹ ಕರೆಯಲಾಗಿದೆ, ಸಭೆಗೆ ಎಲ್ಲರೂ ತಪ್ಪದೆ ಆಗಮಿಸಬೇಕೆಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ, ತಾಲೂಕು ಅಧ್ಯಕ್ಷ ಎಣ್ಣೆಹೊಳೆಕೊಪ್ಪಲು ಮಂಜುನಾಥ್, ಮಾಜಿ ಅಧ್ಯಕ್ಷರಾದ ಕೆನ್ನಾಳು ವಿಜಯ್ ಕುಮಾರ್, ನಾಗರಾಜು, ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಹಾಮಡಹಳ್ಳಿ ಅಶೋಕ್, ಮುಖಂಡ ಕೆ.ಟಿ.ಗೋವಿಂದೇಗೌಡ, ಬಿ.ಟಿ.ಶಿವಣ್ಣ, ಶಂಕರ, ರೂಪ, ಕಟ್ಟೇರಿ ಮಹದೇವು, ಗೋವಿಂದರಾಜು, ರಾಘು, ಪ್ರಕಾಶ್ ಸೇರಿದಂತೆ ಹಲವರಿದ್ದರು.

ರೈತಸಂಘದಿಂದ ಡಿಸಿ ಕಚೇರಿಗೆ ಮುತ್ತಿಗೆ



ಮಂಡ್ಯ: ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ಕರ್ನಾಟಕ ರಾಜ್ಯ ಹಾಲು ಉತ್ಪಾದಕ ರೈತರ ಕ್ಷೇಮಾಭಿವೃದ್ಧಿ ಸಂಘದ ನೇತೃತ್ವದಲ್ಲಿ ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಆನ್‌ಲೈನ್ ಕಂಪನಿಗಳು ಕೇವಲ ಒಂದು ರೂ.ಗೆ ಒಂದು ಲೀಟರ್ ಹಾಲು ಮಾರಾಟ ಮಾಡುವ ಮೂಲಕ ಹೈನುಗಾರಿಕೆ ನಂಬಿದ ಲಕ್ಷಾಂತರ ರೈತರ ಬದುಕಿನ ಜೊತೆ ಆಟ ವಾಡುತ್ತಿವೆ ಎಂದು ಪ್ರತಿಭಟನಾಕಾರರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಆರ್ಥಿಕ ಬೆನ್ನೆಲುಬಾಗಿರುವ ಹೈನುಗಾರಿಕೆ ಇಂದು ಸಂಕಷ್ಟಕ್ಕೆ ಸಿಲುಕಿದೆ. ಫ್ಲಿಪ್‌ಕಾರ್ಟ್, ಅಮೆಜಾನ್ ಮತ್ತು ವಾಲ್–ಮಾರ್ಟ್‌ನಂತಹ ಬಹುರಾಷ್ಟ್ರೀಯ ಕಂಪನಿಗಳು ಮಾರುಕಟ್ಟೆಯಲ್ಲಿ ಅನ್ಯಾಯದ ಪೈಪೋಟಿ ನಡೆಸುತ್ತಿವೆ, ಉತ್ಪಾದನಾ ವೆಚ್ಚಕ್ಕಿಂತ ಕಡಿಮೆ ಬೆಲೆಗೆ ಹಾಲು ಮಾರಾಟ ಮಾಡುವ ಮೂಲಕ ಈ ಕಂಪನಿಗಳು ನಂದಿನಿಯಂತಹ ಸಹಕಾರಿ ಸಂಸ್ಥೆಗಳನ್ನು ನಾಶ ಮಾಡಲು ಸಂಚು ರೂಪಿಸುತ್ತಿವೆ ಎಂಬುದು ರೈತರ ಗಂಭೀರ ಆರೋಪ ಮಾಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಸಂಚಾಲಕರಾದ ಎನ್.ಎಲ್.ಭರತ್ ರಾಜ್, ಮಹದೇವು, ಗುರುಸ್ವಾಮಿ, ಸಿದ್ದೇಗೌಡ, ಗಣೇಶ್, ನಾಗಮಣಿ, ಪದ್ಮ, ಶ್ರೀನಿವಾಸ್, ಮೂರ್ತಿ ಇದ್ದರು.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಭೀಕರ ಅಪಘಾತ

ಡಿವೈಡರ್‌ಗೆ ಬಸ್ ಡಿಕ್ಕಿ: ನಾಲ್ವರು ದುರ್ಮರಣ

ಚನ್ನಪಟ್ಟಣ(ಮೋಹನ್‌ರಾಜ್): ಸೋಮವಾರ ಮುಂಜಾನೆ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಚನ್ನಪಟ್ಟಣ ತಾಲೂಕಿನ ಪುಟ್ಟಪ್ಪನದೊಡ್ಡಿ ಬಳಿ ಬಸ್ಸೊಂದು ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.

ಮೃತರನ್ನು ಮಹಮ್ಮದ್ ಪರಾನ್(22), ರಫೀಜ್ (45) ಇಬ್ಬರೂ ಕೇರಳ ಮೂಲದವರು, ಮತ್ತಿಬ್ಬರು ಬೆಂಗಳೂರು ಮೂಲದ ರಶೀದ್(45), ಸಕೀರ್ (27) ಎಂದು ಗುರುತಿಸಲಾಗಿದೆ. ರಾತ್ರಿ ಕೇರಳದಿಂದ ಹೊರಟಿದ್ದ ಬಸ್ ಇಂದು ಬೆಳಗ್ಗೆ ಬೆಂಗಳೂರು ತಲುಪಬೇಕಿತ್ತು.

ನಿದ್ದೆ ಮಂಪರಿನಲ್ಲಿದ್ದ ಚಾಲಕ ಬಸ್, ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸಾವನ್ನಪ್ಪಿದ್ದಾರೆ. ಮೃತದೇಹಗಳನ್ನು ಚನ್ನಪಟ್ಟಣ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದ್ದು, ಅಪಘಾತಕ್ಕೊಳಗಾದ ಬಸ್ ಕೇರಳ ಮೂಲದ Pk ಟ್ರಾವೆಲ್ಸ್‌ಗೆ ಸೇರಿದ್ದಾಗಿದೆ.

ಚಾಲಕನ ಅಜಾಗರೂಕತೆಯೇ ಅಪಘಾತಕ್ಕೆ ಕಾರಣ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕಾಗಮಿಸಿದ ಪೊಲೀಸರು, ವಾಹನ ತೆರವುಗೊಳಿಸಿ ಟ್ರಾಫಿಕ್ ಕ್ಲಿಯರ್ ಮಾಡಿದ್ದಾರೆ. ಅಪಘಾತದಲ್ಲಿ ಕೆಲ ಪ್ರಯಾಣಿಕರು ಗಾಯಗೊಂಡಿದ್ದು, ಗಾಯಾಳುಗಳನ್ನು ಸಹ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.



ಅಪಘಾತದಲ್ಲಿ ಅಬ್ದುಲ್ ಹಾಗೂ ಅಲೇಸ್ ಎಂಬವರು ಗಂಭೀರವಾಗಿ ಗಾಯಗೊಂಡಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪಘಾತ ನಡೆದಿದ್ದು, ಪ್ರಕರಣ ದಾಖಲಾಗಿದೆ. ಬಸ್‌ನಲ್ಲಿ ಎಷ್ಟು ಜನರು ಪ್ರಯಾಣಿಸುತ್ತಿದ್ದರು ಎಂಬುದರ ಬಗ್ಗೆ ನಿಖರ ಮಾಹಿತಿ ಲಭ್ಯವಾಗಿಲ್ಲ.

ಸ್ಥಳಕ್ಕೆ ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈಜಲು ಹೋದ ಬಾಲಕ ಜಲಸಮಾಧಿ

ಹಲಗೂರು: ಈಜಲು ಹೋಗಿದ್ದ 14 ವರ್ಷದ ಬಾಲಕ ನೀರಿನಲ್ಲಿ ಮುಳುಗಿ ಮೃತಪಟ್ಟ ದಾರುಣ ಘಟನೆ ಹಲಗೂರು ಹೋಬಳಿಯ ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ಶಿವಣ್ಣನವರ ಪುತ್ರ ಪೃಥ್ವಿನ್ (14) ಮೃತ ದುರ್ದೈವಿ. ಈತ ದಳವಾಯಿ ಕೋಡಿಹಳ್ಳಿ ಪ್ರೌಢಶಾಲೆಯ ಎಂಟನೇ ತರಗತಿ ವಿದ್ಯಾರ್ಥಿಯಾಗಿದ್ದು, ಸ್ನೇಹಿತರೊಂದಿಗೆ ಈಜಲು ಹೋಗಿದ್ದ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ. ನಂದಿಪುರ ಗ್ರಾಮದ ಸಿದ್ದೇಗೌಡ ಅವರಿಗೆ ಸೇರಿದ ಕೃಷಿ ಹೊಂಡದಲ್ಲಿ ಜಮೀನಿಗೆ ನೀರು ಹಾಯಿಸಲು ನೀರು ತುಂಬಿಸಲಾಗಿತ್ತು.

ಈ ವೇಳೆ ಪೃಥ್ವಿನ್ ಸ್ನೇಹಿತರೊಂದಿಗೆ ಹೊಂಡಕ್ಕೆ ಇಳಿದು ಈಜುತ್ತಿದ್ದಾಗ ನೀರು ಕುಡಿದು ಮುಳುಗತೊಡಗಿದ್ದಾನೆ. ಸ್ನೇಹಿತರು ತೆಂಗಿನ ಗರಿ ನೀಡಿ ರಕ್ಷಿಸಲು ಯತ್ನಿಸಿದರೂ ಪ್ರಯೋಜನವಾಗದೆ ಆತ ಮುಳುಗಿ ಮೃತಪಟ್ಟಿದ್ದಾನೆ ಎನ್ನಲಾಗಿದೆ. ಘಟನೆ ಬಳಿಕ ಅವನೊಂದಿಗೆ ಬಂದಿದ್ದ ಸ್ನೇಹಿತರು ಜಾಗ ಖಾಲಿ ಮಾಡಿದ್ದು, ವಿಷಯವನ್ನು ಯಾರಿಗೂ ತಿಳಿಸಿಲ್ಲ ಎಂದು ತಿಳಿದುಬಂದಿದೆ.

ಮುಂದಿನ ದಿನ ಬೆಳಿಗ್ಗೆ ಜಮೀನಿನ ಮಾಲೀಕ ಸಿದ್ದೇಗೌಡ ಹೊಂಡದ ಬಳಿ ಶವ ಹಾಗೂ ಚಪ್ಪಲಿಗಳನ್ನು ಗಮನಿಸಿ ಹಲಗೂರು ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಇದೇ ವೇಳೆ ಪೃಥ್ವಿನ್ ನೆನ್ನೆಯಿಂದ ಕಾಣೆಯಾಗಿದ್ದ ಬಗ್ಗೆ ಕುಟುಂಬದವರು ಹುಡುಕಾಟ ನಡೆಸುತ್ತಿದ್ದರು. ಘಟನಾ ಸ್ಥಳಕ್ಕೆ ಭೇಟಿ ನೀಡಿದ ಹಲಗೂರು ಠಾಣೆಯ ಪಿಎಸ್‌ಐ ಲೋಕೇಶ್ ಪ್ರಕರಣ ದಾಖಲಿಸಿಕೊಂಡು, ಮೃತದೇಹವನ್ನು ವಾರಸುದಾರರಿಗೆ ಹಸ್ತಾಂತರಿಸಿದ್ದಾರೆ. ಬಾಲಕನ ಸಾವಿನಿಂದ ಕುಟುಂಬದವರ ಹಾಗೂ ಬಂಧುಗಳ ಆಕ್ರಂದನ ಮುಗಿಲು ಮುಟ್ಟಿತ್ತು.

ಪತ್ರಕರ್ತ ಎಸ್.ಕುಮಾರ್ ನಿಧನ

ಮಂಡ್ಯ: ಶ್ರೀರಂಗಪಟ್ಟಣ ತಾಲೂಕಿನ ವರದಿಗಾರ ಎಸ್.ಕುಮಾರ್ (58) ತೀವ್ರ ಹೃದಯಾಘಾತದಿಂದ ಸೋಮವಾರ ಸಂಜೆ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.



ಪತ್ನಿ ಪ್ರೇಮ, ಪುತ್ರ ರಂಜನ್, ಪುತ್ರಿ ಶಿಲ್ಪ, ಅಳಿಯ ಕಿರಣ್ ಕುಮಾರ್ ಸಹೋದರರಾದ ಶಾಂತೇಶ್, ನಾಗರಾಜು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಕುಮಾರ್ ಅವರಿಗೆ ಸೋಮವಾರ ಮುಂಜಾನೆ 5ರ ಸಮಯದಲ್ಲಿ ಹೃದಯಾಘಾತವಾಗಿದ್ದು, ತಕ್ಷಣ ಅವರನ್ನು ಮೈಸೂರಿನ ಜಯದೇವ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿ ನಂತರ ವೈದ್ಯರ ಸಲಹೆ ಮೇರೆಗೆ ಡಿ.ಆರ್.ಎಂ. ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಸಂಜೆ 6ರ ಸಮಯದಲ್ಲಿ ಮೃತಪಟ್ಟಿದ್ದಾರೆ.

ಕುಮಾರ್ ಅವರು ಸುಮಾರು 30 ವರ್ಷಗಳಿಂದ ಪತ್ರಿಕಾ ರಂಗದಲ್ಲಿ ಕೆಲಸ ಮಾಡುತ್ತಿದ್ದು, ಮೊದಲಿಗೆ 'ಮೈಸೂರು ಮಿತ್ರ' ತಾಲೂಕು ವರದಿಗಾರರಾಗಿ ಕಾರ್ಯ ಆರಂಭಿಸಿದ ಇವರು, ಕಳೆದ ಎಂಟು ವರ್ಷಗಳಿಂದ ಆಂದೋಲನ ದಿನಪತ್ರಿಕೆಯ ತಾಲೂಕು ವರದಿಗಾರರಾಗಿದ್ದರು.

ಮೃತರ ಅಂತ್ಯಕ್ರಿಯೆ ಶ್ರೀರಂಗಪಟ್ಟಣದ ಕಾವೇರಿ ನದಿ ತೀರದಲ್ಲಿರುವ ಶಂಭುನಿಂಗಯ್ಯನ ಕಟ್ಟೆಯಲ್ಲಿ ಮಂಗಳವಾರ ಬೆಳಗ್ಗೆ 11 ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೊರಿಯರ್ ಮಹೇಶ್



ಶ್ರೀರಂಗಪಟ್ಟಣ: ಪಟ್ಟಣದ ನಿವಾಸಿ ಕೊರಿಯರ್ ಮಹೇಶ್ (49) ಭಾನುವಾರ ತಡರಾತ್ರಿ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಅವಿವಾಹಿತರಾಗಿದ್ದು, ಸಹೋದರ, ಸಹೋದರಿ ಸೇರಿ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

ಪಟ್ಟಣದ ಸಾರ್ವಜನಿಕ ಬಸ್ ನಿಲ್ದಾಣದ ಬಳಿಯ ಪುರಸಭೆ ಕಾಂಪ್ಲೆಕ್ಸ್‌ನಲ್ಲಿ ಹಲವಾರು ವರ್ಷಗಳಿಂದ ಕೊರಿಯರ್ ಹಾಗೂ ಕಂಪ್ಯೂಟರ್ ಸೇವೆ ಸಲ್ಲಿಸಿದ್ದ ಅವರು, ಕೆಲ ತಿಂಗಳುಗಳಿಂದ ತೀವ್ರ ಅನಾರೋಗ್ಯಕ್ಕೆ ತುತ್ತಾಗಿದ್ದರು. ಜೊತೆಗೆ ಕಳೆದ 22 ವರ್ಷಗಳ ಹಿಂದೆ ಎರಡೂ ಕಿಡ್ನಿ ವೈಫಲ್ಯದಿಂದ ನರಳುತ್ತಿದ್ದ ಅವರು, ತಮ್ಮ ಸಹೋದರಿ ನೀಡಿದ್ದ ಒಂದು ಕಿಡ್ನಿಯಲ್ಲೇ ಇಷ್ಟು ವರ್ಷ ಕಾಲ ತಳ್ಳಿದ್ದರು.

ಮೃತರ ಅಂತ್ಯಕ್ರಿಯೆ ಅವರ ಸ್ವ–ಗ್ರಾಮ ಪಾಂಡವಪುರ ತಾಲೂಕು ಮೇಲುಕೋಟೆಯಲ್ಲಿ ಸೋಮವಾರ ಮಧ್ಯಾಹ್ನ ನೆರವೇರಿಸಲಾಯಿತು.

ಮೂರನೇ ಪುಟದಿಂದ

ಕುಡಿಯುವ ನೀರಿನ ಸಮಸ್ಯೆಯಾಗಬಾರದು

ಮಾಡಿ ಆರ್‌ಟಿಸಿಯಲ್ಲಿ ಕೂರಿಸಬೇಕು. ಕಂದಾಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳು ಒಂದೊಂದು ದಿನ ಒಂದೊಂದು ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳಲ್ಲಿ ಆರ್‌ಟಿಸಿಯಲ್ಲಿ ಹೆಸರನ್ನು ನಮೂದಿಸುವ ಕೆಲಸ ಮಾಡಬೇಕು. ಸರ್ಕಾರಿ ಶಾಲೆಗೆ ವ್ಯಕ್ತಿಯೊಬ್ಬರು ತಮ್ಮ ಜಾಗವನ್ನು ದಾನ ಮಾಡಿದ್ದರು. ಅವರಿಗೆ 10 ಲಕ್ಷ ರೂಪಾಯಿ ನೀಡಲಾಗಿತ್ತು ಈಗ ಅವರ ಮೊಮ್ಮಗ ನಮ್ಮ ತಾತನ ಜಾಗವೆಂದು ಹೇಳಿಕೊಂಡು ಬಂದಿದ್ದರು. ಮುಂದೆ ಇಂತಹ ಸಮಸ್ಯೆಗಳಿಗೆ ಆಸ್ಪದವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಏಪ್ರಿಲ್ ಮೊದಲ ವಾರದೊಳಗೆ ಪಟ್ಟಿ: ಗ್ರಾಪಂಗಳಲ್ಲಿ ಆಗಬೇಕಿರುವ ಕೆಲಸಗಳು ಸೇರಿದಂತೆ ಸಮಗ್ರ ಮಾಹಿತಿಯನ್ನೊಳಗೊಂಡ ಮಾಹಿತಿ ಪುಸ್ತಕವನ್ನು ಏಪ್ರಿಲ್ ಮೊದಲನೇ ವಾರದೊಳಗೆ ಸಿದ್ಧಪಡಿಸಿ, ಸಲ್ಲಿಸಬೇಕು. ಬಳಿಕ ಮತ್ತೊಂದು ಸಭೆ ನಡೆಸಿ, ಪರಿಶೀಲಿಸಲಾಗುವುದು. ಸರ್ಕಾರದ ಅನುದಾನ, ತೆರಿಗೆ ಹಣ, ಕ್ರಿಯಾಯೋಜನೆಯಲ್ಲಿ ರೂಪಿಸುವ ಕಾಮಗಾರಿಗಳು, ಆದ್ಯತೆಯ ಕೆಲಸಗಳು, ಶಾಲೆಗಳು, ಅಂಗನವಾಡಿ, ಸ್ಮಶಾನಗಳ ಸಂಖ್ಯೆ, ತುರ್ತು ಕಾಮಗಾರಿ ಸೇರಿದಂತೆ ಸಂಪೂರ್ಣ ವಿವರ ವರದಿಯಲ್ಲಿರಬೇಕು ಎಂದರು.

ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್ ಮಾತನಾಡಿ, ಗ್ರಾಪಂಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ನಿರ್ವಹಣೆ ಮಾಡಬೇಕು. ಈ ನಿಟ್ಟಿನಲ್ಲಿ ಆಡಳಿತಾಧಿಕಾರಿಗಳಿಗೆ ಅನುಭವವಿದೆ. ಪಿಡಿಒಗಳಿಗೂ ತಮ್ಮ ಗ್ರಾಪಂ ವ್ಯಾಪ್ತಿಗೆ ಸಂಬಂಧಿಸಿದ ಎಲ್ಲಾ ವಿಚಾರಗಳು ಗೊತ್ತಿರುತ್ತವೆ. ಆದ್ದರಿಂದ ಎಲ್ಲ ಅಧಿಕಾರಿಗಳು ವಾಸ್ತವ ಅರಿತು ಕೆಲಸ ಮಾಡಿದರೆ ಉತ್ತಮ ಎಂದು ಹೇಳಿದರು.

ಸಭೆಯಲ್ಲಿ ತಾಪಂ ಇಒ ಕೃಷ್ಣ, ಆಡಳಿತಾಧಿಕಾರಿಗಳಾದ ಮಹದೇವಸ್ವಾಮಿ, ಅಶೋಕ್, ಶ್ವೇತಾ, ಮಾಯಪ್ಪ, ಶಿವಣ್ಣ, ಶಿವಕುಮಾರ್, ಜೀವನಕುಮಾರ್, ಸುರೇಶ್, ಪ್ರಕಾಶ್, ರವಿಕುಮಾರ್, ಚಿಕ್ಕಣ್ಣ, ಹರ್ಷದ್ ಪಾಷ, ಯತೀಶ್, ಭವ್ಯ, ಸುಹಾಸ್, ಲೋಹಿತ್ ಬಾಬು ಮತ್ತಿತರರು ಹಾಜರಿದ್ದರು.

ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭ

ತರಗತಿಗಳನ್ನು ಆರಂಭಿಸಲಾಗಿದೆ ಎಂದರು. ಸಂಘಟನೆಯವರ ಜೊತೆಗೆ ಮಾತುಕತೆ ನಡೆಸಿ ಮುಖ್ಯಮಂತ್ರಿ ಅವರ ಜೊತೆ ಚರ್ಚೆ ನಡೆಸಲಾಗುವುದು. ಮುಖ್ಯಮಂತ್ರಿಗಳ ಸಮಯ ನಿಗದಿ ಮಾಡಿ ಶಿಕ್ಷಣ ಇಲಾಖೆಯ ಜೊತೆಗೆ ಮಾತುಕತೆ ನಡೆಸಲಾಗುವುದು. ಎಂಎ, ಬಿಎಡ್, ಪದವಿ ಪಡೆದಿರುವವರು ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕರ್ತೆಯಾಗಿ ಕೆಲಸ ಮಾಡುತ್ತಿದ್ದಾರೆ. ಅಂಗನವಾಡಿ ಕೇಂದ್ರಗಳಲ್ಲಿಯೇ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಉಳಿಸಿಕೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಈ ಹಿಂದೆ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ಬಿಎಲ್‌ಒ ಕೆಲಸಗಳಿಂದ ಅಂಗನವಾಡಿ ಕಾರ್ಯಕರ್ತೆಯರನ್ನು ಕೈಬಿಡುವಂತೆ ಮಾಡಿದ್ದೆ. ಆದರೆ, ಬಿಎಲ್‌ಒ ಕೆಲಸಗಳಿಗೆ ಮತ್ತೊಮ್ಮೆ ಅಂಗನವಾಡಿ ಕಾರ್ಯಕರ್ತೆಯರನ್ನು ನಿಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಇದರಿಂದ ಮುಕ್ತಿಕೊಡಿಸಲು ಪ್ರಯತ್ನಿಸಲಾಗುವುದು ಎಂದರು.

ಪ್ರತಿಭಟನೆ ಕೈಬಿಡಲು ಮನವಿ: ನಾನೊಬ್ಬ ಮಹಿಳೆಯಾಗಿ ಅಂಗನವಾಡಿ ಕಾರ್ಯಕರ್ತೆಯರ ಧ್ವನಿಯಾಗಿ ಕೆಲಸ ಮಾಡುತ್ತಿರುವೆ. ನಾನು ಸಚಿವೆಯಾದ ಬಳಿಕ ಹಲವು ಬೇಡಿಕೆಗಳನ್ನು ಈಡೇರಿಸಿರುವೆ. ಮುಖ್ಯಮಂತ್ರಿಗಳ ಜೊತೆ ಚರ್ಚೆ ನಡೆಸಿ ನಿಮ್ಮ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಹೆದ್ದಾರಿಗಳ ಟೋಲ್ ಶುಲ್ಕ ಹೆಚ್ಚಳ

ಸಮರ್ಪಕ ಹಣ ಇರಿಸುವುದು ಅತ್ಯಗತ್ಯವಾಗಿದೆ. ಹೆದ್ದಾರಿಗಳಲ್ಲಿ ನಗದು ರಹಿತ ಪಾವತಿ ವ್ಯವಸ್ಥೆಯನ್ನು ಉತ್ತೇಜಿಸುವ ಉದ್ದೇಶದಿಂದ ಡಿಜಿಟಲ್ ಪಾವತಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಫಾಸ್ಟ್‌ಟ್ಯಾಗ್ ಹಾಗೂ ಯುಪಿಐ ಮೂಲಕ ಪಾವತಿ ಮಾಡುವ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎನ್ನಲಾಗಿದ್ದು, ಇದು ಟೋಲ್ ಪ್ಲಾಜಾಗಳಲ್ಲಿ ವಾಹನಗಳ ದಟ್ಟಣೆ ಕಡಿಮೆ ಮಾಡಲು ಸಹಾಯ ಮಾಡಲಿದೆ. ಒಟ್ಟಾರೆ, ಈ ದರ ಏರಿಕೆ ಸಾಮಾನ್ಯ ಜನರ ದಿನನಿತ್ಯದ ಪ್ರಯಾಣ ವೆಚ್ಚವನ್ನು ಹೆಚ್ಚಿಸುವ ಸಾಧ್ಯತೆ ಇದೆ. ವಿಶೇಷವಾಗಿ ಪ್ರತಿದಿನ ಹೆದ್ದಾರಿ ಬಳಸುವ ಉದ್ಯೋಗಿಗಳು ಮತ್ತು ವ್ಯಾಪಾರಿಗಳಿಗೆ ಇದರ ಪರಿಣಾಮ ಹೆಚ್ಚು ಬೀರಲಿದೆ.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಸೇರಿ ರಾಜ್ಯದ 9 ಹೆದ್ದಾರಿಗಳಲ್ಲಿ ಟೋಲ್ ದರ ಹೆಚ್ಚಳ: ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಶುಲ್ಕ ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇ ಸೇರಿದಂತೆ 9 ಪ್ರಮುಖ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಶುಲ್ಕಗಳು ಹೆಚ್ಚಾಗುತ್ತಿವೆ.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇ ಪ್ರಾರಂಭವಾದಾಗಿನಿಂದ ಹಲವಾರು ಪರಿಷ್ಕರಣೆಗಳನ್ನು ಕಂಡಿದೆ. ಏಪ್ರಿಲ್ 1, 2023 ರಂದು ಟೋಲ್ ಸಂಗ್ರಹ ಪ್ರಾರಂಭವಾದಾಗಿನಿಂದ ಇದು ನಾಲ್ಕನೇ ಬೆಲೆ ಏರಿಕೆಯಾಗಿದೆ. ಜೂನ್ 2023 ರಲ್ಲಿ ಪರಿಚಯಿಸಲಾದ ಶೇ.22ರಷ್ಟು ತೀವ್ರ ಏರಿಕೆಯನ್ನು ಸಾರ್ವಜನಿಕರ ವಿರೋಧದ ನಂತರ ಹಿಂಪಡೆಯಲಾಯಿತು. ಆದಾಗ್ಯೂ, ಅಧಿಕಾರಿಗಳು ಈಗಾಗಲೇ ಸುಮಾರು ಶೇ.5 ರಷ್ಟು ವಾರ್ಷಿಕ ಹೆಚ್ಚಳವನ್ನು ಘೋಷಿಸಿದ್ದರು, ಇದೀಗ ಮತ್ತೆ ಟೋಲ್ ದರ ಪರಿಷ್ಕರಣೆಯಾಗಿದೆ.

ನೋಂದಣಿ ಕಡ್ಡಾಯ

ನಿಭಾಯಿಸಬೇಕು. ಇದು ತಾತ್ಕಾಲಿಕ ಕ್ರಮವಾದರೂ ಅನಿವಾರ್ಯ ಎಂದು ಸಚಿವರು ತಿಳಿಸಿದರು. ಈ ನಡುವೆ ಕೃಷಿ ಚಟುವಟಿಕೆಗಳು, ಬೀಜ ಸಂಸ್ಕರಣೆ ಮತ್ತು ಔಷಧ ತಯಾರಿಕೆಗಾಗಿ ದಿನಕ್ಕೆ 500 ಸಿಲಿಂಡರ್ ಮೀಸಲಿಡಲಾಗಿದೆ ಎಂದು ಮಾಹಿತಿ ನೀಡಿದ ಸಚಿವರು, ಜೊತೆಗೆ ತುರ್ತು ಪರಿಸ್ಥಿತಿಗಳಿಗೆ 205 ಸಿಲಿಂಡರ್‌ಗಳನ್ನು ಕಾಯ್ದಿರಿಸಲಾಗಿದೆ ಎಂದರು.

ಕೇಂದ್ರ ಸರ್ಕಾರ ಹೆಚ್ಚುವರಿ ಶೇ.20 ರಷ್ಟು ಸಿಲಿಂಡರ್‌ಗಳನ್ನು ಪೂರೈಸಲು ಒಪ್ಪಿಗೆ ನೀಡಿದೆ. ಬ್ಲಾಕ್‌ನಲ್ಲಿ ಮಾರಾಟ ಮಾಡುವುದನ್ನು ಹಾಗೂ ಅಧಿಕೃತವಲ್ಲದ ಮಾರುಕಟ್ಟೆಗೆ ಸಿಲಿಂಡರ್‌ಗಳು ಹೋಗುವುದನ್ನು ತಡೆಯಲು ಕೇಂದ್ರವು ನಿರ್ಣಯ ಕೈಗೊಂಡಿದೆ. ಅದರಂತೆ, ಎಲ್ಲಾ ವಾಣಿಜ್ಯ ಬಳಕೆದಾರರು, ಮುಖ್ಯವಾಗಿ ಹೋಟೆಲ್‌ಗಳು, ಒಂದು ವಾರದೊಳಗೆ ಗೇಲ್ ಕಂಪನಿಯೊಂದಿಗೆ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು. ನೋಂದಣಿ ಇಲ್ಲದಿದ್ದರೆ ಸಿಲಿಂಡರ್ ವಿತರಣೆ ಕಷ್ಟವಾಗಲಿದೆ. ಈ ಕ್ರಮದಿಂದ ಕಾಳಸಂತೆಯಲ್ಲಿ ಮಾರಾಟ ತಡೆಯಬಹುದು ಎಂದು ತಿಳಿಸಿದ್ದಾರೆ.

ಇದರ ಜೊತೆಗೆ ಗೃಹ ಬಳಕೆದಾರರಿಗೂ ಹೊಸ ನಿಯಮ ಜಾರಿಗೆ ತರಲಾಗಿದೆ. ನಗರ ಪ್ರದೇಶಗಳಲ್ಲಿ 25 ದಿನಕ್ಕೊಮ್ಮೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 40 ದಿನಕ್ಕೊಮ್ಮೆ ಮಾತ್ರ ಗ್ಯಾಸ್ ಸಿಲಿಂಡರ್ ಪೂರೈಕೆ ಮಾಡುವುದಾಗಿ ಸಚಿವರು ತಿಳಿಸಿದ್ದಾರೆ. ಇದರಿಂದ ಎಲ್ಲರಿಗೂ ಸಮಾನವಾಗಿ ಪೂರೈಕೆ ಮಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದ್ದಾರೆ.

ಇತರೆ ಇಂಧನ ಮೂಲ: ಇದೇ ವೇಳೆ ಸಚಿವರು ಪರ್ಯಾಯ ಇಂಧನ ಬಳಕೆಯ ಅಗತ್ಯವನ್ನು ಒತ್ತಿ ಹೇಳಿದ್ದು. ಮರದ ಇಂಧನ, ವಿದ್ಯುತ್ ಆಧಾರಿತ ಇಂಡಕ್ಷನ್ ಸ್ಟವ್‌ಗಳು, ಬಯೋಗ್ಯಾಸ್ ಮತ್ತು ಸೌರಶಕ್ತಿ ಬಳಸುವಂತೆ ಸಲಹೆ ನೀಡಿದ್ದಾರೆ.

ನಾವು ಸುಮಾರು ಶೇ.70 ತೈಲಕ್ಕಾಗಿ ವಿದೇಶಗಳ ಮೇಲೆ ಅವಲಂಬಿತವಾಗಿದ್ದೇವೆ. ಇಂತಹ ಸಂಕಷ್ಟಗಳು ನಮ್ಮ ಸ್ವಾವಲಂಬನೆ ಅಗತ್ಯವನ್ನು ತೋರಿಸುತ್ತವೆ ಎಂದು ಹೇಳಿದರು. ಇದಕ್ಕೂ ಮೊದಲು ಮಾತನಾಡಿದ ಇವಾನ್ ಡಿ'ಸೋಜಾ, ಸರ್ಕಾರವು ಅನಿಲ ಕೊರತೆಯನ್ನು ಗಮನದಲ್ಲಿಟ್ಟುಕೊಂಡು ಹೋಟೆಲ್‌ಗಳಿಗೆ ಗ್ಯಾಸ್ ಪೂರೈಕೆಗೆ ವ್ಯವಸ್ಥೆ ಮಾಡುವಂತೆ ಒತ್ತಾಯಿಸಿದರು. ಗ್ಯಾಸ್ ಕೊರತೆಯಿಂದ ಅನೇಕ ಹೋಟೆಲ್‌ಗಳು ಕಾರ್ಯಾಚರಣೆ ಕಡಿಮೆ ಮಾಡಿದ್ದು, ಗ್ರಾಹಕರ ನಷ್ಟದ ಭೀತಿ ಎದುರಿಸುತ್ತಿವೆ ಎಂದು ಹೇಳಿದರು. ಸರ್ಕಾರಕ್ಕೆ ಗ್ಯಾಸ್ ಒದಗಿಸಲು ಸಾಧ್ಯವಾಗದಿದ್ದರೆ ಕನಿಷ್ಟ ಸೌದೆಗಳನ್ನಾದರೂ ಒದಗಿಸಲಿ. ಮಾರುಕಟ್ಟೆಯಲ್ಲಿ ಸೌದೆಗಳು ಕೂಡ ಸುಲಭವಾಗಿ ಲಭ್ಯವಿಲ್ಲ ಎಂದು ಗಮನ ಸೆಳೆದರು. ಸದಸ್ಯರು ಎತ್ತಿದ ಕಳವಳಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಪರ್ಯಾಯ ಇಂಧನ ಮೂಲಗಳು ಮತ್ತು ಸ್ವಾವಲಂಬನೆಯ ಅಗತ್ಯವನ್ನು ಒತ್ತಿ ಹೇಳಿದರು.

ಮಹಾ ದ್ರೋಹ ಆಗಿರುವುದು ನಮಗೆ

ನಿಜವಾಗಿಯೂ ಕಾಂಗ್ರೆಸ್ ಪಕ್ಷದಿಂದ ಮಹಾ ದ್ರೋಹ ಆಗಿರುವುದು ನಮಗೆ, ನಮ್ಮ ಪಕ್ಷಕ್ಕೆ ಎಂದು ಎಂದು ಹರಿಹಾಯ್ದರು. ಕಾಂಗ್ರೆಸ್ ಪಕ್ಷವು ನಮ್ಮ ಪಕ್ಷಕ್ಕೆ ಒಂದಲ್ಲ, ಎರಡಲ್ಲ, ಅನೇಕ ಬಾರಿ ದ್ರೋಹ ಮಾಡಿದೆ. ಅದರ ಬಗ್ಗೆ ನಾನು ಸಾಕ್ಷಿ ಸಹಿತವಾಗಿ ಮಾತನಾಡ ಬಲ್ಲೆ. ಅದೆಲ್ಲವನ್ನು ಮರೆಮಾಚಲು ಖರ್ಗೆ ಅವರು ನನ್ನ ವಿಷಯ ಎಳೆದು ತಂದಿದ್ದಾರೆ. ಅದಕ್ಕೆ ನಾನು ಉತ್ತರ ನೀಡಬೇಕಿದೆ ಎಂದು ಗುಡುಗಿದರು.

ಈ ವೇಳೆ ತಮ್ಮ ಕಾಲದ ಕರ್ನಾಟಕ ರಾಜಕಾರಣ ವನ್ನು ಮೆಲುಕು ಹಾಕಿದ ದೇವೇಗೌಡರು, ಮುಖ್ಯ ಮಂತ್ರಿಗಳಾಗಿದ್ದ ನಿಜಲಿಂಗಪ್ಪ, ದೇವರಾಜ ಅರಸು, ಬಂಗಾರಪ್ಪ ಅವರಿಗೆ ಏನಾಯಿತು ಎಂಬುದು ಮಲ್ಲಿಕಾರ್ಜುನ ಖರ್ಗೆ ಅವರಿಗೂ ಗೊತ್ತಿದೆ. ಅವರು ಹೇಗೆ ಅಧಿಕಾರ ಕಳೆದುಕೊಂಡರು ಎಂಬುದನ್ನು ಖರ್ಗೆ ಅವರು ಹೇಳಬೇಕಾಗುತ್ತದೆ. ಅವರೆಲ್ಲರೂ ಅಧಿಕಾರ ಕಳೆದುಕೊಂಡಿದ್ದಕ್ಕೆ ನಾವು ಸಾಕ್ಷಿಗಳಾಗಿ ದ್ದೆವು ಎಂದು ಟೀಕಾ ಪ್ರಹಾರ ನಡೆಸಿದರು. ಮಲ್ಲಿಕಾರ್ಜುನ ಖರ್ಗೆ ಒಳ್ಳೆಯ ವ್ಯಕ್ತಿ. ಅವರನ್ನು ಮುಖ್ಯಮಂತ್ರಿ ಸ್ಥಾನದಲ್ಲಿ ನೋಡಬೇಕೆಂದು ನಾವೆಲ್ಲರೂ ಆಶಿಸಿದ್ದೆವು. ಆದರೆ, ಅವರ ಸ್ವಂತ ಪಕ್ಷವೇ ಅವರನ್ನು ಸಿಎಂ ಆಗಲು ಬಿಡಲಿಲ್ಲ ಎಂದು ಇದೇ ವೇಳೆ ಕುಟುಕಿದರು.

ಸಿಎಂ ಆಗದಂತೆ ಕಾಂಗ್ರೆಸ್ ತಡೆಯಿತು: 2018ರಲ್ಲಿ ಕಾಂಗ್ರೆಸ್ ಪಕ್ಷದ ಜತೆ ನಮ್ಮ ಪಕ್ಷ ಮೈತ್ರಿ ಹೊಂದಿದ್ದ ಕಾರಣಕ್ಕೆ ಹೆಚ್.ಡಿ.ಕುಮಾರಸ್ವಾಮಿ ಅವರು ಕರ್ನಾಟಕದ ಸಿಎಂ ಆಗದಂತೆ ತಡೆಯಿತು. ಆಗ ಮತ್ತೆ ಮನೆ ಬಾಗಿಲಿಗೆ ಬಂದು ಮೈತ್ರಿ ಹಸ್ತ ಚಾಚಿದ ಕಾಂಗ್ರೆಸ್, ಕುಮಾರಸ್ವಾಮಿ ಅವರನ್ನು ಸಿಎಂ ಮಾಡುವಂತೆ ಒತ್ತಡ ಹೇರಿತು. ಮತ್ತೆ ಒಂದೇ ವರ್ಷದಲ್ಲಿ ಕಾಂಗ್ರೆಸ್ ನಮಗೆ ದ್ರೋಹ ಬಗೆಯಿತು. ಈ ಎಲ್ಲಾ ವಿವರಗಳು ಖರ್ಗೆ ಅವರಿಗೆ ಗೊತ್ತಿವೆ ಎಂದು ಸ್ಪಷ್ಟಪಡಿಸಿದರು.

ಅತ್ಯಂತ ಕಠಿಣ ಸವಾಲುಗಳ ಸೃಷ್ಟಿಸಿದೆ

ಕಾರ್ಯತಂತ್ರದ ಪೆಟ್ರೋಲಿಯಂ ನಿಕ್ಷೇಪಗಳನ್ನು ನಿರ್ಮಿಸಿದೆ, ಇದನ್ನು 6.5 ಮಿಲಿಯನ್ ಟನ್‌ಗಳಿಗಿಂತ ಹೆಚ್ಚು ವಿಸ್ತರಿಸುವ ಯೋಜನೆ ಇದೆ. ಸಂಘರ್ಷ ವಲಯವು ಪ್ರಮುಖ ವ್ಯಾಪಾರ ಮಾರ್ಗವಾಗಿರುವುದರಿಂದ ಮತ್ತು ಸುಮಾರು ಒಂದು ಕೋಟಿ ಭಾರತೀಯರು ಗಲ್ಫ್ ದೇಶಗಳಲ್ಲಿ ವಾಸಿಸುತ್ತಿದ್ದಾರೆ ಮತ್ತು ಕೆಲಸ ಮಾಡುತ್ತಿದ್ದಾರೆ ಎಂಬ ಕಾರಣದಿಂದಾಗಿ ಈ ಪ್ರದೇಶವು ಮಹತ್ವದ್ದಾಗಿದೆ ಎಂದು ಪ್ರಧಾನಿ ಸದನಕ್ಕೆ ತಿಳಿಸಿದರು.

ಭಾರತವು ಸಂಘರ್ಷದಿಂದ ಪ್ರಭಾವಿತವಾಗಿರುವ ದೇಶಗಳೊಂದಿಗೆ ವ್ಯಾಪಕವಾದ ವ್ಯಾಪಾರ ಸಂಬಂಧವನ್ನು ಹೊಂದಿದೆ ಮತ್ತು ಈ ಪ್ರದೇಶವು ನಮ್ಮ ಜಾಗತಿಕ ವ್ಯಾಪಾರಕ್ಕೆ ಪ್ರಮುಖ ಮಾರ್ಗವಾಗಿದೆ. ನಮ್ಮ ಕಚ್ಚಾ ತೈಲ ಮತ್ತು ಅನಿಲ ಅಗತ್ಯಗಳಲ್ಲಿ ಗಮನಾರ್ಹ ಭಾಗವನ್ನು ಈ ಪ್ರದೇಶದಿಂದಲೇ ಪೂರೈಸಲಾಗುತ್ತದೆ. ಸುಮಾರು ಒಂದು ಕೋಟಿ ಭಾರತೀಯರು ಗಲ್ಫ್ ದೇಶಗಳಲ್ಲಿ ವಾಸಿಸುತ್ತಿದ್ದಾರೆ ಮತ್ತು ಕೆಲಸ ಮಾಡುತ್ತಿದ್ದಾರೆ ಎಂಬುದಂತೂ ಮುಖ್ಯ. ಈ ನೀರಿನಲ್ಲಿ ಕಾರ್ಯನಿರ್ವಹಿಸುವ ವಾಣಿಜ್ಯ ಹಡಗುಗಳಲ್ಲಿ ಹೆಚ್ಚಿನ ಸಂಖ್ಯೆಯ ಭಾರತೀಯ ಸಿಬ್ಬಂದಿ ಇದ್ದಾರೆ. ಈ ವಿವಿಧ ಕಾರಣಗಳಿಂದಾಗಿ, ಭಾರತದ ಕಳವಳಗಳು ಸ್ವಾಭಾವಿಕವಾಗಿ ಹೆಚ್ಚಿವೆ. ಆದ್ದರಿಂದ, ಸಂಸತ್ತಿನಿಂದ ಈ ಬಿಕ್ಕಟ್ಟಿನ ಬಗ್ಗೆ ಏಕೀಕೃತ ಧ್ವನಿ ಮತ್ತು ಒಮ್ಮತವು ಜಗತ್ತನ್ನು ತಲುಪುವುದು ಅತ್ಯಗತ್ಯ ಎಂದು ಅವರು ಹೇಳಿದರು.

ಸಂಘರ್ಷದ ಸಮಯದಲ್ಲಿ ಭಾರತೀಯರ ಭದ್ರತೆಯು ದೇಶದ ಪ್ರಮುಖ ಆದ್ಯತೆಯಾಗಿತ್ತು ಎಂದು ಮೋದಿ ಹೇಳಿದ್ದು, ಪೀಡಿತ ಪ್ರದೇಶದಲ್ಲಿನ ಭಾರತೀಯ ಕಾರ್ಯಾಚರಣೆಗಳು ತನ್ನ ನಾಗರಿಕರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿವೆ ಎಂದು ಹೇಳಿದರು.

3.75 ಲಕ್ಷ ಭಾರತೀಯರ ರಕ್ಷಣೆ: ಯುದ್ಧ ಪ್ರಾರಂಭವಾದಾಗಿನಿಂದ ಸುಮಾರು 3.75 ಲಕ್ಷ ಭಾರತೀಯರು ಸುರಕ್ಷಿತವಾಗಿ ಮನೆಗೆ ಮರಳಿದ್ದಾರೆ ಎಂದು ಪ್ರಧಾನಿ ಹೇಳಿದರು. ಯುದ್ಧಪೀಡಿತ ದೇಶಗಳಲ್ಲಿ ಸಿಬಿಎಸ್‌ಇ 10 ಮತ್ತು 12 ನೇ ತರಗತಿಯ ಬೋರ್ಡ್ ಪರೀಕ್ಷೆಗಳನ್ನು ರದ್ದುಗೊಳಿಸಿದೆ ಎಂದು ಅವರು ಹೇಳಿದರು. ಇರಾನ್‌ನಿಂದ ಇಲ್ಲಿಯವರೆಗೆ ಸುಮಾರು 1,000 ಭಾರತೀಯರು ಸುರಕ್ಷಿತವಾಗಿ ಮರಳಿದ್ದಾರೆ, ಅವರಲ್ಲಿ 700 ಕ್ಕೂ ಹೆಚ್ಚು ಜನರು ವೈದ್ಯಕೀಯ ವಿದ್ಯಾರ್ಥಿಗಳಾಗಿದ್ದಾರೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಸಿಬಿಎಸ್‌ಇ ಗಲ್ಫ್ ರಾಷ್ಟ್ರಗಳ ಶಾಲೆಗಳಲ್ಲಿ 10 ಮತ್ತು 12 ನೇ ತರಗತಿ ಪರೀಕ್ಷೆಗಳನ್ನು ರದ್ದುಗೊಳಿಸಿದೆ.

5 ದಿನ ತಾತ್ಕಾಲಿಕ ಸ್ಥಗಿತ

ಮಧ್ಯಸ್ಥಿಕೆ ಮುಂದುವರೆದಿದ್ದು, ಯುದ್ಧವನ್ನು ಕೊನೆಗೊಳಿಸುವ ಮತ್ತು ಎಲ್ಲಾ ಬಾಕಿ ಇರುವ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವ ಬಗ್ಗೆ ಚರ್ಚೆ ನಡೆಯುತ್ತಿದೆ. ಶೀಘ್ರದಲ್ಲಿ ಉತ್ತರ ದೊರೆಯುವ ನಿರೀಕ್ಷೆಯಿದೆ ಎಂದು ಮೂಲಗಳು ಹೇಳಿವೆ ಈಜಿಪ್ಟ್‌ನ ವಿದೇಶಾಂಗ ಸಚಿವ ಬದರ್ ಅಬ್ದೆಲಟ್ಟಿ ಭಾನುವಾರ ಪಾಕಿಸ್ತಾನ, ಟರ್ಕಿ ಮತ್ತು ಕತಾರ್‌ನ ವಿದೇಶಾಂಗ ಸಚಿವರೊಂದಿಗೆ ಸಭೆ ನಡೆಸಿದ್ದಾರೆ ಎಂದು ಈಜಿಪ್ಟ್ ವಿದೇಶಾಂಗ ಸಚಿವಾಲಯ ತಿಳಿಸಿದೆ. ಐದು ದಿನಗಳ ಕಾಲ ಇರಾನ್ ಮೇಲಿನ ದಾಳಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ ನಂತರ ಈ ಬೆಳವಣಿಗೆಯಾಗಿದೆ. ಆದಾಗ್ಯೂ ಇರಾನ್‌ನ ವಿದೇಶಾಂಗ ಸಚಿವಾಲಯವು ಅಂತಹ ಮಾತುಕತೆಗಳ ವರದಿಗಳನ್ನು ನಿರಾಕರಿಸಿದೆ,

ಮರ್ಯಾದಾ ಹತ್ಯೆ ತಡೆ, ಜ್ಞಾನ ಭಂಡಾರ ಮಸೂದೆ ಅಂಗೀಕಾರ

ಬೆಂಗಳೂರು: ಕರ್ನಾಟಕ ವಿಧಾನ ಸಭೆಯು ಸೋಮವಾರ ಎರಡು ಪ್ರಮುಖ ಮಸೂದೆಗಳನ್ನು ಅಂಗೀಕರಿಸಿದ್ದು, ಇದರಲ್ಲಿ ಮರ್ಯಾದಾ ಹತ್ಯೆ ತಡೆ ಮಸೂದೆ, ಜ್ಞಾನ ಭಂಡಾರ ಮಸೂದೆಗಳು ಸೇರಿವೆ.


ಈ ಎರಡು ಮಸೂದೆಗಳಲ್ಲಿ ಕರ್ನಾಟಕ ಮದುವೆಯಲ್ಲಿ ಏಕತೆ, ಸ್ವಾತಂತ್ರ್ಯ, ಘನತೆ ಮತ್ತು ಸಂಪ್ರದಾಯದ ಹೆಸರಿನಲ್ಲಿ ಅಪರಾಧಗಳ ನಿಷೇಧ ಮಸೂದೆ (ಇವ ನಮ್ಮವ ಇವ ನಮ್ಮವ) 2026 ಸೇರಿವೆ. ಸರ್ಕಾರವು ಎರಡೂ ಕ್ರಮಗಳು ಸಾಮಾಜಿಕ ಸುಧಾರಣೆ ಮತ್ತು ಪರಂಪರೆಯ ಸಂರಕ್ಷಣೆಯ ಗುರಿಯನ್ನು ಹೊಂದಿವೆ ಎಂದು ಪ್ರತಿಪಾದಿಸಿದೆ.

ವಿವಾಹಕ್ಕೆ ಸಂಬಂಧಿಸಿದ ಮಸೂದೆಯನ್ನು ಮಂಡಿಸುತ್ತಾ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್, ಈ ಶಾಸನವು ಗೌರವ ಅಪರಾಧಗಳಂತಹ ಸಾಮಾಜಿಕ ಸಮಸ್ಯೆಗಳನ್ನು ಪರಿಹರಿಸಲು ಮತ್ತು ಸಮಾಜದಲ್ಲಿ ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸಲು ಉದ್ದೇಶಿಸಲಾಗಿದೆ. ಇದು ಸಾಮಾಜಿಕ ಬದಲಾವಣೆಯನ್ನು ತರುವ ಮತ್ತು ಒಂದು ರೀತಿಯಲ್ಲಿ ಸಾಮಾಜಿಕ ಕ್ರಾಂತಿಯನ್ನು ಸಕ್ರಿಯಗೊಳಿಸುವ ಗುರಿಯನ್ನು ಹೊಂದಿರುವ ಮಸೂದೆಯಾಗಿದೆ ಎಂದು ಹೇಳಿದರು.

ಕರ್ನಾಟಕ ಜ್ಞಾನ ಭಂಡಾರ ಮಸೂದೆ: ಅಂತೆಯೇ ಕರ್ನಾಟಕ ಜ್ಞಾನ ಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟಲೀಕರಣ ಕಾಯ್ದೆ, 2026 ಅನ್ನು ಕೂಡ ಸದನವು ಇಂದು ಅಂಗೀಕರಿಸಿತು. ರಾಜ್ಯಾದ್ಯಂತ ಹರಡಿರುವ ಪ್ರಾಚೀನ ಹಸ್ತಪ್ರತಿಗಳನ್ನು ಸಂರಕ್ಷಿಸುವ ತುರ್ತು ಅಗತ್ಯವನ್ನು ಸಚಿವರು ಒತ್ತಿ ಹೇಳಿದರು.

ಬಡವರಿಗೆ ನೀಡುವ ಸಬ್ಸಿಡಿಯ ಕೀಳಾಗಿ ಭಾವಿಸಬೇಡಿ... ಬಿಂಬಿಸಬೇಡಿ...

ಬೆಂಗಳೂರು, ಮಾ.23(ಕೆಎಂಶಿ)– ಸಮಾಜದಲ್ಲಿ ತೀರಾ ಕೆಳ ಹಂತದಲ್ಲಿರುವ ಬಡಜನರಿಗೆ ನೀಡುವ ಸಬ್ಸಿಡಿ ತುಚ್ಛಗೊಳಿಸುವ, ಅಪರಾಧೀಕರಿಸುವ ಕೃತ್ಯ ನಿಲ್ಲಿಸಿ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿಂದು ವಿರೋಧ ಪಕ್ಷದ ನಾಯಕರಲ್ಲಿ ಮನವಿ ಮಾಡಿದರು.



ಬಜೆಟ್ ಮೇಲಿನ ಚರ್ಚೆ ವೇಳೆ ವಿ.ಸುನೀಲ್‌ಕುಮಾರ್ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಬಡವರಿಗೆ ನೀಡುವ ಸಬ್ಸಿಡಿ ಭಾರತದಂತೆ ಬೇರೆ ದೇಶದಲ್ಲೂ ತುಚ್ಛವಾಗಿ ಕಾಣಲಾಗುತ್ತೆ. ಆದರೆ, ಕಳೆದ 150 ವರ್ಷಗಳ ಆರ್ಥಿಕ ಚಿಂತನೆಗಳ ಕಡೆಗೆ ಒಮ್ಮೆ ಗಮನಹರಿಸಿದರೆ ದೇಶವನ್ನು ಆರ್ಥಿಕ ಹಿಂಜರಿತದಿಂದ ಪ್ರಗತಿಪಥದತ್ತ ಮುನ್ನಡೆಸಲು ಬಡವರಿಗೆ ಸಬ್ಸಿಡಿ ನೀಡುವ ಮೂಲಕ ಬೇಡಿಕೆ ವಲಯವನ್ನು ಬಲಪಡಿಸುವುದೊಂದೇ ಪರಿಹಾರವಾಗಿ ಕಂಡುಬಂದಿದೆ ಎಂದರು.

ಸ್ವಾಭಾವಿಕವಾಗಿ ಎರಡು ರೀತಿಯ ಆರ್ಥಿಕ ಚಿಂತನೆಗಳು ಕಾಣಿಸುತ್ತವೆ. ಮೊದಲನೆಯದು ಉತ್ಪಾದಕ ವಲಯದ ಅಭಿವೃದ್ಧಿಗೆ ಸಹಾಯ ಮಾಡುವುದು. ಮತ್ತೊಂದು ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಿಸಲು ಜನಸಾಮಾನ್ಯರ ಆರ್ಥಿಕ ಸ್ಥಿತಿ, ಕೊಳ್ಳುವ ಶಕ್ತಿ ಹೆಚ್ಚಿಸುವುದು. ಉತ್ಪಾದನಾ ವಲಯಕ್ಕೆ ತೆರಿಗೆ ಕಡಿತ ಮಾಡುವ ಮೂಲಕ ನೇರವಾಗಿ ಸಹಾಯ ಮಾಡಬಹುದು. ಇದರಿಂದ ಉಳಿತಾಯ ಹೆಚ್ಚಾಗಿ ಹಣ ಮತ್ತೆ ಉತ್ಪಾದನಾ ವಲಯದಲ್ಲಿ ಹೂಡಿಕೆ ಮಾಡಲು ಅನುಕೂಲವಾಗುತ್ತದೆ.

ಅದೇ ರೀತಿ ಜನರಿಗೆ ಕನಿಷ್ಟ ಆದಾಯ ಲಭ್ಯವಾಗುವುದನ್ನು ಖಾತರಿಪಡಿಸಿ, ಜೀವನ ಮಾಡಲು ಅವಕಾಶ ಮಾಡಿಕೊಡುವ ಮೂಲಕ ಆರ್ಥಿಕತೆ ವೃದ್ಧಿಸಬಹುದಾಗಿದೆ.

ಒಬ್ಬ ವ್ಯಕ್ತಿ ಕೈಗೆ ಒಂದು ರೂ. ಕೊಟ್ಟರೆ ಆ ಹಣ ಮಾರುಕಟ್ಟೆಯಲ್ಲಿ ಕನಿಷ್ಠ ಐದು ಬಾರಿ ಮರು ಚಲಾವಣೆಯಾಗುತ್ತದೆ, ಈ ಮೂಲಕ ಐದರಷ್ಟು ಆರ್ಥಿಕತೆ ಸೃಷ್ಟಿಸುತ್ತದೆ. ಪರಿಣಾಮ ಆರ್ಥಿಕತೆಯೂ ವೃದ್ಧಿಸುತ್ತದೆ.

ಬೇಡಿಕೆ ಜಾಸ್ತಿಯಾದಾಗ ಉತ್ಪಾದನಾ ವಲಯಕ್ಕೂ ಅನುಕೂಲವಾಗುತ್ತದೆ. ಉತ್ಪಾದನಾ ವಲಯ ಬಲಪಡಿಸಿ ಬೇಡಿಕೆ ಇಲ್ಲವಾದರೆ ಆರ್ಥಿಕ ಅಭಿವೃದ್ಧಿಯೂ ಕುಂಠಿತಗೊಳ್ಳುತ್ತದೆ. ಬೇಡಿಕೆ ಇಲ್ಲದೆ ಹೂಡಿಕೆ ಹೇಗೆ ಸಾಧ್ಯ. ಸಮಾಜದ ಕೆಳ ಹಂತದಲ್ಲಿರುವ ಬಡವರಿಗೆ ನೀಡುವ ಸಬ್ಸಿಡಿ ಅವರ ಉಳಿತಾಯ ಖಾತೆಯಲ್ಲಿ ಜಮೆಯಾಗುವುದಿಲ್ಲ ಬದಲಾಗಿ ಪ್ರತಿಯೊಂದು ರೂಪಾಯಿಯೂ ಪುನಃ ಮಾರುಕಟ್ಟೆಗೆ ಹಿಂತಿರುಗುತ್ತದೆ. ಆ ಮೂಲಕ ಆರ್ಥಿಕತೆ ಮತ್ತಷ್ಟು ಬೆಳೆಯುತ್ತದೆ.

ಇದು ನೂರಾರು ವರ್ಷಗಳ ಇತಿಹಾಸವಿರುವ ಜಾನ್ ಮೇನಾರ್ಡ್ ಕೇನ್ಸ್ ಪ್ರತಿಪಾದಿಸಿದ ಆರ್ಥಿಕತೆ. ಯಾವ್ಯಾವ ದೇಶಗಳು ಆರ್ಥಿಕವಾಗಿ ಹಿಂದುಳಿದಿದ್ದವೋ ಆ ಎಲ್ಲಾ ದೇಶಗಳು ಈ ಸಿದ್ಧಾಂತವನ್ನೇ ಅಳವಡಿಸಿಕೊಂಡು ಬೇಡಿಕೆ ವಲಯದಲ್ಲಿ ಸುಸ್ಥಿರ ಅಭಿವೃದ್ಧಿ ಸಾಧಿಸುವ ಮೂಲಕ ಆರ್ಥಿಕ ಹಿಂಜರಿತದಿಂದ ಪ್ರಗತಿಯ ಪಥದತ್ತ ಹೆಜ್ಜೆ ಇಟ್ಟಿವೆ ಆದ್ದರಿಂದ ಸಬ್ಸಿಡಿ ವಿಚಾರ ತುಚ್ಛಗೊಳಿಸುವ, ಅಪರಾಧೀಕರಿಸುವುದನ್ನು ನಿಲ್ಲಿಸಿ ಎಂದರು. ಕರ್ನಾಟಕ ತಲಾ ಆದಾಯ ಹಾಗೂ ಜಿಎಸ್ಟಿ ತೆರಿಗೆ ಸಂಗ್ರಹದಲ್ಲಿ ದೇಶದಲ್ಲೇ ಮೊದಲ ಸ್ಥಾನದಲ್ಲಿರಲು ಸಬ್ಸಿಡಿಗಳೇ ಕಾರಣ, ಕೇಂದ್ರ ಸರ್ಕಾರ ಇತ್ತೀಚೆಗೆ ಜಿಎಸ್ಟಿ ತೆರಿಗೆ ಸರಳೀಕರಣಗೊಳಿಸಿದಾಗ ಇತರೆ ಎಲ್ಲಾ ರಾಜ್ಯಗಳಿಗೂ ಹೋಲಿಸಿದರೆ ಕರ್ನಾಟಕದಲ್ಲಿ ಜಿಎಸ್ಟಿ ತೆರಿಗೆ ಸಂಗ್ರಹ ಅಷ್ಟೇನೂ ಕೊರತೆಯಾಗಿಲ್ಲ.

ಬಲಿದಾನ ದಿವಸ್ ಆಚರಣೆ



ಸ್ವಾತಂತ್ರ್ಯ ಹೋರಾಟಗಾರರಾದ ಭಗತ್‌ಸಿಂಗ್, ರಾಜ್‌ಗುರು, ಸುಖ್‌ದೇವ್ ಅವರ 90ನೇ ವರ್ಷದ ಬಲಿದಾನ ದಿನವನ್ನು ಸೋಮವಾರ ಆಚರಿಸಲಾಯಿತು.

ಮೈಸೂರು, ಮಾ.23(ಎಸ್‌ಪಿಎನ್)– ಮೈಸೂರಿನ ಜೆಎಲ್‌ಬಿ ರಸ್ತೆಯ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಲ್ಲಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್‌ಸಿಂಗ್, ರಾಜ್‌ಗುರು, ಸುಖ್‌ದೇವ್ ಅವರ 90ನೇ ವರ್ಷದ ಬಲಿದಾನ ದಿನವನ್ನು ಹಿಂದೂ ಜಾಗರಣ ವೇದಿಕೆ ವತಿಯಿಂದ ಸೋಮವಾರ ಆಚರಿಸಲಾಯಿತು.

ಹಿಂದೂ ಜಾಗರಣ ವೇದಿಕೆಯ ವಿದ್ಯಾರ್ಥಿ ಪ್ರಮುಖ್ ಶ್ರೀನಿಧಿ ನೇತೃತ್ವದಲ್ಲಿ ಇನ್ಕಿಲಾಬ್ ಜಿಂದಾಬಾದ್, ಭಾರತ್ ಮಾತಾಕೀ ಜೈ, ವಂದೇ ಮಾತರಂ ಹಾಗೂ ಭಗತ್‌ಸಿಂಗ್, ರಾಜ್‌ಗುರು, ಸುಖ್‌ದೇವ್ ಅಮರ್ ರಹೇ ಅಮರ್ ರಹೇ' ಮುಂತಾದ ಘೋಷಣೆಗಳನ್ನು ಕೂಗಿ ಬಲಿದಾನ ದಿವಸ್ ಆಚರಿಸಿದರು.

ಬಳಿಕ ವಿದ್ಯಾರ್ಥಿ ಪ್ರಮುಖ್ ಶ್ರೀನಿಧಿ ಮಾತನಾಡಿ, ಇಂದಿನ ಯುವಕರಿಗೆ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ರಾಜ್‌ಗುರು, ಸುಖ್‌ದೇವ್ ಅವರಂತಹ ಮಹಾಪುರುಷರು ಆದರ್ಶರನ್ನಾಗಿ ಸ್ವೀಕರಿಸಬೇಕು ಮತ್ತು ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಮುಂದಿನ ಜೀವನ ರೂಪಿಸಿಕೊಳ್ಳಬೇಕು ಎಂದು ತಿಳಿಸಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷರ ವಿರುದ್ಧ ಅನೇಕ ಯುವಕರ ಬಲಿದಾನವಾಗಿದೆ. ಅವರ ತ್ಯಾಗ–ಬಲಿದಾನದ ಸಂಕೇತವಾಗಿ ಇಂದು 90ನೇ ಬಲಿದಾನ ದಿವಸ್ ಆಚರಣೆ ಮಾಡಲಾಗುತ್ತಿದೆ. ಈ ಕುರಿತು ಎಲ್ಲಾ ಯುವಕರಲ್ಲಿ ಜಾಗೃತಿ ಮೂಡಿಸಿ ದೇಶ ಕಟ್ಟಲು ಮುಂದಾಗಬೇಕು ಎಂದರು.

ಈ ವೇಳೆ ಹಿಂದೂ ಜಾಗರಣ ವೇದಿಕೆಯ ಸದಸ್ಯರಾದ ಮಾಜಿ ಉಪಮೇಯರ್ ಶೈಲೇಂದ್ರ, ಸಂದೇಶ್, ರಾಜನ್, ಪ್ರೀತಮ್, ಸಂಜಯ್, ರಾಕೇಶ್‌ಭಟ್, ಪರಮೇಶ್‌ಗೌಡ, ಉಮೇಸ್, ಪ್ರಮೋದ್‌ಗೌಡ, ಅಭಿಷೇಕ್‌ಗೌಡ, ಅನೂಪ್, ದರ್ಶನ್, ಟಿ.ಎಸ್.ಅರುಣ್, ಚಂದನ್‌ಗೌಡ, ವಿನೋದ್ ಅರಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಾಮಾಜಿಕ ಸಮಾನತೆ ಹರಿಕಾರನಿಗೆ ಮೈಸೂರು ಜಿಲ್ಲಾಡಳಿತದ ತಾತ್ಸಾರ; ಅಭಿಮಾನಿಗಳ ಬೇಸರ

ಮೈಸೂರು, ಮಾ.23(ಎಂಕೆ)– ಅಹಿಂದ ನಾಯಕ, ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರಿಗೆ ತಮ್ಮ ತವರು ಜಿಲ್ಲೆ, ಮೈಸೂರು ಜಿಲ್ಲಾಡಳಿತದಿಂದಲೇ ಅಪಚಾರವಾಗುತ್ತಿದೆ!?

ಮೈಸೂರಿನ ಬನ್ನೂರು ರಸ್ತೆಯಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕರ್ನಾಟಕ ಸಂಭ್ರಮ –50ರ ಸವಿನೆನಪಿಗಾಗಿ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ 2025ರ ನ.3ರಂದು ಉದ್ಘಾಟಿಸಿದ್ದ 12 ಅಡಿ ಎತ್ತರದ ಕಂಚಿನ ಪ್ರತಿಮೆಯನ್ನು ಸಂಪೂರ್ಣವಾಗಿ ಕಡೆಗಣಿಸಿರುವ ಜಿಲ್ಲಾಡಳಿತ, ಮೊದಲಿಗೆ ಡಿ.ದೇವರಾಜ ಅರಸು ಅವರ ಹೋಲಿಕೆಯಂತೆ ಪ್ರತಿಮೆ ರೂಪಿಸುವುದರಲ್ಲಿ ಎಡವಿತ್ತು. ಮತ್ತೆ ಈಗ ಅರಸು ಅವರ ಹೆಸರಿನ ನಾಮ ಫಲಕ ಕಳಚಿ ಬಿದ್ದು ತಿಂಗಳಾದರೂ ಸರಿಪಡಿಸದೆ ನಿರ್ಲಕ್ಷಿಸುವ ಮೂಲಕ ಧೀಮಂತ ನಾಯಕರ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡಿದೆ.

92 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾದ ಈ ಪ್ರತಿಮೆಯನ್ನು ಕಲಾವಿದ ಸೂರ್ಯ ಪ್ರಕಾಶ್ ಕೆತ್ತಿದ್ದಾರೆ. ಪ್ರತಿಮೆಯ ಕೆಳಭಾಗದಲ್ಲಿ ಅರಸು ಅವರ ಸಂದೇಶಗಳು ಹಾಗೂ ಅವರ ಹೆಸರಿನ ನಾಮ ಫಲಕಗಳನ್ನು ಅಳವಡಿಸಲಾಗಿತ್ತು. ಆದರೆ, ಪ್ರತಿಮೆ ಉದ್ಘಾಟನೆಗೊಂಡು ಇನ್ನೂ ಒಂದು ವರ್ಷ ಪೂರ್ಣಗೊಂಡಿಲ್ಲ. ಅಷ್ಟರಲ್ಲೇ ಪ್ರತಿಮೆ ಸುತ್ತಲಿನ ನಾಮ ಫಲಕಗಳು ಕಳಚಿ ಬಿದ್ದಿವೆ. ಪ್ರತಿಮೆ ಡಿ.ದೇವರಾಜ ಅರಸು ಅವರಂತೆ ಕಾಣುತ್ತಿಲ್ಲ ಎಂದು ಸ್ವತಃ ಅರಸು ಅವರ ಕುಟುಂಬಸ್ಥರೇ ಆಕ್ಷೇಪ ವ್ಯಕ್ತಪಡಿಸಿದ್ದರು. ಸಿಎಂ ಸಿದ್ದರಾಮಯ್ಯ ಕೂಡ ಪ್ರತಿಮೆ ನಿರ್ಮಾಣ ಕಾರ್ಯ ಸರಿಯಾಗಿ ಆಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದರು. ಕೆಲ ಅಹಿಂದ ನಾಯಕರು, ಅಭಿಮಾನಿಗಳು ಕೂಡ ಪ್ರತಿಮೆಯು ಅರಸು ಅವರ ಹೋಲುವಂತಿಲ್ಲ ಎಂದು ಬೇಸರ ಹೊರಹಾಕಿದ್ದರು. ಇಷ್ಟೆಲ್ಲಾ ವಿರೋಧದ ನಡುವೆಯೂ ಉದ್ಘಾಟನೆಯಾದ ಅರಸು ಅವರ ಪ್ರತಿಮೆಯನ್ನು ಸರಿಯಾದ ರೀತಿಯಲ್ಲಿ ಸಂರಕ್ಷಣೆ ಮಾಡದೆ ನಿರ್ಲಕ್ಷ್ಯ ತೋರಿರುವ ಜಿಲ್ಲಾಡಳಿತದ ನಡೆ ವಿರುದ್ಧ ವ್ಯಾಪಕ ಟೀಕೆಗಳು ವ್ಯಕ್ತವಾಗಿವೆ.

> “ಇದನ್ನು ನೋಡಿಕೊಂಡು ಸುಮ್ಮನೇ ಕೂರುವುದಿಲ್ಲ. ಪ್ರತಿಮೆಯನ್ನು ಪುನರ್ ನಿರ್ಮಾಣ ಮಾಡುವುದಾಗಿ ಅಶ್ವಾಸನೆ ಕೊಟ್ಟಿದ್ದರು. ಆದರೆ, ಆ ಸಂಬಂಧ ಯಾವುದೇ ಬೆಳವಣಿಗೆ ಆಗಿಲ್ಲ. ಇರುವ ಪ್ರತಿಮೆಗೂ ಕೂಡ ಗೌರವ ಕೊಡುವ ಕೆಲಸ ಮಾಡುತ್ತಿಲ್ಲ. ರಾಜ್ಯ ಸರ್ಕಾರ ಒಲ್ಲದ ಮನಸ್ಸಿನಿಂದ ಸ್ಥಾಪಿಸಿದ ಪ್ರತಿಮೆ ಇದಾಗಿದೆ.
> –ಆರ್.ರಘು ಕೌಟಿಲ್ಯ


ಪ್ರತಿಭಟನಾಕಾರರ ಆಕ್ರೋಶ: ಒಂದಲ್ಲ ಒಂದು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸುವ ವಿವಿಧ ಸಂಘಟನೆಗಳ ಪ್ರತಿಭಟನಾಕಾರರು ಡಿ.ದೇವರಾಜ ಅರಸು ಪ್ರತಿಮೆಯ ನಾಮಫಲಕ ಕಳಚಿ ಬಿದ್ದಿರುವುದನ್ನು ಕಂಡು ಜಿಲ್ಲಾಡಳಿತದ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಮಹನೀಯರ ಪ್ರತಿಮೆ ಸ್ಥಾಪಿಸಿ, ಸಂರಕ್ಷಣೆ ಮಾಡಬೇಕಾದ ಜಿಲ್ಲಾಡಳಿತ ಇಷ್ಟೊಂದು ಅಸಡ್ಡೆಯಿಂದ ಕೂಡಿದೆಯೇ ಎಂದು ಕಿಡಿಕಾರಿದ್ದಾರೆ.

ಅಸೂಯೆ, ಅಸಡ್ಡೆ: ಸಿದ್ದರಾಮಯ್ಯ ಅವರಿಗೆ ಡಿ.ದೇವರಾಜ ಅರಸು ಎಂದರೆ ಅಸಡ್ಡೆ, ಅಸೂಯೆ. ಮೈಸೂರು ಜಿಲ್ಲೆಯಲ್ಲಿ ದೇವರಾಜ ಅರಸು ಅವರ ಪ್ರತಿಮೆ ನಿಲ್ಲಿಸಲು ಹೋರಾಟ ಮಾಡಬೇಕಾಯಿತು. ಹಿಂದುಳಿದ ಚಾಂಪಿಯನ್ ಎಂದು ಕರೆಸಿಕೊಳ್ಳುತ್ತಿರುವ ಸಿದ್ದರಾಮಯ್ಯ ಅವರಿಗೆ ಡಿ.ದೇವರಾಜ ಅರಸು ಅವರ ಮೇಲೆ ಅಭಿಮಾನ ಇದ್ದಿದ್ದರೆ ಸ್ವಯಂ ಪ್ರೇರಿತವಾಗಿ ಪ್ರತಿಮೆ ನಿರ್ಮಾಣ ಮಾಡುತ್ತಿದ್ದರು. ಆದರೆ, ಯಡಿಯೂರಪ್ಪ ಅವರೇ ಅರಸು ಅವರ ಪ್ರತಿಮೆ ನಿರ್ಮಾಣಕ್ಕೆ ಅನುದಾನ ನೀಡಬೇಕಾಯಿತು. ಅದಾದ ಮೇಲೆ ಉದ್ಘಾಟಿಸಲು ಮೀನಾಮೇಷ ಎಣಿಸಿದರು. ಪ್ರತಿಮೆ ಕೂಡ ಒಳ್ಳೆಯ ಸ್ವರೂಪದಲ್ಲಿ ಬರಲಿಲ್ಲ. ಈಗ ಅದರ ನಿರ್ವಹಣೆಯಲ್ಲಿಯೂ ನಿರ್ಲಕ್ಷ ತೋರುವ ಮೂಲಕ ಡಿ.ದೇವರಾಜ ಅರಸು ಅವರ ಮೇಲಿನ ಅಸಡ್ಡೆ ಧೋರಣೆಯನ್ನು ರಾಜ್ಯ ಸರ್ಕಾರ ಮುಂದುವರಿಸಿದೆ ಎಂದು ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ರಘು ಆರ್.ಕೌಟಿಲ್ಯ ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.



ಮೈಸೂರು ಡಿಸಿ ಕಚೇರಿ ಆವರಣದಲ್ಲಿರುವ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಪ್ರತಿಮೆಯ ನಾಮಫಲಕ ಕಳಚಿ ಬಿದ್ದಿರುವುದು.

ಉ.ವೇ.ದುಶ್ಯಂತ್ ಶ್ರೀಧರ್ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನಕ್ಕೆ ಭೇಟಿ



ಖ್ಯಾತ ಪ್ರವಚನಕಾರರಾದ ಉ.ವೇ.ದುಶ್ಯಂತ್ ಶ್ರೀಧರ್ ಅವರು ಕಾಳಿದಾಸ ರಸ್ತೆಯಲ್ಲಿರುವ ಯದುಗಿರಿ ಯತಿರಾಜ ಮಠ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದರು. ಈ ಸಂದರ್ಭದಲ್ಲಿ ಶ್ರೀಮತಿ ಕವಿತಾ, ಶ್ರೀಮತಿ ಕಮಲ, ಶ್ರೀಮತಿ ನಾಗಮಣಿ, ರವಿ ಶಾಂತರಾಮ್, ಪ್ರಧಾನ ಅರ್ಚಕ ವೀರ ರಾಘವನ್, ವೈನತೇಯ, ದೇವಸ್ಥಾನದ ಆಡಳಿತಾಧಿಕಾರಿ ಕೆ.ಎಸ್. ಯೋಗನರಸಿಂಹನ್, ರವಿ ಮುಂತಾದವರು ಉಪಸ್ಥಿತರಿದ್ದರು. ಇದೇ ವೇಳೆ ಉ.ವೇ.ದುಶ್ಯಂತ್ ಶ್ರೀಧರ್‌ರನ್ನು ದೇವಸ್ಥಾನದ ವತಿಯಿಂದ ಸನ್ಮಾನಿಸಲಾಯಿತು.

ಮಾಯಣ್ಣ ಗರಡಿ ನೂತನ ಪದಾಧಿಕಾರಿಗಳು...



ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಪೈಲ್ವಾನ್ ಮಾಯಣ್ಣ ಅವರ ಹತ್ತು ಜನಗಳ ಗರಡಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ದಿವಂಗತ ಪೈಲ್ವಾನ್ ರುದ್ರ (ಮೂಗ) ಅವರ ಪುತ್ರ ಪೈಲ್ವಾನ್ ಆರ್.ರಮೇಶ್ ಆಯ್ಕೆಯಾಗಿದ್ದಾರೆ. ಗೌರವ ಅಧ್ಯಕ್ಷರಾಗಿ ಕೋಳಿ ಅಂಗಡಿ ಸೋಮಣ್ಣ, ಉಪಾಧ್ಯಕ್ಷರಾಗಿ ಪೈಲ್ವಾನ್ ಪಿ.ಉಮೇಶ್, ಪ್ರಧಾನ ಕಾರ್ಯದರ್ಶಿಯಾಗಿ ಎಂ.ಎಸ್. ಸುರೇಶ್ ಕುಮಾರ್, ಸಹ ಕಾರ್ಯದರ್ಶಿಯಾಗಿ ಪಿ.ಯೋಗೇಶ್, ಧರ್ಮದರ್ಶಿಗಳಾಗಿ ಮಾಜಿ ಮೇಯರ್ ಎಂ.ಜೆ.ರವಿಕುಮಾರ್, ಪಾಲಿಕೆ ಮಾಜಿ ಸದಸ್ಯ ಕೆ.ಮಹದೇವ್, ಕೆ.ಬಿ.ಎಸ್. ಸ್ವಾಮಿ, ವಿ.ಮಂಜುನಾಥ್, ಜಿ.ಮಂಜುನಾಥ್ ಆಯ್ಕೆಯಾಗಿದ್ದಾರೆ.

ರಾಜ್ಯಮಟ್ಟದ ಬ್ಯಾಸ್ಕೆಟ್ಬಾಲ್ ಚಾಂಪಿಯನ್‌ಶಿಪ್‌ಗೆ ಆಯ್ಕೆ



ಮೈಸೂರು, ಮಾ.23–ಮೈಸೂರಿನ ಕೆಬಿಸಿ ಕ್ಲಬ್‌ನ ಉದಯೋನ್ಮುಖ ಆಟಗಾರ ರೆನಿಷ್ ಮ್ಯಾಥ್ಯು ಬೆಂಗಳೂರಿನಲ್ಲಿ ನಡೆಯಲಿರುವ ಬಾಲಕರ 18 ವಯಸ್ಸಿನೊಳಗಿನ ರಾಜ್ಯಮಟ್ಟದ ಬ್ಯಾಸ್ಕೆಟ್ಬಾಲ್ ಚಾಂಪಿಯನ್‌ಶಿಪ್‌ಗೆ ಆಯ್ಕೆಯಾಗಿದ್ದಾರೆ. ಈಗಾಗಲೇ ಸಬ್ ಜೂನಿಯರ್ ಬ್ಯಾಸ್ಕೆಟ್ ಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿದ್ದಾರೆ. ಈತ ಶ್ರೀರಾಂಪುರದ ಸೆಂಟ್ ರೊಸೆಲ್ಲೊ ಸೆಂಟ್ರಲ್ ಶಾಲೆ ವಿದ್ಯಾರ್ಥಿ.

ಪ್ರತಿಯೊಂದು ಆಟವನ್ನು ಸ್ಫೂರ್ತಿಯಾಗಿಸಿಕೊಳ್ಳಿ

ಶಾಸಕ ಟಿ.ಎಸ್.ಶ್ರೀವತ್ಸ ಅಭಿಮತ

ಮೈಸೂರು,ಮಾ.23–ಗೆದ್ದವರು ಬೀಗದೇ, ಸೋತವರು ಕುಗ್ಗದೆ, ಪ್ರತಿಯೊಂದು ಆಟವನ್ನು ಸ್ಫೂರ್ತಿಯನ್ನಾಗಿಸಿಕೊಂಡು ಮುನ್ನಡೆಯಬೇಕು ಎಂದು ಶಾಸಕ ಟಿ.ಎಸ್.ಶ್ರೀವತ್ಸ ಕಿವಿಮಾತು ಹೇಳಿದರು.

ನಗರದ ಪೆವಿಲಿಯನ್ ಮೈದಾನದಲ್ಲಿ ಯುವಾತ್ಮ ಮೈಸೂರು ವತಿಯಿಂದ ಆಯೋಜಿಸಿದ್ದ ಧನ್ವಂತರಿ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಪಂಚದಾದ್ಯಂತ ಕ್ರಿಕೆಟ್ ಹೆಚ್ಚು ಜನಮನ್ನಣೆ ಪಡೆದುಕೊಂಡಿದ್ದು, ಭಾರತದಲ್ಲಿ ಅತೀ ಮುಖ್ಯವಾದ ಕ್ರೀಡೆಯಾಗಿದೆ. ಪ್ರತಿಯೊಬ್ಬ ಯುವಕರಲ್ಲೂ ಇವತ್ತಿನ ದಿನಗಳಲ್ಲಿ ಕ್ರಿಕೆಟ್ ಅಡಕವಾಗಿದೆ. ಇತ್ತೀಚೆಗೆ ಭಾರತ ಟಿ–20 ವಿಶ್ವಕಪ್ ತನ್ನದಾಗಿಸಿಕೊಂಡಿದೆ. ಇಂತಹ ಜನಪ್ರಿಯ ಕ್ರೀಡೆಯನ್ನು ಆಡುವ ಮೂಲಕ ಎಲ್ಲವನ್ನು ಬೆಸೆಯುವ ಕೆಲಸವಾಗಲಿದೆ ಎಂದರು.

ಸಮುದಾಯವು ಆಯೋಜಿಸಿರುವುದು ಉತ್ತಮ ಕಾರ್ಯ. ಕ್ರಿಕೆಟ್ ಪಂದ್ಯಾವಳಿ ದೈಹಿಕವಾಗಿ ಆರೋಗ್ಯವಾಗಿರಲು ಸಹಾಯ ಮಾಡಬಲ್ಲದು. ಪಂದ್ಯಾವಳಿಯಲ್ಲಿ ಎಷ್ಟೇ ತಂಡಗಳು ಭಾಗವಹಿಸಿದ್ದರೂ ಒಂದು ತಂಡಕ್ಕೆ ಮಾತ್ರ ಗೆಲುವು ಸಾಧ್ಯ. ಗೆಲುವು–ಸೋಲನ್ನು ಸಮನಾಗಿ ಸ್ವೀಕರಿಸಿ ಎಂದರು.

ಅಖಿಲ ಭಾರತ ಬ್ರಾಹ್ಮಣ ಏಕೀಕೃತ ಪರಿಷತ್ ರಾಜ್ಯಾಧ್ಯಕ್ಷ ಎನ್.ಎಂ.ನವೀನ್ ಕುಮಾರ್ ಮಾತನಾಡಿ, ಕ್ರಿಕೆಟ್ ಇವತ್ತು ಭಾರತೀಯ ಕ್ರೀಡೆಯಾಗಿ ಬೆಳೆದಿದೆ. ವಿವಿಧ ಭಾಗಗಳಿಂದ ಯುವಕರು ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿರುವುದು ಸಂತಸದ ವಿಷಯ. ಸಮುದಾಯದ ಯುವಕರೇ ಕ್ಲಬ್‌ಗಳನ್ನು ಸ್ಥಾಪಿಸಿ ಕ್ರಿಕೆಟ್ ಪಂದ್ಯಾವಳಿಗಳನ್ನು ನಡೆಸುತ್ತಿದ್ದಾರೆ. ಬಹಳ ಹಿಂದಿನಿಂದಲೂ ಸಮುದಾಯಕ್ಕೂ ಕ್ರಿಕೆಟ್‌ಗೂ ಅವಿನಾಭಾವ ಸಂಬಂಧವಿದೆ. ಭಾರತ ಕ್ರಿಕೆಟ್ ತಂಡಗಳಲ್ಲಿ ಸಮುದಾಯದ ಸಾಕಷ್ಟು ಯುವಕರು ಆಟವಾಡಿ, ಸಮುದಾಯಕ್ಕೆ, ದೇಶಕ್ಕೆ ಕೀರ್ತಿ ತಂದಿದ್ದಾರೆ. ಮೈಸೂರಿನ ಜಾವಗಲ್ ಶ್ರೀನಾಥ್, ಅನಿಲ್ ಕುಂಬ್ಳೆ ಕ್ರಿಕೆಟ್‌ಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದರು. ವಿವಿಧ ಜಿಲ್ಲೆಗಳ 10ಕ್ಕೂ ಹೆಚ್ಚಿನ ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದವು. ಆಶಾ ಕಿರಣ ಚಾರಿಟಬಲ್ ಟ್ರಸ್ಟ್ ವ್ಯವಸ್ಥಾಪಕ ಗುರುರಾಜ್, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್. ಸತ್ಯನಾರಾಯಣ್, ಉತ್ತರಾದಿ ಮಠದ ವ್ಯವಸ್ಥಾಪಕ ಪಂಡಿತ್ ಅನಿರುದ್ಧಾಚಾರ್ಯ ಪಾಂಡುರಂಗಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯ ಎಸ್.ಬಿ. ವಾಸುದೇವ ಮೂರ್ತಿ, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಆರ್.ಎಸ್.ಸತ್ಯನಾರಾಯಣ, ಪ್ರವೀಣ್, ಜಯಸಿಂಹ, ಸುಂದರ್‌ರಾಜ್ ಇನ್ನಿತರರು ಹಾಜರಿದ್ದರು.



ಪೆವಿಲಿಯನ್ ಮೈದಾನದಲ್ಲಿ ಆಯೋಜಿಸಿದ್ದ ಧನ್ವಂತರಿ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಗೆ ಶಾಸಕ ಟಿ.ಎಸ್.ಶ್ರೀವತ್ಸ ಚಾಲನೆ ನೀಡಿದರು.

ಹಳೆ ಮೀಸಲಾತಿಯಂತೆ ನೇಮಕಾತಿಗೆ ಆಗ್ರಹಿಸಿ ಇಂದು ಬೆಂಗಳೂರಲ್ಲಿ ಪ್ರತಿಭಟನೆ

ಮೈಸೂರು,ಮಾ.23(ಎಂಟಿವೈ)– ರೋಸ್ಟರ್ ಹಂಚಿಕೆ ವಿರೋಧಿಸಿ, ಹಳೆ ಮೀಸಲಾತಿಯಂತೆ ತ್ವರಿತಗತಿಯಲ್ಲಿ ಖಾಲಿ ಹುದ್ದೆಗಳ ನೇಮಕ ಮಾಡುವಂತೆ ಆಗ್ರಹಿಸಿ, ನಾಳೆ(ಮಾ.24) ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿರುವ ಬೆಂಗಳೂರು ಚಲೋ ಸಮಾವೇಶದಲ್ಲಿ ಮೈಸೂರು ಭಾಗದಿಂದ 15 ಸಾವಿರಕ್ಕೂ ಹೆಚ್ಚು ಮಂದಿ ಪಾಲ್ಗೊಳ್ಳುತ್ತಿರುವುದಾಗಿ ಶಿವಯೋಗಿ ಸಿದ್ದರಾಮೇಶ್ವರ ಭೋವಿ ಹಿತರಕ್ಷಣಾ ಸಮಿತಿ ಜಿಲ್ಲಾಧ್ಯಕ್ಷ ಎಸ್.ವಿಜಯಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿಯಲ್ಲಿ ಯಾರಿಗೂ ಅನ್ಯಾಯವಾಗಬಾರದೆಂಬ ಉದ್ದೇಶದಿಂದ ಬೆಂಗಳೂರು ಚಲೋ ಸಮಾವೇಶ ನಡೆಸಲಾಗುತ್ತಿದೆ. ಫ್ರೀಡಂ ಪಾರ್ಕ್‌ನಲ್ಲಿ ನಡೆಯುವ ಬೃಹತ್ ಸಮಾವೇಶದಲ್ಲಿ ಎರಡು ಲಕ್ಷ ಮಂದಿ ಪಾಲ್ಗೊಳ್ಳಲಿದ್ದಾರೆ. ಈಗಿನ ರೋಸ್ಟರ್ ಪದ್ಧತಿ ವಿರೋಧಿಸದಿದ್ದರೆ ಅದು ಪೆಡಂಭೂತದಂತೆ ಕಾಡಲಿದೆ. ಅಲ್ಲದೆ, ನಾವು ಇನ್ನಷ್ಟು ತಳಮಟ್ಟಕ್ಕೆ ಹೋಗಬೇಕಾಗುತ್ತದೆ. ಈ ನಿಟ್ಟಿನಲ್ಲಿ ನೇಮಕಾತಿ ಪ್ರಕ್ರಿಯೆ ಹಳೆ ಮೀಸಲಾತಿ ನಿಯಮದಂತೆ ತ್ವರಿತಗತಿಯಲ್ಲಿ ನಡೆಸುವಂತೆ ಆಗ್ರಹಿಸುತ್ತಿರುವುದಾಗಿ ತಿಳಿಸಿದರು.

ನಾಗಮೋಹನದಾಸ್ ವರದಿ ಪ್ರಕಾರ ನಾವು ಯಾವುದೇ ಕಾರಣಕ್ಕೂ ಎ ಭಾಗಕ್ಕೆ ಬರುವುದು ಸಾಧ್ಯವಾಗುವುದಿಲ್ಲ. ಎ ವರ್ಗಕ್ಕೆ ಸೇರಿಸಬೇಕಾದ ತಮ್ಮ ಸಮುದಾಯವನ್ನು ಅಪೂರ್ಣ ಸಮೀಕ್ಷೆ ಕಾರಣ ಸಿ ವರ್ಗಕ್ಕೆ ಸೇರಿಸಿ ಅನ್ಯಾಯ ಎಸಗಲಾಗಿದೆ. ಆದ್ದರಿಂದ ಹಳೆ ಮೀಸಲಾತಿ ನಿಯಮ ಶೇ.50ರ ಅನ್ವಯ ನೇಮಕಾತಿ ಮತ್ತು ಶೈಕ್ಷಣಿಕ ಪ್ರವೇಶ ಪ್ರಕ್ರಿಯೆ ಮುಂದುವರಿಸುವುದಾಗಿ ರಾಜ್ಯ ಸರ್ಕಾರ ಹೊರಡಿಸಿರುವ ಪ್ರಕಟಣೆ ಸ್ವಾಗತಾರ್ಹ. ರಾಜ್ಯ ಸರ್ಕಾರದ ವಿವಿಧ ವಿವಿಗಳ ಪ್ರಾಧಿಕಾರ ಮತ್ತು ಕೆಲ ಇಲಾಖೆಗಳ ನೇಮಕಾತಿ ಅಧಿಸೂಚನೆಯಲ್ಲಿ ಪ್ರವರ್ಗ ಬಿ ಮತ್ತು ಸಿ ಗುಂಪಿಗೆ ಶೂನ್ಯ ಹುದ್ದೆ ಸೃಷ್ಟಿಸಲಾಗಿದೆ. ಒಳ ಮೀಸಲಾತಿ ಎಷ್ಟೊಂದು ಅವೈಜ್ಞಾನಿಕ ಮತ್ತು ಅನ್ಯಾಯದ್ದಾಗಿದೆ. ಹೀಗಾಗಿ ಬೆಂಗಳೂರಿನಲ್ಲಿ ಹಮ್ಮಿಕೊಂಡಿರುವ ಬೃಹತ್ ಪ್ರತಿಭಟನಾ ಸಮಾವೇಶ ನಡೆಸಲಾಗುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಹೆಚ್.ಕೆ.ದೇವರಾಜು, ಟಿ.ಕೃಷ್ಣ, ಎಸ್.ಪರಮೇಶ್, ಪಿ.ಬಸವರಾಜು, ಜಿ.ನಾಗರಾಜು, ಪಿ.ಮಲ್ಲಯ್ಯ, ಎಚ್.ದಾಸ್, ಸಿ.ರಾಮಸ್ವಾಮಿ, ರಾಮಲಿಂಗು ಇದ್ದರು.

ಮೈಸೂರಿನ ಕಾವೇರಿ ಫಾರ್ಮಸಿ ಕಾಲೇಜಿನ ಮೂವರು ವಿದ್ಯಾರ್ಥಿನಿಯರಿಗೆ ಹತ್ತರೊಳಗಿನ ರ್‍ಯಾಂಕ್



ಮೈಸೂರಿನ ಕಾವೇರಿ ಸಮೂಹ ವಿದ್ಯಾಸಂಸ್ಥೆ.



ಪಿ.ಪ್ರೇಮಾ



ಎಂ.ಹೇಮಲತಾ



ಅಮ್ರೀನಾ ಖಾತೂನ್

ಮೈಸೂರು, ಮಾ.23–ಮೈಸೂರಿನ ಡಾ.ಚಂದ್ರಶೇಖರ್ ಫೌಂಡೇಷನ್‌ನ ಕಾವೇರಿ ಸಮೂಹ ವಿದ್ಯಾಸಂಸ್ಥೆಗಳ ಅಂಗಸಂಸ್ಥೆಯಾದ ಕಾವೇರಿ ಔಷಧ ವಿಜ್ಞಾನ ವಿದ್ಯಾಲಯ ಅತ್ಯುತ್ತಮ ಫಲಿತಾಂಶ ಗಳಿಸಿದೆ.

ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯವು 2025ರ ನವೆಂಬರ್‌ನಲ್ಲಿ ನಡೆಸಿದ ವಿವಿಧ ಸೆಮಿಸ್ಟರ್‌ಗಳ ಫಲಿತಾಂಶ ಪ್ರಕಟವಾಗಿದ್ದು, ಬಿ–ಫಾರ್ಮ್ 8ನೇ ಸೆಮಿಸ್ಟರ್ ವಿದ್ಯಾರ್ಥಿನಿ ಪಿ.ಪ್ರೇಮಾ ಪ್ರಥಮ ರ್‍ಯಾಂಕ್, 5ನೇ ಸೆಮಿಸ್ಟರ್ ವಿದ್ಯಾರ್ಥಿನಿ ಎಂ.ಹೇಮಲತಾ 8ನೇ ರ್‍ಯಾಂಕ್ ಹಾಗೂ 7ನೇ ಸೆಮಿಸ್ಟರ್ ವಿದ್ಯಾರ್ಥಿನಿ ಅಮ್ರೀನಾ ಖಾತೂನ್ 9ನೇ ರ್‍ಯಾಂಕ್ ಪಡೆದಿದ್ದಾರೆ. ಅನೇಕ ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳೊಂದಿಗೆ ತೇರ್ಗಡೆ ಹೊಂದಿದ್ದಾರೆ.


ಈ ಬಗ್ಗೆ ಡಾ.ಚಂದ್ರಶೇಖರ್ ಫೌಂಡೇಷನ್, ಕಾವೇರಿ ಸಮೂಹ ವಿದ್ಯಾಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಕಾವೇರಿ ಔಷಧ ವಿಜ್ಞಾನ ವಿದ್ಯಾಲಯದ ಪ್ರಾಂಶುಪಾಲರು ಹರ್ಷ ವ್ಯಕ್ತಪಡಿಸಿ, ನಮ್ಮ ಸಂಸ್ಥೆಯು ಈ ಅತ್ಯುತ್ತಮ ಫಲಿತಾಂಶದ ಮೂಲಕ ಆರೋಗ್ಯ ಶಿಕ್ಷಣ ಕ್ಷೇತ್ರದಲ್ಲಿ ತನ್ನ ಬದ್ಧತೆಯನ್ನು ಮತ್ತೊಮ್ಮೆ ಸಾಬೀತು ಪಡಿಸಿದೆ ಎಂದು ಅಭಿಪ್ರಾಯಿಸುವುದರ ಜೊತೆಗೆ ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರಿಗೆ ಅಭಿನಂದನೆ ತಿಳಿಸಿದ್ದಾರೆ.

ಉನ್ನತ ಮಟ್ಟದ ಶಿಕ್ಷಣ ಮತ್ತು ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಹೆಸರಾಗಿರುವ ಕಾವೇರಿ ಔಷಧ ವಿಜ್ಞಾನ ಸಂಸ್ಥೆಯು ನಿರಂತರವಾಗಿ ಆರೋಗ್ಯ ಕ್ಷೇತ್ರದ ವಿವಿಧ ವಿಭಾಗಗಳಲ್ಲಿ ಉನ್ನತ ಮಟ್ಟದ ವೃತ್ತಿಪರರನ್ನು ರೂಪಿಸುತ್ತ ಬಂದಿದೆ. ಫಾರ್ಮಸಿ ಶಿಕ್ಷಣವು ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಇದು ಔಷಧಿಗಳ ಸುರಕ್ಷತೆ, ಪರಿಣಾಮಕಾರಿ ಬಳಕೆ, ರೋಗಿಗಳ ಆರೈಕೆ ಹಾಗೂ ಔಷಧೀಯ ಸೇವೆಗಳಲ್ಲಿ ವೈದ್ಯಕೀಯ ವೃತ್ತಿಪರರಿಗೆ ಸಹಕಾರಿಯಾಗುವಂತೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸುತ್ತಿದೆ. ನಮ್ಮ ಸಂಸ್ಥೆಯ ಸಮಗ್ರ ಪಠ್ಯಕ್ರಮ ಹಾಗೂ ಪ್ರಾಯೋಗಿಕ ತರಬೇತಿಯು ವಿದ್ಯಾರ್ಥಿಗಳಿಗೆ ಔಷಧೀಯ ಮತ್ತು ಆರೋಗ್ಯ ಕ್ಷೇತ್ರದ ಅಗತ್ಯಗಳನ್ನು ಎದುರಿಸಲು ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳನ್ನು ಒದಗಿಸುತ್ತಿದೆ.

ಕಾವೇರಿ ಗ್ರೂಪ್‌ನ ಫಾರ್ಮಸಿ ವಿದ್ಯಾರ್ಥಿಗಳ ಯಶಸ್ಸಿಗೆ ಗುಣಮಟ್ಟದ ಶಿಕ್ಷಣ, ಅನುಭವ ಹೊಂದಿದ ಅಧ್ಯಾಪಕರು, ಅತ್ಯಾಧುನಿಕ ಪ್ರಯೋಗಾಲಯಗಳು, ಸೌಲಭ್ಯಗಳು, ಪ್ರಾಯೋಗಿಕ ಫಾರ್ಮಸಿ ತರಬೇತಿ ಹಾಗೂ ಸಮಗ್ರ ವ್ಯಕ್ತಿತ್ವಾಭಿವೃದ್ಧಿಗೆ ನೀಡುವ ಮಹತ್ವವೇ ಕಾರಣವಾಗಿದೆ. ಈ ಮೂಲ ಮೌಲ್ಯಗಳು ಸಂಸ್ಥೆಯ ಶೈಕ್ಷಣಿಕ ಶ್ರೇಷ್ಠತೆಗೆ ಆಧಾರವಾಗಿವೆ. ನಮ್ಮ ಸಂಸ್ಥೆಯ ವಿದ್ಯಾರ್ಥಿಗಳ ಈ ಸಾಧನೆಯು ಫಾರ್ಮಸಿ ಶಿಕ್ಷಣದಲ್ಲಿನ ಶ್ರೇಷ್ಠತೆ, ಸಂಸ್ಥೆಯ ಅಚಲ ಬದ್ಧತೆ, ವಿದ್ಯಾರ್ಥಿಗಳು ಮತ್ತು ಅಧ್ಯಾಪಕರ ಪರಿಶ್ರಮವನ್ನೂ ಪ್ರತಿಬಿಂಬಿಸುತ್ತದೆ. ಕಾವೇರಿ ಗ್ರೂಪ್ ನಂತಹ ಸಂಸ್ಥೆಗಳು ಕೌಶಲ್ಯಯುತ, ಜ್ಞಾನ ಸಂಪನ್ನ ಹಾಗೂ ಮಾನವೀಯ ಮೌಲ್ಯ ಗಳನ್ನು ಹೊಂದಿರುವ ಫಾರ್ಮಸಿ ವೃತ್ತಿ ಪರರನ್ನು ರೂಪಿಸುವ ಮೂಲಕ ಆರೋಗ್ಯ ಸೇವೆಯ ಭವಿಷ್ಯವನ್ನು ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ತಿಳಿಸಿದ್ದಾರೆ.

ದೇಶ - ವಿದೇಶ

ಮೊಕದ್ದಮೆಗಳಿಗಾಗಿ 12 ವರ್ಷಗಳಲ್ಲಿ 683 ಕೋಟಿ ರೂ. ವ್ಯಯ



ನವದೆಹಲಿ: ಕೇಂದ್ರ ಸರ್ಕಾರವು ಕಳೆದ 12 ವರ್ಷಗಳಲ್ಲಿ ಮೊಕದ್ದಮೆಗಳಿಗಾಗಿಯೇ ಬರೋಬ್ಬರಿ 683 ಕೋಟಿ ರೂ. ವ್ಯಯಿಸಿದೆ. ಆದಾಗ್ಯೂ ಪ್ರಧಾನವಾಗಿ ಹಣಕಾಸು ಸಚಿವಾಲಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಇನ್ನೂ 7.14 ಲಕ್ಷಕ್ಕೂ ಅಧಿಕ ಪ್ರಕರಣಗಳು ನ್ಯಾಯಾಲಯಗಳಲ್ಲಿ ಬಾಕಿ ಇವೆ.

ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಹಾಗೂ ಕಾನೂನು ಮತ್ತು ನ್ಯಾಯ ಇಲಾಖೆಗೆ ಸಂಬಂಧಿಸಿದ ಸಂಸದೀಯ ಸ್ಥಾಯಿ ಸಮಿತಿ ಲಭ್ಯವಿರುವ ಮಾಹಿತಿ ಪ್ರಕಾರ, ಮೊಕದ್ದಮೆಗಳಿಗಾಗಿ 2024–25ನೇ ಸಾಲಿನಲ್ಲಿ ಅತಿ ಹೆಚ್ಚು 87.65 ಕೋಟಿ ಖರ್ಚು ಮಾಡಲಾಗಿದೆ. 2025ರ ಡಿ.31ರವರೆಗೆ 74.05 ಕೋಟಿ ವ್ಯಯಿಸಿದ್ದು, ಈ ಸಾಲಿನಲ್ಲಿ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ವೆಚ್ಚದ ಪ್ರಮಾಣವು ನಿಯಮಿತವಾಗಿ ಏರಿಕೆಯಾಗುತ್ತಿದ್ದಾಗ್ಯೂ, 2018–19 ಹಾಗೂ (2021–22) ಮಾತ್ರ ಖರ್ಚಿಗೆ ಕಡಿವಾಣ ಬಿದ್ದಿದೆ. ಅನಗತ್ಯ ಮೊಕದ್ದಮೆಗಳು, ಕ್ಷುಲ್ಲಕ ವಿಚಾರಗಳಿಗೂ ಸಲ್ಲಿಕೆಯಾಗುವ ಮೇಲ್ಮನವಿಗಳಿಗೆ ಕಡಿವಾಣ ಮತ್ತು ಪ್ರಕರಣಗಳ ಹೊರೆಯನ್ನು ಕಡಿಮೆ ಮಾಡುವ ಉದ್ದೇಶದಿಂದ 2025ರ ಏಪ್ರಿಲ್‌ನಲ್ಲಿ ಮೊಕದ್ದಮೆಗಳ ದಕ್ಷ ಹಾಗೂ ಪರಿಣಾಮ ಕಾರಿ ನಿರ್ವಹಣೆಗಾಗಿ ಹೊಸ ನಿರ್ದೇಶನ ಹೊರಡಿಸಿರುವ ಪರಿಣಾಮ ಬಾಕಿ ಪ್ರಕರಣಗಳ ಸಂಖ್ಯೆಯಲ್ಲಿ ಸ್ವಲ್ಪ ಇಳಿಕೆ ಕಂಡು ಬಂದಿದೆ.

ಲ್ಯಾಂಡಿಂಗ್ ವೇಳೆ ವಾಹನಕ್ಕೆ ಏರ್ ಕೆನಡಾ ವಿಮಾನ ಡಿಕ್ಕಿ; ಇಬ್ಬರು ಪೈಲಟ್ ಸಾವು



ನ್ಯೂಯಾರ್ಕ್: ಇಲ್ಲಿನ ಲಾ ಗಾರ್ಡಿಯಾ ವಿಮಾನ ನಿಲ್ದಾಣದಲ್ಲಿ ನಿಂತಿದ್ದ ಅಗ್ನಿಶಾಮಕ ವಾಹನಕ್ಕೆ ವಿಮಾನ ಡಿಕ್ಕಿಯಾಗಿ, ಇಬ್ಬರು ಪೈಲಟ್‌ಗಳು ಮೃತಪಟ್ಟಿದ್ದಾರೆ. ಕೆನಡಾದ ಮೊಂಟ್‌ರಿಯಲ್‌ನಿಂದ ಭಾನುವಾರ ರಾತ್ರಿ ಬಂದಿದ್ದ ಏರ್ ಕೆನಡಾ ವಿಮಾನವು ಲಾ ಗಾರ್ಡಿಯಾ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಂಗ್ ಆಗುವ ವೇಳೆ ಈ ಅವಘಡ ಸಂಭವಿಸಿದೆ. ಪೈಲಟ್ ಮತ್ತು ಸಹ ಪೈಲಟ್ ಮೃತಪಟ್ಟಿದ್ದು, 41 ಜನ ಗಾಯಗೊಂಡಿದ್ದಾರೆ ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನವು ಗಂಟೆಗೆ 39 ಕಿ.ಮೀ. ವೇಗದಲ್ಲಿದ್ದಾಗ ನಿಂತಿದ್ದ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಸಾಮಾನ್ಯವಾಗಿ ವಿಮಾನ ಅಪಘಾತ ಸಾಧ್ಯತೆ ವೇಳೆ ಪೈಲಟ್ ಮೇಡೇ ಮೇಡೇ ಎಂದು ಕೂಗುತ್ತಾ ಅಪಾಯದ ಸಂದೇಶ ರವಾನಿಸುತ್ತಾರೆ. ಆದರೆ ಈ ವಿಮಾನದ ಪೈಲಟ್ ಅಪಘಾತ ಸಂಭವಿಸುವ ಕೆಲವೇ ಸೆಕೆಂಡ್‌ಗಳ ಮೊದಲು ಸ್ಟಾಪ್... ಸ್ಟಾಪ್... ಎಂದು ಕೂಗಿರುವ ಆಡಿಯೋ ಲಭ್ಯವಾಗಿದೆ. ಜೆಟ್ 646, ನೀವು ನಿಂತಿರುವ ವಾಹನಕ್ಕೆ ಡಿಕ್ಕಿ ಹೊಡೆಯುವ ಸಮೀಪದಲ್ಲಿದ್ದೀರಿ, ನೀವು ಲ್ಯಾಂಡ್ ಆಗಲು ಸಾಧ್ಯವಿಲ್ಲ ಅನ್ನಿಸುತ್ತಿದೆ. ವಾಹನವು ನಿಮಗೆ ತುಂಬಾ ಸಮೀಪಿಸುತ್ತಿದೆ ಎಂದು ಕಮ್ಯಾಂಡ್ ಸೆಂಟರ್‌ನಿಂದ ನಿಯಂತ್ರಕರು ಪೈಲಟ್‌ಗೆ ಹೇಳಿದ್ದಾರಾದರೂ ಅವಘಡ ತಪ್ಪಿಸಲು ಸಾಧ್ಯವಾಗಿಲ್ಲ.

ಹೈಟೆಕ್ ಗೂಢಚರ್ಯೆ; ಪಾಕಿಸ್ತಾನಕ್ಕೆ ಮಾಹಿತಿ ಕಳುಹಿಸುತ್ತಿದ್ದ ಮೂವರ ಬಂಧನ

ನವದೆಹಲಿ: ನವದೆಹಲಿ ಮತ್ತು ಮುಂಬೈನ ಪ್ರಮುಖ ರೈಲು ನಿಲ್ದಾಣಗಳು, ಸರ್ಕಾರಿ ಕಚೇರಿಗಳ ರಹಸ್ಯ ವೀಡಿಯೋ ಚಿತ್ರೀಕರಿಸಿ, ಪಾಕಿಸ್ತಾನದಲ್ಲಿರುವ ತಮ್ಮ ಹ್ಯಾಂಡ್ಲರ್‌ಗಳಿಗೆ ರವಾನಿಸುತ್ತಿದ್ದ ಮೂವರನ್ನು ಗಾಜಿಯಾಬಾದ್ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಇದರೊಂದಿಗೆ ಭಾರತದ ಆಂತರಿಕ ಭದ್ರತೆ ಮತ್ತು ಸೇನಾ ವ್ಯವಸ್ಥೆ ಮೇಲೆ ಸದಾ ಹದ್ದಿನ ಕಣ್ಣಿಡುವ ಪಾಕಿಸ್ತಾನ, ಇದೀಗ ಗೂಢಚರ್ಯೆಗೆ ಅತ್ಯಂತ ಹೈಟೆಕ್ ಹಾಗೂ ಅಪಾಯಕಾರಿ ತಂತ್ರ ಬಳಸಿಕೊಳ್ಳುತ್ತಿರುವುದು ಬೆಳಕಿಗೆ ಬಂದಿದೆ. ಮಾ.22 ನಡೆದ ಕಾರ್ಯಾಚರಣೆಯಲ್ಲಿ ಹರಿಯಾಣದ ಫರಿದಾಬಾದ್ ನಿವಾಸಿ, ಬಿಹಾರ ಮೂಲದ ನೌಶಾದ್ ಅಲಿ(20), ಮಥುರಾ ಮೂಲದ ಮೀರಾ (28) ಮತ್ತು 17 ವರ್ಷದ ಓರ್ವ ಅಪ್ರಾಪ್ತನನ್ನು ಬಂಧಿಸಲಾಗಿದೆ. ಈ ಮೂಲಕ ಗೂಢಚರ್ಯೆ ಪ್ರಕರಣದಲ್ಲಿ ಈವರೆಗೆ ಬಂಧಿತರಾದವರ ಒಟ್ಟು ಸಂಖ್ಯೆ 18ಕ್ಕೆ ಏರಿಕೆಯಾಗಿದೆ. ಇವರಲ್ಲಿ ಬರೋಬ್ಬರಿ 6 ಮಂದಿ ಅಪ್ರಾಪ್ತರಿರುವುದು ಆತಂಕಕಾರಿ ಸಂಗತಿಯಾಗಿದೆ. ಬಂಧಿತರು ದೆಹಲಿ ಕಂಟೋನ್ಮೆಂಟ್ ಮತ್ತು ಹರಿಯಾಣದ ಸೋನೆಪತ್ ರೈಲು ನಿಲ್ದಾಣಗಳಲ್ಲಿ 20 ಅಡಿ ಎತ್ತರದ ಕಂಬಗಳಿಗೆ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ, ಸೌರಶಕ್ತಿ ಚಾಲಿತ ಹಾಗೂ ಸಿಮ್ –ಆಧಾರಿತ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ಏಕಕಾಲಕ್ಕೆ ಪ್ಲಾಟ್‌ಫಾರ್ಮ್‌ಗಳು, ರೈಲುಗಳ ಓಡಾಟದ ಲೈವ್ ಫೀಡ್‌ನ್ನು ಪಾಕಿಸ್ತಾನದ ಮೊಬೈಲ್ ಸಂಖ್ಯೆಗಳಿಗೆ ನೇರವಾಗಿ ರವಾನಿಸುತ್ತಿದ್ದರು ಎನ್ನಲಾಗಿದೆ.

ಥೈಲ್ಯಾಂಡ್ ಪ್ರವಾಸದಲ್ಲಿ ವಿಜಯ್–ರಶ್ಮಿಕಾ ಜೋಡಿ



ಥೈಲ್ಯಾಂಡ್ : ರಶ್ಮಿಕಾ ಮಂದಣ್ಣ ಹಾಗೂ ವಿಜಯ್ ದೇವರಕೊಂಡ ದಂಪತಿ ಥೈಲ್ಯಾಂಡ್ ಪ್ರವಾಸದಲ್ಲಿದ್ದು, ಫೋಟೊಗಳು ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿವೆ. ಅಭಿಮಾನಿಗಳು ಫೋಟೊಗಳಿಗೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ವಿವಾಹದ ನಂತರ ರಶ್ಮಿಕಾ ಹಾಗೂ ವಿಜಯ್ ಅವರ ಮೊದಲ ಪ್ರವಾಸ ಇದಾಗಿದೆ.

ರಶ್ಮಿಕಾ ಹಾಗೂ ದೇವರಕೊಂಡ ಜೋಡಿಯು ಮೆಟ್ಟಿಲುಗಳ ಮೇಲೆ ನಿಂತು ಏಕಾಂತದಲ್ಲಿರುವ ಚಿತ್ರವು ಸಾಮಾಜಿಕ ಮಾಧ್ಯಮ ಇನ್‌ಸ್ಟಾಗ್ರಾಂನಲ್ಲಿ ಹರಿದಾಡುತ್ತಿದೆ. ಹಿಂದೂಸ್ತಾನ್ ಟೈಮ್ಸ್ ವರದಿ ಪ್ರಕಾರ, ದೇವರಕೊಂಡ ಹಾಗೂ ರಶ್ಮಿಕಾ ಕೊಹ್ ಸಮುಯಿಯಲ್ಲಿರುವ ಖಾಸಗಿ ಏರ್‌ಬಿಎನ್‌ಬಿ ವಿಲ್ಲಾದಲ್ಲಿ ತಂಗಿದ್ದಾರೆ. ಐಷಾರಾಮಿ ರೆಸಾರ್ಟ್‌ಗಳಿಗಿಂತಲೂ ಏಕಾಂತದಿಂದ ಕೂಡಿರುವ ವಿಲ್ಲಾಗಳನ್ನು ಆರಿಸಿಕೊಂಡಿದ್ದಾರೆ ಎಂದು ಹೇಳಲಾಗಿದೆ. ವಿಜಯ್ ದೇವರಕೊಂಡ ಇತ್ತೀಚೆಗೆ ತಮ್ಮ ಪುಟ್ಟ ಅಭಿಮಾನಿಯನ್ನು ಮನೆಗೆ ಆಹ್ವಾನಿಸಿದ್ದು, ನೆಟ್ಟಿಗರಿಂದ ಮೆಚ್ಚುಗೆ ಪಡೆದುಕೊಂಡಿತ್ತು.

ರಾಹುಲ್ ಸಂಕೃತ್ಯಾನ್ ನಿರ್ದೇಶನದ 'ರಣಬಾಲಿ' ಚಿತ್ರದಲ್ಲಿ ವಿಜಯ್ ಮತ್ತು ರಶ್ಮಿಕಾ ನಟಿಸುತ್ತಿದ್ದು, ಸಿನಿಮಾ ಯಶಸ್ವಿಯಾಗುವ ನಿರೀಕ್ಷೆ ಹುಟ್ಟಿಸಿದೆ.

ನೆರವಿಗೆ ಧಾವಿಸಿದ ಕಾಶ್ಮೀರಿಗಳು; ಇರಾನ್ ರಾಯಭಾರ ಕಚೇರಿ ಕೃತಜ್ಞತೆ



ಕಾಶ್ಮೀರ: ಮಧ್ಯಪ್ರಾಚ್ಯ ಸಂಘರ್ಷ ವಿಚಾರವಾಗಿ ಭಾರತ ಸರ್ಕಾರ ತಟಸ್ಥ ನಿಲುವು ಹೊಂದಿದ್ದರೂ ಕಾಶ್ಮೀರಿಗಳು ಇರಾನ್ ನೆರವಿಗೆ ಧಾವಿಸುತ್ತಿದ್ದಾರೆ.

ತಮ್ಮ ಸ್ವಂತ ಚಿನ್ನಾಭರಣಗಳನ್ನು ನೀಡುವ ಮೂಲಕ ಕಾಶ್ಮೀರಿಗಳು ಇರಾನ್ ಜೊತೆ ನಿಂತಿದ್ದಾರೆ. ಮಕ್ಕಳೂ ತಮ್ಮ ಪಿಗ್ಗಿಬ್ಯಾಂಕ್‌ಗಳನ್ನು ನೀಡಿದ್ದಾರೆ. ಈ ನೆರವಿನ ಬಗ್ಗೆ ಭಾರತದಲ್ಲಿರುವ ಇರಾನ್ ರಾಯಭಾರ ಕಚೇರಿ 'ಎಕ್ಸ್'ನಲ್ಲಿ ಥ್ಯಾಂಕ್ಯೂ ಇಂಡಿಯಾ(ಧನ್ಯವಾದಗಳು ಭಾರತ) ಎಂದು ಪ್ರತಿಕ್ರಿಯಿಸಿದೆ. ಕೃತಜ್ಞತೆಯಿಂದ ತುಂಬಿದ ಹೃದಯಗಳಿಂದ, ಮಾನವೀಯ ಬೆಂಬಲ ಮತ್ತು ಹೃತ್ಪೂರ್ವಕ ಒಗ್ಗಟ್ಟಿನ ಮೂಲಕ ಇರಾನ್ ಜನರೊಂದಿಗೆ ನಿಂತಿದ್ದಕ್ಕಾಗಿ ಕಾಶ್ಮೀರದ ದಯಾಳು ಜನರಿಗೆ ನಾವು ಪ್ರಾಮಾಣಿಕವಾಗಿ ಧನ್ಯವಾದ ಹೇಳುತ್ತೇವೆ. ಈ ದಯೆಯನ್ನು ಎಂದಿಗೂ ಮರೆಯಲಾಗುವುದಿಲ್ಲ ಎಂದು ಪೋಸ್ಟ್‌ನಲ್ಲಿ ಬರೆಯಲಾಗಿದೆ.

ಇದಕ್ಕೆ ಪ್ರತಿಕ್ರಿಯಿಸಿರುವ ನೆಟ್ಟಿಗರು, ಇರಾನ್ ಅಪಾರ ಸಂಪತ್ತನ್ನು ಹೊಂದಿದ್ದರೂ ಭಾರತೀಯರಿಂದ ದೇಣಿಗೆ ಕೇಳುತ್ತಿದ್ದಾರೆ. ಕಾಶ್ಮೀರಿಗಳು ತಮ್ಮ ಆಭರಣಗಳನ್ನು ಸ್ವಇಚ್ಛೆಯಿಂದ ದಾನ ಮಾಡುತ್ತಿದ್ದಾರೆ. ಆದರೆ ಯಾವುದೇ ಭಾರತೀಯ ಕಾರ್ಯಾಚರಣೆಗಳ ನಂತರ ಇಂತಹುದನ್ನು ಎಂದಿಗೂ ನೋಡಿಲ್ಲ ಎಂದಿದ್ದಾರೆ.

ಅಡುಗೆ ಅನಿಲ ಬೆಲೆ ಏರಿಕೆ ವಿರೋಧಿಸಿ ಪ್ರತಿಭಟನೆ



ಅಡುಗೆ ಅನಿಲದ ಬೆಲೆ ಏರಿಕೆ ಮಾಡಿರುವುದನ್ನು ಖಂಡಿಸಿ ನಗರ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಮಾ.23–ಕೇಂದ್ರ ಸರ್ಕಾರ ಏಕಾಏಕಿ ಗೃಹ ಹಾಗೂ ವಾಣಿಜ್ಯ ಬಳಕೆ ಅಡುಗೆ ಅನಿಲದ ಬೆಲೆ ಏರಿಕೆ ಮಾಡಿರುವುದನ್ನು ಖಂಡಿಸಿ ನಗರ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿ ಭಟನಾ ಜಾಥಾ ನಡೆಸಿದ ಕಾಂಗ್ರೆಸ್ ಪ್ರಮುಖರು ಮತ್ತು ಕಾರ್ಯಕರ್ತರು ಗ್ಯಾಸ್ ಬೆಲೆ ಏರಿಕೆ ಮಾಡಿದ ಕೇಂದ್ರ ಸರ್ಕಾರ, ಪ್ರಧಾನಿ ನರೇಂದ್ರ ಮೋದಿ ಹಾಗೂ ವಿತ್ತ ಸಚಿವೆ ನಿರ್ಮಲ ಸೀತಾರಾಮ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಗರ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್ ಆಚಾರ್ಯ, ಪ್ರಚಾರ ಸಮಿತಿ ಅಧ್ಯಕ್ಷ ಟಿ.ಪಿ.ರಮೇಶ್, ಮೂಡಾ ಅಧ್ಯಕ್ಷ ರಾಜೇಶ್ ಯಲ್ಲಪ್ಪ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಕಾಂಗ್ರೆಸ್ ವಕ್ತಾರೆ ತೆನ್ನಿರ ಮೈನಾ ಮಾತನಾಡಿ, ಮೋದಿ ನೇತೃತ್ವದ ಕೇಂದ್ರದ ಎನ್‌ಡಿಎ ಸರ್ಕಾರ ಯಾವುದೇ ಆಡಳಿತಾತ್ಮಕ ಪ್ರಯತ್ನ ಮಾಡದೆ ಜನರ ಮೇಲೆ ಬೆಲೆ ಏರಿಕೆಯ ಬರೆ ಹೊರಿಸಿ ಅನ್ಯಾಯ ಮಾಡಿದೆ ಎಂದು ದೂರಿದರು.

ಅಪರ ಜಿಲ್ಲಾಧಿಕಾರಿ ಆರ್. ಐಶ್ವರ್ಯ ಮೂಲಕ ತಕ್ಷಣವೇ ಗ್ಯಾಸ್‌ದರ ಇಳಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಮಹಿಳಾ ಕಾಂಗ್ರೆಸ್ ನಗರಾಧ್ಯಕ್ಷೆ ಶಶಿ, ಮಡಿಕೇರಿ ನಗರಸಭೆ ಸದಸ್ಯರಾದ ಮಂಡಿರ ಸದಾ ಮುದ್ದಪ್ಪ, ಜಿ.ಸಿ. ಜಗದೀಶ್, ಯಾಕುಬ್, ಜುಲೇಕಾಬಿ, ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂಪತ್, ಸೇವಾ ದಳದ ಅಧ್ಯಕ್ಷ ಕಾನೆಹಿತ್ಲು ಮೊಣ್ಣಪ್ಪ, ಕಾರ್ಮಿಕ ಘಟಕದ ಅಧ್ಯಕ್ಷ ದಿನೇಶ್, ಪ್ರಮುಖರಾದ ಅಂಬೇಕಲ್ ನವೀನ್, ಸುದಯ್ ನಾಣಯ್ಯ, ಕೆ.ಜೆ.ಪೀಟರ್, ಜಾನ್ಸನ್ ಪಿಂಟೋ, ಮೀನಾಜ್ ಪ್ರವೀಣ್, ಆರ್.ಪಿ. ಚಂದ್ರಶೇಖರ್, ಫ್ಯಾನ್ಸಿ ಪಾರ್ವತಿ, ಮುಮ್ತಾಜ್ ಬೇಗಂ, ಪ್ರೇಮಾ ಕೃಷ್ಣಪ್ಪ, ಪ್ರೇಮಾ ಲಿಂಗಪ್ಪ, ಮುನೀರ್ ಮಾಚರ್, ಜಾಕೀರ್ ಹುಸೇನ್ ಮೊದಲಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕಾಡಾನೆಯಿಂದ ಜೀವಹಾನಿಯಾದಾಗ ವಿಪಕ್ಷ ಕಣ್ಣು ಮುಚ್ಚಿ ಕುಳಿತುಕೊಳ್ಳಬೇಕೆ

ಜಿಲ್ಲಾ ಬಿಜೆಪಿ ಅಧ್ಯಕ್ಷರ ತೀಕ್ಷ್ಣ ಪ್ರಶ್ನೆ

ಮಡಿಕೇರಿ, ಮಾ.23– ಕಾಡಾನೆ-ಮಾನವ ಸಂಘರ್ಷದಿಂದ ಜೀವಹಾನಿ ಸಂಭವಿಸಿದಾಗ ವಿರೋಧ ಪಕ್ಷವಾಗಿ 'ಕಣ್ಣು ಮುಚ್ಚಿ ಕುಳಿತುಕೊಳ್ಳಬೇಕೆ' ಎಂದು ಜಿಲ್ಲಾ ಬಿಜೆಪಿ ಆಡಳಿತ ಪಕ್ಷ ಕಾಂಗ್ರೆಸ್ ಅನ್ನು ಪ್ರಶ್ನಿಸಿದೆ.

ಕೇವಲ 10 ದಿನಗಳ ಅವಧಿಯಲ್ಲಿ ಮೂವರು ಆನೆ ದಾಳಿಗೆ ಬಲಿಯಾಗಿದ್ದಾರೆ. ಸರ್ಕಾರದ ಕಣ್ಣು ತೆರೆಸುವ ನಿಟ್ಟಿನಲ್ಲಿ ಬಿಜೆಪಿ ಪ್ರತಿಭಟನೆ ಮತ್ತು ರಸ್ತೆ ತಡೆಗಳನ್ನು ನಡೆಸಿದ್ದಕ್ಕೆ ಕಾಂಗ್ರೆಸ್, 'ಸಾವಿನ ಮನೆಯ ರಾಜಕಾರಣ' ಎಂದು ಟೀಕಿಸಿದೆ. ಓರ್ವ ವ್ಯಕ್ತಿ ಸತ್ತ ಸಂದರ್ಭ ಬಿಜೆಪಿ ಮೌನವಾಗಿರ ಬೇಕಿತ್ತೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ಕಾಂಗ್ರೆಸ್ಸನ್ನು ಸುದ್ದಿ ಗೋಷ್ಠಿಯಲ್ಲಿ ಕಟುವಾಗಿ ಟೀಕಿಸಿದರು.



ಬಿಜೆಪಿ ಜಿಲ್ಲಾ ನಾಯಕರು ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬಿಜೆಪಿಯ ಹೋರಾಟದ ಫಲವಾಗಿ ಕಾಡಾನೆ ಮಾನವ ಸಂಘರ್ಷದ ವಿಚಾರ ವಿಧಾನಸಭೆಯಲ್ಲಿ ಚರ್ಚೆಗೆ ಬಂದು ಅರಣ್ಯ ಸಚಿವರು ಸಭೆ ನಡೆಸಿ ಅಗತ್ಯ ಕ್ರಮಗಳ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳಲು ಮುಂದಾಗುವಂತಾಯಿತು ಎಂದರು. ಕಾಡಾನೆ ಮತ್ತು ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಪಕ್ಷಾತೀತವಾಗಿ ಎಲ್ಲಾ ಸಂಘಟನೆಗಳು, ಎಲ್ಲಾ ರಾಜಕೀಯ ಪಕ್ಷಗಳ ಪ್ರಮುಖರು, ಅಧಿಕಾರಿಗಳನ್ನು ಒಳಗೊಂಡಂತೆ ಅರಣ್ಯ ಸಚಿವರು ಸಭೆ ಕರೆಯಬೇಕೆಂದು ಒತ್ತಾ ಯಿಸಿದರು.

ಆತ್ಮಾವಲೋಕನ ಮಾಡಿಕೊಳ್ಳಲಿ: ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಲ್ಲಿನ ಶಾಸಕರು ಜಿಲ್ಲೆಗೆ ಹತ್ತಾರು ಉಪಯುಕ್ತ ಯೋಜನೆಗಳನ್ನು ತಂದು ಅನುಷ್ಠಾನಗೊಳಿಸಿದ್ದರೂ ಎಲ್ಲೂ ತಮ್ಮ ಹೆಸರನ್ನು ಹಾಕಿ ಕೊಂಡಿಲ್ಲ. ಸಣ್ಣಮಟ್ಟ ಕೆಲಸ ಗಳನ್ನು ಮಾಡಿ ತಾವೇ ಮಾಡಿದ್ದು ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಈ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ಶಾಸಕ ಪೊನ್ನಣ್ಣ ಆರೋಪಕ್ಕೆ ತಿರುಗೇಟು ನೀಡಿದರು. ಜಿಲ್ಲೆಯಲ್ಲಿ ಪ್ರಸ್ತುತ ನಡೆಸಿರುವ ಹಲವಾರು ಅಭಿವೃದ್ಧಿ ಕಾರ್ಯಗಳು ಬಿಜೆಪಿ ಅವಧಿಯಲ್ಲಿ ಆರಂಭಗೊಂಡು ಬಹುತೇಕ ಪೂರ್ಣಗೊಂಡಿವೆ. ಕೊನೆಯ ಹಂತದಲ್ಲಿ ಕಾಂಗ್ರೆಸ್ ಕೇವಲ ವೈಟ್‌ವಾಷ್ ಮಾಡಿ ಕಾಮಗಾರಿ ಉದ್ಘಾಟಿಸುತ್ತಿದೆ ಎಂದು ಲೇವಡಿ ಮಾಡಿದರು.

ಮಾಜಿ ಸಚಿವ ಅಪ್ಪಚ್ಚು ರಂಜನ್ ಮಾತನಾಡಿ, ಬಿಜೆಪಿ ಅವಧಿಯಲ್ಲಿ ಅರಣ್ಯ ವ್ಯಾಪ್ತಿಯಲ್ಲಿ ಇದ್ದ ಕಂದಕಗಳನ್ನು ಸ್ವಚ್ಛಗೊಳಿಸುವ ಕಾರ್ಯ ನಡೆಸುತ್ತಿತ್ತು. ಇಂದು ಆ ಕಾರ್ಯ ನಡೆಯದಿರುವುದು ಕಾಡಾನೆ ಹಾವಳಿ ಹೆಚ್ಚಳಕ್ಕೆ ಕಾರಣವಾಗಿದೆ. ಅಂದು ಸಮಸ್ಯೆಯ ಶಾಶ್ವತ ಪರಿಹಾರಕ್ಕೆ 1500 ಕೋಟಿ ವೆಚ್ಚದ ಯೋಜನೆಯ ನೀಲ ನಕಾಶೆ ತಯಾರಿಸಲಾಗಿತ್ತು. ಅದನ್ನು ಅನುಸರಿಸಿ ಕಾರ್ಯ ಯೋಜನೆ ರೂಪಿಸಿದ್ದರೆ ಸಮಸ್ಯೆ ಬಗೆಹರಿಸಬಹುದಿತ್ತು ಎಂದು ಅಭಿಪ್ರಾಯಿಸಿದರು.

ಎಂಎಲ್‌ಸಿ ಸುನಿಲ್ ಸುಬ್ರಮಣಿ ಮಾತನಾಡಿ, ರಾಜ್ಯ ಸರ್ಕಾರ ಕೇಂದ್ರದ ವಿರುದ್ಧ ಪ್ರತಿಭಟನೆ ನಡೆಸುತ್ತಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮಹೇಶ್ ಜೈನಿ, ವಕ್ತಾರ ಬಿ.ಕೆ.ಅರುಣ್‌ಕುಮಾರ್, ಮಾಧ್ಯಮ ಪ್ರಮುಖ್ ಸಜಿಲ್ ಕೃಷ್ಣ ಉಪಸ್ಥಿತರಿದ್ದರು.

ಸಮೀರ್‌ಗೆ ರತ್ನ ಶ್ರೀ ಪ್ರಶಸ್ತಿ ಪ್ರದಾನ



ಮಡಿಕೇರಿ,ಮಾ.23–ಕೂರ್ಗ್ ಬ್ಲಡ್ ಫೌಂಡೇಶನ್ ಕರ್ನಾಟಕ ಸಂಸ್ಥೆಯ ಸ್ಥಾಪಕ ಅಧ್ಯಕ್ಷ ಸಮೀರ್ ಎಂ. ಮಡಿಕೇರಿ ಅವರಿಗೆ ಕಾವ್ಯಶ್ರೀ ಚಾರಿಟೇಬಲ್ ಟ್ರಸ್ಟ್(ರಿ) ಜಾನಪದ ಸಂಭ್ರಮ–2026 'ರತ್ನ ಶ್ರೀ' ರಾಜ್ಯ ಮಟ್ಟದ ಪ್ರಶಸ್ತಿಯನ್ನು ಬೆಂಗಳೂರಿನಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ರೋಗಿಗಳಿಗೆ ರಕ್ತದ ವ್ಯವಸ್ಥೆ ಮಾಡುವುದು ಸೇರಿದಂತೆ ಸಮೀರ್ ಅವರ ಸಮಾಜ ಮುಖಿ ಕಾರ್ಯವನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ. ಪ್ರಶಸ್ತಿ ಸ್ವೀಕಾರದ ಸಂದರ್ಭ ಸಂಸ್ಥೆಯ ಉಪಾಧ್ಯಕ್ಷ ಆಸಿಫ್, ಪ್ರಮುಖರಾದ ಜಮೀರ್, ಸಾಹಿಲ್ ಹಾಗೂ ಇಸಾಕ್ ಉಪಸ್ಥಿತರಿದ್ದರು.

ಪಂಚ ಗ್ಯಾರಂಟಿ ಯೋಜನೆ ಬಗ್ಗೆ ಮನೆಮನೆಗಳಲ್ಲಿ ಜಾಗೃತಿ ಮೂಡಿಸಿ



ಕಾಂಗ್ರೆಸ್ ಕಾರ್ಯಕರ್ತರ ಸಮಾಲೋಚನಾ ಸಭೆ ಕುಶಾಲನಗರದಲ್ಲಿ ನಡೆಯಿತು.

ಕುಶಾಲನಗರ, ಮಾ.23–ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಮನೆ, ಮನೆಗೆ ತೆರಳಿ ಜಾಗೃತಿ ಮೂಡಿಸುವ ಮೂಲಕ ಮುಂದಿನ ಚುನಾವಣೆಗೆ ಪಕ್ಷವನ್ನು ಸಂಘಟಿಸಲು ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಶ್ರಮಿಸಬೇಕು ಎಂದು ಶಾಸಕ ಡಾ. ಮಂತರ್ ಗೌಡ ಸಲಹೆ ನೀಡಿದರು.

ಇಲ್ಲಿನ ಎಸ್.ಎಲ್.ಎನ್ ಸಭಾಂಗಣದಲ್ಲಿ ಭಾನುವಾರ ಏರ್ಪಡಿಸಿದ್ದ ಕಾಂಗ್ರೆಸ್ ಮುಖಂಡರ ಹಾಗೂ ಕಾರ್ಯಕರ್ತರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ನಾನು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿದ್ದು, ಕ್ಷೇತ್ರದ ಅಭಿವೃದ್ಧಿಯೇ ನನ್ನ ಮೂಲ ಉದ್ದೇಶವಾಗಿದೆ. ಕಾಂಗ್ರೆಸ್ ಪಕ್ಷದಿಂದ ರಾಜಕೀಯ ಆರಂಭಿಸಿದ್ದು, ಯಾವುದೇ ಕಾರಣಕ್ಕೂ ಬಿಜೆಪಿಗೆ ಹೋಗುವ ಪ್ರಶ್ನೆ ಇಲ್ಲ ಎಂದು ಇತ್ತೀಚೆಗೆ ಕೇಳಿ ಬರುತ್ತಿರುವ ಊಹಾಪೋಹಗಳಿಗೆ ತೆರೆ ಎಳೆದರು.

ಕಾಂಗ್ರೆಸ್ ಪಕ್ಷದ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮದ ಉತ್ತಪ್ಪ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾಂಗ್ರೆಸ್ ವಕ್ತಾರ ಟಿ.ಪಿ. ರಮೇಶ್, ವಕೀಲ ಎಚ್.ಎಸ್.ಚಂದ್ರಮೌಳಿ, ವಿವಿಧ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಪಿ.ಶಶಿಧರ್, ಟಿ.ಜಿ.ಸತೀಶ್, ಎಚ್.ಎ. ಹಂಸ ತಮ್ಮ ವ್ಯಾಪ್ತಿಯಲ್ಲಿ ಪಕ್ಷ ಸಂಘಟನೆಯ ಬಗ್ಗೆ ಸಮಗ್ರ ಮಾಹಿತಿ ಒದಗಿಸಿದರು.

ವಿಧಾನಪರಿಷತ್ ಮಾಜಿ ಸದಸ್ಯೆ ವೀಣಾ ಅಚ್ಚಯ್ಯ, ಮಹಿಳಾ ಜಿಲ್ಲಾಧ್ಯಕ್ಷೆ ಜಿ.ಆರ್.ಪುಷ್ಪಲತಾ, ಜಿಲ್ಲಾ ಅಲ್ಪ ಸಂಖ್ಯಾತ ಘಟಕದ ಅಧ್ಯಕ್ಷ ಶರೀಫ್, ಮುಖಂಡರಾದ ಶಾಂತಳ್ಳಿ ಲೋಕೇಶ್, ಕೆ.ಪಿ.ಚಂದ್ರಕಲಾ, ಕೆ.ಎ.ಯಾಕೋಬ್, ಜೆಯೇಂದ್ರ, ಮಂಜುನಾಥ ಗುಂಡುರಾವ್, ಕೆಕೆ ಮಂಜುನಾಥ್ ಕುಮಾರ್, ನಾಪಂಡ ಮುತ್ತಪ್ಪ, ಬಿ ಡಿ ಅಣ್ಣಯ್ಯ, ಪಾಲ್ಗೊಂಡಿದ್ದರು.

ಪೊನ್ನಂಪೇಟೆ: ನಾಳೆ ವಿದ್ಯುತ್ ವ್ಯತ್ಯಯ

ಪೊನ್ನಂಪೇಟೆ: ಸುಳುಗೋಡು, ಕೋಣನ ಕಟ್ಟೆ ಬಾಳೆಲೆ, ದೇವನೂರು, ಪೊನ್ನಂಪೇಟೆ, ಗೋಣಿಕೊಪ್ಪ, ತಿತಿಮತಿ, ಹಾತೂರು, ಕುಂದ, ಕಾನೂರು, ದೇವರಪುರ, ಜಾಗಲೆ, ನಿಟ್ಟೂರು, ಕಿರಗೂರು, ಅತ್ತೂರು, ಕಾಯಿಮನೆ, ಮಂಚಳ್ಳಿ, ತೈಲ, ಸಿಂಕೋನ, ಶ್ರೀಮಂಗಲ, ಕುಟ್ಟ, ಕೆಟ್ಟಗೇರಿ, ಹರಿಹರ, ಬಿರುನಾಣಿ, ಕೆ.ಬಾಡಗದಲ್ಲಿ ಮಾ.26ರ ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ

ಆರೋಪಿಗಳ ಬಂಧನ: ಬೈಕ್, ಕಾರು ವಶ

ವಿರಾಜಪೇಟೆ, ಮಾ.23–ಮನೆಯ ಮುಂದೆ ನಿಲ್ಲಿಸಿದ್ದ ಹೋಂಡ ಬೈಕನ್ನು ಕಳವು ಮಾಡಿ ತಲೆಮರೆಸಿಕೊಂಡಿದ್ದ ಮೂವರು ಆರೋಪಿಗಳನ್ನು ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.



ಪಟ್ಟಣದ ಮೊಗರಗಲ್ಲಿ ನಿವಾಸಿ ಹೆಚ್ ಎಸ್ ಸುಬ್ರಮಣಿ ಫೆ.17 ರಂದು ರಾತ್ರಿ ನಿಲ್ಲಿಸಿದ್ದ ಹೋಂಡ ಶೈನ್ ಬೈಕ್ (ಕೆ.ಎ–12, ಕ್ಯೂ 7989) ಕಳುವಾಗಿತ್ತು. ಸುಬ್ರಮಣಿ ನಗರ ಪೊಲೀಸ್ ಠಾಣೆಗೆ ನೀಡಿದ ದೂರಿನ ಮೇರೆಗೆ ಪೊಲೀಸರು ತನಿಖೆ ನಡೆಸಿದಾಗ ತಾಲೂಕಿನ ನಾಪೋಕ್ಲು ಎಮ್ಮೆಮಾಡು ನಿವಾಸಿ ಬಿ.ಹೆಚ್.ಮಹಮ್ಮದ್ ಫರೀದ್, ಎಮ್.ಯು.ಗಣೇಶ್, ಕೆ.ಎಂ. ಮಹಮದ್ ಎಂಬುರನ್ನು ವಶಕ್ಕೆ ಪಡೆದು ತನಿಖೆ ಕೈಗೊಂಡಾಗ ಬೈಕ್ ಕಳ್ಳತನ ಮಾಡಿರುವುದನ್ನು ಒಪ್ಪಿಕೊಂಡಿದ್ದಾರೆ. ಪೊಲೀಸರು ಬೈಕ್ ವಶಪಡಿಸಿಕೊಂಡು ಮೂವರನ್ನು ನ್ಯಾಯಾಲಯಕ್ಕೆ ಒಪ್ಪಿಸಿದ್ದಾರೆ.

ಹಣ ಕದ್ದಿದ್ದ ಆರೋಪಿ ಬಂಧನ : ರಾತ್ರಿ ವೇಳೆ ವೈನ್‌ಶಾಪ್ ಬೀಗ ಮುರಿದು ಒಳನುಗ್ಗಿ ಹಣ ಕಳವು ಮಾಡಿದ್ದ ವ್ಯಕ್ತಿಯನ್ನು ನಗರ ಠಾಣೆ ಪೊಲೀಸರು ಪತ್ತೆ ಹಚ್ಚಿ ಬಂಧಿಸಿದ್ದಾರೆ. ಖಾಸಗಿ ಬಸ್ ನಿಲ್ದಾಣದ ಬಳಿ ಇರುವ ಭಾರತ್ ವೈನ್ಸ್ ಶಾಪ್‌ನಲ್ಲಿ ಫೆ.23ರಂದು ರಾತ್ರಿ ಬೀಗ ಮುರಿದು 15 ಸಾವಿರ ಕಳವು ಮಾಡಿದ್ದ ಭಾಗಮಂಡಲ ಚಟ್ಟಿಮನೆ ಗ್ರಾಮದ ಕಾಣಕಂಡಿ ಕಾಲೋನಿ ನಿವಾಸಿ ಹೆಚ್.ಡಿ. ಕಿರಣ್ ತಮ್ಮಯ್ಯನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆತ ಕಳ್ಳತನ ಮಾಡಿರುವುದಾಗಿ ಒಪ್ಪಿ ಕೊಂಡಿದ್ದಾನೆ ಆತನನ್ನು ನ್ಯಾಯಾಲಯಕ್ಕೆ ಒಪ್ಪಿಸ ಲಾಗಿದೆ ಎಂದು ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಾಂಜಾ ಮಾರುತ್ತಿದ್ದವರ ಬಂಧನ : ಕಾರಿನಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರನ್ನು ನಗರ ಠಾಣೆ ಪೊಲೀಸರು ಬಂಧಿಸಿ, ದಂಧೆಗೆ ಬಳಸಿದ್ದ ಕಾರನ್ನು ವಶ ಪಡಿಸಿಕೊಂಡಿದ್ದಾರೆ. ಪೆರುಂಬಾಡಿ ಗ್ರಾಮದಲ್ಲಿ ಗಾಂಜಾ ಮಾರಾಟ ಮಾಡುತ್ತಿರುವ ಸುಳಿವು ಅರಿತ ಪೊಲೀಸರು ದಾಳಿ ನಡೆಸಿದ ಸಂದರ್ಭ ಸ್ವಿಫ್ಟ್ ಕಾರಿ (ಕೆ.ಎಲ್–04,ಡಬ್ಲೋ–6288) ನಲ್ಲಿ ಹಣಗೂಡು ಕೊಳವಿಗೆ ನಿವಾಸಿಗಳಾದ ಜಿ.ಕೆ.ಮಧು ಮಹದೇವ ಹಾಗೂ ಜೆ.ಸಿ.ಶಶಿ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಸುದ್ದಿ ತಿಳಿದ ಪೊಲೀಸರು ದಾಳಿ ನಡೆಸಿ ಬಂಧಿಸಿದ ಪೊಲೀಸರು ಕಾರನ್ನು ವಶಪಡಿಸಿಕೊಂಡು ಆರೋಪಿಗಳನ್ನು ನ್ಯಾಯಾಲಯಕ್ಕೆ ಒಪ್ಪಿಸಲಾಗಿದೆ.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ನಿರ್ದೇಶನದಂತೆ, ಡಿವೈಎಸ್‌ಪಿ ಮಹೇಶ್ ಕುಮಾರ್, ಅವರ ಮಾರ್ಗ ದರ್ಶನದಲ್ಲಿ, ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ, ನಗರ ಠಾಣಾಧಿಕಾರಿ ಹೆಚ್.ಎಸ್.ಪ್ರಮೋದ್, ಅಪರಾಧ ವಿಭಾಗದ ಪಿ.ಎಸ್.ಐ ಕಾವೇರಪ್ಪ, ಸಿಬ್ಬಂದಿಗಳಾದ ಎ.ಎಸ್.ಐ ಟಿ.ಪಿ. ಮಂಜುನಾಥ್, ಜಿ.ವಿ.ತೇಜಸ್ ಕುಮಾರ್, ಎನ್.ಆರ್ ಹರೀಶ್ ತನಿಖಾ ಕಾರ್ಯದಲ್ಲಿ ಭಾಗವಹಿಸಿದ್ದರು.

ಹಾಕಿ ಬೇಸಿಗೆ ಶಿಬಿರಕ್ಕೆ ಒಲಂಪಿಯನ್ ವಾಸುದೇವನ್



ನಾಪೋಕ್ಲು, ಮಾ.23(ದುಗ್ಗಳ)–ಮಾಸ್ಕೋ ಒಲಂಪಿಕ್ಸ್‌ನಲ್ಲಿ ಚಿನ್ನದ ಪದಕ ವಿಜೇತ ವಾಸುದೇವನ್ ಭಾಸ್ಕರನ್ ಉಚಿತ ಹಾಕಿ ಬೇಸಿಗೆ ಶಿಬಿರದ ಉದ್ಘಾಟನೆಗಾಗಿ ಏ.5 ರಂದು ಕೊಡಗಿಗೆ ಭೇಟಿ ನೀಡಲಿದ್ದಾರೆ.

ಒಲಂಪಿಯನ್ Lt.Col. ಬಾಳೆಯಡ ಕೆ.ಸುಬ್ರಮಣಿ ಆಯೋಜಿಸಿರುವ ಎರಡನೇ ವರ್ಷದ ಉಚಿತ ಹಾಕಿ ಬೇಸಿಗೆ ಶಿಬಿರದ ಉದ್ಘಾಟನೆಗೆ ಆಗಮಿಸುತ್ತಿರುವ ವಾಸುದೇವನ್ ಭಾಸ್ಕರನ್ 287 ಅಂತರರಾಷ್ಟ್ರೀಯ ಪಂದ್ಯಗಳಲ್ಲಿ ಭಾರತವನ್ನು ಪ್ರತಿನಿಧಿಸಿ 1980ರ ಮಾಸ್ಕೋ ಒಲಿಂಪಿಕ್ಸ್‌ನಲ್ಲಿ ಭಾರತ ತಂಡವನ್ನು ನಾಯಕನಾಗಿ ಮುನ್ನಡೆಸಿ ಚಿನ್ನದ ಪದಕ ಗೆದ್ದಿದ್ದರು. ಭಾಸ್ಕರನ್ ಕೊಡಗಿನ ಹಲವಾರು ಪ್ರಮುಖ ಆಟಗಾರರಿಗೆ ತರಬೇತಿ ನೀಡಿದ್ದು ಭಾರತದಲ್ಲಿ ಹಾಕಿ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿದ್ದಾರೆ.

ಒಲಿಂಪಿಕ್ಸ್ ಮತ್ತು ಏಷ್ಯನ್ ಗೇಮ್ಸ್ ಸೇರಿದಂತೆ 41 ವಿವಿಧ ಕ್ರೀಡೆಗಳಲ್ಲಿ ಉನ್ನತ ಸಾಧನೆ ಮಾಡಿದ ಕ್ರೀಡಾಪಟುಗಳನ್ನು ಮೇಲ್ವಿಚಾರಣೆ ಮಾಡುವ ಜವಾಬ್ದಾರಿಯನ್ನು ಹೊಂದಿದ್ದರು.

ಒಳ ಮೀಸಲಾತಿ ವಿರೋಧಿಸಿ ಬಲಗೈ ಸಮುದಾಯ ಪ್ರತಿಭಟನೆ

ಗುಂಡ್ಲುಪೇಟೆ, ಮಾ.23– ಒಳಮೀಸಲಾತಿ ಅನುಷ್ಠಾನದಲ್ಲಿ ಬಲಗೈ ಸಮುದಾಯಕ್ಕೆ ಅನ್ಯಾಯವಾಗಿದೆ ಎಂದು ಬಲಗೈ ಸಮುದಾಯ ಒಕ್ಕೂಟ ಹಾಗೂ ಹೊಲೆಯ ಬ್ರಿಗೇಡ್ ವತಿಯಿಂದ ಸೋಮವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ದೇವರಾಜ ಅರಸು ಕ್ರೀಡಾಂಗಣದಲ್ಲಿ ಸಮಾವೇಶಗೊಂಡ ನೂರಾರು ಮಂದಿ ಪ್ರತಿಭಟನಾಕಾರರು ರಾಷ್ಟ್ರೀಯ ಹೆದ್ದಾರಿ ಮಾರ್ಗವಾಗಿ ಕಾಲ್ನಡಿಗೆಯಲ್ಲಿ ತೆರಳುವ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಚಿವರ ವಿರುದ್ಧ ಧಿಕ್ಕಾರ ಕೂಗಿದರು. ರಾಷ್ಟ್ರೀಯ ಹೆದ್ದಾರಿಯಲ್ಲಿ ಬೃಹತ್ ಜಾಥಾ ಹೊರಟ ಪ್ರತಿಭಟನಾಕಾರರು ತಹಶೀಲ್ದಾರ್ ಕಚೇರಿ ಮುಂಭಾಗ ಜಮಾಯಿಸಿ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.



ಒಳ ಮೀಸಲಾತಿ ವಿರೋಧಿಸಿ ಬಲಗೈ ಸಮುದಾಯದವರು ಪ್ರತಿಭಟನೆ ನಡೆಸಿದರು.

ಮುಖಂಡ ಡಾ.ನವೀನ್ ಮೌರ್ಯ ಮಾತನಾಡಿ, ಮೀಸಲಾತಿಯಲ್ಲೇ ಒಳಸಂಚು ಮಾಡಿರುವ ಕಾಂಗ್ರೆಸ್ ಸರ್ಕಾರ ಬಲಗೈ ಸಮುದಾಯದ ಸಂಪೂರ್ಣ ಹಕ್ಕನ್ನು ಕಸಿಯಲೆತ್ನಿಸಿದೆ. ನಮ್ಮ ಹೋರಾಟ ಮೀಸಲಾತಿ ವಿರುದ್ಧವಲ್ಲ. ಆದರೆ ಸರ್ಕಾರದ ರೋಸ್ಟರ್ ಬಿಂದು ನಿಯಮವನ್ನು ಮಾತ್ರ ವಿರೋಧಿಸುತ್ತಿದ್ದೇವೆ ಎಂದರು. ಸಾಮಾಜಿಕವಾಗಿ ಹಿಂದುಳಿದಿರುವ ಹೊಲೆಯ ಸಮಾಜದ ಹಕ್ಕು ಬಾಧ್ಯತೆಯನ್ನು ಪರೋಕ್ಷವಾಗಿ ಕಸಿದುಕೊಳ್ಳುವ ಕಾಂಗ್ರೆಸ್ ಸರ್ಕಾರದ ಕುತಂತ್ರ ನೀತಿಯ ಬಗ್ಗೆ ನಮಗೆ ಅರಿವಿದೆ, ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯ ಹಾಗೂ ಸರ್ಕಾರದ ವಿರುದ್ಧ ನಮ್ಮ ಸಮಾಜ ಸೆಟೆದು ನಿಲ್ಲಲಿದೆ ಎಂದು ಹರಿಹಾಯ್ದರು. ಕಳೆದ ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ಈಗಿನ ಗೃಹಸಚಿವ ಡಾ.ಜಿ. ಪರಮೇಶ್ವರ್ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಲಾಗಿದ್ದು ಮೀಸಲಾತಿಯನ್ನ ಯಥಾವತ್ ಜಾರಿಗೆ ನಮ್ಮ ಆಗ್ರಹವಿದೆ ಆದರೆ ದಲಿತರ ಮುಗ್ಧತೆಯನ್ನೇ ಬಂಡವಾಳವಾಗಿಸಿಕೊಂಡ ಕೈ ಸರ್ಕಾರ ಸಮುದಾಯದ ಜನರಿಗೆ ಆರ್ಥಿಕವಾಗಿ, ಶೈಕ್ಷಣಿಕವಾಗಿ ಬಹಳಷ್ಟು ಅನ್ಯಾಯ ಮಾಡಲು ಹೊರಟಿದೆ ಎಂದು ಮುಖಂಡ ಮಂಜುನಾಥ್ ತೀವ್ರ ವಾಗ್ದಾಳಿ ನಡೆಸಿದರು. ಮಾನವ ಬಂಧುತ್ವ ವೇದಿಕೆ ಜಿಲ್ಲಾ ಸಂಚಾಲಕ ಸುಭಾಷ್ ಮಾಡ್ರಹಳ್ಳಿ ಮಾತನಾಡಿ ನಾವು ಎಡಗೈ ಸಮುದಾಯದ ವಿರೋಧಿಗಳಲ್ಲ, ನ್ಯಾಯಯುತ ನಡೆಗೆ ಮುಂದಾಗಬೇಕಿದ್ದ ಸರ್ಕಾರವೇ ಒಡೆದು ಆಳುವ ನೀತಿಗೆ ಮುಂದಾಗಿರುವುದು ವಿಷಾದಕರ, ಆರ್ಥಿಕವಾಗಿ ಸಾಮಾಜಿಕವಾಗಿ ನಲುಗಿರುವ ಬಲಗೈ ಸಮುದಾಯದ ಏಳ್ಗೆಗೂ ಕೊಡುಗೆ ನೀಡಬೇಕಿದ್ದ ಸರ್ಕಾರ ದ್ವಂದ್ವ ನೀತಿ ಅನುಸರಿಸುತ್ತಿರುವುದು ಸರಿಯಲ್ಲ , ಅವೈಜ್ಞಾನಿಕ ರೋಸ್ಟರ್ ಬಿಂದುವಿನಿಂದ ಗೊಂದಲಗಳು ಸೃಷ್ಟಿಯಾಗಿದ್ದು ನಾಗಮೋಹನ್ ದಾಸ್ ವರದಿಯನ್ನ ತಕ್ಷಣವೇ ತಡೆಹಿಡಿದು ಸರಿದೂಗಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯನ್ನುದ್ದೇಶಿಸಿ ಮೂಡ್ನಾಕೂಡು ಪ್ರಕಾಶ್, ಬಸವರಾಜು ಸೇರಿದಂತೆ ಹಲವರು ಮಾತನಾಡಿದರು.

ನಂತರ ತಮ್ಮ ಹಕ್ಕೋತಾಯದ ಪತ್ರವನ್ನು ತಹಸೀಲ್ದಾರ್ ಎಂ.ಎಸ್.ತನ್ಮಯ್ ಅವರಿಗೆ ಸಲ್ಲಿಸಿದರು.

ನಾಗುಸ್ವಾಮಿ ಕಣ್ಣೇಗಾಲ, ಸ್ವಾಮಿ, ಶ್ರೀನಿವಾಸ್ ಪಾಳ್ಯ, ರಾಜೇಂದ್ರ, ರೇವಣ್ಣ ಸೋಮು ಮುಂಟೀಪುರ, ಆರ್.ಡಿ ಉಲ್ಲಾಸ್,ಮಧು, ರೇವಣ್ಣ ಕಬ್ಬಹಳ್ಳಿ, ಉಮೇಶ್ ಮಂಗಲ, ಬಸವಣ್ಣ ಕಿಲಗೆರೆ, ಶಾಂತಕುಮಾರ್, ನಾಗರಾಜು, ವಾಸು, ಪುಟ್ಟು ಚನ್ನವಡೆಯನಪುರ, ಸಿದ್ದರಾಜು, ಶಿವು ವೀರನಪುರ, ಹರೀಶ್, ಶಿವು ಕುನಗಳ್ಳಿ, ವಕೀಲ ಸಂಪತ್ತು, ಯೋಗೇಶ್ ಪಾಲ್ಗೊಂಡಿದ್ದರು.

ಶಾಸಕ ಎಆರ್‌ಕೆ ಹುಟ್ಟುಹಬ್ಬ ಆಚರಣೆ



ಕೊಳ್ಳೇಗಾಲ, ಮಾ.23– ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ ಅವರ 65ನೇ ವರ್ಷದ ಹುಟ್ಟುಹಬ್ಬವನ್ನು ಅಭಿಮಾನಿಗಳು ಹಾಗೂ ಕಾಂಗ್ರೆಸ್ ಮುಖಂಡರು ಸೋಮವಾರ ಅದ್ದೂರಿಯಾಗಿ ಆಚರಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಶಾಸಕರು ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ಬಳಿಕ ಅಭಿಮಾನಿಗಳ ಜೊತೆಗೂಡಿ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬವನ್ನು ಆಚರಿಸಿಕೊಂಡರು. ಶಾಸಕರು ಕೊಳ್ಳೇಗಾಲಕ್ಕೆ ಆಗಮಿಸುತ್ತಿದ್ದಂತೆ ಮೊದಲು ಎಂಜಿಎಸ್‌ವಿ ಗುರುಕಾರ್ ವೃತ್ತದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಬಸ್ತಿಪುರ ಶಾಂತರಾಜು ಅವರ ನೇತೃತ್ವದಲ್ಲಿ ಹಲವು ಮುಖಂಡರು, ಮಹಿಳೆಯರು ಪಾಲ್ಗೊಂಡು ಶಾಸಕರಿಗೆ ಅಭಿನಂದನೆ ಸಲ್ಲಿಸಿದರು. ಪಟಾಕಿ ಸಿಡಿಸಿ ಸಂಭ್ರಮಿಸಿದರು. ಬಳಿಕ ಸಿಹಿ ವಿತರಿಸಿ ಕಾರ್ಯಕರ್ತರು ಅಭಿನಂದಿಸಿದರು.

ಬಳಿಕ ನಗರಸಭೆ ಮಾಜಿ ಅಧ್ಯಕ್ಷ ಭೀಮನಗರ ರಮೇಶ್ ನೇತೃತ್ವದಲ್ಲಿ ಶಾಸಕರನ್ನು ಅಭಿನಂದಿಸಲಾಯಿತು. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡುತ್ತಿದ್ದಂತೆ ಕೇಕ್ ಕತ್ತರಿಸಿ ಶಾಸಕರಿಗೆ ಅಭಿಮಾನಿಗಳು ಹಾರ, ಶಾಲು ಹೊದಿಸಿ ಸನ್ಮಾನಿಸಿದರು. ಈ ವೇಳೆ ಅಭಿಮಾನಿಗಳಿಂದ ಜೈಕಾರದ ಘೋಷಣೆಗಳು ಕೇಳಿ ಬಂತು. ಈ ಸಂದರ್ಭದಲ್ಲಿ ರೇಖಾ ರಮೇಶ್, ಶಾಂತರಾಜು, ಮಂಜುನಾಥ್, ನಟರಾಜಮಾಳಿಗೆ, ರಾಘವೇಂದ್ರ ಇನ್ನಿತರಿದ್ದರು.

ಒಳ ಮೀಸಲಾತಿ ವಿರೋಧಿಸಿ ನಾಳೆ ಬೆಂಗಳೂರಿನಲ್ಲಿ ಪ್ರತಿಭಟನೆ

ಚಾ.ನಗರ ಜಿಲ್ಲೆಯಿಂದ 10 ಸಾವಿರ ಬಲಗೈ ಸಮುದಾಯದವರು ಭಾಗಿ

ಚಾಮರಾಜನಗರ: ರಾಜ್ಯ ಸರ್ಕಾರ ಜಾರಿ ಮಾಡಿರುವ ಒಳ ಮೀಸಲಾತಿ ಬಲಗೈ ಸಮುದಾಯದ ವಿರೋಧಿಯಾಗಿದ್ದು, ಇದನ್ನು ವಿರೋಧಿಸಿ ಬಲಗೈ ಸಮುದಾಯದ ಒಕ್ಕೂಟದಿಂದ ಮಾ.25 ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದ್ದು, ಜಿಲ್ಲೆಯಿಂದ 10 ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಲಿದ್ದಾರೆ ಎಂದು ಡಾ. ಅಂಬೇಡ್ಕರ್ ಮಹಾಸಭಾದ ಗೌರವ ಅಧ್ಯಕ್ಷ ಸಿ.ಎಂ. ಕೃಷ್ಣಮೂರ್ತಿ ತಿಳಿಸಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಸಿ.ಎಂ.ಕೃಷ್ಣಮೂರ್ತಿ ಮಾತನಾಡಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾ. ನಾಗಮೋಹನ್ ದಾಸ್ ಅವರ ವರದಿಯೇ ಅವೈಜ್ಞಾನಿಕವಾಗಿದ್ದು, ಸಮೀಕ್ಷೆ ಹಾಗೂ 101 ಜಾತಿಗಳ ನಿಖರವಾದ ಮಾಹಿತಿಯನ್ನು ಸಂಗ್ರಹಿಸುವಲ್ಲಿ ವಿಫಲರಾಗಿದ್ದಾರೆ. 2025ರ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆಯಂತೆ ಜಾತಿ ಪ್ರಮಾಣ ಪತ್ರಗಳನ್ನು ಪ್ರವರ್ಗ ಎ, ಬಿ, ಮತ್ತು ಸಿ ಎಂದು ವರ್ಗೀಕರಿಸಿರುವುದನ್ನು ಹಿಂಪಡೆದು ಮೂಲ ಜಾತಿಗಳನ್ನು ನಮೂದಿಸಿ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ಸೂಕ್ತ ಆದೇಶ ಹೊರಡಿಸುವುದು ಸರಿಯಲ್ಲ ಎಂದರು.

ಬಲಗೈ ಸಮುದಾಯದ ಮರಣ ಶಾಸನವಾಗಿರುವ ಒಳ ಮೀಸಲಾತಿಯನ್ನು ರದ್ದುಪಡಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟದ ಅಧ್ಯಕ್ಷರಾದ ಜ್ಞಾನಪ್ರಕಾಶ ಸ್ವಾಮೀಜಿ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಬೃಹತ್ ಸಮಾವೇಶ ನಡೆಯಲಿದ್ದು, ಈ ಸಮಾವೇಶಕ್ಕೆ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಬಲಗೈ ಸಮುದಾಯದ ಬಂಧುಗಳು ಭಾಗವಹಿಸಬೇಕು ಎಂದು ಕೃಷ್ಣಮೂರ್ತಿ ಮನವಿ ಮಾಡಿದರು.

ಒಳ ಮೀಸಲಾತಿ ಜಾರಿಗೆ ಬಲಗೈ ಸಚಿವರೇ ಕಾರಣ: ಡಾ.ಬಿ.ಆರ್.ಅಂಬೇಡ್ಕರ್ ಮಹಾಸಭಾದ ಕಾರ್ಯಾಧ್ಯಕ್ಷ ಸಿ.ಕೆ.ಮಂಜುನಾಥ್ ಮಾತನಾಡಿ, ಒಳ ಮೀಸಲಾತಿ ಎಂಬುವುದು ಸಂವಿಧಾನದಲ್ಲಿ ಇಲ್ಲ. ಇದೊಂದು ಅವೈಜ್ಞಾನಿಕವಾಗಿದ್ದು, ಇದರ ಬಗ್ಗೆ ಮಾಹಿತಿ ಕೊಡುವಲ್ಲಿ ಹಾಗೂ ಒಳಮೀಸಲಾತಿಯನ್ನು ತಡೆಯುವಲ್ಲಿ ಬಲಗೈ ಸಮುದಾಯದ ಸಚಿವರೇ ವಿಫಲರಾಗಿದ್ದು, ಬಲಗೈ ಸಮುದಾಯಯ ಸಚಿವರು ವಾಸ್ತಾಂಶವನ್ನು ತಿಳಿದುಕೊಳ್ಳುವಲ್ಲಿ ಸೋತಿದ್ದು, ಇದರಿಂದ ಬಲಗೈ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಹಾಸಭಾದ ಅಧ್ಯಕ್ಷ ಉಮೇಶ್ ಕುದರ್, ಪ್ರಧಾನ ಕಾರ್ಯದರ್ಶಿ ಗಣೇಶ್ ಪ್ರಸಾದ್, ಮುಖಂಡರಾದ ರಾಮಸಮುದ್ರ ಬಾಬು, ಹೊಂಡರಬಾಳು ವಾಸು, ಸಿದ್ದರಾಜು, ರಂಗಸ್ವಾಮಿ, ಕೃಷ್ಣಮೂರ್ತಿ ಇತರರು ಹಾಜರಿದ್ದರು.

ಕೊಳ್ಳೇಗಾಲದಲ್ಲಿ ದೇವರ ದಾಸಿಮಯ್ಯ ಜಯಂತಿ ಆಚರಣೆ

ಕೊಳ್ಳೇಗಾಲ: ಪಟ್ಟಣದ ದೇವಲ ಮಹರ್ಷಿ ವೃತ್ತದಲ್ಲಿರುವ ದೇವರ ದಾಸಿಮಯ್ಯ ಪ್ರತಿಮೆಗೆ ಶಾಸಕ ಎ.ಆರ್.ಕೃಷ್ಣ ಮೂರ್ತಿ ಮಾಲಾರ್ಪಣೆ ಮಾಡುವ ಮೂಲಕ ದೇವರ ದಾಸಿಮಯ್ಯ ಜಯಂತಿಯನ್ನು ತಾಲೂಕು ಆಡಳಿತದ ವತಿಯಿಂದ ಆಚರಿಸಿದರು.

ಪಟ್ಟಣದಲ್ಲಿ ಮಹರ್ಷಿಗಳ ಪುತ್ಥಳಿಗೆ ಶಾಸಕ ಎ.ಆರ್.ಕೃಷ್ಣಮೂರ್ತಿ, ತಹಸೀಲ್ದಾರ್ ಬಸವರಾಜು, ದೇವಾಂಗ ಸಮಾಜದ ಮುಖಂಡರುಗಳಾದ ನಿರಂಜನ್, ಗಿರೀಶ್ ಬಾಬು ಸೇರಿದಂತೆ ಸಮಾಜದ ಮುಖಂಡರುಗಳು ಮಾಲಾರ್ಪಣೆ ಮಾಡಿ ದಾಸಿಮಯ್ಯ ಅವರನ್ನು ಸ್ಮರಿಸಿದರು. ಬಳಿಕ ವೃತ್ತದಲ್ಲಿ ನೆರೆದಿದ್ದ ಗಣ್ಯರು, ಸಾರ್ವಜನಿಕರಿಗೆ ಸಿಹಿ ವಿತರಿಸುವ ಜೊತೆಗೆ ಅನ್ನಸಂತರ್ಪಣೆ ಮಾಡಲಾಯಿತು. ರಾಜೇಂದ್ರ, ತೋಟೇಶ್, ಶ್ರೀನಿವಾಸ್ ಶಾಸ್ತ್ರೀ, ಪರಮೇಶ್ವರಯ್ಯ, ಮಧುಚಂದ್ರ, ಪ್ರಶಾಂತ್ ಇದ್ದರು.

ಆಹಾರ ಇಲಾಖಾಧಿಕಾರಿಗಳ ದಾಳಿ: 10 ಸಿಲಿಂಡರ್ ವಶ



ಕೊಳ್ಳೇಗಾಲ, ಮಾ.23– ಗ್ಯಾಸ್ ಸಿಲಿಂಡರ್‌ಗಳು ಅಭಾವವಿದ್ದರೂ, ನಿಯಮ ಮೀರಿ ಗೃಹ ಬಳಕೆಯ ಸಿಲಿಂಡರ್‌ಗಳನ್ನು ಬಳಸುತ್ತಿದ್ದ ಹೋಟೆಲ್ ಸೇರಿದಂತೆ ಹಲವು ಕಡೆ ಆಹಾರ ಇಲಾಖಾಧಿಕಾರಿಗಳು ದಾಳಿ ನಡೆಸಿ 10ಕ್ಕೂ ಅಧಿಕ ಗೃಹಬಳಕೆ ಸಿಲಿಂಡರ್‌ಗಳನ್ನು ಸೋಮವಾರ ವಶಕ್ಕೆ ಪಡೆದಿದ್ದಾರೆ. ಗೃಹಬಳಕೆ ಸಿಲಿಂಡರ್‌ಗಳನ್ನು ನಿಯಮ ಉಲ್ಲಂಘಿಸಿ ಬಳಕೆ ಮಾಡಲಾಗುತ್ತಿದೆ ಎಂಬ ದೂರಿನ ಹಿನ್ನೆಲೆ ಆಹಾರ ಇಲಾಖೆಯ ಶಿರಸ್ತೇದಾರ್ ವಿಶ್ವನಾಥ್, ಫುಡ್ ಇನ್ಸ್‌ಪೆಕ್ಟರ್ ಪ್ರಸಾದ್, ಕಸಬಾ ರೆವಿನ್ಯೂ ಇನ್ಸ್‌ಪೆಕ್ಟರ್ ನಿರಂಜನ್, ಗ್ರಾಮ ಸಹಾಯಕ ನಿಂಗರಾಜು ದಾಳಿ ನಡೆಸಿ ಪಟ್ಟಣದ ಹೋಟೆಲ್, ಬಾರ್ ಮತ್ತು ರೆಸ್ಟೋರೆಂಟ್, ಚಾಟ್ಸ್ ಸೇರಿದಂತೆ ಇತರೆ ಕಡೆಗಳಲ್ಲಿ ದಾಳಿ ನಡೆಸಿ ಒಟ್ಟು 10 ಸಿಲಿಂಡರನ್ನು ವಶಕ್ಕೆ ಪಡೆದಿದ್ದಾರೆ.

ಬೆಳೆ ನಷ್ಟ ಪರಿಹಾರಕ್ಕೆ ಒತ್ತಾಯಿಸಿ ರೈತರ ಪ್ರತಿಭಟನೆ

ಚಾಮರಾಜನಗರ: ಜಿಲ್ಲೆಯ ಹಲವೆಡೆ ಇತ್ತೀಚೆಗೆ ಸುರಿದ ಭಾರೀ ಪ್ರಮಾಣದ ಆಲಿ ಕಲ್ಲು ಹಾಗೂ ಬಿರುಗಾಳಿ ಸಹಿತ ಸುರಿದ ಧಾರಾಕಾರ ಮಳೆಯಿಂದ ಉಂಟಾಗಿರುವ ಬೆಳೆ ನಷ್ಟಕ್ಕೆ ಸರ್ಕಾರದಿಂದ ಕೂಡಲೇ ವೈಜ್ಞಾನಿಕ ಪರಿಹಾರ ನೀಡಬೇಕು ಎಂದು ಒತ್ತಾಯಿಸಿ ನಗರದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಯಿತು.



ರೈತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಯಿತು.

ಇಲ್ಲಿನ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನ ಮುಂಭಾಗ ಸಮಾವೇಶ ಗೊಂಡ ಸಂಘಟನೆಯ ಪದಾಧಿಕಾರಿಗಳು ಹಾಗೂ ರೈತರು, ಅಲ್ಲಿಂದ ಶ್ರೀಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮೂಲಕ ಜಿಲ್ಲಾಡಳಿತ ಭವನದ ಮುಂಭಾಗಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿದರು. ಈ ವೇಳೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಒಕ್ಕೂಟ ಅಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್ ಮಾತನಾಡಿ, ಕಳೆದ ವಾರ ರಾಜ್ಯ ಹಾಗೂ ಜಿಲ್ಲೆಯ ಹಲವೆಡೆ ಅಕಾಲಿಕ ಆಲಿಕಲ್ಲು ಮಳೆ ಸುರಿದ ಪರಿಣಾಮ ತೋಟಗಾರಿಕೆ ಬೆಳೆಗಳಾದ ಬಾಳೆ, ಈರುಳ್ಳಿ, ಕಲ್ಲಂಗಡಿ, ಪಪ್ಪಾಯಿ, ಅರಿಶಿಣ ಹಾಗೂ ಒಣಗಿಸಲು ಹಾಕಿದ್ದ ಮೆಣಸಿನ ಕಾಯಿ, ಸೌತೆಕಾಯಿ, ದ್ರಾಕ್ಷಿ ಬೆಳೆಗಳಿಗೆ ಹಾನಿಯಾಗಿದೆ. ಈ ಬೆಳೆಗಳಿಗೆ ವೈಜ್ಞಾನಿಕವಾಗಿ ಸರ್ಕಾರ ಪರಿಹಾರ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ನೂರಾರು ಎಕರೆ ಪ್ರದೇಶದಲ್ಲಿ ಬೆಳೆಗಳು ನಷ್ಟವಾಗಿದೆ. ಕೂಡಲೇ ಸಂಬಂಧಪಟ್ಟಂತಹ ಜಿಲ್ಲಾಡಳಿತ ಕಂದಾಯ ಮತ್ತು ತೋಟಗಾರಿಕೆ ಇಲಾಖೆಯ ಜಂಟಿ ಸರ್ವೆ ಮೂಲಕ ವರದಿ ತಯಾರಿಸಿ ಬೆಳೆ ನಷ್ಟವಾಗಿರುವ ಪ್ರತಿಯೊಬ್ಬ ರೈತನಿಗೂ ಪರಿಹಾರ ಸಿಗುವಂತೆ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಮುಖಂಡರಾದ ರಾಜಣ್ಣ ಹಾಲಿನ ನಾಗರಾಜ್, ರಾಜು, ಗಣೇಶ್, ಮಹೇಂದ್ರ, ಸತೀಶ್, ನಾಗು, ಪ್ರಕಾಶ್, ಗಾಂಧಿ, ರಾಮಣ್ಣ, ಬಸವರಾಜು, ನಾಗರಾಜಪ್ಪ, ರಾಜು, ಪುಟ್ಟಮಲ್ಲೇಗೌಡ ಇದ್ದರು.

ನಿಟ್ರೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಸಭೆ

ಬೇಗೂರು (ಗುಂಡ್ಲುಪೇಟೆ): ಸಮೀಪದ ನಿಟ್ರೆ ಗ್ರಾಮದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ತಾಲೂಕು ಪಂಚಾಯಿತಿ ಸಂಯುಕ್ತ ಆಶ್ರಯದಲ್ಲಿ ಬೇಗೂರು ಹೋಬಳಿ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಸಭೆ ನಡೆಯಿತು.

ಶಾಸಕ ಎಚ್.ಎಂ ಗಣೇಶ್‌ಪ್ರಸಾದ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ತಾಲೂಕು ಮತ್ತು ಬೇಗೂರು ಹೋಬಳಿಯಲ್ಲಿ ಪ್ರತಿಯೊಬ್ಬ ಫಲಾನುಭವಿಗೂ ಸಮರ್ಪಕವಾಗಿ ತಲುಪುತ್ತಿದ್ದು ಜನ ಮೆಚ್ಚುಗೆಗೆ ಪಾತ್ರವಾಗಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದ ಯೋಜನೆಗಳು ಜನರ ತಲುಪಿವೆ ಎಂದರು. ಚಾಮುಲ್ ಮಾಜಿ ಅಧ್ಯಕ್ಷ ಎಚ್.ಎಸ್ ನಂಜುಂಡ ಪ್ರಸಾದ್ ಇದ್ದರು.



ಎಸ್‌ಎಫ್‌ಟಿ ಲೋಪದ ಹಿನ್ನೆಲೆ ಮೈಸೂರಿನ ಸಬ್ ರಿಜಿಸ್ಟ್ರಾರ್‌ಗಳಿಗೆ ಐಟಿ ನೋಟಿಸ್

ಲೋಪ ಸರಿಪಡಿಸಿ ಮಾಹಿತಿ ನೀಡದಿದ್ದರೆ 50 ಸಾವಿರ ದಂಡದ ಎಚ್ಚರಿಕೆ



●30 ಲಕ್ಷ ಮೇಲ್ಪಟ್ಟ ಆಸ್ತಿಗಳ ವಹಿವಾಟು ಎಸ್‌ಎಫ್‌ಟಿ ವ್ಯಾಪ್ತಿಗೆ ●ಮೊದಲು ಪೆನ್‌ಡ್ರೈವ್, ಸಿಡಿ ಮೂಲಕ ಡಾಟಾ ನೀಡಲಾಗುತ್ತಿತ್ತು ●ಆನ್‌ಲೈನ್‌ನಲ್ಲಿ ವಿವರ ನೀಡಬೇಕು ●ಸಣ್ಣ ತಪ್ಪಿದ್ದರೂ ಲೋಪದ ಉಲ್ಲೇಖ

ಐಟಿಗೆ ಮಾಹಿತಿ ನೀಡಲಾರಂಭಿಸಿದ್ದಾರೆ

ಎಸ್‌ಎಫ್‌ಟಿ ಮಾಹಿತಿ ತಪ್ಪು ಇರುವ ಹಿನ್ನೆಲೆಯಲ್ಲಿ ಸಬ್ ರಿಜಿಸ್ಟ್ರಾರ್‌ಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ಈ ಸಂಬಂಧ ಸಬ್ ರಿಜಿಸ್ಟ್ರಾರ್‌ಗಳು ಈಗಾಗಲೇ ಮಾಹಿತಿ ನೀಡಲಾರಂಭಿಸಿದ್ದಾರೆ. ದಸ್ತಾವೇಜು ನಡೆಸುವ ವ್ಯಕ್ತಿಯ ಕುರಿತಂತೆ 29 ಅಂಶಗಳ ಮಾಹಿತಿಯನ್ನು ಆದಾಯ ತೆರಿಗೆ ಇಲಾಖೆಗೆ ನೀಡಬೇಕು. ಈ ಸಂಬಂಧ ಆದಾಯ ತೆರಿಗೆ ಇಲಾಖೆಯವರು ಪ್ರತ್ಯೇಕವಾದ ಫಾರ್ಮೆಟ್ ಮಾಡಿಕೊಂಡಿದ್ದಾರೆ. ಅದರಂತೆ ವಿವರ ನೀಡಬೇಕಿದೆ. ಆನ್‌ಲೈನ್‌ನಲ್ಲಿ ಎಸ್‌ಎಫ್‌ಟಿ ಮಾಹಿತಿ ನೀಡಿದಾಗ ಸಣ್ಣ ತಪ್ಪಿದ್ದರೂ ಇದರಲ್ಲಿ ಲೋಪವಿದೆ ಎಂದು ಸ್ಪಷ್ಟವಾಗಿ ಉಲ್ಲೇಖವಾಗುತ್ತದೆ. ಇಂತಹ ಉಲ್ಲೇಖವಾದ ಎಸ್‌ಎಫ್‌ಟಿಗಳ ಮಾಹಿತಿ ನೀಡುವಂತೆ ಐಟಿ ನೋಟಿಸ್ ನೀಡಿದೆ. ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಸಾವಿರಾರು ಆಸ್ತಿ ನೋಂದಣಿಯಾಗುತ್ತದೆ. ಇದರಲ್ಲಿ ಕೆಲವೊಂದರಲ್ಲಿ ಲೋಪ ಎದುರಾಗುತ್ತಿದೆ. ಇದನ್ನು ಸರಿಪಡಿಸಿ ಕೂಡಲೇ ನೀಡುವ ಈ ಪ್ರಕ್ರಿಯೆ ಯಾವಾಗಲೂ ನಡೆಯುತ್ತಲೇ ಇದೆ.

–ವಿಜಯಲಕ್ಷ್ಮಿ, ಡಿಸ್ಟ್ರಿಕ್ಟ್ ರಿಜಿಸ್ಟ್ರಾರ್, ಮೈಸೂರು.

ಮೈಸೂರು, ಮಾ.23(ಬಿಎಲ್‌ಯು)– ನಿರ್ದಿಷ್ಟ ಮೌಲ್ಯಕ್ಕಿಂತ ಹೆಚ್ಚಿನ ವ್ಯವಹಾರ ನಡೆದಿರುವ ಆಸ್ತಿಗಳ ಆರ್ಥಿಕ ವಹಿವಾಟು (ಎಸ್‌ಎಫ್‌ಟಿ–Statement of Financial Transactions) ವಿವರಣೆ ಸಲ್ಲಿಕೆಯಲ್ಲಿ ಲೋಪಗಳಿರುವ ಹಿನ್ನೆಲೆಯಲ್ಲಿ ಮೈಸೂರಿನ ಸಬ್ ರಿಜಿಸ್ಟ್ರಾರ್‌ಗಳಿಗೆ ಆದಾಯ ತೆರಿಗೆ ಇಲಾಖೆ ನೋಟಿಸ್ ಜಾರಿ ಮಾಡಿದೆ.

2021–22ನೇ ಸಾಲಿನಿಂದ ಸಲ್ಲಿಕೆಯಾಗಿರುವ ಎಸ್‌ಎಫ್‌ಟಿ ಮಾಹಿತಿಯಲ್ಲಿ ಲೋಪಗಳಿರುವ ಕಾರಣ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಸಬ್ ರಿಜಿಸ್ಟ್ರಾರ್‌ಗಳಿಗೆ ವೈಯಕ್ತಿಕವಾಗಿ ನೋಟಿಸ್ ಜಾರಿ ಮಾಡಿ ವಿವರಣೆ ಕೇಳಿದ್ದಾರೆ. ಅಲ್ಲದೆ ಈ ವಿವರ ನೀಡದಿದ್ದರೆ 50 ಸಾವಿರ ದಂಡ ವಿಧಿಸುವ ಎಚ್ಚರಿಕೆ ಕೂಡ ನೀಡಿದ್ದಾರೆ.

30 ಲಕ್ಷಕ್ಕಿಂತ ಹೆಚ್ಚು ಮೌಲ್ಯವಿರುವ ಆಸ್ತಿಗಳ ದಸ್ತಾವೇಜು ವಹಿವಾಟು ನಡೆಸುವ ಪಕ್ಷಗಾರನ ಎಸ್‌ಎಫ್ ಟಿಯನ್ನು ಸಬ್ ರಿಜಿಸ್ಟ್ರಾರ್‌ಗಳು ಆದಾಯ ತೆರಿಗೆ ಇಲಾಖೆಯವರಿಗೆ ಕಡ್ಡಾಯವಾಗಿ ಸಲ್ಲಿಸಬೇಕು. ಈ ಮೊದಲು ಎಸ್‌ಎಫ್‌ಟಿ ಮಾಹಿತಿಯನ್ನು ಕೈಬರಹದಲ್ಲಿ ನೀಡಲಾಗುತ್ತಿತ್ತು. ಇತ್ತೀಚಿಗೆ ಕಾವೇರಿ ಸಾಫ್ಟ್‌ವೇರ್ ಪರಿಚಯವಾದ ನಂತರ ಪೆನ್‌ಡ್ರೈವ್ ಹಾಗೂ ಸಿಡಿಗಳಲ್ಲಿ ಡಾಟಾವನ್ನು ಆದಾಯ ತೆರಿಗೆ ಇಲಾಖೆಗೆ ಸಲ್ಲಿಸುತ್ತಿದ್ದರು. ಆದರೆ ಈಗಿನ ಆಧುನಿಕ ತಂತ್ರಜ್ಞಾನದಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬೇಕಾಗಿದೆ. ಆದರೆ ಕೆಲವು ಎಸ್‌ಎಫ್‌ಟಿ ಮಾಹಿತಿಯಲ್ಲಿ ಲೋಪಗಳು ಕಂಡು ಬಂದಿದೆ. ಆನ್‌ಲೈನ್‌ನಲ್ಲಿ ಎಸ್‌ಎಫ್‌ಟಿ ಮಾಹಿತಿ ಸಲ್ಲಿಸಿದಾಗ ಸಣ್ಣ ತಪ್ಪು ಇದ್ದರೂ ತಕ್ಷಣವೇ ಅಲ್ಲೆ ಇದರಲ್ಲಿ ಲೋಪವಿದೆ ಎಂದು ದಾಖಲಾತಿಯಲ್ಲಿ ಸ್ಪಷ್ಟವಾಗಿ ಉಲ್ಲೇಖವಾಗಿರುತ್ತದೆ. ಆದರೆ ಸಬ್ ರಿಜಿಸ್ಟ್ರಾರ್‌ಗಳು ಇದನ್ನು ಸರಿಪಡಿಸಿ ಮತ್ತೆ ಅದನ್ನು ಸಲ್ಲಿಸುವ ಗೋಜಿಗೆ ಹೋಗಿಲ್ಲ. ಈ ಹಿನ್ನೆಲೆಯಲ್ಲಿ ಆದಾಯ ತೆರಿಗೆ ಇಲಾಖೆಯವರು ಸಬ್ ರಿಜಿಸ್ಟ್ರಾರ್‌ಗಳಿಗೆ ನೋಟಿಸ್ ಜಾರಿ ಮಾಡಿದ್ದಾರೆ. ಎಸ್‌ಎಫ್‌ಟಿ ನೀಡದಿದ್ದರೆ 50 ಸಾವಿರ ರೂಪಾಯಿ ದಂಡ ವಿಧಿಸಲಾಗುವುದು ಎಂದು ಅಂತಿಮ ಎಚ್ಚರಿಕೆ ನೀಡಿದೆ.

ಎಸ್‌ಎಫ್‌ಟಿ ಸರಳೀಕರಣಗೊಳಿಸಿ...

ಆಧುನಿಕ ತಂತ್ರಜ್ಞಾನದಲ್ಲಿ ಹೊಸ ಸಾಫ್ಟ್‌ವೇರ್ ರೂಪಿಸಿ ಎಸ್‌ಎಫ್‌ಟಿ ಸಲ್ಲಿಕೆಯಲ್ಲಿ ಸರಳೀಕರಣ ಮಾಡಬೇಕೆಂದು ಕೆಲವು ಸಬ್ ರಿಜಿಸ್ಟ್ರಾರ್‌ಗಳು ಆಗ್ರಹಿಸಿದ್ದಾರೆ. ದಸ್ತಾವೇಜು ನೋಂದಣಿಯಾಗುವ ವೇಳೆಯೆ ಐಟಿಗೆ ಸ್ವಯಂಚಾಲಿತ ಮಾಹಿತಿ ರವಾನೆಯಾಗಬೇಕು, ಕಾವೇರಿ 2.0 ಸಾಫ್ಟ್‌ವೇರ್‌ನಲ್ಲಿ ಆಸ್ತಿ ನೋಂದಣಿಯಾದ ತಕ್ಷಣವೇ ಆ ಮಾಹಿತಿ ನೇರವಾಗಿ ಆದಾಯ ತೆರಿಗೆ ಇಲಾಖೆಗೆ ಸಲ್ಲಿಕೆಯಾಗಬೇಕು. ಇದರಿಂದ ನಮ್ಮ ಮೇಲಿನ ಕಾರ್ಯದೊತ್ತಡ ಕಡಿಮೆಯಾಗುತ್ತದೆ ಎಂದು ಸಬ್ ರಿಜಿಸ್ಟ್ರಾರ್‌ಗಳು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

29 ಅಂಶಗಳಿರುವ ಮಾಹಿತಿ ಸಲ್ಲಿಸಬೇಕು

ಎಸ್‌ಐಟಿ ಮಾಹಿತಿ ನೀಡುವಾಗ ದಸ್ತಾವೇಜು ವಹಿವಾಟು ನಡೆಸುವ ವ್ಯಕ್ತಿಯ 29 ಅಂಶಗಳಿರುವ ಮಾಹಿತಿಯನ್ನು ಸಬ್ ರಿಜಿಸ್ಟ್ರಾರ್‌ಗಳು ಆದಾಯ ತೆರಿಗೆ ಇಲಾಖೆಗೆ ಸಲ್ಲಿಸಬೇಕು. ದಸ್ತಾವೇಜು ನಡೆಸುವ ವ್ಯಕ್ತಿಯ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಸೇರಿದಂತೆ ಇತರೆ 29 ಅಂಶಗಳಿರುವ ಮಾಹಿತಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕಾಗಿದೆ. ಒಂದು ವೇಳೆ ದಸ್ತಾವೇಜು ವಹಿವಾಟು ನಡೆಸುವ ವ್ಯಕ್ತಿ ಏನಾದರೂ ತಪ್ಪು ಮಾಡಿದ್ದರೆ ಅದನ್ನು ಸರಿಮಾಡಿ ಕೊಡುವ ಹೊಣೆಗಾರಿಕೆ ಸಬ್ ರಿಜಿಸ್ಟ್ರಾರ್‌ಗಳದ್ದೆ ಆಗಿರುತ್ತದೆ. ಈಗಾಗಲೇ ತಮಗಿರುವ ಒತ್ತಡದಲ್ಲಿ ಇಂತಹ ಮತ್ತೊಂದು ಜವಾಬ್ದಾರಿ ನೀಡಿರುವುದು ಸರಿಯಲ್ಲ ಎಂದು ಕೆಲವು ಸಬ್ ರಿಜಿಸ್ಟ್ರಾರ್‌ಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಸ್ತಿ ಮಾರಾಟ ನೋಂದಣಿಯಾದ ಕೂಡಲೇ ಐಟಿಗೆ ಮಾಹಿತಿ ರವಾನೆ

ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಪ್ರತಿದಿನ ಸಾವಿರಾರು ಮಂದಿ ನೋಂದಣಿ ಮೂಲಕ ಆಸ್ತಿ ಮಾರಾಟ ಮಾಡುತ್ತಾರೆ. ಹಾಗೆಯೇ ನೋಂದಣಿ ಮಾಡಿಸಿಕೊಂಡು ಆಸ್ತಿ ಖರೀದಿ ಮಾಡುತ್ತಾರೆ. ಆದರೆ ಈ ಎಲ್ಲಾ ವಿವರಗಳು ಆದಾಯ ತೆರಿಗೆ ಇಲಾಖೆಗೆ ರವಾನೆಯಾಗುತ್ತದೆ ಎಂಬ ಮಾಹಿತಿ ಬಹಳಷ್ಟು ಜನರಿಗೆ ತಿಳಿದಿಲ್ಲ. ಹೀಗೆ ಆಸ್ತಿ ನೋಂದಣಿ ಮಾಡಿದ ವ್ಯಕ್ತಿಯ ಆದಾಯ ಸೇರಿದಂತೆ ಇತರೆ ವಿವರವನ್ನು ಆದಾಯ ತೆರಿಗೆ ಇಲಾಖೆಯವರು ಪರಿಶೀಲಿಸುತ್ತಾರೆ. ಈ ವಿವರವನ್ನು ಐಟಿಯವರಿಗೆ ಸ್ವಯಂ ಪ್ರೇರಣೆಯಿಂದ ನೀಡಬೇಕು. ಇಲ್ಲದಿದ್ದರೆ ಐಟಿಯವರು ನೋಟಿಸ್ ಕೊಟ್ಟು ಇಷ್ಟು ಆದಾಯ ಎಲ್ಲಿಂದ ಬಂತು ಎಂಬ ವಿವರಣೆ ಕೇಳುತ್ತಾರೆ. ಇದರಿಂದ ಐಟಿ ಕಣ್ಗಾವಲಿನಿಂದ ತಪ್ಪಿಸಿಕೊಳ್ಳುವುದು ಈಗ ಕಷ್ಟ... ಕಷ್ಟ...

ಒಳಮೀಸಲಾತಿ: ಸಮುದಾಯಗಳು ಒಟ್ಟಾಗಿರಬೇಕು

●ಚಿಂತಕ ಮ.ಪು.ಪೂರ್ಣಾನಂದ ಅಭಿಮತ ●ಲೋಹಿಯಾ ಕಂಡ ಸಪ್ತ ಕ್ರಾಂತಿಗಳಲ್ಲಿ ಮಹಿಳಾ ಸಬಲೀಕರಣವೂ ಒಂದು



ಲೋಹಿಯಾ ನೆನಪಿನ ಕಾರ್ಯಕ್ರಮದಲ್ಲಿ ಚಿಂತಕ ಮ.ಪು.ಪೂರ್ಣಾನಂದ ಮಾತನಾಡಿದರು.

ಮೈಸೂರು,ಮಾ.23(ಪಿಎಂ)– ದಲಿತ ಚಳವಳಿಯ ಎರಡು ಕಣ್ಣುಗಳಾದ ಹೊಲೆಯ ಹಾಗೂ ಮಾದಿಗ ಸಮುದಾಯಗಳು ಒಳ ಮೀಸಲಾತಿ ಕಾರಣಕ್ಕೆ ದೂರವಾಗದೇ ಒಟ್ಟಾಗಿರಬೇಕು. ಅದೇ ನಮ್ಮೆಲ್ಲರ ಆಶಯ. ಈ ನಿಟ್ಟಿನಲ್ಲಿ ಎರಡು ಸಮುದಾಯಗಳಲ್ಲಿ ಸೌಹಾರ್ದತೆ ಮೂಡಿಸಲು ವೇದಿಕೆ ಸಿದ್ಧಪಡಿಸುವ ಅಗತ್ಯವಿದೆ ಎಂದು ಚಿಂತಕ ಮ.ಪು.ಪೂರ್ಣಾನಂದ ಅಭಿಪ್ರಾಯಪಟ್ಟರು.

ಮೈಸೂರಿನ ರಾಮಕೃಷ್ಣನಗರದ ನೃಪತುಂಗ ಕನ್ನಡ ಮಾಧ್ಯಮ ಶಾಲೆ ಆವರಣದ ಸಭಾಂಗಣದಲ್ಲಿ ಸಮಾಜವಾದಿ ಅಧ್ಯಯನ ಕೇಂದ್ರ ಟ್ರಸ್ಟ್ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಲೋಹಿಯಾ ನೆನಪಿನ ಕಾರ್ಯಕ್ರಮದಡಿ 'ಸಮಕಾಲೀನ ತಲ್ಲಣಗಳು ಮತ್ತು ಲೋಹಿಯಾ ಪ್ರಸ್ತುತತೆ' ಕುರಿತ ವಿಚಾರ ಮಂಡನೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನನಗೆ ತುಂಬ ನೋವಿನ ವಿಚಾರವೆಂದರೆ ಒಳಮೀಸಲಾತಿ ಸಂಬಂಧ ಸೃಷ್ಟಿಯಾಗಿರುವ ಸನ್ನಿವೇಶ. ಈ ಕಾರಣಕ್ಕೆ ಮಾದಿಗ ಹಾಗೂ ಹೊಲೆಯ ಸಮುದಾಯಗಳು ದೂರವಾಗುತ್ತಿವೆ. ಮಾದಿಗ, ಹೊಲೆಯ ಸಮುದಾಯಗಳು ದಲಿತ ಚಳವಳಿಯ ಎರಡು ಕಣ್ಣುಗಳು. ಈ ಚಳುವಳಿ ಮೂಲಕ ಹಿಂದುಳಿದ, ತಳ ಸಮುದಾಯಗಳಿಗೂ ನ್ಯಾಯ ದೊರಕಿಸಿಕೊಡುವ ಮಹತ್ತರ ಕೆಲಸವಾಗಿದೆ. ದಲಿತ ಚಳವಳಿ ಪ್ರಾರಂಭದಲ್ಲಿ ಹಿಂದುಳಿದ ಜಾತಿಗಳಿಗೆ ನ್ಯಾಯ ಕೊಡಿಸುವ ಪ್ರಕರಣಗಳಲ್ಲಿ ಹೋರಾಟ ನಡೆಸಿತು. ಈ ನಿಟ್ಟಿನಲ್ಲಿ ನಮ್ಮಂತಹ ಪ್ರಾತಿಪರರು ದಲಿತ ಚಳವಳಿಯ ಪ್ರಭಾವಕ್ಕೆ ಒಳಗಾಗಿದ್ದೇವೆ ಎಂದರು.

ಹೊಲೆಯ, ಮಾದಿಗ ಸಮುದಾಯಗಳು ಒಳಮೀಸಲಾತಿ ಕಾರಣಕ್ಕೆ ದೂರವಾಗುತ್ತಿರುವುದನ್ನು ನಮ್ಮಂತಹ ಹಿಂದುಳಿದ ಜಾತಿಗಳು ಸುಮ್ಮನೆ ನಿಂತು ನೋಡುವುದು ಸರಿಯಲ್ಲ. ತಳ ಸಮುದಾಯಗಳನ್ನು ಹಂಚಿ ತಿನ್ನುವ ಜಾತಿಗಳು ಎಂದೇ ಗುರುತಿಸಲಾಗಿದೆ. ಆದರೆ ಈಗ ಈ ಜಾತಿ ಜಾತಿಗಳ ನಡುವೆ ತೀವ್ರತರವಾದ ಭಿನ್ನಾಭಿಪ್ರಾಯ ಮೂಡಿಸಲಾಗುತ್ತಿದೆ. ಇದು ಮನುವಾದಿಗಳ ಕುತಂತ್ರವಾಗಿದೆ ಎಂದು ದೂರಿದರು.

ಲೋಹಿಯಾ ಕಂಡ ಸಪ್ತ ಕ್ರಾಂತಿಗಳಲ್ಲಿ ಮಹಿಳಾ ಸಬಲೀಕರಣವೂ ಒಂದು. ರಾಜ್ಯದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳು ಮಹಿಳಾ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡುತ್ತಿವೆ. ಈ ಎರಡು ಯೋಜನೆಗಳ ಬಗ್ಗೆ ಫಲಾನುಭವಿಗಳು ಶ್ಲಾಘನೆ ವ್ಯಕ್ತಪಡಿಸುತ್ತಿದ್ದಾರೆ ಎಂದರು. ಸಮಾಜವಾದಿ ಚಿಂತಕ ಕೆ.ಪಿ.ನಟರಾಜ್ ವಿಚಾರ ಮಂಡಿಸಿದರು. ಚಿಂತಕರಾದ ಜಿ.ಪಿ.ಬಸವರಾಜು, ಮಹೇಶ್ ಹರವೆ, ಉಪನ್ಯಾಸಕಿ ದಿನಮಣಿ, ಸಂಶೋಧನಾರ್ಥಿ ಸಂಜಯ್‌ಕುಮಾರ್ ಮತ್ತಿತರರು ಹಾಜರಿದ್ದರು.

ಶೈಕ್ಷಣಿಕ ಸಮ್ಮೇಳನ ಆಯೋಜನೆಯಲ್ಲಿ ಶಿಷ್ಟಾಚಾರ ಉಲ್ಲಂಘನೆ ಆರೋಪ

ಮುಕ್ತ ವಿವಿ ಕುಲಪತಿಗೆ ಸರ್ಕಾರದ ನೋಟಿಸ್


ಶರಣಪ್ಪ ವಿ.ಹಲಸೆ


ಎಂ.ಸಿ.ಸುಧಾಕರ್

ಮೈಸೂರು, ಮಾ.23– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ಕರಾಮುವಿ) ದಲ್ಲಿ ಅಂತಾರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನ ಆಯೋಜಿಸಿರುವ ವಿಚಾರವಾಗಿ ಶಿಷ್ಟಾಚಾರ ಪಾಲನೆ ಮಾಡಿಲ್ಲವೆಂದು ರಾಜ್ಯ ಸರ್ಕಾರವು, ವಿವಿಯ ಕುಲಪತಿಗೆ ಕಾರಣ ಕೇಳಿ ನೋಟೀಸ್ ಜಾರಿಗೊಳಿಸಿದೆ.

ಸೋಮವಾರ ವಿಧಾನಪರಿಷತ್‌ನಲ್ಲಿ ಕಾಂಗ್ರೆಸ್ ಸದಸ್ಯ ರಮೇಶ್ ಬಾಬು ಪ್ರಸ್ತಾಪಕ್ಕೆ ಉತ್ತರಿಸಿದ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಸೂಕ್ತ ಕ್ರಮದ ಭರವಸೆ ನೀಡಿದ ಬೆನ್ನಲ್ಲೇ ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು) ಉಪ ಕಾರ್ಯದರ್ಶಿ ಎನ್.ಕುಮಾರ್ ನೋಟೀಸ್ ಜಾರಿಗೊಳಿಸಿದ್ದಾರೆ.

ಅಂತಾರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನ ಆಯೋಜನೆ ವಿಚಾರವಾಗಿ ಶಿಷ್ಟಾಚಾರ ಪಾಲಿಸದಿರುವ ಬಗ್ಗೆ ಕೂಡಲೇ ಸರ್ಕಾರಕ್ಕೆ ಸಮಜಾಯಿಷಿ ನೀಡದಿದ್ದಲ್ಲಿ ತಮ್ಮ ವಿರುದ್ಧ ಶಿಸ್ತುಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದು ಕರಾಮುವಿ ಕುಲಪತಿ ಶರಣಪ್ಪ ವಿ.ಹಲಸೆ ಅವರಿಗೆ ಜಾರಿಗೊಳಿಸಿರುವ ನೋಟೀಸ್‌ನಲ್ಲಿ ತಿಳಿಸಲಾಗಿದೆ.

ವಿಶ್ವವಿದ್ಯಾಲಯ ಆರ್ಥಿಕವಾಗಿ ಸಂಕಷ್ಟದಲ್ಲಿದ್ದರೂ, ಖಾಸಗಿ ಕಾರ್ಯಕ್ರಮದ ಪೂರ್ಣ ವೆಚ್ಚವನ್ನು ಭರಿಸುತ್ತಿರುವುದು ಸರಿಯಲ್ಲ. ವಿಶ್ವವಿದ್ಯಾಲಯದ ಹಂತದಲ್ಲೇ ಕಾರ್ಯಕ್ರಮಕ್ಕೆ ಒಪ್ಪಿಗೆ ನೀಡಿರುವುದು ಸಮಂಜಸವಲ್ಲ. ಇದು ಶಿಷ್ಟಾಚಾರದ ಉಲ್ಲಂಘನೆ. ಜಿಲ್ಲಾ ಉಸ್ತುವಾರಿ ಸಚಿವರು, ಇಲಾಖೆಯ ಸಚಿವರನ್ನು ಆಹ್ವಾನಿಸದೆ ಸರ್ಕಾರಕ್ಕೆ ಅಗೌರವ ತೋರಲಾಗಿದೆ ಎಂದು ಹೇಳಲಾಗಿದೆ.

ಸದನದಲ್ಲಿ ಚರ್ಚೆಯಾಗಿತ್ತು: ಪ್ರಜ್ಞಾ ಪ್ರವಾಹ ಮತ್ತು ಡಾ. ಶ್ಯಾಮಪ್ರಸಾದ್ ಮುಖರ್ಜಿ ಸಂಶೋಧನಾ ಪ್ರತಿಷ್ಠಾನದ ಸಹಯೋಗದಲ್ಲಿ ಮೈಸೂರಿನ ಕರಾಮುವಿ ಘಟಿಕೋತ್ಸವ ಭವನದಲ್ಲಿ ಮಾರ್ಚ್ 25 ರಿಂದ 27ರವರೆಗೆ 'ಏಕಾತ್ಮ ಮಾನವ್ ದರ್ಶನ್' ಭಾರತ್ ವರ್ಲ್ಡ್ ವ್ಯೂ(ಭಾರತದ ವಿಶ್ವ ದೃಷ್ಟಿಕೋನ) ಕುರಿತು ಅಂತಾರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನ ವನ್ನು ಆಯೋಜಿಸುತ್ತಿರುವ ಬಗ್ಗೆ ವಿಧಾನಪರಿಷತ್‌ನ ಶೂನ್ಯ ವೇಳೆಯಲ್ಲಿ ರಮೇಶ್ ಬಾಬು ಪ್ರಸ್ತಾಪಿಸಿ, ಕಾರ್ಯಕ್ರಮ ಆಯೋಜನೆಯಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗಿದೆ ಎಂದು ದೂರಿದರು.

ಶಿಷ್ಟಾಚಾರಕ್ಕೆ ಅನುಗುಣವಾಗಿ ಸರ್ಕಾರದ ಪ್ರತಿನಿಧಿಗಳು ಹಾಗೂ ಶೈಕ್ಷಣಿಕ ತಜ್ಞರಿಗೆ ಸಮ್ಮೇಳನದ ಬಗ್ಗೆ ಮಾಹಿತಿ ನೀಡಿಲ್ಲ ಸರ್ಕಾರದ ಶಿಷ್ಟಾಚಾರವನ್ನು ಬದಿಗೊತ್ತಿ ನಿಯಮ ಉಲ್ಲಂಘಿಸಲಾಗಿದೆ. ವೈಯಕ್ತಿಕ ಹಿತಾಸಕ್ತಿಗಾಗಿ ಅಧಿಕಾರ ದುರ್ಬಳಕೆ ಮಾಡಿಕೊಂಡಿರುವ ಕುಲಪತಿಗಳ ವಿರುದ್ಧ ಶಿಸ್ತು ಕ್ರಮ ಆಗಬೇಕೆಂದು ಇದೇ ವೇಳೆ ಒತ್ತಾಯಿಸಿದರು.

ರಮೇಶ್ ಬಾಬು ಅವರ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಮೂರು ದಿನಗಳ ಅಂತಾರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನ ಉದ್ಘಾಟನೆಗೆ ರಾಜ್ಯಪಾಲರನ್ನು ಆಹ್ವಾನಿಸಲಾಗಿದ್ದು, ಕೇಂದ್ರ ಶಿಕ್ಷಣ ಸಚಿವರು ಭಾಗಿಯಾಗುತ್ತಿರುವುದಾಗಿ ತಿಳಿದುಬಂದಿದೆ. ಸಮ್ಮೇಳನದ ಬಗ್ಗೆ ಸರ್ಕಾರದ ಗಮನಕ್ಕೂ ತರದೆ ಶಿಷ್ಟಾಚಾರ ಉಲ್ಲಂಘಿಸಿ ಸಮ್ಮೇಳನ ನಡೆಸುವ ಔಚಿತ್ಯವೇನಿತ್ತು ಎಂಬುದು ತಿಳಿದಿಲ್ಲ. ಆದರೆ ಖಾಸಗಿ ಕಾರ್ಯಕ್ರಮಕ್ಕೆ ವಿವಿ ಪ್ರಾಯೋಜಕತ್ವ ವಹಿಸಲು ಅವಕಾಶ ನೀಡುವುದಿಲ್ಲ. ರಾಜ್ಯಪಾಲರು, ಕೇಂದ್ರದ ಶಿಕ್ಷಣ ಸಚಿವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ, ವಿಶ್ವವಿದ್ಯಾಲಯದ ಸಮಕುಲಾಧಿಪತಿಯಾದ ನನಗೇ ಆಹ್ವಾನ ನೀಡಿಲ್ಲ. ಶಿಷ್ಟಾಚಾರ ಉಲ್ಲಂಘಿಸಿರುವುದರ ಹಿಂದಿನ ಉದ್ದೇಶ ಏನು ಎಂಬುದು ಗೊತ್ತಿಲ್ಲ?. ಹಾಗಾಗಿ ಕಾರ್ಯಕ್ರಮ ಮುಂದೂಡಲು ಸೂಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದರು.

ಒಳಮೀಸಲಾತಿ ಹೊರತಾಗಿ ನೇಮಕಾತಿಗೆ ಮುಂದಾಗಿರುವ ಸರ್ಕಾರದ ನಿಲುವು ಖಂಡಿಸಿ

ನಾಳೆ ಬೆಂಗಳೂರಲ್ಲಿ ಭಾರೀ ಪ್ರತಿಭಟನಾ ರ್‍ಯಾಲಿ

●ಮೌರ್ಯ ಸರ್ಕಲ್‌ನಿಂದ ಸಿಎಂ ಸಿದ್ದರಾಮಯ್ಯ ನಿವಾಸದವರೆಗೆ ಮೆರವಣಿಗೆ ●ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ

ಮೈಸೂರು,ಮಾ.23(ಎಂಟಿವೈ)– ಒಳ ಮೀಸಲಾತಿ ಇಲ್ಲದೇ 56,432 ಹುದ್ದೆಗಳಿಗೆ ನೇಮಕ ಮಾಡಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮ ಖಂಡಿಸಿ, ಮಾ.25ರಂದು ಬೆಳಗ್ಗೆ 11ಕ್ಕೆ ಬೆಂಗಳೂರಿನ ಮೌರ್ಯ ಸರ್ಕಲ್‌ನಿಂದ ಸಿಎಂ ಸಿದ್ದರಾಮಯ್ಯ ಅವರ ನಿವಾಸದವರೆಗೆ ಬೃಹತ್ ಪ್ರತಿಭಟನಾ ರ್‍ಯಾಲಿ ಹಾಗೂ ಅದೇ ದಿನ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ದಾದಾ ಸಾಹೇಬ್ ಡಾ.ಎನ್.ಮೂರ್ತಿ ಸ್ಥಾಪಿತ ಬಣದ ಜಿಲ್ಲಾಧ್ಯಕ್ಷ ಶಂಕರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿಯಿಲ್ಲದೆ ಹುದ್ದೆಗಳ ಭರ್ತಿಗೆ ಮುಂದಾಗಿರುವ ಸರ್ಕಾರದ ನಡೆ ಮಾದಿಗ ಹಾಗೂ ಉಪ ಜಾತಿಗಳ ವಿರೋಧಿ ಕ್ರಮವಾಗಿದೆ. ಪರಿಶಿಷ್ಟ ಜಾತಿಗಳ ಮೀಸಲಾತಿ 101 ಜಾತಿಗಳ ನಡುವೆ ಸಮಾನವಾಗಿ ಹಂಚಿಕೆ ಆಗಿಲ್ಲ. 2024ರ ಆ.1ರಂದು ಸುಪ್ರೀಂಕೋರ್ಟ್ ಪರಿಶಿಷ್ಟ ಜಾತಿ ವರ್ಗೀಕರಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ ಎಂದು ಐತಿಹಾಸಿಕ ತೀರ್ಪು ಸಹ ನೀಡಿದೆ. ಹೀಗಾಗಿ ರಾಜ್ಯ ಸರ್ಕಾರ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ಆಯೋಗ ರಚಿಸಿ ವರದಿ ಪಡೆದ ಬಳಿಕ ಸಚಿವ ಸಂಪುಟ ಅನುಮೋದಿಸಿತ್ತು. ನಂತರ ವಿಧಾನಸಭೆ ಹಾಗೂ ವಿಧಾನ ಪರಿಷತ್‌ನಲ್ಲಿ ಮಸೂದೆ ಅಂಗೀಕರಿಸಿ ರಾಜ್ಯಪಾಲರ ಸಹಿ ನಂತರ ವಿಧೇಯಕ ಅಧಿಕೃತಗೊಂಡಿದೆ ಎಂದು ತಿಳಿಸಿದರು.

ಆದರೆ, ಇದೆಲ್ಲವನ್ನೂ ಸರ್ಕಾರ ಬದಿಗೊತ್ತಿ ಒಳ ಮೀಸಲಾತಿ ಅಳವಡಿಸದೇ ಹಳೇ ರೋಸ್ಟರ್ ವಿಧಾನದಂತೆ ಈಗ ನೇಮಕ ಮಾಡಿಕೊಳ್ಳ ಹೊರಟಿರುವುದು ಸರಿಯಲ್ಲ. ಇದು ಕಾನೂನು ಬಾಹಿರ ಹಾಗೂ ಅವೈಜ್ಞಾನಿಕವಾಗಿದೆ. ಇದು ಬಡತನದಲ್ಲಿಯೇ ಜೀವನ ನಡೆಸುತ್ತಿರುವ ಮಾದಿಗ ಮತ್ತು ಮಾದಿಗ ಸಂಬಂಧಿತ ಜಾತಿಗಳಿಗೆ ಮರಣ ಶಾಸನವಾಗಿದೆ. ಒಳ ಮೀಸಲಾತಿ ವಿರೋಧಿಗಳ ರಾಜಕೀಯ ಪ್ರಭಾವಕ್ಕೆ ಒಳಗಾಗಿದೆ. ಒಳ ಮೀಸಲಾತಿ ಇಲ್ಲದೇ 56,432 ಹುದ್ದೆಗಳ ನೇಮಕಾತಿ ಆದೇಶ ಹಿಂಪಡೆಯಬೇಕು, ಸರ್ಕಾರಿ ನೌಕರಿಗಳಲ್ಲಿ ಬಡ್ತಿ ಮೀಸಲಾತಿ ಯಲ್ಲಿ ಒಳ ಮೀಸಲಾತಿ ಕಲ್ಪಿಸಿ ಆದೇಶ ಹೊರಡಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಸಿ.ನಾಗರಾಜ್, ಸ್ವಾಮಿ ತಿಲಕ್‌ನಗರ, ಗಂಗಪ್ಪ ರಾಜಣ್ಣ, ರಾಜಣ್ಣ ಮೈಸೂರು ಇದ್ದರು.

ಕಪಿಲಾ ತೀರದ ಮರಗಳ ಹನನ ಖಂಡಿಸಿ

ವಿವಿಧ ಸಂಘಟನೆಗಳ ಪ್ರತಿಭಟನೆ



ಮೈಸೂರು ಅರಣ್ಯ ಭವನದ ಎದುರು ವಿವಿಧ ಸಂಘಟನೆಗಳಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮಾ.23(ಎಂಕೆ)– ನಂಜನಗೂಡಿನ ಹೆಜ್ಜಿಗೆ ಸಮೀಪ ಕಪಿಲಾ ನದಿ ದಂಡೆಯ ಮೇಲೆ ಅಕ್ರಮವಾಗಿ 46 ಮರಗಳನ್ನು ಕಡಿದಿರುವುದನ್ನು ಖಂಡಿಸಿ ಪರಿಸರಕ್ಕಾಗಿ ನಾವು, ಕರ್ನಾಟಕ ರಾಜ್ಯ ರೈತ ಸಂಘ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ, ಜನ ಸಂಗ್ರಾಮ್ ಪರಿಷತ್, ಮೈಸೂರು ಗ್ರಾಹಕರ ಪರಿಷತ್ತು, ಪಿಯುಸಿಎಲ್, ಟೀಂ ಮೈಸೂರು ಹಾಗೂ ಇನ್ನಿತರೆ ಪ್ರಗತಿಪರ ಸಂಘಟನೆಗಳ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಅರಣ್ಯ ಭವನದ ಎದುರು ಜಮಾವಣೆಗೊಂಡ ನೂರಾರು ಮಂದಿ ಧಿಕ್ಕಾರ ಘೋಷಣೆ ಮೂಲಕ ಆಕ್ರೋಶ ವ್ಯಕ್ತಪಡಿಸಿದರು. ಮರಗಳನ್ನು ಕಡಿದವರಿಗೆ, ಕಡಿಯಲು ಕಾರಣರಾದವರಿಗೆ, ಕರ್ತವ್ಯಲೋಪ ಎಸಗಿರುವ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಶಿಕ್ಷೆ ವಿಧಿಸುವಂತೆ ಆಗ್ರಹಿಸಿದರು.

ಪ್ರಕೃತಿ ನಮ್ಮ ಕಣ್ಣಿಗೆ ಕಾಣುವ ದೇವರಾಗಿದ್ದು, ನೆಲ–ಜಲ–ಗಾಳಿಯನ್ನು ಕುಣಿಸಿರುವ ಪ್ರಕೃತಿಯ ಮೇಲಿನ ದೌರ್ಜನ್ಯ ನಿಲ್ಲಬೇಕು. ಮರಗಳು ಪ್ರತಿಯೊಂದು ಜೀವಿಯ ಜೀವವಾಯುವಾಗಿದೆ. ಅಂತಹದರಲ್ಲಿ ಮರಗಳನ್ನು ಕಡಿಯುವುದು ಅಕ್ಷಮ್ಯ. ಕೂಡಲೇ 46 ಮರಗಳನ್ನು ಹನನಕ್ಕೆ ಕಾರಣರಾದವರನ್ನು ಬಂಧಿಸಿ, ಕಾನೂನಾತ್ಮಕ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಾಯಿಯಿಂದ ಬೇರ್ಪಟ್ಟಿದ್ದ ಎರಡು ವರ್ಷದ ಗಂಡು ಹುಲಿ ಮರಿ ಸೆರೆ

●ಗುಂಡ್ಲುಪೇಟೆ ತಾಲೂಕಿನ ಚನ್ನಮಲ್ಲಿಪುರದ ಬಾಳೆ ತೋಟದಲ್ಲಿ ಕಾರ್ಯಾಚರಣೆ ●ರಾಷ್ಟ್ರೀಯ ಹೆದ್ದಾರಿ 766ರ ಅಜು–ಬಾಜಲ್ಲೇ ಅಡಗಿದ್ದ ಹುಲಿ ಮರಿ ●ಜನರ ನಿಯಂತ್ರಿಸಲು ಸೆಕ್ಷನ್ 144 ಜಾರಿ

ಜನ ಎಚ್ಚೆತ್ತುಕೊಳ್ಳಬೇಕು

ಇಂದು ಸೆರೆ ಹಿಡಿದ ಹುಲಿ ಮರಿಯಾಗಿದ್ದು, ನಿತ್ರಾಣಗೊಂಡಿತ್ತು. ಒಂದು ವೇಳೆ ಅದು ಆರೋಗ್ಯವಂತ ವಯಸ್ಕ ಹುಲಿಯಾಗಿದ್ದರೆ ಹಿಂಬಾಲಿಸುತ್ತಿದ್ದ ಜನರ ಮೇಲೆ ದಾಳಿ ಮಾಡುವ ಸಾಧ್ಯತೆ ಇತ್ತು. ಭಯವಿಲ್ಲದೆ ಜನ ಹುಲಿ ಮರಿಯನ್ನು ಹಿಂಬಾಲಿಸುತ್ತಿದ್ದದ್ದು, ಅನಾಹುತಕ್ಕೆ ಎಡೆ ಮಾಡಿಕೊಡುವಂತಿತ್ತು. ಈ ಹಿನ್ನೆಲೆಯಲ್ಲಿ ಜನ ಹುಲಿ ಸೆರೆ ಕಾರ್ಯಾಚರಣೆ ಸ್ಥಳದಿಂದ ಅಂತರ ಕಾಪಾಡಿಕೊಳ್ಳಬೇಕು. ಏನಾದರೂ ಹುಲಿ ತಿರುಗಿ ಬಿದ್ದಿದ್ದರೆ ಅರಣ್ಯ ಇಲಾಖೆಯನ್ನು ದೂಷಿಸುತ್ತಿದ್ದರು. ಇನ್ನಾದರೂ ಕಾರ್ಯಾಚರಣೆಗೆ ಅಡ್ಡಿ ಪಡಿಸದಂತೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದ ಅರಣ್ಯ ಸಿಬ್ಬಂದಿ ಮನವಿ ಮಾಡಿದ್ದಾರೆ.

ಮೈಸೂರು,ಮಾ.23(ಎಂಟಿವೈ)– ತಾಯಿಯಿಂದ ಬೇರ್ಪಟ್ಟು ಸರಹದ್ದಿಗಾಗಿ ಹಾತೊರೆದು ನಿತ್ರಾಣಗೊಂಡಿದ್ದ ಎರಡು ವರ್ಷದ ಗಂಡು ಹುಲಿ ಮರಿಯನ್ನು ಅರಣ್ಯ ಇಲಾಖೆ ಹರಸಾಹಸಪಟ್ಟು ಸೆರೆ ಹಿಡಿದಿದ್ದು, ಅದನ್ನು ಮೈಸೂರಿನ ಕೂರ್ಗಳ್ಳಿಯಲ್ಲಿರುವ ಮೃಗಾಲಯದ ಪುನರ್ವಸತಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವಲಯ ವ್ಯಾಪ್ತಿಯ ಭೀಮನಬೀಡು ಅರಣ್ಯ ಪ್ರದೇಶದಿಂದ ರಾಷ್ಟ್ರೀಯ ಹೆದ್ದಾರಿ 766(ವೈಯನಾಡು ರಸ್ತೆ)ಗೆ ಕೇವಲ 10 ಅಡಿ ಅಂತರದಲ್ಲಿಯೇ ಹುಲಿ ನಿತ್ರಾಣ ಸ್ಥಿತಿಯಲ್ಲಿರುವುದಾಗಿ ಸಾರ್ವಜನಿಕರು ಮಧ್ಯಾಹ್ನ 3.15ಕ್ಕೆ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರು. ಸ್ಥಳಕ್ಕೆ ಬಂದ ಅರಣ್ಯ ಸಿಬ್ಬಂದಿ, ಗಮನಿಸಿದಾಗ ಅದು ತೀವ್ರ ಬಿಸಿಲು ಹಾಗೂ ಹಸಿವಿನಿಂದ ಬಳಲಿರುವುದು ಮನವರಿಕೆ ಆಯಿತು.

ಅಷ್ಟರಲ್ಲಾಗಲೇ ಸಮೀಪದ ಚನ್ನಮಲ್ಲೀಪುರ ಹಾಗೂ ಸುತ್ತುಮುತ್ತಲಿನ ಗ್ರಾಮಸ್ಥರು ಸ್ಥಳದಲ್ಲಿ ಜಮಾಯಿಸಿದ್ದರು. ಹುಲಿಯನ್ನು ಅರಣ್ಯ ಪ್ರದೇಶಕ್ಕೆ ಓಡಿಸಲು ಸಾಕಾನೆಗಳಾದ ಜಯಪ್ರಕಾಶ್ ಮತ್ತು ಧರ್ಮನನ್ನು ಸ್ಥಳಕ್ಕೆ ಕರೆಸಿಕೊಳ್ಳಲಾಯಿತು. ಕಾರ್ಯಾಚರಣೆ ಆರಂಭಿಸುತ್ತಿದ್ದಂತೆ ಹುಲಿ ಬೆಳೆದು ನಿಂತ ಬೆಳೆಗಳಲ್ಲಿ ನುಸುಳಿತು. ಈ ವೇಳೆ ಕುತೂಹಲದಿಂದ ಸೇರಿದ್ದ ಜನ ಹುಲಿಯನ್ನು ಅಟ್ಟಾಡಿಸಲು ಮುಂದಾದರು. ಇದರಿಂದ ಹುಲಿ ತಿರುಗಿ ಬಿದ್ದು, ಜನರ ಮೇಲೆರಗುವ ಸಾಧ್ಯತೆ ಅರಿತ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಎಸ್.ಪ್ರಭಾಕರನ್, ಅರಣ್ಯ ಸಿಬ್ಬಂದಿ ಪೊಲೀಸರ ಸಹಕಾರ ಕೋರಿದರು. ಸ್ಥಳಕ್ಕೆ ತಹಶೀಲ್ದಾರ್ ಹಾಗೂ ಡಿವೈಎಸ್ಪಿ ಆಗಮಿಸಿ ಹುಲಿ ಸೆರೆ ಕಾರ್ಯಾಚರಣೆಗೆ ಅಡ್ಡಿ ಮಾಡದಂತೆ ಎಷ್ಟೇ ಹೇಳಿದರೂ ಜನ ಮಾತ್ರ ಅದಕ್ಕೆ ಕಿವಿಗೊಡಲಿಲ್ಲ. ಇದರಿಂದ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ಸ್ಥಳಕ್ಕೆ ಕರೆಸಿಕೊಂಡು, ಸ್ಥಳದಲ್ಲಿ 144 ಸೆಕ್ಷನ್ ಜಾರಿ ಮಾಡಿ, ಅಲ್ಲಿದ್ದ ಜನರನ್ನು ಚದುರಿಸಿದರು.

ಬಳಿಕ ಕಾರ್ಯಾಚರಣೆ ಆರಂಭಿಸಿದ ಅರಣ್ಯ ಸಿಬ್ಬಂದಿ ಹುಲಿ ಅಡಗಿದ್ದ ತೋಟದಲ್ಲಿ ಹುಲಿ ಘರ್ಜಿಸುತ್ತಿದ್ದಂತೆ ಧರ್ಮ ಆನೆ ಹಿಮ್ಮೆಟ್ಟಿತು. ಅದರ ಮೇಲಿದ್ದ ಪಶುವೈದ್ಯ ಡಾ.ವಾಸಿಂ ಮಿರ್ಜಾ ಅವರನ್ನು ಕೆಳಕ್ಕೆ ಬೀಳಿಸಿ ಕಾಲ್ಕಿತ್ತಿತ್ತು. ನಂತರ ಜಯಪ್ರಕಾಶ ಆನೆ ಮೇಲೆ ಅರವಳಿಕೆ ಮದ್ದು ಹೊಂದಿದ್ದ ಸಿಬ್ಬಂದಿ ಕುಮಾರ್ ಪಶುವೈದ್ಯ ಡಾ.ವಾಸಿಂ ಮಿರ್ಜಾ ಸಲಹೆಯಲ್ಲಿ ಬಾಳೆ ತೋಟದಲ್ಲಿ ಮಲಗಿದ್ದ ಹುಲಿಗೆ ಅರವಳಿಕೆ ಚುಚ್ಚು ಮದ್ದು ನೀಡುವಲ್ಲಿ ಯಶಸ್ವಿಯಾದರು.

ಕೆಲ ಸಮಯದ ನಂತರ ಹುಲಿ ಮಂಪರಿಗೆ ಜಾರುತ್ತಿದ್ದಂತೆ ಅದನ್ನು ರಕ್ಷಿಸಿ ಬೋನ್‌ಗೆ ಹಾಕಲಾಯಿತು. ಆರೋಗ್ಯ ಪರಿಶೀಲಿಸಿದಾಗ ಹಸಿವು ಹಾಗೂ ನಿರ್ಜಲೀಕರಣದಿಂದ ಬಳಲುತ್ತಿರುವುದು ಮನವರಿಕೆ ಆಯಿತು. ಕೂಡಲೇ ಅದನ್ನು ಉಪಚರಿಸಿ, ಮೇಲಾಧಿಕಾರಿಗಳ ಅನುಮತಿಯಂತೆ ಮೈಸೂರಿನ ಕೂರ್ಗಳ್ಳಿಯ ಮೃಗಾಲಯದ ಪುನರ್ವಸತಿ ಕೇಂದ್ರಕ್ಕೆ ಸ್ಥಳಾಂತರಿಸಲಾಯಿತು.

ಮಕ್ಕಳ ಪ್ರತಿಭೆ ಪ್ರೋತ್ಸಾಹಿಸುವುದು ಪೋಷಕರ ಜವಾಬ್ದಾರಿ

ಚಿತ್ರಕಲಾ ಸ್ಪರ್ಧೆ ಉದ್ಘಾಟಿಸಿದ ಶಾಸಕ ದರ್ಶನ್ ಧ್ರುವನಾರಾಯಣ್



ಮಕ್ಕಳು ಚಿತ್ರ ಬಿಡಿಸುವುದನ್ನು ಶಾಸಕ ದರ್ಶನ್ ಧ್ರುವನಾರಾಯಣ್ ವೀಕ್ಷಿಸಿದರು.

ನಂಜನಗೂಡು, ಮಾ.23– ವಿದ್ಯಾರ್ಥಿಯ ಸರ್ವತೋಮುಖ ಬೆಳವಣಿಗೆಗೆ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳು ಮುಖ್ಯ. ಮಕ್ಕಳಲ್ಲಿರುವ ಸುಪ್ತ ಪ್ರತಿಭೆ ಗುರುತಿಸಿ ಅವರನ್ನು ಪ್ರೋತ್ಸಾಹಿಸುವುದು ಪೋಷಕರ ಜವಾಬ್ದಾರಿ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ಗರಳಪುರಿ ಉತ್ಸವದ ಅಂಗವಾಗಿ ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ಯುವ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ಗರಳಪುರಿ ಉತ್ಸವದ ಮೂಲಕ ಮಕ್ಕಳಲ್ಲಿ ಅಡಗಿರುವ ಪ್ರತಿಭೆ ಅನಾವರಣಗೊಳಿಸಲು ವೇದಿಕೆ ಕಲ್ಪಿಸಲಾಗಿದೆ. ಪೋಷಕರು ಮಕ್ಕಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಬೇಕು. ಸ್ಪರ್ಧೆಯಲ್ಲಿ ಭಾಗವಹಿಸಿರುವ ಮಕ್ಕಳ ಉತ್ಸಾಹ, ಸಂಭ್ರಮ ನೋಡಿದರೆ ಪ್ರತಿಯೊಬ್ಬರಿಗೂ ತಮ್ಮ ಬಾಲ್ಯದ ನೆನಪಾಗುವುದು ಸಹಜ. ನಾನು ಚಿಕ್ಕವನಾಗಿದ್ದಾಗ ನನ್ನ ತಾಯಿ ವೀಣಾ ಧ್ರುವನಾರಾಯಣ್ ಅವರು ನಮಗೆ ಚಿತ್ರಕಲೆ ಕಲಿಸುವ ಜೊತೆಗೆ ಚಿತ್ರಕಲಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸುತ್ತಿದ್ದರು. ಈ ಚಿತ್ರಕಲೆ ಸ್ಪರ್ಧೆ ನನ್ನ ಬಾಲ್ಯದ ನೆನಪು ತಂದಿದೆ. ಸ್ಪರ್ಧೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯ. ಆದ್ದರಿಂದ ಮಕ್ಕಳು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು ಎಂದರು.

ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ ಮಾತನಾಡಿ, ಪೋಷಕರು ಮಕ್ಕಳಿಗೆ ಬರಿ ಅಂಕ ಗಳಿಸುವಂತೆ ಒತ್ತಡ ಹೇರುವ ಬದಲು ಮಕ್ಕಳಲ್ಲಿರುವ ಕಲಾತ್ಮಕ ಸಾಂಸ್ಕೃತಿಕ ಚಟುವಟಿಕೆಯನ್ನು ಉತ್ತೇಜಿಸಬೇಕು. ಚಿತ್ರಕಲೆ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಜೊತೆಗೆ ಸೃಜನಶೀಲತೆ, ಸಾಮಾಜಿಕ ಅರಿವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ಚಿತ್ರಕಲಾ ಸ್ಪರ್ಧೆಯಲ್ಲಿ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಿದರು. ಮಕ್ಕಳ ಮನಮೋಹಕ ಚಿತ್ತಾರ ಕಂಡು ಪೋಷಕರು, ಸಾರ್ವಜನಿಕರು ಪ್ರಶಂಸಿಸಿದರು.

ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮಂಜುನಾಥ್ ಗೌಡ, ವಾಲ್ಮೀಕಿ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಿ.ಎಂ.ಶಂಕರ್, ಶ್ರೀಕಂಠನಾಯಕ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಮಾರುತಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಚಂದನ್‌ಗೌಡ, ಅಧ್ಯಕ್ಷ ವಿಜಯ ಕುಮಾರ್, ಲೋಕೋಪಯೋಗಿ ಎಇಇ ರಮೇಶ್, ಎಇ ಬಸವರಾಜು ಹಲವರಿದ್ದರು.

ಸಸ್ಯಕಾಶಿ ಉದ್ಯಾನವನ ಲೋಕಾರ್ಪಣೆ

ನಂಜನಗೂಡು: ನಂಜನಗೂಡಿನ ಪ್ರವಾಸಿ ಮಂದಿರದ ಬಳಿ 56 ಲಕ್ಷ ರೂ. ವೆಚ್ಚದಲ್ಲಿ ಪುನಶ್ಚೇತನಗೊಂಡಿರುವ ಸಸ್ಯಕಾಶಿಯನ್ನು ಶಾಸಕ ದರ್ಶನ್ ಧ್ರುವನಾರಾಯಣ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ನಂಜನಗೂಡಿನಲ್ಲಿ ಊಟಿ ಬಟಾನಿಕಲ್ ಗಾರ್ಡನ್ ಮಾದರಿ ಸಸ್ಯಕಾಶಿ ನಿರ್ಮಿಸಬೇಕು ಎಂಬುದು ಮಾಜಿ ಸಂಸದ ದಿ.ವಿ.ಶ್ರೀನಿವಾಸ ಪ್ರಸಾದ್ ಅವರ ಕನಸಾಗಿತ್ತು. ಅವರು 3 ಕೋಟಿ ವೆಚ್ಚದಲ್ಲಿ ಸಸ್ಯಕಾಶಿ ನಿರ್ಮಿಸಿದ್ದರು. ಆದರೆ ಗಿಡಗಳು ಸರಿಯಾದ ನಿರ್ವಹಣೆ ಇಲ್ಲದೆ ಒಣಗಿ ಹೋಗಿದ್ದವು. ಈ ಸಸ್ಯಕಾಶಿಗೆ ನೂತನವಾಗಿ 56 ಲಕ್ಷ ಅನುದಾನ ನಿಯೋಜಿಸಿ ಉದ್ಯಾನವನವನ್ನು ಪುನಶ್ಚೇತನಗೊಳಿಸಿ ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಡಲಾಗಿದೆ. ಈ ಉದ್ಯಾನವನ ಉತ್ತಮ ವಾತಾವರಣದಿಂದ ಕೂಡಿದ್ದು, ಸಾರ್ವಜನಿಕರಿಗೆ ವಿಶ್ರಾಂತಿ ಜೊತೆಗೆ ಮನರಂಜನೆ ಒದಗಿಸಲಿದೆ ಎಂದರು.

ಹಿರಿಯೂರು ಪಿಎಸಿಎಸ್ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆ

ಎಂ.ಗುರುಸ್ವಾಮಿ ಅಧ್ಯಕ್ಷ, ಎಂ.ಗಿರಿಮಲ್ಲಯ್ಯ ಉಪಾಧ್ಯಕ್ಷ



ಅಧ್ಯಕ್ಷರಾಗಿ ಎಂ.ಗುರುಸ್ವಾಮಿ, ಉಪಾಧ್ಯಕ್ಷರಾಗಿ ಎಂ.ಗಿರಿಮಲ್ಲಯ್ಯ ಅವಿರೋಧವಾಗಿ ಆಯ್ಕೆಯಾದರು.

ತಿ.ನರಸೀಪುರ, ಮಾ.23– ತಾಲೂಕಿನ ಹಿರಿಯೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಹಿರಿಯೂರು ನವೀನ್ ಬಣದ ಎಂ.ಗುರುಸ್ವಾಮಿ, ಉಪಾಧ್ಯಕ್ಷರಾಗಿ ಎಂ.ಗಿರಿಮಲ್ಲಯ್ಯ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಮದ ಸಹಕಾರ ಸಂಘದ ಕಚೇರಿಯಲ್ಲಿ ಸೋಮವಾರ ನಡೆದ ಚುನಾವಣೆಯಲ್ಲಿ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಎಂ.ಗುರುಸ್ವಾಮಿ ಹಾಗೂ ಪ.ಜಾತಿಗೆ ಮೀಸಲಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಎಂ.ಗಿರಿಮಲ್ಲಯ್ಯ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಹಸೀನಾ ಘೋಷಿಸಿದರು.

ನಿರ್ದೇಶಕರಾದ ಸಿ.ಎಸ್.ನಂಜುಂಡಸ್ವಾಮಿ, ಸಿ.ಎಸ್.ಪ್ರಭುಸ್ವಾಮಿ, ಎಸ್.ವೀರೇಶ್, ಸಹಜಾನಂದಸ್ವಾಮಿ, ರಾಜೇಶ್ವರಿ, ಹೆಚ್.ಎಂ.ಕೋಮಲ, ಎಂ.ಎಸ್.ರಾಜಶೇಖರಮೂರ್ತಿ, ಹೆಚ್.ಎಂ. ಮನೋಜ್ ಕುಮಾರ್, ಎಂ.ರವಿಕುಮಾರ್ ಹಾಗೂ ಗುರುಸ್ವಾಮಿ ಚುನಾವಣಾ ಸಭೆಯಲ್ಲಿ ಹಾಜರಿದ್ದು, ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಗೆ ಅನುಮೋದನೆ ನೀಡಿದರು.

ಮಾ.14ರಂದು ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಹಿರಿಯೂರು ನವೀನ್ ಬಣದಿಂದ ಸ್ಪರ್ಧಿಸಿ ಚುನಾವಣೆ ಮೂಲಕ ಐವರು ಹಾಗೂ ಉಳಿದ 7 ಮಂದಿ ಮಾ.7ರಂದು ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದರು.

ನೂತನ ಅಧ್ಯಕ್ಷ ಎಂ.ಗುರುಸ್ವಾಮಿ ಮಾತನಾಡಿ, ಕಳೆದ 15 ವರ್ಷದಿಂದ 4 ಬಾರಿ ನಿರ್ದೇಶಕನಾಗಿ ಆಯ್ಕೆಯಾಗಿದ್ದೇನೆ. ಇಂದು ಮಾಜಿ ಅಧ್ಯಕ್ಷ ನಾಗಪ್ಪನವರ ಸಹಕಾರದಿಂದ ಅಧ್ಯಕ್ಷನಾಗಿದ್ದೇನೆ. ಮುಂದಿನ ದಿನಗಳಲ್ಲಿ ಸಂಘದ ಹಿರಿಯರ ಮಾರ್ಗದರ್ಶನದಲ್ಲಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತೇನೆ. ಸಂಘದ ಎಲ್ಲಾ ನಿರ್ದೇಶಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಉಪಾಧ್ಯಕ್ಷ ಎಂ.ಗಿರಿಮಲ್ಲಯ್ಯ (ಗಿರೀಶ್) ಮಾತನಾಡಿ, ಹಿರಿಯರ ಸಹಕಾರದಿಂದ ಉಪಾಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ. ಆಯ್ಕೆ ವೇಳೆ ಕೊಟ್ಟ ಮಾತಿಗೆ ಬದ್ಧನಾಗಿರುತ್ತೇನೆ. ನಿರ್ದೇಶಕರು ಹಾಗೂ ಹಿರಿಯರ ಮಾರ್ಗದರ್ಶನದಲ್ಲಿ ಸಂಘವನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗಲು ಎಲ್ಲರ ಸಹಕಾರ ಬಯಸುತ್ತೇನೆ. ರೈತರು ಖಾಸಗಿ ಫೈನಾನ್ಸ್‌ಗಳಲ್ಲಿ ಚಿನ್ನವನ್ನು ಗಿರವಿ ಇಟ್ಟು ಮೋಸ ಹೋಗುತ್ತಿದ್ದು, ಇದನ್ನು ತಪ್ಪಿಸಲು ಸಹಕಾರ ಸಂಘದಲ್ಲೇ ಚಿನ್ನ ಅಡವಿಡುವ ಸೌಲಭ್ಯ ಜಾರಿಗೆ ತರಬೇಕಿದೆ ಎಂದರು.

> “ಸಹಕಾರ ಸಂಘಗಳಿಗೆ ಸರ್ಕಾರ ಕೋಟ್ಯಾಂತರ ರೂ. ಅನುದಾನ ನೀಡುತ್ತಿದೆ. ನೂತನ ಅಧ್ಯಕ್ಷರು ಸರ್ಕಾರದ ಅನುದಾನದ ಸದ್ಬಳಕೆಗೆ ಮುಂದಾಗಬೇಕು. ಸಂಘದ ಕಾರ್ಯದರ್ಶಿಯನ್ನು ವಿಶ್ವಾಸಕ್ಕೆ ಪಡೆಯುವ ಮೂಲಕ ಸಂಘದ ಅಭಿವೃದ್ಧಿಗೆ ಶ್ರಮಿಸಬೇಕು. ಸರ್ಕಾರದ ಸವಲತ್ತುಗಳನ್ನು ರೈತರಿಗೆ ತಲುಪಿಸಬೇಕು.
> – ಹಿರಿಯೂರು ನವೀನ್, ಕೆಡಿಪಿ ಸದಸ್ಯ.

ಈ ವೇಳೆ ಆಲಗೂಡು ಪಿಎಸಿಎಸ್ ಅಧ್ಯಕ್ಷ ಹೆಳವರಹುಂಡಿ ನಟರಾಜು, ಹಿರಿಯೂರು ಪಿಎಸಿಎಸ್ ಮಾಜಿ ಅಧ್ಯಕ್ಷ ನಾಗಪ್ಪ, ರೇಣುಕಣ್ಣ, ವೀರಪ್ಪಸ್ವಾಮಿ, ಶಂಕರ, ಸೋಮ, ಚಿಕ್ಕಮಾದಪ್ಪ, ಜಾಲಹಳ್ಳಿ ಸುರೇಶ್, ಮೂರ್ತಿ, ಯೋಗಿ, ಬರ್ಜೇಶ್, ಮಲ್ಲಿಕಾರ್ಜುನಸ್ವಾಮಿ, ಸೋಮಶೇಖರಪ್ಪ, ನಿಲಸೋಗೆ ನಂಜುಂಡಸ್ವಾಮಿ, ತ್ರಿಪುರ, ಚೌಹಳ್ಳಿ ಕುಮಾರ, ಮರಿಸ್ವಾಮಿ, ನಂಜುಂಡ, ಶಾಂತ, ನಂಜುಂಡೇಗೌಡ, ಪ್ರದೀಪ್ ಕುಮಾರ್ ಸೇರಿದಂತೆ ಸಂಘದ ಕಾರ್ಯದರ್ಶಿ ಉಮೇಶ್ ಹಾಜರಿದ್ದರು.

ಒಳ ಮೀಸಲಾತಿಯಲ್ಲಿ ಬಲಗೈ ಸಮುದಾಯಕ್ಕೆ ಅನ್ಯಾಯ ಖಂಡಿಸಿ

ಮೈಸೂರು ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ



ಒಳ ಮೀಸಲಾತಿಯಲ್ಲಿ ಅನ್ಯಾಯ ಖಂಡಿಸಿ ಪಾದಯಾತ್ರೆ ಕೈಗೊಂಡಿರುವುದು.

ತಿ.ನರಸೀಪುರ ಮಾ.23– ಪ.ಜಾತಿ ಒಳ ಮೀಸಲಾತಿಯಲ್ಲಿ ಬಲಗೈ (ಹೊಲಯ) ಸಮುದಾಯಕ್ಕೆ ಆಗಿರುವ ಅನ್ಯಾಯ ಖಂಡಿಸಿ, ನ್ಯಾ.ನಾಗಮೋಹನ್‌ದಾಸ್ ವರದಿ ತಿರಸ್ಕರಿಸುವಂತೆ ಆಗ್ರಹಿಸಿ ಪ.ಜಾತಿ ಬಲಗೈ ಮಹಾಸಭಾ ಪದಾಧಿಕಾರಿಗಳು ಸೋಮವಾರ ಮೈಸೂರು ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ದಲಿತ ಸಂಘಟನೆಗಳ ಮುಖಂಡರು, ಪ್ರಗತಿಪರರು ಹಾಗೂ ಸಮುದಾಯ ಪ್ರಮುಖರು ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿ ಪಾದಯಾತ್ರೆ ಆರಂಭಿಸಿ, ಹೊಸ ತಿರುಮಕೂಡಲು ರಸ್ತೆ, ಹಳೇ ತಿರುಮಕೂಡಲು ಹಾಗೂ ಗರ್ಗೇಶ್ವರಿ ಮಾರ್ಗವಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮೈಸೂರಿನತ್ತ ನಡೆದರು.

ಜಿಲ್ಲಾ ಜನಜಾಗೃತಿ ಜಿಲ್ಲಾಧ್ಯಕ್ಷ ಕೆ.ಎನ್. ಪ್ರಭುಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಸ್ವಾಭಿಮಾನದ ಬದುಕು ನಡೆಸುತ್ತಿರುವ ಬಲಗೈ(ಹೊಲಯ) ಸಮುದಾಯ ಮೀಸಲಾತಿಯಲ್ಲಿ ಮತ್ಯಾರ ಪಾಲನ್ನು ಕಸಿದಿಲ್ಲ. ಶಿಕ್ಷಣ ಪಡೆದು ಪ್ರತಿಭೆ ಮೂಲಕವೇ ವಿವಿಧ ರಂಗಗಳಲ್ಲಿ ತಕ್ಕಮಟ್ಟಿಗೆ ಮುಂದುವರೆದಿದ್ದಾರೆ. ಒಳ ಮೀಸಲಾತಿ ಜನಗಣತಿ ನಡೆಸಿದ ವೇಳೆ ಸಮುದಾಯದ ಬಗ್ಗೆ ತಪ್ಪಾಗಿ ಅರ್ಥೈಸಲಾಗಿದೆ. ಒಬ್ಬರ ಹಕ್ಕನ್ನು ಕಿತ್ತುಕೊಳ್ಳುವ ನಾಗಮೋಹನ ದಾಸ್ ಆಯೋಗದ ವರದಿಯನ್ನು ಸರ್ಕಾರ ತಿರಸ್ಕರಿಸಬೇಕು. ಆಗಿರುವ ಅನ್ಯಾಯ ಸರಿಪಡಿಸಬೇಕು. ಅಲ್ಲಿವರೆಗೂ ಹೋರಾಟ ಮುಂದುವರೆಸುತ್ತೇವೆ ಎಂದರು.

ಯುವ ಮುಖಂಡ ಸೋಸಲೆ ಎ.ಶಿವಕುಮಾರ್ ಮಾತನಾಡಿ, ಸಾಮಾಜಿಕ ನ್ಯಾಯ ನಿರೀಕ್ಷಿಸಿದ್ದ ಸಮುದಾಯಕ್ಕೆ ಒಳ ಮೀಸಲಾತಿ ಅನ್ಯಾಯದ ಮೂಲಕ ರಾಜ್ಯ ಸರ್ಕಾರ ದ್ರೋಹ ಮಾಡಿದೆ. ಮಾ.27ರ ಸಚಿವ ಸಂಪುಟ ಸಭೆಯಲ್ಲಿ ಒಳ ಮೀಸಲು ರೋಸ್ಟರ್ ಲೋಪವನ್ನು ಸರ್ಕಾರ ಸರಿಪಡಿಸಬೇಕು. ಇಲ್ಲದಿದ್ದರೆ ನರಸೀಪುರದಿಂದ ಬೆಂಗಳೂರಿಗೆ ಪಾದಯಾತ್ರೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ವೇಳೆ ಅಂಬೇಡ್ಕರ್ ಅಭಿವೃದ್ಧಿ ಸಂಘದ ಉಪಾಧ್ಯಕ್ಷ ಎಂ.ಕೆ.ಸಿದ್ದರಾಜು, ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ಎನ್.ಲಿಂಗಪ್ಪಾಜಿ, ದಸಂಸ ರಾಜ್ಯ ವಿಭಾಗೀಯ ಸಂಚಾಲಕ ಆಲಗೂಡು ಎಸ್.ಚಂದ್ರಶೇಖರ್, ದಸಂಸ ಸಂಚಾಲಕ ಕುಕ್ಕೂರು ರಾಜು, ನಿವೃತ್ತ ಅಧಿಕಾರಿ ನಿಲಸೋಗೆ ಸಿದ್ದರಾಜು, ತಾಪಂ ಮಾಜಿ ಸದಸ್ಯ ಬಸವರಾಜು, ಎಪಿಎಂಸಿ ಮಾಜಿ ಅಧ್ಯಕ್ಷ ಎನ್.ಮಹೇಶ, ನಿವೃತ್ತ ಪ್ರಾಂಶುಪಾಲೆ ಬಿ.ಸಿ.ಇಂದಿರಮ್ಮ, ತ್ರಿವೇಣಿ ನಗರ ಮಹದೇವಮ್ಮ, ನಿವೃತ್ತ ಎಸ್ಐ ದೊಡ್ಡಯ್ಯ, ಸೋಮಣ್ಣ, ಮುಖಂಡರಾದ ಶಿವಣ್ಣ, ಧರ್ಮರತ್ನ ಕುಮಾರ, ರಾಜೇಶ್, ರಾಜಣ್ಣ, ನಿರಂಜನ್, ಎಸ್.ವಿ.ಮಹೇಶ್ ಕುಮಾರ್, ಮಂಜು, ನಂದನ್, ಉಮೇಶ್, ಕೆಂಚಪ್ಪ ಶ್ರೀಧರ, ನಿಂಗರಾಜು, ಎಂ.ಆರ್. ಸುಂದರ್, ಮಹದೇವ, ಎಲ್.ಉಮಾಪತಿ, ನಾಗರಾಜ್ ಮೂರ್ತಿ, ಬಸವರಾಜು, ಮಹೇಶ್, ನಿರಂಜನ್, ಶಿವನಂಜು, ಮಹದೇವಸ್ವಾಮಿ, ಸಿದ್ದರಾಜು ಇತರರಿದ್ದರು.

ಹನಗೋಡಿನಲ್ಲಿ ಡಾ.ಜೆರಿ ಪೈಸ್ ಅವರಿಗೆ ನುಡಿನಮನ



ಡಾ.ಜೆರಿ ಪೈಸ್ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಹುಣಸೂರು, ಮಾ.23– ತಾಲೂಕಿನ ಹನಗೋಡಿನಲ್ಲಿ ಡಾ.ಜೆರಿ ಪೈಸ್ ಅವರ ನುಡಿನಮನ ಕಾರ್ಯಕ್ರಮ ನಡೆಯಿತು.

ಇಲ್ಲಿನ ಕೊಳವಿಗೆ ಹಾಡಿ ನಿವಾಸಿ ಸಣ್ಣಯ್ಯ ಮಾತನಾಡಿ, 1972ರಲ್ಲಿ ಅರಣ್ಯ ಸಂರಕ್ಷಣೆ ಹೆಸರಿನಲ್ಲಿ ಆದಿವಾಸಿಗಳನ್ನು ಕಾಡಿನಿಂದ ಹೊರ ಹಾಕಿದಾಗ ಅರಣ್ಯ ಇಲಾಖೆ ದೌರ್ಜನ್ಯದಿಂದ ಗಿರಿಜನರನ್ನು ಪಾರು ಮಾಡಲು, ನ್ಯಾಯ ಕೇಳಲು ಆತ್ಮಸ್ಥೈರ್ಯ ತುಂಬಿ ನಮ್ಮ ಹಕ್ಕನ್ನು ನಾವೇ ಪ್ರತಿಪಾದಿಸಬೇಕು ಎಂದು ಮಾರ್ಗದರ್ಶನ ನೀಡಿದವರು ಡಾ.ಪೈಸ್ ಎಂದರು.

ದಾಸನಪುರ ಹಾಡಿಯ ಬಸವಯ್ಯ ಮಾತನಾಡಿ, ಪೈಸ್ ಅವರು ಮೊದಲಿಗೆ ಕೆರೆ ಹಾಡಿಯಲ್ಲಿ ಆದಿವಾಸಿಗಳಿಂದಲೇ ಇಟ್ಟಿಗೆ ತಯಾರಿಸಿ ಮನೆಗಳನ್ನು ನಿರ್ಮಾಣ ಮಾಡಿಸಿದರು. ಶಿಕ್ಷಣದಿಂದ ವಂಚಿತರಾದ ನಮ್ಮ ಮಕ್ಕಳಿಗೆ ರಾತ್ರಿ ಪಾಠಶಾಲೆಗಳ ಮೂಲಕ ಶಿಕ್ಷಣ ನೀಡಿದರು. ನಂತರ ಜೀತ ಬಿಡಿಸಿ ನಮ್ಮಗಳಿಗೆ ಬದುಕು ಕಟ್ಟಿಕೊಟ್ಟ ದೇವರಾಗಿದ್ದರು ಎಂದು ಸ್ಮರಿಸಿದರು.

ಆದಿವಾಸಿಗಳ ಮುಖಂಡ ಅಯ್ಯನಕೆರೆ ಹಾಡಿ ಶಿವಣ್ಣ ಮಾತನಾಡಿ, ಆದಿವಾಸಿಗಳಲ್ಲಿ ಘನತೆ, ಹಿರಿಮೆ, ಸ್ವಾಭಿಮಾನ ಹಾಗೂ ಜನರಲ್ಲಿ ಶಕ್ತಿ ತುಂಬುವ ಕೆಲಸ ಮಾಡಿದರು. ಮೈಸೂರು ಜಿಲ್ಲೆಯಲ್ಲಿ ಹಾಡಿಗಳಿಗೆ ಮೊದಲಿಗೆ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಿಕೊಟ್ಟರು. ಇದರ ಜೊತೆಗೆ ಮಕ್ಕಳಲ್ಲಿ ಶಿಕ್ಷಣ, ಆರೋಗ್ಯ, ಮಹಿಳೆಯರ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿದರು ಎಂದರು.

ಕೂಡ್ಲೂರು ಚರ್ಚ್ ಫಾದರ್ ಸ್ಟ್ಯಾನ್ಲಿ ಡಿ ಅಮ್ಲೆಡ ಮಾತನಾಡಿ, ರಾಜ್ಯದಲ್ಲಿ ಸ್ವಯಂ ಸೇವಾ ಒಕ್ಕೂಟದ ಪಿತಾಮಹರಾಗಿ ತತ್ವ, ಸಿದ್ಧಾಂತಗಳ ಮೂಲಕ ತುಳಿತಕ್ಕೆ ಒಳಗಾದ ಜನರಿಗೆ ಅದರಲ್ಲೂ ಸರ್ಕಾರ ಆದಿವಾಸಿಗಳಿಗೆ ಮಾಡುತ್ತಿರುವ ಅನ್ಯಾಯ ಖಂಡಿಸಿ ಆದಿವಾಸಿಗಳಲ್ಲಿ ನ್ಯಾಯ ಕೇಳುವ ಶಕ್ತಿಯನ್ನು ಪೈಸ್ ತುಂಬಿದರು. ಜೊತೆಗೆ ಪೈಸ್ ಅವರಲ್ಲಿ ಇಷ್ಟವಾಗುವ ಗುಣವೆಂದರೆ ಶ್ರದ್ಧೆ, ನಿಷ್ಠೆ, ಕಾರ್ಯಕ್ಷಮತೆ, ಅದರಲ್ಲೂ ಕ್ಷಮಿಸುವ ಗುಣ ಅವರಲ್ಲಿತ್ತು ಎಂದರು.

ಡೀಡ್ ಸಂಸ್ಥೆ ಹಿರಿಯ ಕಾರ್ಯಕರ್ತೆ ಕಮಲ ಮಾತನಾಡಿದರು. ಡೀಡ್ ಸಂಸ್ಥೆಯ ಗಂಗಮ್ಮ ಅಚ್ಯುತ್ ರಾವ್, ಪ್ರೇಸಿಲ್ಲ, ಚಂದ್ರಮ್ಮ, ನಿಂಗರಾಜಪ್ಪ, ಯೋಗೇಶ, ಜಿ.ಎಸ್.ಜಗದೀಶ್ ಡಾ.ಜೆರಿ ಪೈಸ್ ಅವರು ಆದಿವಾಸಿ ಕ್ಷೇತ್ರದಲ್ಲಿ ಮಾಡಿದ ಸಾಧನೆ ಹಾಗೂ ಸರಳತೆ, ಸಮಯ ಪ್ರಜ್ಞೆ ಬಗ್ಗೆ ತಿಳಿಸಿದರು.

ಗಿಡ ಮೂಲಿಕೆ ತಜ್ಞೆ ಮಾಸ್ತಮ್ಮ, ಚಂದನಗಿರಿ ಮಾದಯ್ಯ, ಹೆಮ್ಮಿಗೆ ಹಾಡಿ ಶಂಕರಯ್ಯ, ಮಣಿ, ಪೂವಯ್ಯ, ಕಾಂತರಾಜು, ಆಶ್ರಯ ಸೇವಾ ಟ್ರಸ್ಟ್ ಅಧ್ಯಕ್ಷ ಜೋಸೆಫ್ ಮರಿ ಇತರರಿದ್ದರು.

ಬೈಕ್ ವ್ಹೀಲಿಂಗ್ ಮಾಡುತ್ತಿದ್ದವನ ಬಂಧನ



ಬೈಲಕುಪ್ಪೆ, ಮಾ.23– ಸೈಲೆನ್ಸರ್ ಪೈಪ್ ಬದಲಿಸಿಕೊಂಡು ಕರ್ಕಶ ಶಬ್ದದೊಂದಿಗೆ ರಾತ್ರಿ ವೇಳೆ ಬೈಕ್ ವ್ಹೀಲಿಂಗ್ ಮಾಡುತ್ತಿದ್ದ ಆರೋಪಿಯನ್ನು ಬೈಲಕುಪ್ಪೆ ಪೊಲೀಸರು ಬಂಧಿಸಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ ಗುಡ್ಡೇನಹಳ್ಳಿ ನಿವಾಸಿ ನಸ್ಸೀರ್ ಬಂಧಿತ ಆರೋಪಿ. ಈತನಿಂದ ಬೈಕ್ ವಶಪಡಿಸಿಕೊಳ್ಳಲಾಗಿದೆ. ಈತ ರಾತ್ರಿ ವೇಳೆ ಗಾಂಜಾ ಸೇವನೆ ಮಾಡಿ ಸೈಲೆನ್ಸರ್ ಪೈಪ್ ಬದಲಿಸಿದ್ದ ಬೈಕ್‌ನಲ್ಲಿ ಕರ್ಕಶ ಶಬ್ದದೊಂದಿಗೆ ವ್ಹೀಲಿಂಗ್ ಮಾಡುತ್ತಿದ್ದ ಎನ್ನಲಾಗಿದೆ. ಈ ಸಂಬಂಧ ಸಾರ್ವಜನಿಕರು ಬೈಲಕುಪ್ಪೆ ಠಾಣೆಗೆ ದೂರು ನೀಡಿದ್ದರು. ಈ ಬಗ್ಗೆ ಕಾರ್ಯಾಚರಣೆ ಕೈಗೊಂಡ ಪೊಲೀಸರು ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಈ ಸಂಬಂಧ ಬೈಲಕುಪ್ಪೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾರ್ಯಾಚರಣೆಯಲ್ಲಿ ಎಸ್ಐ ರವಿಕುಮಾರ್, ಕ್ರೈಂ ಸಬ್ ಇನ್ಸ್‌ಪೆಕ್ಟರ್ ರವಿ, ಸಿಬ್ಬಂದಿಗಳಾದ ಮುದ್ದುರಾಜ್, ರುದ್ರೇಶ್ ಇತರರಿದ್ದರು.

ಸರಗೂರಲ್ಲಿ ದೇವರ ದಾಸಿಮಯ್ಯ ಜಯಂತಿ



ಸರಗೂರಲ್ಲಿ ದೇವರ ದಾಸಿಮಯ್ಯ ಜಯಂತಿ ನಡೆಯಿತು.

ಸರಗೂರು, ಮಾ.23– ಸರಳ ಭಾಷೆಯಲ್ಲಿ ಎಲ್ಲರಿಗೂ ಅರ್ಥವಾಗುವಂತೆ ವಚನಗಳನ್ನು ರಚಿಸಿದ ದೇವರ ದಾಸಿಮಯ್ಯ ಸಾಮಾಜಿಕ ಅಸಮಾನತೆ ತೊಲಗಿಸಲು ಶ್ರಮಿಸಿದರು ಎಂದು ತಹಸೀಲ್ದಾರ್ ಮೋಹನಕುಮಾರಿ ತಿಳಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಸೋಮವಾರ ನಡೆದ ದೇವರ ದಾಸಿಮಯ್ಯ ಜಯಂತಿಯಲ್ಲಿ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಸಮ ಸಮಾಜ ನಿರ್ಮಿಸಿ ಸನ್ಮಾರ್ಗದೆಡೆಗೆ ನಡೆಸಿದ ಕೀರ್ತಿ ದಾಸಿಮಯ್ಯ ಅವರಿಗೆ ಸಲ್ಲುತ್ತದೆ. ಅವರ 176 ವಚನಗಳು ದೊರೆತಿದ್ದು, ಅವರ ವಚನ ಸಾರಗಳು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿವೆ ಎಂದರು.

ತೊಗಟವೀರ ಸಮಾಜದ ಯಜಮಾನ ರವೀಂದ್ರಪ್ರಸಾದ್ ಮಾತನಾಡಿ, ಬಸವಣ್ಣ ಅವರಿಗಿಂತ ಮೊದಲೇ 10ನೇ ಶತಮಾನದಲ್ಲಿ ದೇವರ ದಾಸಿಮಯ್ಯ ಸರಳವಾಗಿ ವಚನ ರಚಿಸಿದ್ದರು. ನೇಕಾರರಾಗಿ ಮಾನವ ಕುಲಕ್ಕೆ ಉಡುಪು ನೀಡಿದವರು. ಆದರೆ ಜನಾಂಗ ಇಂದು ವಿವಿಧ ಪಂಗಡಗಳಾಗಿ ಹರಿದು ಹಂಚಿ ಹೋಗಿದೆ ಎಲ್ಲರೂ ಒಗ್ಗೂಡಬೇಕಿದೆ. ಮುಂದಿನ ವರ್ಷ ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮ ನಡೆಸಲು ಸಹಕರಿಸಬೇಕಿದೆ ಎಂದರು.

ಪಪಂ ಅಧ್ಯಕ್ಷೆ ಚೈತ್ರಾ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸೋಮೇಶ್, ತೊಗಟವೀರ ಸಮಾಜದ ಜಿ.ರಘುರಾಮ, ರವೀಂದ್ರ ಪ್ರಸಾದ್, ತೊಗಟವೀರ ಯುವಕ ಸಂಘದ ಅಧ್ಯಕ್ಷ ಪುರುಷೋತ್ತಮ್, ಪುನೀತ್, ಎಸ್.ವಿ.ವೇಣುಗೋಪಾಲ, ಚ.ಬಾಲಸುಬ್ರಹ್ಮಣ್ಯ, ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಎಸ್.ಆರ್. ನಾಗರಾಮು ಸೇರಿದಂತೆ ಕಂದಾಯ ಇಲಾಖೆ ಅಧಿಕಾರಿಗಳು ಇನ್ನಿತರರಿದ್ದರು.

ಸಾ.ರಾ.ಜಯಂತ್‌ಗೆ ಹುಟ್ಟುಹಬ್ಬದ ಶುಭಾಶಯ




ಕೆ.ಆರ್.ನಗರದಲ್ಲಿ ಜಿಪಂ ಮಾಜಿ ಸದಸ್ಯ ಸಾ.ರಾ.ನಂದೀಶ್ ಅವರು ಉದ್ಯಮಿ ಸಾ.ರಾ.ಜಯಂತ್ ಅವರಿಗೆ ಭಾರೀ ಗಾತ್ರದ ಹೂವಿನ ಹಾರ ಹಾಕಿ ಅಭಿನಂದಿಸಿ ಹುಟ್ಟುಹಬ್ಬದ ಶುಭಾಶಯ ಕೋರಿದರು. ಈ ವೇಳೆ ಜೆಡಿಎಸ್ ಮುಖಂಡ ಮೂ.ರಾ.ಹರ್ಷಕುಮಾರ್‌ಗೌಡ, ನಿವೃತ್ತ ಕಂದಾಯ ಅಧಿಕಾರಿ ಪ್ರಭಾಕರ್, ಸುರೇಶ್ ನಾಯ್ಡು, ಚಂದ್ರು, ಕಿರಣ್, ಗುರುಪ್ರಸಾದ್, ಕಿರಣ್ ಕುಮಾರ್, ಮಂಜುನಾಥ್, ಉದಯ್ ಕುಮಾರ್, ರಾಜೇಂದ್ರ ಸೇರಿದಂತೆ ಇತರರಿದ್ದರು.

ವಿವಿಧ ಸಮಾಜ ಸೇವಾ ಕಾರ್ಯಗಳೊಂದಿಗೆ

ಉದ್ಯಮಿ ಸಾ.ರಾ.ಜಯಂತ್ ಹುಟ್ಟುಹಬ್ಬ ಅರ್ಥಪೂರ್ಣ ಆಚರಣೆ

- 10 ವ್ಯಾಪಾರಿಗಳಿಗೆ ತಳ್ಳು ಗಾಡಿ ಹಾಗೂ 150 ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ
- ವೃದ್ಧಾಶ್ರಮ, ಅಂಧ ಮಕ್ಕಳ ಶಾಲೆ ಮಕ್ಕಳಿಗೆ ಅನ್ನ ಸಂತರ್ಪಣೆ



ಹುಟ್ಟುಹಬ್ಬದ ಅಂಗವಾಗಿ ಅಭಿಮಾನಿಗಳು ಸಾ.ರಾ.ಜಯಂತ್ ಅವರಿಗೆ ಮೊಸಂಬಿ ಹಾರ ಹಾಕಿದರು.

ಕೆ.ಆರ್.ನಗರ, ಮಾ.23– ಪಟ್ಟಣದಲ್ಲಿ ವಿವಿಧ ಸಮಾಜಸೇವಾ ಕಾರ್ಯಗಳೊಂದಿಗೆ ಮಾಜಿ ಸಚಿವ ಸಾ.ರಾ.ಮಹೇಶ್ ಅವರ ಪುತ್ರ ಉದ್ಯಮಿ ಸಾ.ರಾ.ಜಯಂತ್ ಅವರ ಹುಟ್ಟುಹಬ್ಬವನ್ನು ಸಾ.ರಾ.ಜಯಂತ್ ಸ್ನೇಹ ಬಳಗದಿಂದ ನಗರ ಯುವ ಜೆಡಿಎಸ್ ಅಧ್ಯಕ್ಷ ವಿಕಾಸ್(ವಿಕ್ಕಿ) ನೇತೃತ್ವದಲ್ಲಿ ಸೋಮವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಹುಟ್ಟುಹಬ್ಬದ ಅಂಗವಾಗಿ ಮಾಜಿ ಸಚಿವ ಸಾ.ರಾ. ಮಹೇಶ್ ಅವರ ಪುತ್ರ ಉದ್ಯಮಿ ಸಾ.ರಾ. ಜಯಂತ್ ಪಟ್ಟಣದ ತೋಪಮ್ಮನ ದೇವಸ್ಥಾನಕ್ಕೆ ಆಗಮಿಸುತ್ತಿದ್ದಂತೆ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿದರು. ಬಳಿಕ ದೇವಿಗೆ ಪೂಜೆ ಸಲ್ಲಿಸಿದ ಸಾ.ರಾ.ಜಯಂತ್ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಬಳಿಕ ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಆಗಮಿಸಿದ ಅವರಿಗೆ ಪಟ್ಟಣದ ಗರುಡಗಂಭ ವೃತ್ತದಲ್ಲಿ ಅಭಿಮಾನಿಗಳು ಹಾಗೂ ಜೆಡಿಎಸ್ ಕಾರ್ಯಕರ್ತರು ಕ್ರೇನ್ ಮೂಲಕ ಬೃಹತ್ ಮೊಸಂಬಿ ಹಾರ ಹಾಕಿ, ಹೂ ಮಳೆ ಸುರಿಸಿದರು. ಇದೇ ವೇಳೆ ಅಭಿಮಾನಿಗಳ ಸಮ್ಮುಖದಲ್ಲಿ ಉದ್ಯಮಿ ಸಾ.ರಾ.ಜಯಂತ್ ಕೇಕ್ ಕತ್ತರಿಸಿ ಸಂಭ್ರಮಿಸಿದರು. ನಂತರ ವ್ಯಾಪಾರಿಗಳಿಗೆ 10 ತಳ್ಳುವ ಗಾಡಿ, 150 ಆಟೋ ಚಾಲಕರಿಗೆ ಸಮವಸ್ತ್ರ ವಿತರಿಸಿದರು. ಇದೇ ವೇಳೆ ಅಭಿಮಾನಿಗಳು ಕೆ.ಆರ್. ನಗರ ತಾಲೂಕಿನ ಡೋರ್ನಹಳ್ಳಿಯ ಸಂತ ಅಂಥೋಣಿ ವೃದ್ಧಾಶ್ರಮ ಮತ್ತು ಅಂಧ ಮಕ್ಕಳ ಶಾಲೆಯಲ್ಲಿ ಅನ್ನ ದಾಸೋಹ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಇದಕ್ಕೂ ಮೊದಲು ಉದ್ಯಮಿ ಸಾ.ರಾ. ಜಯಂತ್ ಅವರು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿ ಕುಟುಂಬ ವರ್ಗ ಹಾಗೂ ಅಭಿಮಾನಿಗಳೊಂದಿಗೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ಪಟ್ಟಣದ ಮುಸ್ಲಿಂ ಸಮುದಾಯದ ಹಿರಿಯ ಮುಖಂಡ ಹಾಗೂ ಖ್ಯಾತ ಮೂಳೆ ತಜ್ಞ ಡಾ.ಮೆಹಬೂಬ್ ಖಾನ್, ಯುವ ಜೆಡಿಎಸ್ ಜಿಲ್ಲಾ ಗ್ರಾಮಾಂತರ ಉಪಾಧ್ಯಕ್ಷ ಕಗ್ಗೆರೆ ಕುಚೇಲ, ಜೆಡಿಎಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ದಾಕ್ಷಾಯಿಣಿ, ಮಹಿಳಾ ಘಟಕದ ತಾಲೂಕು ಅಧ್ಯಕ್ಷೆ ರಾಜಲಕ್ಷ್ಮೀ, ನಗರ ಜೆಡಿಎಸ್ ಮಹಿಳಾ ಘಟಕದ ಕಾರ್ಯದರ್ಶಿ ಮೋಹನ ಕುಮಾರಿ, ಹಿರಿಯ ವಕೀಲ ತಿಮ್ಮಪ್ಪ, ಪುರಸಭೆ ಮಾಜಿ ಅಧ್ಯಕ್ಷರಾದ ಡಿ.ಕಾಂತರಾಜ್, ಗೀತಾ ಮಹೇಶ್, ಪುರಸಭೆ ಮಾಜಿ ಸದಸ್ಯರಾದ ಸಂತೋಷ್‌ಗೌಡ, ಮುಸ್ಲಿಂ ಮುಖಂಡ ಮುಬಾರಕ್, ವಿಶ್ವಕರ್ಮ ಸಮುದಾಯದ ಮುಖಂಡ ವೀರಭದ್ರಚಾರ್, ವೀರಶೈವ ಮುಖಂಡ ಬಾಲಾಜಿ ಗಣೇಶ್, ನಾಮಧಾರಿ ಸಮುದಾಯದ ಮುಖಂಡ ಸುನೀಲ್, ದಲಿತ ಮುಖಂಡ ಸೂರಿ, ವಿಜಯ್, ಜೆಡಿಎಸ್ ಮುಖಂಡ ವಡ್ಡರವಿ, ತ್ಯಾಗರಾಜ್, ಡಿಸಿಬಿ ಪವನ್, ಧನುಷ್, ಕ್ಯಾಟ್ ಸಂತೋಷ್, ರಾಜು, ಚೇತನ್, ಅವಿನಾಶ್, ಪ್ರಭಾಕರ್, ಸುಬ್ರಹ್ಮಣ್ಯ, ಸತೀಶ್, ದಿನೇಶ್, ಆಚಾರಿಮಂಜು, ಪಾನಿಪುರಿ ರಾಘು ಸೇರಿದಂತೆ ಅನೇಕರು ಇದ್ದರು.

ಮಾಜಿ ಸಚಿವ ಸಾ.ರಾ.ಮಹೇಶ್ ಹಾದಿಯಲ್ಲಿ ಪುತ್ರ ಸಾ.ರಾ.ಜಯಂತ್



ಆಟೋ ಚಾಲಕರಿಗೆ ಸಾ.ರಾ.ಜಯಂತ್ ಸಮವಸ್ತ್ರ ವಿತರಿಸಿದರು.

ಕೆ.ಆರ್.ನಗರ, ಮಾ.23– ಜಾತಿ ಬೇಧವಿಲ್ಲದೆ ನೊಂದವರಿಗೆ ಧ್ವನಿಯಾಗಿ, ಸಂಕಷ್ಟದಲ್ಲಿರುವವರಿಗೆ ಆರ್ಥಿಕ ನೆರವು ನೀಡಿ, ಸೂರು ಇಲ್ಲದವರಿಗೆ ಸೂರು ನೀಡಿ ಜನರ ಮನದಲ್ಲಿ ಅಚ್ಚಳಿಯದೇ ಉಳಿದಿರುವ ಮಾಜಿ ಸಚಿವ ಸಾ.ರಾ.ಮಹೇಶ್ ಅವರ ಹಾದಿಯಲ್ಲಿ ಪುತ್ರ ಉದ್ಯಮಿ ಸಾ.ರಾ.ಜಯಂತ್ ಸಾಗುತ್ತಿದ್ದು, ಬಡವರು, ಬೀದಿ ಬದಿ ವ್ಯಾಪಾರಿಗಳಿಗೆ ಬೆನ್ನೆಲುಬಾಗಿದ್ದಾರೆ ಎಂದು ಪುರಸಭೆ ಮಾಜಿ ಸದಸ್ಯ ಕೆ.ಉಮೇಶ್ ತಿಳಿಸಿದರು.

ಪಟ್ಟಣದ ಗರುಡಗಂಭ ವೃತ್ತದಲ್ಲಿ ಮಾಜಿ ಸಚಿವ ಸಾ.ರಾ.ಮಹೇಶ್ ಅವರ ಪುತ್ರ ಉದ್ಯಮಿ ಸಾ.ರಾ.ಜಯಂತ್ ಅವರ ಹುಟ್ಟುಹಬ್ಬದ ಅಂಗವಾಗಿ ಸಾ.ರಾ.ಜಯಂತ್ ಸ್ನೇಹ ಬಳಗದಿಂದ ಹಮ್ಮಿಕೊಂಡಿದ್ದ ಬೀದಿ ಬದಿ ವ್ಯಾಪಾರಿಗಳಿಗೆ ತಳ್ಳುವ ಗಾಡಿ, 150 ಆಟೋ ಚಾಲಕರಿಗೆ ಸಮವಸ್ತ್ರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಿಸ್ವಾರ್ಥ ಸೇವೆಯೇ ನಿಜವಾದ ಆತ್ಮ ತೃಪ್ತಿ. ಸೇವೆ ಮಾಡಬೇಕಾದರೆ ಯಾವುದೇ ಮುಜುಗರವಿರಬಾರದು. ಮನಸಾರೆ ಸೇವೆ ಮಾಡಿದಾಗ ಸಂತೋಷದೊಂದಿಗೆ ನೆಮ್ಮದಿ ಸಿಗುತ್ತದೆ. ಈ ಹಾದಿಯಲ್ಲಿ ಸಾಗುತ್ತಿರುವ ನಮ್ಮ ನಾಯಕ ಮಾಜಿ ಸಚಿವ ಸಾ.ರಾ. ಮಹೇಶ್ ಅವರನ್ನು ಪಡೆದಿರುವ ನಾವುಗಳೇ ಧನ್ಯರು ಎಂದರು.

ಸಾ.ರಾ.ಮಹೇಶ್ ಅವರಂತೆಯೇ ಅವರ ಮಕ್ಕಳು ಕೂಡ ಬಡವರ, ನೊಂದವರ, ರೈತರ ಸಂಕಷ್ಟಕ್ಕೆ ಸದಾ ಮಿಡಿಯುತ್ತಿದ್ದಾರೆ. ವೈದ್ಯರಾಗಿ ಡಾ.ಸಾ.ರಾ.ಧನುಷ್ ರೋಗಿಗಳ ಮನೆ ಬಾಗಿಲಿಗೆ ಹೋಗಿ ಉಚಿತ ಚಿಕಿತ್ಸೆ ನೀಡುವ ಜೊತೆಗೆ ನೆರವು ನೀಡಿ ಜನಪ್ರಿಯತೆ ಗಳಿಸಿ ಜನರ ಮನಸ್ಸಿನಲ್ಲಿದ್ದಾರೆ ಎಂದು ಕೊಂಡಾಡಿದರು.

ಉದ್ಯಮಿ ಸಾ.ರಾ.ಜಯಂತ್ ಕೂಡ ಕೆ.ಆರ್.ನಗರ ಮತ್ತು ಸಾಲಿಗ್ರಾಮ ತಾಲೂಕಿನ ಜನರ ಸಂಕಷ್ಟಕ್ಕೆ ನೆರವಾಗಿದ್ದಾರೆ. ಇಂದು ಸಾ.ರಾ.ಜಯಂತ್ ಹುಟ್ಟುಹಬ್ಬ. ಆದರೆ ಅವರು ಸಮಾಜಮುಖಿಯಾಗಿ ತನ್ನ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು.

ಪ್ರಸ್ತುತ ಘಟಾನುಘಟಿಗಳ ಮಕ್ಕಳು ರೆಸಾರ್ಟ್, ಫೈವ್ ಸ್ಟಾರ್ ಹೋಟೆಲ್ ಹಾಗೂ ವಿದೇಶಕ್ಕೆ ಹೋಗಿ ತಮ್ಮ ಹುಟ್ಟುಹಬ್ಬವನ್ನು ಸಂಭ್ರಮದಿಂದ ಆಚರಿಸಿಕೊಳ್ಳುತ್ತಾರೆ. ಆದರೆ ಸಾ.ರಾ.ಮಹೇಶ್ ಸೇರಿದಂತೆ ಅವರ ಮಕ್ಕಳು ಜನರ ಮಧ್ಯೆ ಹುಟ್ಟುಹಬ್ಬ ಆಚರಣೆ ಮಾಡಿಕೊಂಡು ಬರುತ್ತಿದ್ದಾರೆ. ಇದಲ್ಲವೇ ಜನಪ್ರಿಯತೆ ಎಂದು ತಿಳಿಸಿದರು.

ಒಳಮೀಸಲಾತಿ ವಿಷಯದಲ್ಲಿ ಒಡಕು ಬೇಡ

●ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಕಿವಿಮಾತು ●ಸಿಕ್ಕಿದ್ದರಲ್ಲಿ ತೃಪ್ತರಾಗಿ ಸಹಬಾಳ್ವೆ ನಡೆಸೋಣ...! ●ಎರಡು ಸಮುದಾಯ ಹಂಚಿ ತಿನ್ನುವ ಮನೋಭಾವ ಬೆಳೆಸಿಕೊಳ್ಳಬೇಕು



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ಮಾ.23(ಎಂಟಿವೈ)– ಮಾದಿಗ ಸಮುದಾಯ ಹಲವು ವರ್ಷಗಳಿಂದ ಒಳಮೀಸಲಾತಿಯನ್ನು ಕೇಳುತ್ತಾ ಬಂದಿದ್ದು, ಇದೀಗ ರಾಜ್ಯ ಸರ್ಕಾರ ನ್ಯಾ.ನಾಗ ಮೋಹನ್‌ದಾಸ್ ಆಯೋಗದ ವರದಿ ಅನುಸಾರ ಹಂಚಿಕೆ ಮಾಡಿರುವ ಒಳ ಮೀಸಲಾತಿಯನ್ನು ಒಪ್ಪಿಕೊಂಡು ಸಹೋದರರಂತೆ ಸಹಬಾಳ್ವೆಯಿಂದ ಒಗ್ಗಟ್ಟು ಕಾಯ್ದುಕೊಳ್ಳಲು ಎರಡೂ ಪಂಗಡ ಮುಂದಾಗಬೇಕು ಎಂದು ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿ ಪ್ರಸ್ತಾಪ ಹಾಗೂ ಹೋರಾಟಕ್ಕೆ 35 ವರ್ಷ ಕಳೆದಿದೆ. ಮಾದಿಗ ಹಾಗೂ ಸಂಬಂಧಿತ ಜಾತಿ ಜನರು ಒಳಮೀಸಲಾತಿ ಒದಗಿಸುವಂತೆ ಹೋರಾಟ ಮಾಡಿದ ಫಲವಾಗಿ 2004ರಲ್ಲಿ ಅಂದಿನ ಎಸ್.ಎಂ.ಕೃಷ್ಣ ಅವರು ಒಳ ಮೀಸಲಾತಿ ಪ್ರಕ್ರಿಯೆಗೆ ಸಚಿವ ಸಂಪುಟ ದಲ್ಲಿ ಅನುಮೋದನೆ ಪಡೆದು ಚಾಲನೆ ನೀಡಿದರು. 2005ರಲ್ಲಿ ನ್ಯಾ.ಸದಾಶಿವ ಆಯೋಗ ರಚಿಸಿದರು. ಆ ಆಯೋಗ ಮಾದಿಗ ಮತ್ತು ಸಂಬಂಧಿಸಿದ ಜಾತಿ ಗಳಿಗೆ ಶೇ.6ರಷ್ಟು, ಹೊಲೆಯ ಮತ್ತು ಸಂಬಂಧಿಸಿದ ಜಾತಿಗಳಿಗೆ ಶೇ.5ರಷ್ಟು ಹಾಗೂ ಬೋವಿ, ಕೊರಮ, ಕೊರಚ ಮತ್ತು ಇತರ ಜಾತಿಗಳಿಗೆ ಶೇ.4ರಷ್ಟು ಮೀಸಲಾತಿ ಹಂಚಿಕೆ ಮಾಡಿ ವರದಿ ತಯಾರಿಸಿ 2012ರಲ್ಲಿ ಅಂದಿನ ಮುಖ್ಯ ಮಂತ್ರಿ ಜಗದೀಶ್ ಶೆಟ್ಟರ್ ಅವರಿಗೆ ಸಲ್ಲಿಸಿತ್ತು. ಆದರೆ ರಾಜಕೀಯ ಒತ್ತಡಗಳಿಂದ ಆ ವರದಿಯನ್ನು ಜಾರಿಗೆ ತರಲು ಸಾಧ್ಯವಾಗಲಿಲ್ಲ ಎಂದು ವಿಷಾದಿಸಿದರು.

ಒಳಮೀಸಲಾತಿ ಹೋರಾಟ ತೀವ್ರಗೊಂಡ ಪರಿಣಾಮ 2023ರಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಒಳಮೀಸಲಾತಿ ಪ್ರಕ್ರಿಯೆಗೆ ಮತ್ತೆ ಚಾಲನೆ ನೀಡಿ, ಅಂದು ಕಾನೂನು ಸಚಿವರಾಗಿದ್ದ ಮಾಧುಸ್ವಾಮಿ ನೇತೃತ್ವದಲ್ಲಿ ಸಮಿತಿಯೊಂದನ್ನು ರಚಿಸಿ ವರದಿ ನೀಡುವಂತೆ ಸೂಚಿಸಿದ್ದರು. ಈ ಸಮಿತಿ ಒಳಮೀಸಲಾತಿಗೆ ಒಳಪಡುವ 101 ಜಾತಿಗಳನ್ನು 4 ಗುಂಪುಗಳಾಗಿ ವಿಂಗಡಿಸಿ ಒಳಮೀಸಲಾತಿಯನ್ನು ಹಂಚಿಕೆ ಮಾಡಿತು. ಅದರಲ್ಲಿ ಒಂದನೇ ಗುಂಪಲ್ಲಿ ಮಾದಿಗ ಮತ್ತು ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು, ಎರಡನೇ ಗುಂಪಿನಲ್ಲಿ ಹೊಲೆಯ ಮತ್ತು ಸಂಬಂಧಿತ ಜಾತಿಗಳಿಗೆ ಶೇ.5.5ರಷ್ಟು, ಮೂರನೇ ಗುಂಪಿನಲ್ಲಿ ಬಂಜಾರ, ಭೋವಿ, ಕೊರಮ, ಕೊರಚ ಜಾತಿಗಳಿಗೆ ಶೇ.4.5 ರಷ್ಟು ಹಾಗೂ ನಾಲ್ಕನೇ ಗುಂಪಿನಲ್ಲಿ ಅಲೆಮಾರಿ ಸಮುದಾಯಗಳಿಗೆ ಶೇ.1ರಷ್ಟು ಒಳಮೀಸಲಾತಿ ಹಂಚಿಕೆ ಮಾಡಲು ಶಿಫಾರಸ್ಸು ಮಾಡಿ ವರದಿ ಸಲ್ಲಿಸಲಾಗಿತ್ತು. ಈ ವರದಿಗೆ ಸಚಿವ ಸಂಪುಟದಲ್ಲಿ ಅಂಗೀಕರಿಸಿ, ಕೇಂದ್ರಕ್ಕೆ ಕಳುಹಿಸಿತ್ತು. ಆದರೂ ಒಳಮೀಸಲಾತಿ ಜಾರಿಯಾಗಲಿಲ್ಲ ಎಂದು ತಿಳಿಸಿದರು.

2023ರ ವಿಧಾನಸಭಾ ಚುನಾವಣೆ ವೇಳೆ ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ ಒಳಮೀಸಲಾತಿ ಜಾರಿಗೆ ತರುವ ಭರವಸೆ ನೀಡಿತ್ತು. ಅಧಿಕಾರಕ್ಕೆ ಬಂದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ್ಯಾ.ನಾಗಮೋಹನ್‌ದಾಸ್ ಆಯೋಗ ರಚಿಸಿತು. ಈ ಆಯೋಗ 8 ತಿಂಗಳಲ್ಲಿ ಕೂಲಂಕುಶವಾಗಿ ಪರಿಶೀಲಿಸಿ, 101 ಜಾತಿಗಳನ್ನು 5 ಗುಂಪುಗಳಾಗಿ ವಿಂಗಡಿಸಿ, ಮೀಸಲಾತಿ ಹಂಚಿಕೆ ಮಾಡಿದೆ. ಪ್ರವರ್ಗ ಎ ಗುಂಪಿನಲ್ಲಿ ಅಲೆಮಾರಿ ಮತ್ತು ಸಂಬಂಧಿತ ಜಾತಿಗಳಿಗೆ ಶೇ.1ರಷ್ಟು, ಪ್ರವರ್ಗ ಬಿ ಗುಂಪಿನಲ್ಲಿ ಮಾದಿಗ ಮತ್ತು ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು, ಪ್ರವರ್ಗ ಸಿ ಗುಂಪಿನಲ್ಲಿ ಹೊಲೆಯ ಮತ್ತು ಸಂಬಂಧಿತ ಜಾತಿಗಳಿಗೆ ಶೇ.5ರಷ್ಟು, ಪ್ರವರ್ಗ ಡಿ ಗುಂಪಿನಲ್ಲಿ ಭೋವಿ, ಬಂಜಾರ, ಕೊರಮ, ಕೊರಚ ಮತ್ತು ಸಂಬಂಧಿತ ಜಾತಿಗಳಿಗೆ ಶೇ.4ರಷ್ಟು ಹಾಗೂ ಪ್ರವರ್ಗ ಇ ಗುಂಪಿನಲ್ಲಿ ಇತರೆ ಸಮುದಾಯಗಳಿಗೆ ಶೇ.1ರಷ್ಟು ಮೀಸಲಾತಿ ಹಂಚಿಕೆ ಮಾಡಿ, ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಆದರೆ, ಈ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸದೆ ಸಚಿವ ಸಂಪುಟದಲ್ಲಿ ಚರ್ಚಿಸಿ, ನ್ಯಾ.ನಾಗಮೋಹನ್‌ದಾಸ್ ವರದಿಯಲ್ಲಿದ್ದ 5ಗುಂಪನ್ನು ಮೂರು ಗುಂಪುಗಳಾಗಿ ಮಾಡಲಾಗಿದೆ. ಇದರಲ್ಲಿ ಪ್ರವರ್ಗ ಎ ಗುಂಪಿನಲ್ಲಿ ಮಾದಿಗ ಮತ್ತು ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು, ಪ್ರವರ್ಗ ಬಿ ಗುಂಪಿನಲ್ಲಿ ಹೊಲೆಯ ಮತ್ತು ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು ಹಾಗೂ ಪ್ರವರ್ಗ ಸಿ ಗುಂಪಿನಲ್ಲಿ ಭೋವಿ, ಬಂಜಾರ, ಕೊರಮ, ಕೊರಚ, ಅಲೆಮಾರಿ ಮತ್ತು ಸಂಬಂಧಿತ ಜಾತಿಗಳಿಗೆ ಶೇ.5ರಷ್ಟು ಒಳಮೀಸಲಾತಿ ಕಲ್ಪಿಸಲು ತೀರ್ಮಾನಿಸಿದೆ ಎಂದು ವಿವರಿಸಿದರು.

ಡಾ॥ ಅಂಬೇಡ್ಕರ್ ನೀತಿ ಪಾಲಿಸೋಣ: ಒಳಮೀಸಲಾತಿ ವಿಚಾರದಲ್ಲಿ ಮಾದಿಗ, ಹೊಲೆಯ ಸಮುದಾಯಗಳು ವೈಮನಸ್ಸನ್ನು ಬಿಟ್ಟು, ಹಂಚಿಕೆಯಾಗಿರುವ ಒಳಮೀಸಲಾತಿಯನ್ನು ಒಪ್ಪಿಕೊಳ್ಳಬೇಕು. ಡಾ.ಅಂಬೇಡ್ಕರ್ ಅವರು ಹಸಿದವರಿಗೆ ಆದ್ಯತೆ ನೀಡುವಂತೆ ಹೇಳಿದ್ದಾರೆ. ಈ ಮಾತಿನಂತೆ ಒಳಮೀಸಲಾತಿಯನ್ನು ಒಪ್ಪಿಕೊಂಡು, ಎರಡೂ ಸಮುದಾಯ ಹಂಚಿಕೊಂಡು ತಿನ್ನುವ ಮನೋಭಾವ ಬೆಳೆಸಿಕೊಳ್ಳಬೇಕು. ಈಗಾಗಲೇ ದಲಿತ ಸಿಎಂ ವಿಚಾರ ಪ್ರಸ್ತಾಪವಾಗುತ್ತಿದೆ. ಇಂತಹ ಸಂದರ್ಭ ದಲ್ಲಿ ಒಳಮೀಸಲಾಯಿತಿಯನ್ನು ಮುಂದಿಟ್ಟುಕೊಂಡು ದಲಿತರಲ್ಲಿ ಒಗ್ಗಟ್ಟು ಇಲ್ಲದಂತೆ ಮಾಡಿಕೊಳ್ಳುವುದು ಸೂಕ್ತವಲ್ಲ. ಆ ಕಾರಣದಿಂದ ಎರಡೂ ಸಮುದಾಯದ ಮುಖಂಡರು ಒಳಮೀಸಲಾತಿಗೆ ಒಪ್ಪಿಗೆ ಸೂಚಿಸಿ ಎರಡೂ ಪಂಗಡಗಳೂ ಒಂದಾಗಿ ಒಗ್ಗಟ್ಟು ಕಾಯ್ದುಕೊಳ್ಳಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಉಪ ಮೇಯರ್ ಶ್ರೀಧರ್, ಮುಖಂಡರಾದ ಪ್ರೊ ವೆಂಕಟೇಶ್ ಕುಮಾರ್, ರಮೇಶ್, ರಂಗನಾಥ್ ಇದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಉಸ್ತಾದ್ ಭಗತ್ ಸಿಂಗ್(ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಲವ್ ಮಾಕ್ಟೇಲ್–3 (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಓ ರೋಮಿಯೋ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಉಸ್ತಾದ್ ಭಗತ್ ಸಿಂಗ್(ತೆ)	4 ಪ್ರದರ್ಶನಗಳು
ಗಾಯಿತ್ರಿ	
ಸಂಪತ್ತಿಗೆ ಸವಾಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಯೂತ್ (ತ) + ಉಸ್ತಾದ್ ಭಗತ್ ಸಿಂಗ್ (ತೆ)	2+2 ಪ್ರದರ್ಶನಗಳು
ಸಂಗಂ	
ಧುರಂಧರ್ (ಹಿ)	3 ಪ್ರದರ್ಶನಗಳು
ಲಿಡೋ	
ಹಯಗ್ರೀವ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಆಕಾಶ್ (ಕ)	4 ಪ್ರದರ್ಶನಗಳು

ತಾಲೂಕು ಮಟ್ಟದಲ್ಲಿ ಪರೀಕ್ಷಾ ಉತ್ತರ ಪತ್ರಿಕೆ ಮೌಲ್ಯಮಾಪನ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

●ಜಿಲ್ಲಾ ಕೇಂದ್ರಗಳಿಗೆ ಸದ್ಯ ಸೀಮಿತ ●ಮೊಬೈಲ್ ನಿಷೇಧ ಸಂಬಂಧ ಗಣ್ಯರ ಸಮಿತಿ



ಬೆಂಗಳೂರು, ಮಾ. 23(ಕೆಎಂಶಿ)– ತಾಲೂಕು ಮಟ್ಟದಲ್ಲಿ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ ಎಂದು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ವಿಧಾನಸಭೆಯಲ್ಲಿಂದು ಸ್ಪಷ್ಟಪಡಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಬಸನಗೌಡ ಬಾದರ್ಲಿ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಗೌಪ್ಯತೆ ಮತ್ತು ಗುಣಮಟ್ಟದ ಫಲಿತಾಂಶ ಕಾಪಾಡಿಕೊಳ್ಳುವ ಹಿನ್ನೆಲೆಯಲ್ಲಿ ಜಿಲ್ಲಾ ಕೇಂದ್ರಗಳಲ್ಲಿ ಮೌಲ್ಯಮಾಪನ ನಡೆಸುತ್ತಿದ್ದೇವೆ ಎಂದರು.

ತಾಲೂಕು ಕೇಂದ್ರದಿಂದ ಜಿಲ್ಲಾ ಕೇಂದ್ರ ದೂರ ಇರುತ್ತದೆ. ಗುಣಮಟ್ಟ, ಭದ್ರತೆ, ಫಲಿತಾಂಶ ಮುಖ್ಯವಾದ್ದರಿಂದ ಜಿಲ್ಲಾ ಕೇಂದ್ರಗಳಲ್ಲೇ ಮೌಲ್ಯಮಾಪನ ನಡೆಯುತ್ತದೆ. ಇದನ್ನು ಬದಲಾವಣೆ ಮಾಡಲು ಸದ್ಯದ ಪರಿಸ್ಥಿತಿಯಲ್ಲಿ ಆಗುವುದಿಲ್ಲ. 2003–04ರಲ್ಲಿ ಇದ್ದ ಈ ನಿಯಮ ಬದಲಾವಣೆ ಮಾಡಲಾಗಿದೆ. ಪುನಃ ಇದನ್ನು ತಾಲ್ಲೂಕು ಮಟ್ಟದಲ್ಲಿ ನಡೆಸುವ ಪ್ರಸ್ತಾವನೆ ಬರುವುದಿಲ್ಲ. ಫಲಿತಾಂಶಕ್ಕಾಗಲೀ, ಇಲಾಖೆಗಾಗಲೀ ಯಾವುದೇ ಹೊರೆ ಆಗುವುದಿಲ್ಲ. ಯಥಾಸ್ಥಿತಿ ಮುಂದುವರೆಯಲಿದೆ.

ಶಾಲಾ–ಕಾಲೇಜುಗಳಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣ ಬಳಕೆ ನಿಷೇಧ ಕುರಿತು ವಿಶೇಷ ಮಾರ್ಗಸೂಚಿ ರಚಿಸಿ, ಮುಂದಿನ ಅಧಿವೇಶನದಲ್ಲಿ ಮಂಡನೆ ಮಾಡಲಿದ್ದೇವೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಸದಸ್ಯರಾದ ಪ್ರತಾಪ್ ಸಿಂಹ ನಾಯಕ್, ಜವರಾಯಿಗೌಡ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ 16 ವರ್ಷದೊಳಗಿನ ಮಕ್ಕಳು ಶಾಲಾ ಮತ್ತು ಕಾಲೇಜುಗಳಲ್ಲಿ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣ ಬಳಕೆ ನಿಷೇಧ ಮಾಡುವುದಾಗಿ ಘೋಷಿಸಿದ್ದಾರೆ. ರಾಷ್ಟ್ರದಲ್ಲೇ ಇಂಥ ದಿಟ್ಟ ಕ್ರಮ ತೆಗೆದುಕೊಂಡಿರುವ ಮೊದಲ ರಾಜ್ಯ ಕರ್ನಾಟಕವಾಗಿದೆ ಎಂದರು.

ಪ್ರಕರಣವೊಂದರ ಆರೋಪಿಗೆ ಜಾಮೀನು ನೀಡುವ ಸಂಬಂಧ

ನಕಲಿ ದಾಖಲೆ ನೀಡಲೆತ್ನಿಸಿದ್ದ ವ್ಯಕ್ತಿಯ ನ್ಯಾಯಾಂಗ ಬಂಧನ ವಿಸ್ತರಣೆ



ಮೈಸೂರು,ಮಾ.23(ಪಿಎಂ)– ಚೆಕ್ ಬೌನ್ಸ್ ಪ್ರಕರಣದ ಆರೋಪಿಗೆ ಜಾಮೀನು ನೀಡಲು ನಕಲಿ ದಾಖಲಾತಿಯೊಂದಿಗೆ ನ್ಯಾಯಾಲಯಕ್ಕೆ ಹಾಜರಾಗಿ ಸಿಕ್ಕಿಬಿದ್ದಿದ್ದ ವ್ಯಕ್ತಿಯ ನ್ಯಾಯಾಂಗ ಬಂಧನ ವಿಸ್ತರಿಸಿ ನ್ಯಾಯಾಲಯ ಆದೇಶಿಸಿದೆ.

ತುಮಕೂರು ತಾಲೂಕಿನ ಶೆಟ್ಟಿಹಳ್ಳಿ ಗ್ರಾಮದ ಎಸ್.ಕೆ.ನರಸಿಂಹರಾಜ (64) ನಕಲಿ ದಾಖಲೆಯೊಂದಿಗೆ ಜಾಮೀನು ನೀಡಲು ಬಂದು ಜೈಲು ಸೇರಿರುವ ವ್ಯಕ್ತಿ. 8ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಮುಂದೆ ಈತನನ್ನು ಮಾ.18ರಂದು ಹಾಜರು ಪಡಿಸಿದ್ದು, ನ್ಯಾಯಾಧೀಶ ಸಿ.ಜೆ.ರಘು ಅವರು ಆರೋಪಿ ನರಸಿಂಹರಾಜಗೆ ನ್ಯಾಯಾಂಗ ಬಂಧನವನ್ನು ಮುಂದಿನ 14 ದಿನಗಳವರೆಗೆ ವಿಸ್ತರಿಸಿ ಆದೇಶಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಲಕ್ಷ್ಮೀಪುರಂ ಪೊಲೀಸರು, ಮತ್ತೊಬ್ಬ ಆರೋಪಿ ಇಮ್ತಿಯಾಜ್ ಪತ್ತೆಗೆ ಶೋಧ ನಡೆಸಿದ್ದಾರೆ.

ಪ್ರಕರಣದ ವಿವರ: ಮೈಸೂರಿನ 6ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಚೆಕ್‌ಬೌನ್ಸ್ ಪ್ರಕರಣದ ಆರೋಪಿಗೆ ಜಾಮೀನು ನೀಡಲು ನರಸಿಂಹರಾಜ ಜಾಮೀನುದಾರನಾಗಿ ಹಾಜರಾಗಿ ಗುರುತಿನ ದಾಖಲೆಯಾಗಿ ಆಧಾರ್ ಕಾರ್ಡ್ ಹಾಜರುಪಡಿಸಿದ್ದ. ಪರಿಶೀಲನೆ ವೇಳೆ ನ್ಯಾಯಾಧೀಶ ಹೆಚ್.ಜಿ.ಹರಿಸಿಂಗ್ ಅವರು ಕೆಲ ವ್ಯತ್ಯಾಸಗಳನ್ನು ಗಮನಿಸಿ, ಪ್ರಾಥಮಿಕ ವಿಚಾರಣೆ ನಡೆಸಿದ್ದರು.

ಈ ವೇಳೆ ಜಾಮೀನುದಾರನೆಂದು ನ್ಯಾಯಾಲಯದ ಮುಂದೆ ತಾನು ಸಲ್ಲಿಸಿದ್ದ ಆಧಾರ್ ಕಾರ್ಡ್ ನಿಜವಾದದ್ದಲ್ಲ ಮತ್ತು ತನ್ನ ಛಾಯಾಚಿತ್ರವನ್ನು ಇನ್ನೊಬ್ಬ ವ್ಯಕ್ತಿಯ ಆಧಾರ್ ಕಾರ್ಡ್‌ನಲ್ಲಿ ಅಂಟಿಸಲಾಗಿದೆ ಎಂದು ತಪ್ಪೊಪ್ಪಿಕೊಂಡಿದ್ದ ನರಸಿಂಹರಾಜು, ತನ್ನ ನಿಜವಾದ ಹೆಸರು ನರಸಿಂಹರಾಜು ಎಂದು ಹೇಳಿದ್ದ. ಅಲ್ಲದೆ, ಇಮ್ತಿಯಾಜ್ ಎಂಬುವವನು ನ್ಯಾಯಾಲಯಕ್ಕೆ ಬಂದು ಜಾಮೀನುದಾರನಾಗಿ ನಿಲ್ಲುವಂತೆ ಸೂಚಿಸಿದ್ದ ಎಂದು ಹೇಳಿದ್ದ. ಬಳಿಕ ಈತನಿಗೆ ನ್ಯಾಯಾಂಗ ಬಂಧನಕ್ಕೆ ನ್ಯಾಯಾಧೀಶರು ಆದೇಶಿಸಿದ್ದರು. ಇದೀಗ ಈತನ ನ್ಯಾಯಾಂಗ ಬಂಧನ ವಿಸ್ತರಿಸಿ ನ್ಯಾಯಾಧೀಶ ಸಿ.ಜೆ.ರಘು ಆದೇಶಿಸಿದ್ದಾರೆ.

ಹಳೆ ಮೀಸಲಾತಿ ಮುಂದುವರಿಕೆಗೆ ಆಗ್ರಹಿಸಿ ಅಶೋಕಪುರಂ ದಲಿತ ಸಂಘಟನೆಗಳ ಒಕ್ಕೂಟದಿಂದ ಬೈಕ್ ರ್‍ಯಾಲಿ, ಭಾರೀ ಪ್ರತಿಭಟನೆ



ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ಹಾಗೂ ಅಶೋಕಪುರಂ ದಲಿತ ಸಂಘಟನೆಗಳ ಒಕ್ಕೂಟದಿಂದ ಸೋಮವಾರ ಬೈಕ್ ರ್‍ಯಾಲಿ ಹಾಗೂ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮಾ.23(ಎಂಕೆ)– ಪರಿಶಿಷ್ಟ ಜಾತಿ ಒಳ ಮೀಸಲಾತಿ ವಿರೋಧಿಸಿ, ಹಳೆ ಮೀಸಲಾತಿ ಪದ್ಧತಿಯನ್ನು ಮುಂದುವರೆಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ಹಾಗೂ ಅಶೋಕಪುರಂ ದಲಿತ ಸಂಘಟನೆಗಳ ಒಕ್ಕೂಟದಿಂದ ಸೋಮವಾರ ಬೈಕ್ ರ್‍ಯಾಲಿ ಹಾಗೂ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಅಶೋಕಪುರಂನಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ನೂರಾರು ಮಂದಿ ಬೈಕ್ ರ್‍ಯಾಲಿ ನಡೆಸಿದರು. ಹಾಗೆಯೇ ವರುಣಾ ಮತ್ತು ಟಿ.ನರಸೀಪುರದಿಂದ ಪಾದಯಾತ್ರೆ ನಡೆಸಿದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಸಮಾವೇಶಗೊಂಡು ರಾಜ್ಯ ಸರ್ಕಾರ ಮತ್ತು ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ವಿರುದ್ಧ ವಿವಿಧ ಘೋಷಣೆಗಳನ್ನು ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಲೇಖಕ ಸಿ.ಹರಕುಮಾರ್ ಮಾತನಾಡಿ, ಒಳ ಮೀಸಲಾತಿ ಹಾದಿ ಬೀದಿ ರಂಪಾಟ ಆಗಿದೆ. ರಾಜ್ಯ ಸರ್ಕಾರ ಒಳ ಮೀಸಲಾತಿ ನಿರ್ಧಾರದಿಂದ ಹಿಂದೆ ಸರಿಯಬೇಕು. ಜಾರಿ ಮಾಡುವುದಾದರೆ ನ್ಯಾಯಾಲಯದ ವಿಮರ್ಶೆಗೆ ಒಳಪಡಿಸಬೇಕು. 101 ಜಾತಿಗಳಿಗೆ ಅನ್ಯಾಯವಾಗದಂತೆ ಮೀಸಲಾತಿ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.


ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕುಲ ಶಾಸ್ತ್ರೀಯ ಅಧ್ಯಯನ ಮಾಡಲು ಕ್ರಮ ವಹಿಸಬೇಕು ಮತ್ತು ಗೊಂದಲಕ್ಕೆ ಕಾರಣವಾಗಿರುವ ನ್ಯಾ.ನಾಗಮೋಹನ್ ದಾಸ್ ವರದಿಯನ್ನು ತನಿಖೆ ಮಾಡಲು ಉನ್ನತ ಮಟ್ಟದ ಸಮಿತಿ ರಚಿಸಿ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರಲ್ಲದೆ ಮಾ.25 ರಂದು ಬೆಂಗಳೂರಿನಲ್ಲಿ ಹಮ್ಮಿಕೊಂಡಿರುವ ಬೃಹತ್ ಪ್ರತಿಭಟನಾ ಸಮಾವೇಶಕ್ಕೆ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ತೆರಳುವುದಾಗಿ ತಿಳಿಸಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಅವೈಜ್ಞಾನಿಕವಾದ ಪಕ್ಷಪಾತದಿಂದ ಕೂಡಿರುವ ನಿವೃತ್ತ ನ್ಯಾಯ ಮೂರ್ತಿ ನಾಗಮೋಹನ್ ದಾಸ್ ವರದಿಯನ್ನು ಸಂಪೂರ್ಣವಾಗಿ ತಿರಸ್ಕರಿಸಬೇಕು. ಹಳೆಯ ಮೀಸಲಾತಿ ಅನ್ವಯ ನೇಮಕಾತಿಯನ್ನು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜ್ಞಾನ ಸ್ವರೂಪಾನಂದ ಸ್ವಾಮೀಜಿ, ಮಾಜಿ ಶಾಸಕ ಹರ್ಷವರ್ಧನ್, ನಿವೃತ್ತ ಪ್ರಾಧ್ಯಾಪಕ ಪಿ.ಎಂ. ಮಹೇಶ್, ಪಾಲಿಕೆ ಮಾಜಿ ಸದಸ್ಯೆ ಪಲ್ಲವಿ ಬೇಗಂ, ವಕೀಲ ತಿಮ್ಮಯ್ಯ, ಯುವ ಮುಖಂಡ ಭರತ್ ರಾಮಸ್ವಾಮಿ, ಮುಖಂಡರಾದ ಡಾ.ಮರಿದೇವಯ್ಯ, ಸಿದ್ದಸ್ವಾಮಿ, ಡಾ.ಜ್ಞಾನ ಪ್ರಕಾಶ, ಎ.ಆರ್. ಕಾಂತರಾಜ್, ಸೋಮಯ್ಯ ಮಲೆಯೂರು, ಜಿ.ಮಹದೇವ ಮತ್ತಿತರರಿದ್ದರು.

ವಿಧಾನಸಭೆಯಲ್ಲಿ 14767.89 ಕೋಟಿಯ ಪೂರಕ ಅಂದಾಜು ಮಂಡನೆ

ಸಿಎಂ ಅನುಪಸ್ಥಿತಿಯಲ್ಲಿ ಸಚಿವ ಕೃಷ್ಣ ಬೈರೇಗೌಡ ಪ್ರಸ್ತಾಪ



ಬೆಂಗಳೂರು, ಮಾ.23(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಕಂದಾಯ ಸಚಿವ ಕೃಷ್ಣಬೈರೇಗೌಡ 14767.89 ಕೋಟಿ ರೂ. ಮೊತ್ತದ ಪೂರಕ ಅಂದಾಜನ್ನು ವಿಧಾನಸಭೆಯಲ್ಲಿಂದು ಮಂಡಿಸಿದರು.

ಅಂತಿಮ ಕಂತಿನ ಪೂರಕ ಅಂದಾಜಿನಲ್ಲಿ ಒದಗಿಸಿರುವ ಒಟ್ಟು ಮೊತ್ತದಲ್ಲಿ 7.41 ಕೋಟಿ ರೂ. ಪ್ರಭೃತ ವೆಚ್ಚ ಮತ್ತು 14760.49 ಕೋಟಿ ರೂ. ಪುರಸ್ಕೃತ ವೆಚ್ಚ ಸೇರಿವೆ.

ಮೀಸಲು ನಿಧಿಯಿಂದ ಭರಿಸಲಾಗುವ 911.11 ಕೋಟಿ ರೂ. ಪುರಸ್ಕೃತವಾಗಬೇಕಿದೆ. ಸಂಚಿತ ನಿಧಿಯಿಂದ ಹೊರಹೋಗುವ ನಿವ್ವಳ ಮೊತ್ತ 13856.79 ಕೋಟಿ ರೂ., ಇದರಲ್ಲಿ 5735.80 ಕೋಟಿ ರೂ. ಕೇಂದ್ರ ಸಹಾಯಕ್ಕೆ ಸಂಬಂಧಿಸಿದ್ದು, ಹೊರಹೋಗುವ ನಿವ್ವಳ ಮೊತ್ತ 8120.99 ಕೋಟಿ ರೂ.ಗಳಾಗಿರುತ್ತವೆ.


ಕೃಷಿ ಮತ್ತು ತೋಟಗಾರಿಕಾ ಇಲಾಖೆಗೆ ಸಂಬಂಧಿಸಿದಂತೆ ರಾಜಸ್ವ ಲೆಕ್ಕದಲ್ಲಿ 40,169.96 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 6,617.14 ಲಕ್ಷ ರೂ. ಒದಗಿಸಲಾಗಿದ್ದು, ಎಲ್ಲಾ 22 ಇಲಾಖೆಗಳಿಗೂ ಅಗತ್ಯವಿರುವ ವೆಚ್ಚದ ಅಂದಾಜುಗಳನ್ನು ವರದಿಯಲ್ಲಿ ಪ್ರಸ್ತಾಪಿಸಲಾಗಿದೆ.

ನಾಳೆ ಮೈಸೂರು ನಗರ ಪಾಲಿಕೆ ಬಜೆಟ್

ಮೈಸೂರು, ಮಾ.23– ಮೈಸೂರು ಮಹಾನಗರ ಪಾಲಿಕೆಯ ಬಜೆಟ್ ಸಭೆಯನ್ನು ಮಾ.25ರ ಬೆಳಿಗ್ಗೆ 11 ಗಂಟೆಗೆ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ ಎಂದು ಪಾಲಿಕೆ ಕೌನ್ಸಿಲ್ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವರುಗಳ ಹೈಲೈಟ್ ಮಾಡಲೂ ಸಂಗೀತ–ಸಾಹಿತ್ಯ ಅನಿವಾರ್ಯ

ಹಾಸ್ಯನಟ-ಸಂಗೀತ ನಿರ್ದೇಶಕ ಸಾಧುಕೋಕಿಲ ಬಣ್ಣನೆ



ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿಯ ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಭಾಗಕ್ಕೆ ಸೋಮವಾರ ಚಾಲನೆ ನೀಡಲಾಯಿತು

ಮೈಸೂರು, ಮಾ.23(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿಂದಲೇ ಇಡೀ ಕರ್ನಾಟಕಕ್ಕೆ ಸಾಹಿತ್ಯ ಮತ್ತು ಸಂಗೀತ ಪಸರಿಸಿದ್ದು, ಮಾತಿಗಿಂತ ಸಾಹಿತ್ಯ ಮತ್ತು ಸಂಗೀತ ಪ್ರತಿಯೊಬ್ಬರ ಮನಸ್ಸಿನಲ್ಲಿ ಬೇರೂರಲಿದೆ ಎಂದು ಕೆಪಿಸಿಸಿ ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಭಾಗದ ರಾಜ್ಯಾಧ್ಯಕ್ಷ ಹಾಗೂ ನಟ, ಸಂಗೀತ ನಿರ್ದೇಶಕ ಸಾಧುಕೋಕಿಲ ಹೇಳಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿಯ ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಭಾಗಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯಾವುದೇ ಸರ್ಕಾರ, ವೇದಿಕೆ ಮಾತ್ರವಲ್ಲದೆ ಕೇಳಿದ್ದನ್ನು ನೀಡುವ ದೇವರುಗಳನ್ನು ಹೈಲೆಟ್ ಮಾಡಲು ಸಂಗೀತ–ಸಾಹಿತ್ಯ ಬೇಕು. ಆದ್ದರಿಂದ ಕಲಾವಿದರನ್ನು ಮನುಷ್ಯರೆನ್ನದೆ ಗಂಧರ್ವರು ಎನ್ನುತ್ತಾರೆ. ಕಲಾವಿದ ಎಂದರೆ ಮೃದು ಮನಸ್ಸಿನವ ಎಂದರ್ಥ ಎಂದರು.

ಕೆಪಿಸಿಸಿ ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಭಾಗದ ರಾಜ್ಯಾಧ್ಯಕ್ಷನಾಗಿ ನೇಮಕಗೊಂಡ ಬಳಿಕ ಮೊದಲ ಬಾರಿಗೆ ಮೈಸೂರಿನಿಂದಲೇ ಜಿಲ್ಲಾ ವಿಭಾಗಕ್ಕೆ ಚಾಲನೆ ನೀಡುತ್ತಿರುವುದು ಶ್ಲಾಘನೀಯ. ಕಲಾವಿದರು ಸೇರಿದಂತೆ ಎಲ್ಲಾ ವರ್ಗದವರನ್ನು ಗುರ್ತಿಸುವುದು ಕಾಂಗ್ರೆಸ್ ಮಾತ್ರ 'ದೂರದ ಬೆಟ್ಟ ಕಣ್ಣಿಗೆ ನುಣ್ಣಗೆ' ಗಾದೆ ಮಾತಿನಂತಿರುವ ಕಲಾವಿದರ ಬದುಕು ದೂರದಿಂದ ನೋಡಲಷ್ಟೇ ಚೆಂದ. ಈ ನಿಟ್ಟಿನಲ್ಲಿ ಕಲಾವಿದರಿಗೆ ವೇದಿಕೆ ಸೃಷ್ಟಿಸುವ ಮೂಲಕ ಪ್ರೋತ್ಸಾಹ ನೀಡಿರುವ ರಾಜ್ಯ ಕಾಂಗ್ರೆಸ್‌ಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು.

ದೊಡ್ಡ ದೊಡ್ಡ ವೇದಿಕೆಗಳಿಗೆ ಬೇರೆ ರಾಜ್ಯದಿಂದ ಕಲಾವಿದರನ್ನು ಕರೆತರುವ ಬದಲು ನಮ್ಮಲ್ಲೇ ಇರುವವರಿಗೆ ಅವಕಾಶ ದೊರೆಯುವಂತಾಗಬೇಕು. ಆದ್ದರಿಂದ ಕಾಂಗ್ರೆಸ್‌ನಲ್ಲಿ ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಭಾಗ ಸೃಷ್ಟಿ ಮಾಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಗೀತ ಎಂದರೆ ಅಚ್ಚುಮೆಚ್ಚು. ಆ ಕಾರಣದಿಂದಲೇ ಕಲಾವಿದರಿಗೆ ಪ್ರೋತ್ಸಾಹ ನೀಡುತ್ತಿದ್ದಾರೆ. ಬಡವರ ಪಕ್ಷವಾಗಿರುವ ಕಾಂಗ್ರೆಸ್, ಕಲಾವಿದರಿಗೆ ನೀಡಿದಷ್ಟು ಪ್ರೋತ್ಸಾಹವನ್ನು ಬೇರೆ ಯಾವ ಪಕ್ಷವೂ ನೀಡಿಲ್ಲ ಎಂದು ತಿಳಿಸಿದರು.

ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಮೈಸೂರು ವಿವಿ ಕೌನ್ಸಿಲ್ ಸದಸ್ಯ ಹೆಡತಲೆ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಶಿವಪ್ರಸಾದ್, ಸಾಹಿತ್ಯ ಹಾಗೂ ಸಾಂಸ್ಕೃತಿಕ ವಿಭಾಗದ ಜಿಲ್ಲಾಧ್ಯಕ್ಷ ನಾಗೇಶ್ ಕಂದೇಗಾಲ, ಉಪಾಧ್ಯಕ್ಷರಾದ ಗಣೇಶ್ ಭಟ್, ಮಹದೇವ ಸ್ವಾಮಿ, ಪ್ರಧಾನ ಕಾರ್ಯದರ್ಶಿ ರವಿ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬ್ಯಾಲೆಟ್ ಬಳಕೆ

ವಿಧಾನಸಭೆಯಲ್ಲಿ ಮಸೂದೆ ಅಂಗೀಕಾರ



ಬೆಂಗಳೂರು: ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರಗಳ ಬದಲಿಗೆ ಬ್ಯಾಲೆಟ್ ಪೇಪರ್ ಬಳಕೆಗೆ ಅವಕಾಶ ಕಲ್ಪಿಸುವ 2026ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪ್ರತಿಪಕ್ಷಗಳ ಸಭಾತ್ಯಾಗದ ನಡುವೆ ಸೋಮವಾರ ವಿಧಾನಸಭೆಯಲ್ಲಿ ಅಂಗೀಕರಿಸಲಾಯಿತು.

ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರಗಳ ಬದಲಿಗೆ ಬ್ಯಾಲೆಟ್ ಪೇಪರ್ ಬಳಕೆ ಈ ಮಸೂದೆಯ ಉದ್ದೇಶವಾಗಿದೆ. ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸಾರ್ವಜನಿಕ ವಿಶ್ವಾಸವನ್ನು ಮರುಸ್ಥಾಪಿಸುವ ಗುರಿಯನ್ನು ಹೊಂದಿರುವುದಾಗಿ ಸರ್ಕಾರ ಹೇಳಿದೆ.

ವಿಧೇಯಕದ ಪರ್ಯಾಲೋಚನ ಪ್ರಸ್ತಾವವನ್ನು ಮಂಡಿಸಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಭಾರತ ಸಂವಿಧಾನದ 326ನೇ ಅನುಚ್ಛೇದಡಿ ಜನರ ಪ್ರಜಾಸತ್ತಾತ್ಮಕ ಇಚ್ಛೆಯನ್ನು ಪ್ರತಿ ಬಿಂಬಿಸುವ ಮುಕ್ತ, ನ್ಯಾಯ ಸಮ್ಮತ ಮತ್ತು ಪಾರದರ್ಶಕ ರೀತಿಯಲ್ಲಿ ಚುನಾವಣೆ ನಡೆಸುವುದನ್ನು ಖಚಿತಪಡಿಸಿಕೊಳ್ಳಲು, ಮತದಾರರ ಮತಪತ್ರದ ಗೌಪ್ಯತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಮತದಾರರನ್ನು ದಬ್ಬಾಳಿಕೆ, ಬೆದರಿಕೆ ಮತ್ತು ಅನಗತ್ಯ ಪ್ರಭಾವದಿಂದ ರಕ್ಷಿಸಿ, ಆ ಮೂಲಕ ಪ್ರಜಾಪ್ರಭುತ್ವ ಪ್ರಕ್ರಿಯೆಯ ಪಾವಿತ್ರ್ಯವನ್ನು ಸುರಕ್ಷಿತಗೊಳಿಸಬೇಕಿದೆ ಎಂದು ಹೇಳಿದರು.

ಇವಿಎಂ ಮೇಲೆ ಜನರ ವಿಶ್ವಾಸಾರ್ಹತೆ ಕಡಿಮೆಯಾಗುತ್ತಿದೆ. ರಾಜಕೀಯ ಪಕ್ಷಗಳು, ತಜ್ಞರು ಮತ್ತು ಸ್ವಯಂ ಸೇವಾ ಸಂಸ್ಥೆಗಳು ಚುನಾವಣಾ ಆಯೋಗವನ್ನು ಪ್ರಶ್ನಿಸುತ್ತಿವೆ. ಆದರೆ ಚುನಾವಣಾ ಆಯೋಗ ಯಾವುದೇ ಉತ್ತರ ನೀಡುತ್ತಿಲ್ಲ. ಅಲ್ಲದೇ ಅನೇಕ ರಾಜ್ಯಗಳು ಬ್ಯಾಲೆಟ್ ಪೇಪರ್ ನಲ್ಲಿ ಚುನಾವಣೆ ನಡೆಸಿವೆ ಎಂದು ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡರು.


ಈ ವೇಳೆ ಮಾತನಾಡಿದ ವಿಪಕ್ಷ ನಾಯಕ ಆರ್. ಅಶೋಕ್, ಇದೊಂದು ತುಘಲಕ್ ದರ್ಬಾರ್ ಆಗಿದೆ. ಇವಿಎಂನ್ನು ಪರಿಚಿಸಿದ್ದ ಕಾಂಗ್ರೆಸ್ ನವರೇ ಇದೀಗ ಅದನ್ನು ಹಿಂಪಡೆಯುತ್ತಿದ್ದಾರೆ. ವಿದ್ಯುನ್ಮಾನ ಮತಯಂತ್ರ ಸರಿಯಿಲ್ಲ ಎಂಬ ಇವರ ವಾದ ಹಾಸ್ಯಾಸ್ಪದ ಎಂದು ಹೇಳಿದರು.

ಬಿಜೆಪಿ ಸದಸ್ಯ ವಿ. ಸುನೀಲ್ ಕುಮಾರ್ ಮಾತನಾಡಿ, ಈ ವಿಧೇಯಕದಲ್ಲಿ ಜನಸಾಮಾನ್ಯರಿಗೆ ಯಾವುದೇ ಲಾಭ ಇಲ್ಲ. ಇದರಿಂದ ಕಾಂಗ್ರೆಸ್ ಮಾತ್ರ ಲಾಭ. ಇದರ ಹಿಂದೆ ದೊಡ್ಡ ಹುನ್ನಾರ ಇದ್ದಂತಿದೆ. ಸರ್ಕಾರ ಆಡಳಿತ ವ್ಯವಸ್ಥೆಯನ್ನು ದುರುಪಯೋಗ ಮಾಡಲು ಮುಂದಾಗಿರುವಂತೆ ಕಂಡುಬರುತ್ತಿದೆ ಎಂದು ಆರೋಪಿಸಿದರು. ವಿಧೇಯಕ ಬೆಂಬಲಿಸಿದ ಕಾಂಗ್ರೆಸ್ ಸದಸ್ಯ ರಿಜ್ವಾನ್ ಅರ್ಷದ್, ಹೆಚ್ಚು ಮುಂದುವರಿದ ದೇಶಗಳು ಇವಿಎಂಗಳನ್ನು ಬಳಸುವುದಿಲ್ಲ, ಅವರು ಮತಪತ್ರಗಳನ್ನು ಬಳಸುತ್ತಾರೆ ಎಂದು ಹೇಳಿದರು.

ವಿಪಕ್ಷಗಳ ಆರೋಪಕ್ಕೆ ತಿರುಗೇಟು ನೀಡಿದ ಪ್ರಿಯಾಂಕ್ ಖರ್ಗೆ, ನಮ್ಮದು ಅತಿದೊಡ್ಡ ಪ್ರಜಾಪ್ರಭುತ್ವ, ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಅನುಮಾನ ಬೇಡ, ವಿಜ್ಞಾನದ ವಿದ್ಯಾರ್ಥಿಗಳಾಗಿದ್ದರೆ ಎಲ್ಲವನ್ನೂ ಅನುಮಾನಿಸಬೇಕು, ನಾವು ಉತ್ತರದಾಯಿತ್ವ ಮತ್ತು ಪಾರದರ್ಶಕತೆಯನ್ನು ತರುತ್ತಿದ್ದೇವೆ. ಆರ್ಥಿಕ ಪರಿಣಾಮಗಳ ಕುರಿತು, ಹೆಚ್ಚುವರಿ ಇದ್ದರೆ ಪೂರಕ ಬಜೆಟ್‌ನೊಂದಿಗೆ ಸದನಕ್ಕೆ ಬರುತ್ತೇವೆ, ನಾವು ಏನನ್ನೂ ಮುಚ್ಚಿಡುವುದಿಲ್ಲ ಎಂದು ಹೇಳಿದರು.

ಚರ್ಚೆ ವಿಕೋಪಕ್ಕೆ ತಿರುಗುತ್ತಿದ್ದಂತೆಯೇ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದರು. ವಿಪಕ್ಷ ನಾಯಕ ಆರ್. ಅಶೋಕ್ ವಿಧೇಯಕವನ್ನು ಹರಿದು ಹಾಕಿದರು. ನಂತರ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು, ಮಾ.23– ದಕ್ಷಿಣ ಹಾಗೂ ಮಂಡಕಳ್ಳಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಮಾ.24 ರಂದು ಮಂಗಳವಾರ ಬೆಳಿಗ್ಗೆ 10ರಿಂದ ಸಂಜೆ 6 ಘಂಟೆಯವರೆಗೆ ವಿದ್ಯಾ ರಣ್ಯಪುರಂ 25ರಿಂದ 30ನೇ ಕ್ರಾಸ್, ಕನಕಗಿರಿ, ಸ್ಟರ್ಲಿಂಗ್ ಥಿಯೇಟರ್, ಕೆ.ಆರ್.ಪುರಂ, ಇಂಡಸ್ಟ್ರೀಯಲ್ ಸಬರ್ಬ್ 1 ರಿಂದ 3ನೇ ಹಂತ, ಚಾಮುಂಡಿಪುರಂ ಸರ್ಕಲ್, ಸಿಲ್ಕ್ ಫ್ಯಾಕ್ಟರಿ, ಅಶೋಕಪುರಂ, ಮೇದರಕೇರಿ, ಆರ್.ಟಿ.ಓ, ಬಲ್ಲಾಳ್ ಸರ್ಕಲ್, ನಂಜುಮಳಿಗೆ, ಬಂಡಿಪಾಳ್ಯ, ಹೊಸಹುಂಡಿ, ಗುಡುಮಾದನಹಳ್ಳಿ, ಏಳಿಗೆಹುಂಡಿ, ಆಲನಹಳ್ಳಿ ರಿಂಗ್ ರಸ್ತೆ, ನಾಚನಹಳ್ಳಿ ಪಾಳ್ಯ, ಕವಿತಾ ಬೇಕರಿ ಸರ್ಕಲ್, ಗೊಬ್ಬಳಿ ಮರ, ಜೆ.ಪಿ. ನಗರ ಎ.ಬಿ.ಸಿ,ಡಿ ಮತ್ತು ಇ ಬ್ಲಾಕ್, ಓಂಕಾರ್ ಲೇಔಟ್, ಪೊಲೀಸ್ ಬೂತ್ ಸರ್ಕಲ್, ಸಿದ್ದಲಿಂಗೇಶ್ವರ ಲೇಔಟ್, ಅಮೋಘ ಪ್ಯಾಲೆಸ್ ಹತ್ತಿರ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು. ಮಂಡಕಳ್ಳಿ, ಗೆಜ್ಜಗಳ್ಳಿ ಐ.ಪಿ ಪ್ರದೇಶ, ಉತ್ತನಹಳ್ಳಿ, ಶ್ರೀನಗರ, ರೇಷ್ಮನಗರ, ಮಹಾಲಕ್ಷ್ಮಿ ಲೇಔಟ್, ಆರ್.ಕೆ ಲೇಔಟ್, ಭವಾನಿ ಲೇಔಟ್, ವಿನಾಯಕ ಲೇಔಟ್, ಮಹಾಲಕ್ಷ್ಮಿ ದೃಷ್ಟಿ ಲೇಔಟ್, ಕೊಪ್ಪಲೂರು ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಅಂತೆಯೇ ಬೆಲವತ್ತ ಫೀಡರ್ ವ್ಯಾಪ್ತಿಯಲ್ಲಿ ನಿರ್ವಹಣ ಕಾಮಗಾರಿ ನಿಮಿತ್ತ ಮಾ.24ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ಬೆಲವತ್ತ, ಶ್ಯಾದನಹಳ್ಳಿ, ನಾಗನಹಳ್ಳಿ, ನಾಗನಹಳ್ಳಿ ಹೊಸ ಬಡಾವಣೆ ಹಾಗೂ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

6ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಲಕ್ಷ್ಮಮ್ಮ (ದಾಬಾಯಮ್ಮ)
ನಿಧನ: 26–03–2020
ನೀವು ನಮ್ಮನ್ನಗಲಿ ಇಂದಿಗೆ 6 ವರ್ಷ ಕಳೆದರೂ
ಸದಾ ನಿಮ್ಮ ನೆನಪಿನಲ್ಲಿರುವ
ದುಃಖಿತಪ್ತರು : ಶ್ರೀನಿವಾಸ್ ಮತ್ತು ಮಲ್ಲಿಕಾರ್ಜುನ್ ಹಾಗೂ ಹೆಣ್ಣು ಮಕ್ಕಳು ಮತ್ತು ಕುಟುಂಬವರ್ಗದವರು

IN THE COURT VII ADDITIONAL SENIOR CIVIL JUDGE AT MYSORE


O.S. No. 1365/2022
Plaintiff : Sri.B.Dhanush -Vs-
Defendants: Sri. Shantaraju.G.R & Another

NOTICE/SUMMONS TO THE DEFENDANT No.01

To, D1. **G.R.Shantharaju,** R/at #401, 'A' & 'B' Block, Hibbani Road, Kuvempu nagara, Mysuru 570 023 And also R/at #133, 5th Main, 4th Cross, 1st Stage, Brundavan Layout, Mysuru 570 020, Whereas the above named plaintiff has instituted a suit against you and other defendant for the relief of recovery of money and thereupon, the plaintiff has taken Court notices and inspite of which you have avoided to receive the court notice/summons. As such, you are hereby directed to appear before this Hon'ble Court in person or through your counsel on 22/4/2026 at 11:00 A.M, failure of which, you will be placed Ex-parte and the matter will be proceeded with and heard in your absence. Given under my hand and seal of the Court on this 18th day of March 2026 at Mysuru

By Order of the Court
Sd/- Chief Ministerial Officer
Hon'ble VII Addl Senior Civil Judge & C.J.M at Mysuru

PRABHU ASSOCIATES
H.P. DARSHAN SHETTY
H.P.GAGAN SHETTY
No. 1533, N.T. Street, K.R.Mohalla, Agrahara, Mysuru-570 024.
Mobile No. 9590807007



CHANGE OF NAME

I, Somashekar Shyamasundara, resident of # 151, EWS, New Kantharaj Urs Road, Kuvempunagar, Mysuru-570023, have changed my name from Somashekar Shayamasundara to Somashekar Shyamasundara on my own free will in front of notary A.M. Sumithra. Dated on 3-3-2026 at Mysore.

Sd/- Somashekar Shyamasundara

ಮೈಸೂರು ಮಿತ್ರ
ವಾರ್ಷಿಕೋತ್ಸವ ವಿಶೇಷ ಸಂಚಿಕೆ

ಓದುಗರು ಹಾಗೂ ಜಾಹೀರಾತುದಾರರ ಸೇವೆಯಲ್ಲಿ "ಮೈಸೂರು ಮಿತ್ರ", ಏಪ್ರಿಲ್ 16, 2026ಕ್ಕೆ 46 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, 47ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸುಸಂದರ್ಭದಲ್ಲಿ ವರ್ಣರಂಜಿತ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಜಾಹೀರಾತುದಾರರಿಗೆ ಇದೊಂದು ಸುಸಮಯ. ಮುದ್ರಣದ ದೃಷ್ಟಿಯಿಂದ ತಮ್ಮ ಜಾಹೀರಾತುಗಳನ್ನು ಏಪ್ರಿಲ್ 10, 2026 ರೊಳಗೆ ನಮಗೆ ತಲುಪುವಂತೆ ಕಳುಹಿಸಬೇಕಾಗಿ ಕಳಕಳಿಯ ಮನವಿ.

ಪ್ರಧಾನ ಕಛೇರಿ
0821-2496522, 2496523, 0821-2496520 (5 ಲೈನುಗಳು)
ಮರಿಯ ಫರ್ನಾಂಡಿಸ್, ಜಾಹೀರಾತು ವ್ಯವಸ್ಥಾಪಕರು: 9448525060 / 8073030835
ಜಾಯ್ ಅಂಥೋಣಿ ಡೋಮ್: 8951668960, ಪ್ರೇಮ: 9880549879
ಕೆ.ಆರ್. ಸರ್ಕಲ್ ಕಛೇರಿ: 0821-2431774
ದೇವರಾಜ ಅರಸ್ ರಸ್ತೆ ಕಛೇರಿ: 0821-2428695

ಕೊಡಗು — ಪ್ರಸಾದ್, ಪೂಜಾ ಆರ್ಕೆಡ್, ಜೂನಿಯರ್ ಕಾಲೇಜು ರಸ್ತೆ, ಮಡಿಕೇರಿ 9731469871

ಮಂಡ್ಯ — ಕೆ. ಮೋಹನ್‌ರಾಜ್ 8762960325

ಶ್ರೀರಂಗಪಟ್ಟಣ — ವಿನಯ್ ಕಾರೇಕುರ, ಶ್ರೀರಂಗಪಟ್ಟಣ 9686893234

ಹುಣಸೂರು — ಕೆ. ಕೃಷ್ಣ (ಕೆ.ಕೆ.), EWS 204, KHB ಕಾಲೋನಿ, ಹುಣಸೂರು. 9448720626

ಚಾಮರಾಜನಗರ — ಸಿದ್ದಲಿಂಗಸ್ವಾಮಿ, ಸಿ.ಹೆಚ್.ಆರ್. ಕಾಂಪ್ಲೆಕ್ಸ್, ಸರ್ಕಾರಿ ಆಸ್ಪತ್ರೆ ಎದುರು, ಚಾಮರಾಜನಗರ 9242265667

ಟಿ. ನರಸೀಪುರ — ಕುಮಾರ್, ಸಾರ್ವಜನಿಕ ಆಸ್ಪತ್ರೆ ರಸ್ತೆ, ಆರ್ಯ ಮಹಲ್ ಛತ್ರದ ಎದುರು, ಟಿ. ನರಸೀಪುರ. 9986719590

ಗುಂಡ್ಲುಪೇಟೆ — ಸೋಮಶೇಖರ್, ದ.ರಾ. ಬೇಂದ್ರೆ ನಗರ, ಅಶ್ವಿನಿ ಲೇಔಟ್, ಗುಂಡ್ಲುಪೇಟೆ. 9845995426

ಕೆ.ಆರ್. ನಗರ — ಮಂಜುನಾಥ, ವಾರ್ಡ್ ನಂ.17, ಕನಕನಗರ Extn. ಮುಳ್ಳೂರು ರಸ್ತೆ, ಕೆ.ಆರ್.ಟೌನ್ 9483084345

ಮಳವಳ್ಳಿ — ಸರಸ್ವತಿ. ವಿ, ನಂ.47, 1ನೇ ಕ್ರಾಸ್, ಎನ್.ಇ.ಎಸ್ ಮಳವಳ್ಳಿ ಟೌನ್–571430 9632407806

ಹಾಸನ — ಆರ್.ಎಸ್.ಸೋಮೇಶ್‌ಗೌಡ, ಹೋಲಿ ಚಿಲ್ಡ್ರನ್ ಶಾಲೆ ಹತ್ತಿರ, ಜಯನಗರ, 1ನೇ ಹಂತ, 2ನೇ ಕ್ರಾಸ್, ಹಾಸನ. 7019311936

ಕುಶಾಲನಗರ — ರಘು, ಮೈಸೂರು ಮಿತ್ರ ರಿಪೋರ್ಟರ್, ಮನು ಪ್ರೆಸ್, ಐ.ಬಿ.ರಸ್ತೆ, ಕುಶಾಲನಗರ 9845698401

ಜಯಪುರ — ಬಿಳಿಗಿರಿ, ಜಯಪುರ 9945479288

ಪಿರಿಯಾಪಟ್ಟಣ — ವಿರೇಶ್, ಪಿರಿಯಾಪಟ್ಟಣ 8660057128

ವಿರಾಜಪೇಟೆ — ಮಂಜುನಾಥ, ವಿರಾಜಪೇಟೆ 9900949353

ಯಳಂದೂರು — ವಿ.ನಾಗರಾಜು, ಮೈತ್ರಿ ಮೆಡಿಕಲ್ಸ್, ಬಳೇಪೇಟೆ, ಯಳಂದೂರು 9844349191

ಕೆ.ಆರ್.ಪೇಟೆ — (ಶ್ರೀನಿವಾಸ), ಅಗ್ರಹಾರ ಬಾಚಹಳ್ಳಿ, ಕೆ.ಆರ್.ಪೇಟೆ 9449326847, 7022757438

ಹೆಚ್.ಡಿ.ಕೋಟೆ — ಮಂಜುನಾಥ ಎಸ್., ಹೆಚ್.ಡಿ.ಕೋಟೆ 9483574452

ಕೆ.ಎಂ.ದೊಡ್ಡಿ — ಸತೀಶ್ ಎ.ಎಲ್, ಕೆ.ಎಂ.ದೊಡ್ಡಿ 9242120338

ನಂಜನಗೂಡು — ರಂಗಸ್ವಾಮಿ, ನಂ.4565, ಕಪಿನಿ ಕಾಲೋನಿ ಹಿಂಭಾಗ, ನೀಲಕಂಠ ನಗರ, ನಂಜನಗೂಡು ಟೌನ್–571301 9901602226

ಕೊಳ್ಳೇಗಾಲ — ನಾಗೇಂದ್ರ ಸ್ವಾಮಿ, ನಂ.7ಎ, 684, 14 ನೇ ಕ್ರಾಸ್, ಬಸವೇಶ್ವರ ನಗರ, ಕೊಳ್ಳೇಗಾಲ 9448676247, 7899849868

ಕರ್ನಾಟಕ ಸರ್ಕಾರ
ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ
ಲೋಕೋಪಯೋಗಿ ಇಲಾಖೆ, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ನಜರ್‌ಬಾದ್, ಮೈಸೂರು–570010.
E-Mail: aeenhmys@gmail.com ದೂರವಾಣಿ ಸಂಖ್ಯೆ : 0821-2951499

ಸಂಖ್ಯೆ:ಸಕಾಇಂ:ರಾಹೆ:ಉವಿಮೈ:ರಾಹೆ275ಕೆ:ಕಚುದೆ:2025–26:1316 ದಿನಾಂಕ : 13–03–2026

ಸಾರ್ವಜನಿಕ ಪ್ರಕಟಣೆ

ಮೈಸೂರು ಜಿಲ್ಲೆಯ, ಮೈಸೂರು ನಗರದ ರಾಷ್ಟ್ರೀಯ ಹೆದ್ದಾರಿ–275 ಕೆ (ಮೈಸೂರು ರಿಂಗ್ ರಸ್ತೆ)ಯ ಕಪ್ಪು ಸ್ಥಳ ಅಭಿವೃದ್ಧಿ "Improvement to Black spot at Devalapura Cross Ring Road (KA-(05)-19) on NH-275K, Mysuru Ring Road Section in the State of Karnataka (Job-No.NH-275K/Karnataka/2024-25/RSCE/13)"ರ ಸರಪಳಿ ಕಿ.ಮೀ. 23.620 ರಿಂದ ಕಿ.ಮೀ.24.420 ವರೆಗಿನ ಕಾಮಗಾರಿಯನ್ನು ಪ್ರಾರಂಭಿಸುವ ಸಂಬಂಧ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಮೈಸೂರು, ಇವರ ಕೋರಿಕೆಯಂತೆ 48 ಸಂಖ್ಯೆ ಮರಗಳನ್ನು ಕತರಾವಣೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ ಪ್ರಕರಣ 8(3)(vii) ರ ಪ್ರಕಾರ ಸಾರ್ವಜನಿಕ ಅಭಿಪ್ರಾಯ ಸ್ವೀಕರಿಸಿ ಕ್ರಮ ಕೈಗೊಳ್ಳಬೇಕಾಗಿರುವುದರಿಂದ ದಿನಾಂಕ:25.03.2026 ಪೂರ್ವಾಹ್ನ ಸಮಯ 11:00ಘಂಟೆಗೆ ರಾಹೆ–275(ಕೆ) ರಿಂಗ್ ರಸ್ತೆ, ದೇವಲಾಪುರ (ಹದಿನಾರು ಗ್ರಾಮಕ್ಕೆ ಹೋಗುವ ಮುಖ್ಯ ರಸ್ತೆ) ಜಂಕ್ಷನ ಹತ್ತಿರ ಸಾರ್ವಜನಿಕ ಅಭಿಪ್ರಾಯ ಸಭೆಯನ್ನು ಕರೆಯಲಾಗಿದೆ. ಈ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಸದರಿ ಸಭೆಗೆ ಹಾಜರಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಅಥವಾ ಸದರಿ ದಿನಾಂಕದ ಒಳಗಾಗಿ ಈ ಕೆಳ ಸಹಿದಾರರಿಗೆ ಲಿಖಿತ ರೂಪದಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸುವುದು ಅಥವಾ ಈ ಮೇಲೆ ನೀಡಿರುವ ಇ–ಮೇಲ್ ಅಥವಾ ಅಂಚೆ ವಿಳಾಸಕ್ಕೆ ನಿಗದಿತ ಸಮಯ ಹಾಗೂ ದಿನಾಂಕದೊಳಗೆ ಆಕ್ಷೇಪಣೆ ಸಲ್ಲಿಸಬಹುದೆಂದು ಈ ಮೂಲಕ ತಿಳಿಸಿದೆ. ನಂತರ ಬಂದಂತಹ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/– ಸಹಾಯಕ ಕಾರ್ಯಪಾಲಕ ಇಂಜಿನಿಯರ್,
ಲೋ.ಇ. ರಾಷ್ಟ್ರೀಯ ಹೆದ್ದಾರಿ ಉಪವಿಭಾಗ, ಮೈಸೂರು

ಮೈಸೂರು ಮಿತ್ರ 46

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಪುರಸಭಾ ಕಾರ್ಯಾಲಯ, ತಿ.ನರಸೀಪುರ, ಮೈಸೂರು ಜಿಲ್ಲೆ
Email : ka.tnarasipura.tmc@gmail.com, Phone: 08227-261232
Website : www.tnarasipuratown.gov.in

ಸಂಖ್ಯೆ ತಿ.ನ.ಪು/ಕಂ.ಶಾ/ ಪಿ.ಆರ್.ಸಾ.ಪ್ರ.07/2025–26 ದಿನಾಂಕ: 12.03.2026

"ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ"

ಈ ಮೂಲಕ ಸಮಸ್ತ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಟಿ.ನರಸೀಪುರ ಪುರಸಭೆಗೆ ಸೇರಿದ ಈ ಕೆಳಕಂಡ ವಿವಿಧ ಬಾಬ್ತುಗಳ ಮೇಲಿನ 2026–27ನೇ ಸಾಲಿನ ಸುಂಕ ವಸೂಲಿ ಮಾಡುವ ಹಕ್ಕನ್ನು ದಿ: 01.04.2026 ರಿಂದ 31.03.2027ರ ವರೆಗೆ ಟೆಂಡರ್ ಕಂ ಬಹಿರಂಗ ಹರಾಜು ಮೂಲಕ ವಿಲೇ ಪಡಿಸಲಾಗುತ್ತಿದ್ದು ಸದರಿ ಹರಾಜಿನಲ್ಲಿ ಹಕ್ಕನ್ನು ಪಡೆದುಕೊಳ್ಳಲು ದಿ: 26.03.2026ನೇ ಗುರುವಾರ ಬೆಳಿಗ್ಗೆ 10.30 ರಿಂದ ಸಂಜೆ 05.30 ಗಂಟೆಯ ಒಳಗೆ ಲಕೋಟೆಯಲ್ಲಿ ಟೆಂಡರ್ ಫಾರಂ ನಲ್ಲಿ ಬಿಡ್ ಮೊತ್ತ ನಮೂದಿಸಿ ಪ್ರಾಥಮಿಕ ಠೇವಣಿ ಮೊತ್ತಕ್ಕೆ ಡಿ.ಡಿ. ಲಗತ್ತಿಸಿ ಟೆಂಡರ್ ಬಾಕ್ಸ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ. ಹಾಗೂ ಬಹಿರಂಗ ಹರಾಜಿನಲ್ಲಿ ಭಾಗವಹಿಸುವವರು ಪ್ರತ್ಯೇಕ ಮುಂಗಡ ಠೇವಣಿ ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಮುಖ್ಯಾಧಿಕಾರಿ, ಪುರಸಭೆ, ಟಿ.ನರಸೀಪುರ ರವರ ಹೆಸರಿನಲ್ಲಿ ಡಿ.ಡಿ. ಪಡೆದು ದಿ: 26.03.2026ರ ಗುರುವಾರ ಬೆಳಿಗ್ಗೆ 10.00 ರಿಂದ 5.00 ಗಂಟೆಯೊಳಗೆ ಈ ಕಛೇರಿಗೆ ಸಲ್ಲಿಸಿ ನೊಂದಾಯಿಸಿಕೊಂಡು ಹರಾಜಿನಲ್ಲಿ ಭಾಗವಹಿಸುವ ಹಕ್ಕನ್ನು ಪಡೆದುಕೊಳ್ಳಬಹುದಾಗಿರುತ್ತದೆ. ದಿ: 27.03.2026ರ ಶುಕ್ರವಾರ ಬೆಳಿಗ್ಗೆ 11.00 ಗಂಟೆಗೆ ಪುರಸಭಾ ಸಭಾಂಗಣದಲ್ಲಿ ಬಹಿರಂಗ ಹರಾಜು ಮಾಡಲಾಗುತ್ತದೆ. ಆಸಕ್ತಿಯುಳ್ಳವರು ಟೆಂಡರ್ ಕಂ ಬಹಿರಂಗ ಹರಾಜಿನಲ್ಲಿ ಭಾಗವಹಿಸಿ ಸುಂಕದ ವಸೂಲಾತಿ ಹಕ್ಕನ್ನು ಹರಾಜು ಕರೆಯುವ ಮೂಲಕ ಪಡೆಯಬಹುದಾಗಿರುತ್ತದೆ. ಹೆಚ್ಚಿನ ವಿವರ ಹಾಗೂ ಷರತ್ತುಗಳನ್ನು ಕಛೇರಿ ವೇಳೆಯಲ್ಲಿ ಕಂದಾಯ ಶಾಖೆಯಲ್ಲಿ ಹಾಗೂ www.tnarasipuratown.gov.in ವೆಬ್‌ಸೈಟ್‌ನಲ್ಲಿ ತಿಳಿದುಕೊಳ್ಳತಕ್ಕದ್ದು.

ಬಹಿರಂಗ ಹರಾಜುಗಳ ವಿವರ

ಕ್ರ ಸಂ	ಹರಾಜಿನ ವಿವರ	ಮುಂಗಡ ಠೇವಣಿ ಮೊತ್ತ	ನಿಗಧಿತ ಕನಿಷ್ಠ ಬಿಡ್ ಮೊತ್ತ	ಹರಾಜು ಅವಧಿ
1	ಬಸ್ಸು ನಿಲ್ದಾಣದ ಶುಲ್ಕ ವಸೂಲಿ ಮಾಡುವ ಹಕ್ಕು	ರೂ.100000–00	200000	01.04.2026 ರಿಂದ 31.03.2027ರ ವರೆಗೆ
2	ನೆಲ ಬಾಡಿಗೆ ಶುಲ್ಕ ವಸೂಲಿ ಮಾಡುವ ಹಕ್ಕು	ರೂ.100000–00	800000	01.04.2026 ರಿಂದ 31.03.2027ರ ವರೆಗೆ

ಸಹಿ/– ಆಡಳಿತಾಧಿಕಾರಿಗಳು, ಪುರಸಭೆ, ಟಿ.ನರಸೀಪುರ ಸಹಿ/– ಮುಖ್ಯಾಧಿಕಾರಿ, ಪುರಸಭೆ, ಟಿ.ನರಸೀಪುರ
DIPR/DDMYS/1850/KSMCA/1054/2025-26